**ಸಂಪುಟ:** 04 **ಸಂಚಿಕೆ:** 247 **ಪುಟಗಳು:** 08 **ಬುಧವಾರ** 20 **ನವೆಂಬರ್** 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಗುರು ಎಂದರೆ ವ್ಯಕ್ತಿಯಲ್ಲ, ಒಂದು ಶಕ್ತಿ. ಅಜ್ಞಾನದ ಕತ್ತಲೆಯ ಕಳೆದು ಸುಜ್ಞಾನದೆಡೆಗೆ ಕರೆದುಕೊಂಡು ಹೋಗುವ ಶಬ್ದವೇ ಗುರು.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಏಕಾಏಕಿ ಬಡವರ ಬಿಪಿಎಲ್ ಕಾರ್ಡ್ ಕಿತ್ತುಕೊಳ್ಳುವ ಅಪರಾಧ

• **ಉದಯವಾಹಿನಿ, ಬೆಂಗಳೂರು**

ಬಡವರ 14 ಲಕ್ಷ ಬಿಪಿಎಲ್ ಕಾರ್ಡ್ ಕಿತ್ತುಕೊಳ್ಳುವ ಘೋರ ಅಪರಾಧವನ್ನು ರಾಜ್ಯ ಸರಕಾರ ಮಾಡಿದೆ. ಅದರಲ್ಲೂ ನಮಗೆ ಮತ ಹಾಕಿದ್ದಾರಾ ಎಂದು ಜಾತಿ, ಕೋಮು ಹುಡುಕಿ ಬಿಪಿಎಲ್ ಕಾರ್ಡ್ ರದ್ದು ಮಾಡುತ್ತಿರುವ ದೂರುಗಳಿವೆ ಎಂದು ವಿಧಾನಪರಿಷತ್ ಸದಸ್ಯ ಮತ್ತು ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರು ಆಕ್ಷೇಪಿಸಿದರು. ಬಡವರ ಅನ್ನಕ್ಕೂ ಕನ್ನ ಹಾಕುವ ಪರಮ ಅನ್ಯಾಯ ಇದಾಗಿದೆ ಎಂದು ಟೀಕಿಸಿದರು. ಜಾತಿ ಹುಡುಕಿ ಕಾರ್ಡ್ ರದ್ದು ಮಾಡಿದ್ದನ್ನು ಸೋಷಿಯಲ್ ಮೀಡಿಯದಲ್ಲಿ ನೋಡಿದ್ದೇನೆ. ಬಡವರ ಅನ್ನಕ್ಕೂ ಕನ್ನ ಹಾಕುವ ಸರಕಾರ ಇದೆಂದು ಆರೋಪಿಸಿದರು. ಎಐಸಿಸಿ ಅಧ್ಯಕ್ಷ ಖರ್ಗೆಯವರು ನಿನ್ನೆ ಆರೆಸ್ಸೆಸ್, ಬಿಜೆಪಿಯನ್ನು ವಿಷ ಸರ್ಪಕ್ಕೆ ಹೋಲಿಸಿದ್ದಾರೆ. ಅನುಭವ ಪಕ್ವತೆಯನ್ನು ಪಡೆದುಕೊಳ್ಳಬೇಕು. ಹಿರಿತನಕ್ಕೆ ತಕ್ಕ ಮಾತು ಅದಲ್ಲ; ಅವರ ಮಾತುಗಳು ಹುಚ್ಚುನಾಯಿ ಕಡಿತಕ್ಕೆ ಒಳಗಾದವರು ಆಡುವ ಥರ ಮಾತಿನಂತಿತ್ತು.

ಮಲ್ಲಿಕಾರ್ಜುನ ಖರ್ಗೆಯವರು ಆ ಮಾತನಾಡಿದ್ದಾರೋ ಅಥವಾ ಕಾಂಗ್ರೆಸ್ಸಿನ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಖರ್ಗೆಯವರ ಮೂಲಕ ಈ ಮಾತನ್ನಾಡಿಸಿದ್ದಾರೋ ಗೊತ್ತಿಲ್ಲ ಎಂದ ಅವರು, ನಿಮ್ಮ ಮಾತು ಸಂವಿಧಾನದ ಮೇಲೆ ನಂಬಿಕೆ ಇಟ್ಟವರ ಮಾತಲ್ಲ. ಹೊಡಿ, ಬಡಿ ಕೊಲ್ಲು ಎಂಬ ತಾಲಿಬಾನಿಗಳ ಮಾತಿಗೆ ವಿಷಾದ ವ್ಯಕ್ತಪಡಿಸಿ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

## ಮುಸ್ಲಿಂ ಸಂತೃಪ್ತಿಗೆ ಖರ್ಗೆ ಆರ್ ಎಸ್‌ಎಸ್ ಹೇಳಿಕೆ: ಈಶ್ವರಪ್ಪ

• **ಉದಯವಾಹಿನಿ, ಶಿವಮೊಗ್ಗ**

ಮಲ್ಲಿಕಾರ್ಜುನ ಖರ್ಗೆಯವರಂತಹ ಹಿರಿಯ ರಾಜಕಾರಣಿ ಈ ರೀತಿ ಮಾತನಾಡಿರುವುದು ನೋವುಂಟಾಗಿದೆ. ಆರ್‌ಎಸ್‌ಎಸ್ ನ ಸ್ವಯಂ ಸೇವಕರನ್ನು ಕೊಲ್ಲಿ ಎಂದಿರುವುದು ಸರಿಯಲ್ಲ. ಈ ಹೇಳಿಕೆ ನನಗೆ ಆಶ್ಚರ್ಯ ತಂದಿದೆ ಎಂದು ಕೆ.ಎಸ್ ಈಶ್ವರಪ್ಪ ಹೇಳಿದರು. ಆರ್.ಎಸ್.ಎಸ್.ಹಾಗೂ ಬಿಜೆಪಿ ವಿಷಕಾರಿ ಹಾವು ಇದ್ದಂತೆ ಎಂಬ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಅವರು ಪ್ರತಿಕ್ರಿಯೆ ನೀಡಿದರು. ವ್ಯಕ್ತಿತ್ವ ನಿರ್ಮಾಣ ಮಾಡುವ ಸಂಸ್ಥೆ ಆರ್ ಎಸ್‌ಎಸ್ ದೇಶದ ಜನರು ಆರ್ ಎಸ್‌ಎಸ್ ಒಪ್ಪಿದ್ದಾರೆ. ರಾಷ್ಟ್ರೀಯತೆ ಬಗ್ಗೆ ಜಾಗೃತಿ ಉಂಟು ಮಾಡುವ ಆರ್ ಎಸ್‌ಎಸ್ ಬಗ್ಗೆ ಮಾತನಾಡಬಾರದಿತ್ತು. ಆರ್ ಎಸ್‌ಎಸ್ ನ ಸ್ವಯಂ ಸೇವಕನೇ ಈಗ ದೇಶದ ಪ್ರಧಾನಮಂತ್ರಿ ಆಗಿದ್ದಾರೆ. ಹಿಂದೆ ನೆಹರೂ ಹಾಗೂ ಕಾಂಗ್ರೆಸ್ ನ ನಾಯಕರು ಆರ್ ಎಸ್‌ಎಸ್ ಬ್ಯಾನ್ ಮಾಡಲು ಹೊರಟಿದ್ದರು. ಅವರನ್ನೇ ನಾವು ಲೆಕ್ಕಕ್ಕಿಟ್ಟುಕೊಂಡಿಲ್ಲ. ಮುಸಲ್ಮಾನರನ್ನು ಸಂತೃಪ್ತಿಗೊಳಿಸಲು ಇಂತಹ ಹೇಳಿಕೆ ನೀಡುತ್ತಿದ್ದಾರೆ ಎಂದಿದ್ದಾರೆ.

## ಸಚಿವ ಸ್ಥಾನದ ಕುರಿತು ಶಾಸಕ ನರೇಂದ್ರ ಸ್ವಾಮಿ ಅಸಮಾಧಾನ


• **ಉದಯವಾಹಿನಿ, ಮಂಡ್ಯ**

ಕಾಂಗ್ರೆಸ್ ಸರ್ಕಾರದಲ್ಲಿ ಸಚಿವ ಸ್ಥಾನದ ವಾರ್ ಮತ್ತೆ ಭುಗಿಲೆದ್ದಿದೆ. ಸಚಿವ ಸ್ಥಾನ ಸಿಗದಿದ್ದಕ್ಕೆ ಮಂಡ್ಯ ಜಿಲ್ಲೆಯ ಕಾಂಗ್ರೆಸ್ ಶಾಸಕ ನರೇಂದ್ರಸ್ವಾಮಿ ಕಾಂಗ್ರೆಸ್ ನಲ್ಲೂ ಕಿಂಡರ್ ಗಾರ್ಡನ್ ಪದ್ಧತಿ ಇದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನನಗೆ ಸಚಿವ ಸ್ಥಾನ ಬೇಡಿಕೆ ಇಲ್ಲ. ಅದು ನನ್ನ ಹಕ್ಕು ಎಂದು ಮಂಡ್ಯದಲ್ಲಿ ಮಳವಳ್ಳಿಯ ಕಾಂಗ್ರೆಸ್ ಶಾಸಕ ನರೇಂದ್ರ ಸ್ವಾಮಿ ಹೇಳಿಕೆ ನೀಡಿದ್ದಾರೆ. ಸಂಪುಟ ಪುನಾರಚನೆಯ ವೇಳೆ ಸಚಿವ ಸ್ಥಾನ ಪಡೆಯುವ ವಿಶ್ವಾಸವಿದೆ. ಕಾಂಗ್ರೆಸ್ ಪಕ್ಷದಲ್ಲೂ ಕಿಂಡರ್ ಗಾರ್ಡನ್ ಪದ್ಧತಿ ಇದೆ.ರಾಜಕೀಯ ಹಿನ್ನೆಲೆ ಇದ್ದರೆ ಮಾತ್ರ ಸ್ಥಾನ ಮಾನ ಸಿಗುತ್ತದೆ. ನನಗೆ ಯಾವುದೇ ರಾಜಕೀಯ ಹಿನ್ನೆಲೆ ಇಲ್ಲ. ಹಾಗಾಗಿ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ ಎಂದು ಮಂಡ್ಯದಲ್ಲಿ ಮಳವಳ್ಳಿಯ ಕಾಂಗ್ರೆಸ್ ಶಾಸಕ ನರೇಂದ್ರಸ್ವಾಮಿ ಅಸಮಾಧಾನ ಹೊರಹಾಕಿದರು.

## ವಕ್ಫ್ ಆಸ್ತಿ ವಿವಾದ: ನ. 21ರಂದು ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ

• **ಉದಯವಾಹಿನಿ, ಬೆಂಗಳೂರು**

ವಕ್ಫ್ ಮಂಡಳಿಯಿಂದ ರೈತರ ಭೂಮಿ ಒತ್ತುವರಿ ವಿರೋಧಿಸಿ ನವೆಂಬರ್ 21 ಮತ್ತು 22 ರಂದು ಬಿಜೆಪಿ ರಾಜ್ಯದಾದ್ಯಂತ ಪ್ರತಿಭಟನೆ ನಡೆಸಲಿದೆ. 'ನಮ್ಮ ಭೂಮಿ, ನಮ್ಮ ಹಕ್ಕು' ಘೋಷಣೆಯಡಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಮಾಜಿ ಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥ ನಾರಾಯಣ ಸುದ್ದಿಗಾರರಿಗೆ ತಿಳಿಸಿದರು. ಪ್ರತಿಭಟನೆ ವೇಳೆಯಲ್ಲಿ ತೊಂದರೆಗೀಡಾದ ರೈತರಿಂದ ದೂರು ಹಾಗೂ ಮಾಹಿತಿಯನ್ನು ಸ್ವೀಕರಿಸಲಾಗುವುದು. ಅಹವಾಲು ಸ್ವೀಕಾರಕ್ಕಾಗಿ ರೈತರು, ವಕೀಲರುಮತ್ತು ಪ್ರಮುಖ ಪ್ರತಿನಿಧಿಗಳನ್ನೊಳಗೊಂಡ ಐವರು ಸದಸ್ಯರ ತಂಡವೊಂದನ್ನು ಎಲ್ಲಾ ಜಿಲ್ಲೆಗಳಲ್ಲಿ ರಚಿಸಲಾಗಿದೆ. ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಲಿದೆ ಎಂದು ತಿಳಿಸಿದರು.ಮೇಲುಸ್ತುವಾರಿಗಾಗಿ ಕೇಂದ್ರ, ಸಚಿವರು, ಮಾಜಿ ಮುಖ್ಯಮಂತ್ರಿ , ಹಿರಿಯ ನಾಯಕರು ಮತ್ತಿತರನ್ನೊಳಗೊಂಡ ಮೂರು ತಂಡವನ್ನು ರಚಿಸಲಾಗಿದೆ ಎಂದು ಅವರು ಹೇಳಿದರು.



# ವಿಕ್ರಂ ಎನ್‌ಕೌಂಟರ್

## ಕಾರ್ಯಾಚರಣೆ ಮಾಹಿತಿ ಬಿಚ್ಚಿಟ್ಟ ಪರಮೇಶ್ವರ್

ನಕ್ಸಲರ ನಾಯಕ ಹತ

• ಎಎನ್‌ಎಫ್‌ಎನ್ ಕೌಂಟರ್‌ಗೆ ನಕ್ಸಲ್ ಮುಖಂಡ ವಿಕ್ರಂ ಗೌಡ ಬಲಿ • ಹತ್ಯೆಯಾದ ವಿಕ್ರಂ ಗೌಡನ ಜಾತಕ ಬಿಚ್ಚಿಟ್ಟ ಐಜಿಪಿ ಡಿ.ರೂಪಾ • ಶಸ್ತ್ರ ತ್ಯಜಿಸಿ ಸಮಾಜದ ಮುಖ್ಯ ವಾಹಿನಿಗೆ ಬರಲು ನಕ್ಸಲರಿಗೆ ಅವಕಾಶ : ಪರಮೇಶ್ವರ್

• **ಉದಯವಾಹಿನಿ, ಬೆಂಗಳೂರು**

ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಹೆಬ್ರಿ, ಕಬ್ಬಿನಾಲೆಯ ಪೀತಬೈಲುವಿನಲ್ಲಿ ನಕ್ಸಲ್ ನಿಗ್ರಹ ಪಡೆ (ಎಎನ್‌ಎಫ್) ಹಾಗೂ ನಕ್ಸಲರ ನಡುವೆ ನಡೆದ ಗುಂಡಿನ ಕಾಳಗದಲ್ಲಿ ನಕ್ಸಲ್ ಮುಖಂಡ ವಿಕ್ರಂ ಗೌಡ ಹತರಾಗಿದ್ದಾರೆ. ಹೆಬ್ರಿ ಪರಿಸರದಲ್ಲಿ ಕಳೆದ ಕೆಲ ದಿನಗಳಿಂದ ನಕ್ಸಲ್ ಓಡಾಟದ ಶಂಕೆ ವ್ಯಕ್ತವಾಗಿದ್ದರಿಂದ ಎಎನ್‌ಎಫ್ ತೀವ್ರ ಕೂಂಬಿಂಗ್ ಕಾರ್ಯಾಚರಣೆಗೆ ಇಳಿದಿತ್ತು. ಸೋಮವಾರ ತಡರಾತ್ರಿ ಎಎನ್ ಎಫ್ ತಂಡ ಕಾರ್ಯಾಚರಣೆ ನಡೆಸಿದೆ. ಈ ವೇಳೆ ದಾಳಿ-ಪ್ರತಿದಾಳಿ ನಡೆದಿದ್ದು, ಗುಂಡೇಟಿಗೆ ವಿಕ್ರಂ ಗೌಡ ಬಲಿಯಾಗಿದ್ದಾರೆ.

**ಪೊಲೀಸರ ಮೇಲೆ ಗುಂಡಿನ ದಾಳಿ ಮಾಡಿದ ಕಾರಣ ಎನ್‌ಕೌಂಟರ್:** ಸಚಿವ ಜಿ.ಪರಮೇಶ್ವರ್ ಪೊಲೀಸರ ಮೇಲೆ ನಕ್ಸಲ್ ವಿಕ್ರಂ ಗೌಡ ತಂಡ ಗುಂಡಿನ ದಾಳಿ ಮಾಡಿದ ಕಾರಣ ಪೊಲೀಸರು ಎನ್‌ಕೌಂಟರ್ ಮಾಡಬೇಕಾಯ್ತು ಎಂದು ಗೃಹ ಸಚಿವ ಜಿ. ಪರಮೇಶ್ವರ್ ಮಾಹಿತಿ ನೀಡಿದರು. ಬೆಂಗಳೂರಿನ ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, ವಿಕ್ರಂ ಗೌಡ ಎಂಬ ಗ್ರೇಡೆಡ್ ನಕ್ಸಲ್‌ನನ್ನು ಪೊಲೀಸರು ಎನ್‌ಕೌಂಟರ್ ಮಾಡಿದ್ದಾರೆ. ಕಳೆದ 20 ವರ್ಷಗಳಿಂದ ಅವರನ್ನು ಪೊಲೀಸರು ಹುಡುಕುತ್ತಿದ್ದರು. ಅನೇಕ ಎನ್‌ಕೌಂಟರ್‌ಗಳಲ್ಲಿ ವಿಕ್ರಂ ಗೌಡ ತಪ್ಪಿಸಿಕೊಂಡಿದ್ದ. ಪೊಲೀಸರ ಮೇಲೆ ಅವರು ಗುಂಡಿನ ದಾಳಿ ಮಾಡಿದಾಗ ಎನ್‌ಕೌಂಟರ್ ಮಾಡಿದ್ದಾರೆ ಎಂದರು.

ವಿಕ್ರಂ ಗೌಡ ನಕ್ಸಲ್ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದರಿಂದ ಅವರ ಚಲನವಲನಗಳನ್ನು ಪೊಲೀಸರು ಗಮನಿಸುತ್ತಿದ್ದರು. ಈಗ ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ಮಾಡಿದ್ದಾರೆ. ಈಗ ಸದ್ಯಕ್ಕೆ ಇಷ್ಟು ಮಾಹಿತಿ ಸಿಕ್ಕಿದೆ. ಮಧ್ಯಾಹ್ನದ ಮೇಲೆ ಸಂಪೂರ್ಣ ಮಾಹಿತಿ ಸಿಗಲಿದೆ ಎಂದು ತಿಳಿಸಿದರು.

ನಾವೂ ರಾಜ್ಯದಲ್ಲಿ ನಕ್ಸಲ್ ಕಾಲ ಮುಗೀತು ಅನ್ಕೊಂಡಿದ್ವಿ. ಆದ್ರೆ ಕಳೆದ ವಾರ ರಾಜು ಮತ್ತು ಲತಾ ಎಂಬ ನಕ್ಸಲರು ಪತ್ತೆ ಆಗಿದ್ದರು. ಅವರಿಬ್ಬರೂ ತಪ್ಪಿಸಿಕೊಂಡು ಹೋದ್ರು, ಅಂತ ಕೂಂಬಿಂಗ್ ಆಪರೇಷನ್ ನಡೆಸಲಾಯ್ತು. ಕಳೆದ ಒಂದು ವಾರದಿಂದ ಕೂಂಬಿಂಗ್ ನಡೆಯುತ್ತಿತ್ತು. ಆಗ ಇದ್ದಕಿದ್ದ ಹಾಗೆ ವಿಕ್ರಂ ಗೌಡ ಬರುವ ಮಾಹಿತಿ ಸಿಕ್ಕಿತ್ತು. ವಿಕ್ರಂ ಗೌಡ ಜೊತೆಯಲ್ಲಿದ್ದ ಇಬ್ಬರು ಮೂವರು ಓಡಿ ಹೋಗಿದ್ದಾರೆ. ಆ ಭಾಗದಲ್ಲಿ ಕೂಂಬಿಂಗ್ ಮುಂದುವರೆದಿದೆ ಎಂದು ಮಾಹಿತಿ ನೀಡಿದರು.

ನಕ್ಸಲರನ್ನು ಮುಖ್ಯ ವೇದಿಕೆಗೆ ಕರೆತರುವ ಪ್ರಯತ್ನಗಳು ನಡೆಯುತ್ತಿವೆ. ಹಿಂದೆ ಪಾವಗಡ ಭಾಗದಲ್ಲಿ ಮಾತುಕತೆ ಮೂಲಕ ನಕ್ಸಲರನ್ನು ಮುಖ್ಯವೇದಿಕೆಗೆ ಕರೆತರಲಾಗಿತ್ತು. ಈಗಲೂ ಈ ಪ್ರಯತ್ನ ನಡೀತಿದೆ. ಶರಣಾಗ ಬಯಸುವ ನಕ್ಸಲರಿಗೆ ಸಾಮಾನ್ಯ ಬದುಕು ನಡೆಸಲು ಸರ್ಕಾರ ಅವಕಾಶ ಮಾಡಿಕೊಡಲಿದೆ. ಆದರೆ ಅರಣ್ಯ ಭಾಗದಲ್ಲಿದ್ದು, ಪೊಲೀಸರ ಮೇಲೆ ದಾಳಿ ಮಾಡಿ ತಪ್ಪಿಸಿಕೊಂಡು ಹೋಗಲು ಪ್ರಯತ್ನ ಮಾಡಿದ್ರೆ ಈ ರೀತಿ ಎನ್‌ಕೌಂಟರ್ ಆಗುತ್ತದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು. ದಕ್ಷಿಣ ಭಾರತದಲ್ಲಿ ಕಳೆದ ಎರಡು ದಶಕಗಳಿಂದ ನಕ್ಸಲ್ ತಂಡಗಳನ್ನು ವಿಕ್ರಂ ಗೌಡ ಮುನ್ನಡೆಸುತ್ತಿದ್ದರು. ಕೇರಳ, ತಮಿಳುನಾಡು ಮತ್ತು ಕರ್ನಾಟಕದ ಕೊಡಗು ಸೇರಿದಂತೆ ಹಲವು ಪ್ರದೇಶಗಳಲ್ಲಿ ಈತ ಆಶ್ರಯ ಪಡೆದಿದ್ದರು ಎಂದು ಮೂಲಗಳು ಮಾಹಿತಿ ನೀಡಿವೆ.

### ಮಲೆನಾಡಲ್ಲಿ ನಕ್ಸಲ್ ಹೆಜ್ಜೆ

ಮಲೆನಾಡಿನಲ್ಲಿ ಎರಡು ದಶಕದ ಬಳಿಕ ಮತ್ತೆ ನಕ್ಸಲರ ಹೆಜ್ಜೆ ಗುರುತು ಕಾಣಿಸಿಕೊಂಡಿದೆ. ನ.10 ರಂದು ಕೊಪ್ಪ ತಾಲ್ಲೂಕಿನ ಕಡೇಗುಂದಿ ಗ್ರಾಮಕ್ಕೆ ಮುಂಡಗಾರು ಲತಾ ಹಾಗೂ ಜಯಣ್ಣ ಭೇಟಿ ನೀಡಿದ್ದ ಮಾಹಿತಿ ಆಧರಿಸಿ ಕೂಂಬಿಂಗ್ ಚುರುಕುಗೊಂಡಿದ್ದು, ಕಾನನದ ನಡುವಿನ ನಿವಾಸಿಗಳ ಆತಂಕಕ್ಕೆ ಕಾರಣವಾಗಿದೆ. ಮಲೆನಾಡಲ್ಲಿ 2002ರಲ್ಲಿ ಮೊದಲ ಬಾರಿಗೆ ಕಾಣಿಸಿಕೊಂಡ ನಕ್ಸಲ್ ಚಟುವಟಿಕೆ ಸತತ ಒಂದು ದಶಕಕ್ಕೂ ಹೆಚ್ಚು ಕಾಲ ರಕ್ತಸಿಕ್ತ ಅಧ್ಯಾಯವನ್ನೇ ತೆರೆದಿಟ್ಟಿತ್ತು. ನಕ್ಸಲರು ಮತ್ತು ಪೊಲೀಸ್, ಅರಣ್ಯ ಇಲಾಖೆಯವರ ನಡುವಿನ ಕಾದಾಟದಲ್ಲಿ ಹಲವು ಜೀವಗಳು ಬಲಿಯಾದವು. ಸ್ಥಳೀಯ ನಿವಾಸಿಗಳು ಜೀವ ಕೈಯ್ಯಲ್ಲಿ ಹಿಡಿದು ಬದುಕುವಂತಾಗಿತ್ತು.

### ಮಾರಕ ಯೋಜನೆಗಳಿಗೆ ವಿರೋಧ

ಮಲೆನಾಡಿನ ಜನರ ಬದುಕಿಗೆ ಮಾರಕವಾಗಿರುವ ಕಸ್ತೂರಿ ರಂಗನ್ ವರದಿ, ಅರಣ್ಯ ಒತ್ತುವರಿ ತೆರವು, ಸೆಕ್ಷನ್-4, ಕುದುರೆಮುಖ ರಾಷ್ಟ್ರೀಯ ಉದ್ಯಾನ ಜಾರಿ, ನಿವೇಶನ ರಹಿತರಿಗೆ ದಶಕಗಳು ಕಳೆದರೂ ನಿವೇಶನ ನೀಡದಿರುವುದು ಮಲೆನಾಡಿಗರನ್ನು ಆತಂಕಕ್ಕೆ ತಳ್ಳಿದೆ. ಇದರ ವಿರುದ್ಧ ಹಲವು ಸಂಘಟನೆಗಳು ಹೋರಾಟ ನಡೆಸುತ್ತಲೇ ಇವೆ. ಸರಕಾರದ ಜನವಿರೋಧದ ನಡೆಗಳು ಸಹ ಮಲೆನಾಡಿನಲ್ಲಿಮತ್ತೆ ನಕ್ಸಲ್ ಚಟುವಟಿಕೆಗೆ ಇಂಬು ನೀಡುತ್ತಿದೆ ಎನ್ನಲಾಗುತ್ತಿದೆ. ಇತ್ತ ಪೊಲೀಸರು ಸಹ ನಕ್ಸಲರ ಹೆಡೆಮುರಿ ಕಟ್ಟಲು ಕಳೆದ ಐದು ದಿನಗಳಿಂದ ಕೊಪ್ಪ, ಶೃಂಗೇರಿ ತಾಲ್ಲೂಕಿನ ದೇವಾಲೆಕೊಪ್ಪ, ಕೆರೆಕಟ್ಟೆ, ಕಿಗ್ಗಾ ನಕ್ಸಲ್ ನಿಗ್ರಹ ದಳ ಕ್ಯಾಂಪ್ ಸಿಬ್ಬಂದಿ ಬಿರುಸಿನ ಕಾರ್ಯಾಚರಣೆಗೆ ಮುಂದಾಗಿದ್ದಾರೆ.

1 ಎಎನ್‌ಎಫ್ ಹಾಗೂ ನಕ್ಸಲರ ನಡುವೆ ನಡೆದ ಗುಂಡಿನ ಕಾಳಗದಲ್ಲಿ ನಕ್ಸಲ್ ಮುಖಂಡ ವಿಕ್ರಂ ಗೌಡ ಹತನಾಗಿದ್ದಾನೆ.

2 ನಾಲ್ವರು ಕಾಡಿನ ಹಾದಿಯಲ್ಲಿ ಪರಾರಿಯಾಗಿದ್ದಾರೆ. ಎಎನ್ ಎಫ್ ಕೂಂಬಿಂಗ್ ಮುಂದುವರಿಸಿದ್ದು , ಇನ್ನುಳಿದವರಿಗಾಗಿ ಶೋಧ ನಡೆಸುತ್ತಿದೆ.

3 ಕೊಪ್ಪ ತಾಲ್ಲೂಕಿನ ಯಡಗುಂದ ಗ್ರಾಮಕ್ಕೆ ನಕ್ಸಲರು ಭೇಟಿ ನೀಡಿ, ಅರಣ್ಯ ಒತ್ತುವರಿ ಮತ್ತು ಕಸ್ತೂರಿ ರಂಗನ್ ವರದಿ ಜಾರಿ ವಿರೋಧಿಸಿ ಚರ್ಚಿಸಿದ್ದಾರೆ ಎನ್ನಲಾಗಿದೆ.



## ಮಲ್ಲಿಕಾರ್ಜುನ ಖರ್ಗೆಗೆ ವಿಜಯೇಂದ್ರ ತಿರುಗೇಟು

• **ಉದಯವಾಹಿನಿ, ಬೆಂಗಳೂರು**

'ಭಾರತದಲ್ಲಿ ರಾಜಕೀಯವಾಗಿ ಅತ್ಯಂತ ಅಪಾಯಕಾರಿ ಯಾವುದಾದರೂ ಇದ್ದರೆ ಅದು ಬಿಜೆಪಿ ಮತ್ತು ಆರ್‌ಎಸ್‌ಎಸ್ ಆಗಿದೆ. ಅವು ವಿಷದಂತಿವೆ. ಅಂತಹ ವಿಷಕಾರಿ ಹಾವನ್ನು ಕೊಲ್ಲಬೇಕು ಎನ್ನುವ ಮೂಲಕ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬಿಜೆಪಿ ಮತ್ತು ಆರ್‌ಎಸ್‌ಎಸ್‌ಅನ್ನು ವಿಷಕಾರಿ ಹಾವಿಗೆ ಹೋಲಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಈ ಹೇಳಿಕೆಗೆ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಖಡಕ್ ತಿರುಗೇಟು ನೀಡಿದ್ದಾರೆ. ಈ ಬಗ್ಗೆ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿರುವ ವಿಜಯೇಂದ್ರ, ಮಲ್ಲಿಕಾರ್ಜುನ ಖರ್ಗೆ ಅವರೇ, ನಿಮ್ಮ ಹಿರಿತನದ ಬಗ್ಗೆ ಗೌರವ ಇದ್ದೇ ಇದೆ. ಆದರೆ ನಿಮ್ಮ ಬಾಯಿಂದ ಹೊರಡುವ ನಂಜುಕಾರುವ ದ್ವೇಷದ ಮಾತುಗಳನ್ನು ಒಪ್ಪಲಾರೆವು ಎಂದಿದ್ದಾರೆ. ಕೋಟಿ, ಕೋಟಿ ಜನರ ಹೋರಾಟ, ತ್ಯಾಗ- ಬಲಿದಾನದ ಫಲವಾಗಿ ಬ್ರಿಟಿಷರ ಗುಲಾಮಗಿರಿಯಿಂದ ಮುಕ್ತಗೊಳಿಸಿಕೊಂಡ ಸ್ವಾತಂತ್ರ್ಯವನ್ನು ನೆಹರು ಕುಟುಂಬ ತನ್ನ ಮುಷ್ಟಿಯಲ್ಲಿ ಹಿಡಿದಿಟ್ಟುಕೊಂಡು ಪ್ರಜಾಪ್ರಭುತ್ವದೊಂದಿಗೆ ಚೆಲ್ಲಾಟವಾಡಿ, ಪ್ರಜಾತಂತ್ರ ವ್ಯವಸ್ಥೆಯ ಕತ್ತು ಹಿಸುಕಲು 'ತುರ್ತು ಪರಿಸ್ಥಿತಿ ಎಂಬ ವಿಷಕಾರಿ ಅಣ್ವಸ್ತ್ರ'ವನ್ನು ದೇಶದ ಮೇಲೆ ಬಳಸಿದ್ದು ನಿಮ್ಮ ಕಾಂಗ್ರೆಸ್ ಪಕ್ಷ ಎಂಬುದನ್ನು



ಇಷ್ಟು ಬೇಗ ನೀವು ಮರೆತಂತಿದೆ ಎಂದರು. ನೆಹರು ಕುಟುಂಬದ ನೆರಳಿನಲ್ಲಿ ರಾಜಕಾರಣ ಮಾಡುತ್ತಿರುವ ನೀವು ಅವರನ್ನು ಓಲೈಸುವ ಭರದಲ್ಲಿ 'ಕೊಲ್ಲುವ' ಮಾತುಗಳನ್ನಾಡಿರುವುದು ನಿಮ್ಮ ಘನತೆಯನ್ನು ಕುಗ್ಗಿಸಿದೆ. ಕಾಂಗ್ರೆಸ್‌ನ ಗುಲಾಮಗಿರಿ ರಾಜಕಾರಣವನ್ನು ಮೂಲೋತ್ಪಾಟನೆ ಮಾಡಿ ದೇಶದಲ್ಲಿ ನೈಜ ಭಾರತೀಯತೆಯ ಪರಿಪೂರ್ಣ ಪ್ರಜಾಪ್ರಭುತ್ವವನ್ನು ಅಸ್ತಿತ್ವಕ್ಕೆ ತರಬೇಕೆಂಬ ನಿಟ್ಟಿನಲ್ಲಿ ಶತಮಾನದ ಹೋರಾಟ ನಡೆಸಿದ್ದು 'ರಾಷ್ಟ್ರೀಯ ಸ್ವಯಂ ಸೇವಕ ಸಂಘ' ಎಂದು ಹೇಳಿದರು.

ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದ ಆಶಯಕ್ಕೆ ಪೂರಕವಾದ ರಾಷ್ಟ್ರವನ್ನು ಕಟ್ಟಬೇಕೆಂದು ಸಂಕಲ್ಪಿಸಿ ವಿಶ್ವದಲ್ಲಿ ಮುಂಚೂಣಿಯ ಸ್ಥಾನದಲ್ಲಿ ಭಾರತವನ್ನು ತಂದು ನಿಲ್ಲಿಸಿರುವುದು ಭಾರತೀಯ ಜನತಾ ಪಾರ್ಟಿ. ಯಾವ ಪಕ್ಷ ವಿಷದ ಹಾವು ಎನ್ನುವುದನ್ನು ಈ ದೇಶದ ಜನತೆ ತೀರ್ಮಾನಿಸಿ ಈಗಾಗಲೇ ಕಾಂಗ್ರೆಸ್ ಎಂಬ ಘಟಸರ್ಪದ ಹಲ್ಲುಗಳನ್ನು ಕಿತ್ತೆಸೆದಿದ್ದಾರೆ ಎಂದ ಅವರು, ಅದರ ನೆರಳಿನಲ್ಲಿ ನಿಂತು ಮಾತನಾಡುತ್ತಿರುವ ನಿಮ್ಮಿಂದ ಜನರು ದ್ವೇಷ ಹಾಗೂ ವಿಷದ ಮಾತುಗಳನ್ನಲ್ಲದೇ ಇನ್ನೇನು ನಿರೀಕ್ಷಿಸಲು ಸಾಧ್ಯ ಎಂದು ಮಲ್ಲಿಕಾರ್ಜುನ ಖರ್ಗೆ ವಿರುದ್ಧ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

# ಬಿಪಿಎಲ್ ಕಾರ್ಡ್ ರದ್ದಿಗೆ ಅಸಲಿ ಕಾರಣ ಇದೇ ಎಂದ ಆರ್. ಅಶೋಕ್!


| ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವಲ್ಲಿ ಸರ್ಕಾರ ಎಡವಿದೆ | ಇದರಿಂದಲೇ ಆರ್ಥಿಕ ನಷ್ಟ | ಇದನ್ನು ಸರಿದೂಗಿಸಲು ಈ ಕ್ರಮ ಅನುಸರಿಸಲಾಗುತ್ತಿದೆ.

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದು ಮಾಡುವ ವಿಚಾರ ಹೊಸ ವಿವಾದವನ್ನೇ ಸೃಷ್ಟಿ ಮಾಡಿದೆ. ತಪ್ಪು ಮಾಹಿತಿ ಅಥವಾ ಬಿಪಿಎಲ್ ಕಾರ್ಡ್ ನ ಅರ್ಹತ ಮಿತಿ ಮೀರಿದರವನ್ನು ಗುರುತಿಸಿ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡುತ್ತಿರುವುದಾಗಿ ರಾಜ್ಯ ಸರ್ಕಾರ ಹೇಳಿದೆ. ಆದರೆ, ಈ ಕ್ರಮಕ್ಕೆ ವಿರೋಧ ಪಕ್ಷಗಳಿಂದ ಹಾಗೂ ಜನ ಸಾಮಾನ್ಯರಿಂದ ತೀವ್ರ ವಿರೋಧ ವ್ಯಕ್ತವಾಗುತ್ತಿದೆ.

ರಾಜ್ಯ ಸರ್ಕಾರವು ದಿವಾಳಿಯಾಗಿದ್ದು, ಇದೇ ಕಾರಣಕ್ಕೆ ಬಿಪಿಎಲ್ ಕಾರ್ಡ್ ರದ್ದು ಪ್ರಕ್ರಿಯೆ ಪ್ರಾರಂಭಿಸಿದೆ ಎಂದು ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ದೂರಿವೆ. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರವು ಎಡವಿದೆ. ಇದರಿಂದಲೇ ಆರ್ಥಿಕ ನಷ್ಟವಾಗುತ್ತಿದ್ದು, ಇದನ್ನು ಸರಿದೂಗಿಸಲು ಈ ಕ್ರಮ ಅನುಸರಿಸಲಾಗುತ್ತಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನ್ನಭಾಗ್ಯದ ಹೊರೆ ಹೊರಲಾಗದೆ ಲಕ್ಷಾಂತರ ಬಿಪಿಎಲ್ ಕಾರ್ಡ್ ರದ್ದು ಮಾಡುತ್ತಿದ್ದಾರೆ. ತೆರಿಗೆದಾರರಿಗೆ, ಸರ್ಕಾರಿ ನೌಕರರಿಗೆ ಉಚಿತ ಅಕ್ಕಿ ಕೊಡಬೇಕಾ ಎಂದು ಈ ರಾಜ್ಯ ಕಂಡ ಮಹಾನ್ ದಕ್ಷ ಆಡಳಿತಗಾರರ ರೀತಿ ಹೇಳಿಕೆ ಕೊಟ್ಟಿದ್ದಾರೆ ಎಂದು ಆರ್ ಅಶೋಕ್ ವ್ಯಂಗ್ಯವಾಡಿದ್ದಾರೆ. ಈ ಸಂಬಂಧ ಅವರು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಹಾಗಾದರೆ ಶಕ್ತಿ ಗ್ಯಾರೆಂಟಿ ಅಡಿಯಲ್ಲಿ ತೆರಿಗೆದಾರರು, ಸರ್ಕಾರಿ ನೌಕರರು ಉಚಿತ ಬಸ್ಸು ಸೇವೆ ಬಳಸುತ್ತಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಅಲ್ಲದೆ ಮುಂದುವರಿದು, ಹಾಗಾದರೆ ಗೃಹಜ್ಯೋತಿ ಗ್ಯಾರೆಂಟಿ ಯೋಜನೆಯಡಿ ತೆರಿಗೆದಾರರು, ಸರ್ಕಾರಿ ನೌಕರರು 200 ಯೂನಿಟ್ ವರೆಗೂ ಉಚಿತ ಕರೆಂಟ್ ಪಡೆಯುತ್ತಿಲ್ಲವೇ. ಇಲ್ಲವೇ ಈ ಹೇಳಿಕೆ ಶಕ್ತಿ ಯೋಜನೆ



### ಕ್ಷೇತ್ರಗಳಿಗೆ ನಿಧಿ ಹಂಚಿಕೆ ಮಾಡಲು ಕೈಲಾಗದ ದುಸ್ಥಿತಿ ತಲುಪಿದೆ

ಅವೈಜ್ಞಾನಿಕ ಗ್ಯಾರಂಟಿಯಿಂದಾಗಿ ನಿಜವಾದ ಅಭಿವೃದ್ಧಿ ಯೋಜನೆಗಳಿಗೆ ಹಣವಿಲ್ಲದಂತೆ ಮಾಡಿದೆ ಭ್ರಷ್ಟ ಕಾಂಗ್ರೆಸ್ ಸರ್ಕಾರವು ವೇದಿಕೆಯಲ್ಲಿ ದೊಡ್ಡ ದೊಡ್ಡ ಹುಸಿ ಭಾಷಣಗಳನ್ನು ಮಾಡುವ ಸಿದ್ದರಾಮಯ್ಯ ಸರ್ಕಾರ ನ್ಯಾಯಯುತವಾಗಿ ಕ್ಷೇತ್ರಗಳಿಗೆ ನಿಧಿ ಹಂಚಿಕೆ ಮಾಡಲು ಕೈಲಾಗದ ದುಸ್ಥಿತಿ ತಲುಪಿದೆ ಎಂದಿದೆ. ಈ ಸತ್ಯವನ್ನು ಕಾಂಗ್ರೆಸ್ ಶಾಸಕ ಗವಿಯಪ್ಪ ಬಿಚ್ಚಿಟ್ಟಿದ್ದಾರೆ. ಕೊಟ್ಟಿರುವ 12 ಕೋಟಿ ರೂ. ಆಸ್ಪತ್ರೆಗೆ ಸಾಲುತ್ತಿಲ್ಲ.. ಇನ್ನಿತರ ಯೋಜನೆಗಳಿಗೆ ನಾವೇನು ಮಾಡುವುದು ಎಂದು ಪ್ರಶ್ನಿಸಿದ್ದಾರೆ. ಆದರೆ ಹಗರಣಗಳಲ್ಲಿ ಸಿಲುಕಿರುವ ಭ್ರಷ್ಟ ಸಿಎಂ ಸಿದ್ದರಾಮಯ್ಯ, ಇದ್ಯಾವುದಕ್ಕೂ ತಲೆಕೆಡಿಸಿಕೊಳ್ಳುತ್ತಿಲ್ಲ. ಇದು ನಾಡಿನ ದುರಂತ ಎಂದು ತರಾಟೆಗೆ ತೆಗೆದುಕೊಂಡಿದೆ.

ಮತ್ತು ಗೃಹಜ್ಯೋತಿ ಯೋಜನೆಗಳಲ್ಲೂ ಶೀಘ್ರದಲ್ಲೇ ಫಲಾನುಭವಿಗಳಿಗೆ ಕೊಕ್ ನೀಡಲಾಗುತ್ತದೆ ಎಂಬ ಮುನ್ಸೂಚನೆಯೇ ಎಂದೂ ಅವರು ಕೇಳಿದ್ದಾರೆ. ಈ ಎಡಬಿಡಂಗಿ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಒಂದು ದೂರದೃಷ್ಟಿ, ಪೂರ್ವಸಿದ್ಧತೆ, ಯೋಜನೆ ಇವ್ಯಾವುದೂ ಇಲ್ಲ. ಕೇವಲ ಚುನಾವಣೆಗೆ ಗೆಲ್ಲಲು ಮನಸ್ಸಿಗೆ ಬಂದ ಹಾಗೆ ಕಾಕಾ ಪಾಟೀಲನಿಗೂ ಫ್ರೀ, ಮಹಾದೇವಪ್ಪನಿಗೂ ಫ್ರೀ ಎಂದು ಸುಳ್ಳು ಪ್ರಚಾರ ಮಾಡಿ ಅಧಿಕಾರಕ್ಕೆ ಬಂದಿರುವ ಈ ಕಾಂಗ್ರೆಸ್ ಸರ್ಕಾರಕ್ಕೆ, ಈಗ ಗ್ಯಾರೆಂಟಿಗಳು ನುಂಗಲಾರದ, ಉಗಿಯಲಾರದ ಬಿಸಿ ತುಪ್ಪವಾಗಿದೆ. ಇದೇ ಸತ್ಯ ಎಂದು ಹಾಸ್ಯ ಹಾಗೂ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ಇನ್ನೊಂದು ಕಡೆ ಜೆಡಿಎಸ್ ಸಹ ಟ್ವೀಟ್‌ಗಳ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ. ಅನುದಾನದ ಕೊರತೆಯಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿಕೊಳ್ಳುತ್ತಾರೆ.

ಮತ್ಯಾಕೆ ಅನುದಾನ ಹಂಚಿಕೆ ವಿಚಾರದಲ್ಲಿ ತಾರತಮ್ಯ ಹಾಗೂ ಪಕ್ಷಪಾತ ಮಾಡುತ್ತಿದ್ದಾರೆ ಎಂದು ಜೆಡಿಎಸ್ ಪ್ರಶ್ನೆ ಮಾಡಿದೆ. ಮುಂದುವರಿದು ಇತರರು ಕೋಟಿ.. ಕೋಟಿ ಹಣ ಪಡೆಯುತ್ತಿರುವಾಗ ವಿಜಯನಗರವನ್ನೇಕೆ ಕಡೆಗಣಿಸಲಾಗುತ್ತಿದೆ ಎಂದೂ ಕೇಳಿದೆ. ಖಾಲಿ ಕೈ ಸರ್ಕಾರದ ಹುಸಿ ಭರವಸೆಗಳ ವಿರುದ್ಧ ಕಾಂಗ್ರೆಸ್ ಶಾಸಕ ಗವಿಯಪ್ಪ ಅವರ ಅಸಹನೆ ಮತ್ತು ಆಕ್ರೋಶ ನ್ಯಾಯಯೋಚಿತವಾಗಿಯೇ ಇದೆ ಎಂದೂ ಜೆಡಿಎಸ್ ಟ್ವೀಟ್ ಮಾಡಿದೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,707/Gram24ct ₹7,065/Gram22ct | ಬೆಳ್ಳಿ: ₹91.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಸ್ಥಿತಪ್ರಜ್ಞ ಚನ್ನಬಸವ ದೇವರು

ಬೆಳಗಾವಿ ಹುಣಸೇವಾರಿ ಕಾಕತಿಯ ಸಿದ್ಧಾಶ್ರಮದ ಸದಾನಂದ ದೇವರು ತಮ್ಮ ತಂದೆಯ ಬಗ್ಗೆ ಬರೆದ ಸ್ಥಿತಪ್ರಜ್ಞ ಶ್ರೀ ಚನ್ನಬಸವ ದೇವರು ಪುಸ್ತಕವನ್ನು ಈಚೆಗೆ ಕೈಗಿತ್ತರು. ಇವರ ಬಗ್ಗೆ ಕಾಡರಕೊಪ್ಪದ ದಯಾನಂದ ಸರಸ್ವತಿ ಸ್ವಾಮಿಗಳಿಂದ ಕೇಳಿದ್ದೆ. ದಯಾನಂದ ಶ್ರೀಗಳ ಪೂರ್ವಾಶ್ರಮದ ಅಣ್ಣ ಚನ್ನಬಸವದೇವರು ಉರ್ಫ್ ಚನ್ನಬಸಪ್ಪ ಕಲ್ಲಪ್ಪ ಇಂಚಲ. ಬೈಲಹೊಂಗಲ ತಾಲ್ಲೂಕಿನ ಹುಣಶಿಕಟ್ಟೆಯಲ್ಲಿ 1939ರಲ್ಲಿ ಜನನ. ತಾರುಣ್ಯದಲ್ಲಿಯೇ ಆಧ್ಯಾತ್ಮಿಕ ಒಲವು, ವೇದಾಂತಪರ ಕವನ ರಚನೆ. 21ನೇ ವಯಸ್ಸಿನಲ್ಲಿ ನೌಕರಿ. 24ನೇ ವಯಸ್ಸಿನಲ್ಲಿ ವಿವಾಹ. 28ನೇ ವಯಸ್ಸಿನಲ್ಲಿ ನೌಕರಿಗೆ ರಾಜೀನಾಮೆ. ಮುರಗೋಡ ಮಹಾಂತ ಶಿವಯೋಗಿಗಳಿಂದ ಲಿಂಗದೀಕ್ಷೆ. ಕಾದರವಳ್ಳಿಯ ಅಪ್ಪಯ್ಯಸ್ವಾಮಿಗಳ ಬಳಿ ವೇದಾಂತದ ಅಭ್ಯಾಸ. ಇಂಥವರ ಬದುಕಿನಲ್ಲಿ ದುರಂತವೊಂದು ನಡೆದು ಹೋಯಿತು. ಬೆಂಕಿಯಲ್ಲಿಟ್ಟಾಗ ಚಿನ್ನದ, ತೇಯ್ದಾಗ ಗಂಧದ ನೈಜತೆ ಸಾಬೀತಾಗುವಂತೆ ಈ ಘಟನೆ ಚನ್ನಬಸವದೇವರ ಸ್ಥಿತಪ್ರಜ್ಞ ಸ್ಥಿತಿಯನ್ನು ಸಾಬೀತುಪಡಿಸಿತು.1972ರಲ್ಲಿ ಮಧ್ಯಾಹ್ನ ಹೊಲಕ್ಕೆ ಹೊರಟಾಗ ಹಂತಕನೊಬ್ಬ ಕುಡುಗೋಲಿನಿಂದ ಹೊಟ್ಟೆ ಕೊಯ್ದ. ಒಂಭತ್ತು ಇಂಚು ಹೊಟ್ಟೆ ಹರಿದು ಕರುಳು ಹೊರಬಿದ್ದವು. ವಾಹನಸೌಕರ್ಯದ ಕೊರತೆಯಿಂದ ಮೂರು ಘಂಟೆಗೂ ಹೆಚ್ಚು ಅಲ್ಲಿಯೇ ಉಳಿಯಬೇಕಾಯಿತು. ಒಂದಿನಿತೂ ನರಳಲಿಲ್ಲ ಅಳುವವರನ್ನೂ ತಡೆದು, ಜಪಿಸಿದರು, ಜಪಿಸಲು ಹೇಳಿದರು. ವೈದ್ಯರು ನೀಡುವ ಪ್ರಜ್ಞೆ ತಪ್ಪಿಸುವ, ನೋವು ಮರೆಸುವ ಇಂಜೆಕ್ಷನ್ ನೀಡುವುದನ್ನೂ ನಿರಾಕರಿಸಿದರು ಸ್ವಶರೀರವನ್ನು ಪರಶರೀರದಂತೆ ಕಂಡರು. ಶಸ್ತ್ರಾದಿಗಳಿಂದ ಭಯಾನಕ ಗಾಯಾಳುವಾದರೂ ದುಃಖಕ್ಕೊಳಗಾಗದವನು ಸ್ಥಿತಪ್ರಜ್ಞ ಎಂಬ ಶಂಕರರ ಗೀತಾಭಾಷ್ಯಕ್ಕೆ ಸಾಕ್ಷಿಯಾದರು.

# ಬೆಂಗಳೂರಿನಲ್ಲಿ ಒತ್ತುವರಿ ತೆರವು, ಅನಧಿಕೃತ ಕಟ್ಟಡ ನೆಲಸಮ ಕಾರ್ಯ

## ಬೆಂಗಳೂರು ಅಪೂರ್ಣ ಕಾಮಗಾರಿಗಳ ಸಮಸ್ಯೆಗೆ ಮುಕ್ತಿ, ಕೆಲಸ ಪುನಾರಂಭಕ್ಕೆ ಬಿಬಿಎಂಪಿ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಒತ್ತುವರಿ ತೆರವು, ಅನಧಿಕೃ ಕಟ್ಟಡ ನೆಲಸಮ ಕಾರ್ಯ ಮುಂದುವರೆಸಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ( ಬಿಬಿಎಂಪಿ) ಇದೀಗ ನಗರದಲ್ಲಿ ಅಪೂರ್ಣ ಕಾಮಗಾರಿಗಳನ್ನು ಪುನಾರಂಭಿಸಲಿದೆ. ಈ ಕುರಿತು ವರದಿ ಸಿದ್ದಪಡಿಸಿ ಸಲ್ಲಿಸುವಂತೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೊಮ್ಮನಹಳ್ಳಿ ವಲಯಕ್ಕೆ ಸಂಬಂಧಿಸಿದಂತೆ ಅಲ್ಲಿನ ವಲಯ ಜಂಟಿ ಆಯುಕ್ತರ ಕಛೇರಿಯಲ್ಲಿ ಮಂಗಳವಾರ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಡಿ ಸಾರ್ವಜನಿಕರ ಅಹವಾಲು ಸ್ವೀಕರಿಸಿದರು. ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸ ಬೇಕಿರುವ ನಿಟ್ಟಿನಲ್ಲಿ ಸೂಕ್ತ ಕ್ರಮ ಗಳನ್ನು ಕೈಗೊಳ್ಳಬೇಕು.

ಈ ಸಂಬಂಧ ಎಲ್ಲಾ ಅಪೂರ್ಣ ಕಾಮಗಾರಿಗಳನ್ನು ಪಟ್ಟಿ ಮಾಡಿಕೊಂಡು ವರದಿ ಸಿದ್ಧಪಡಿಸಲು ಸೂಚನೆ ನೀಡಿದರು. ಕೆರೆಗಳ ಪರಿಶೀಲಿಸಿ, ರಸ್ತೆಗುಂಡಿಗಳಿಗೆ

ಉದಯವಾಹಿನಿ ಚಿತ್ರ



ಮುಕ್ತಿ ಕೊಡಿ ಈ ವಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕೆರೆಗಳಿಗೆ ಭದ್ರತಾ ಸಿಬ್ಬಂದಿಯನ್ನು ನಿಯೋಜನೆ ಮಾಡಿರಬೇಕು. ಈ ಸಂಬಂಧ ಮಾರ್ಷಲ್‌ಗಳ ಗಸ್ತು ತಿರುಗುವ ವಾಹನವು ರಾತ್ರಿ ವೇಳೆ ಎಲ್ಲಾ ಕೆರೆಗಳಿಗೆ ಭೇಟಿ ನೀಡಿ ಭದ್ರತಾ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆಯೇ ಎಂಬುದನ್ನು ಪರಿಶೀಲನೆ ನಡೆಸಿ ವರದಿ ನೀಡಬೇಕು ಎಂದರು.

ಗಸ್ತು ತಿರುಗುವ ವೇಳೆ ಕಸ ಬಿಸಾಡುವ ಹಾಗೂ ಬೀದಿ ದೀಪಗಳ ಅಳವಡಿಕೆಯ ಮೇಲೆಯೂ ನಿಗಾವಹಿಸಲು ಮಾರ್ಷಲ್ ಮೇಲ್ವಿಚಾರಕರಿಗೆ ಸೂಚನೆ ನೀಡಿದರು. ಬೊಮ್ಮನಹಳ್ಳಿ ವಲಯದ

> **ಬೆಂಗಳೂರು ಬಿಬಿಎಂಪಿ ಜಾಗಗಳಿಗೆ ಫೆನ್ಸಿಂಗ್ ಅಳವಡಿಸುವುದಕ್ಕಾಗಿ 50 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಆಯಾ ವಲಯ ವ್ಯಾಪ್ತಿಯಲ್ಲಿ ಫೆನ್ಸಿಂಗ್ ಅಳವಡಿಸುವ ಜಾಗದ ಮಾಹಿತಿ ಪಟ್ಟಿ ಮಾಡಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿದರೆ ಕೂಡಲೇ ಅಗತ್ಯವಿರುವ ಹಣ ಬಿಡುಗಡೆ ಮಾಡಲಾಗುವುದ ಎಂದರು.**

ಎಲ್ಲಾ ಪ್ರಮುಖ ರಸ್ತೆಗಳಲ್ಲಿ ರಸ್ತೆ ಮೇಲ್ಮೈ ಪದರ ಹಾಳಾಗಿರುವ ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಪರಿಶೀಲನೆ ನಡೆಸಿ ಪಟ್ಟಿ ಮಾಡಬೇಕು. ಅವಶ್ಯಕ ಡಾಂಬರನ್ನು ತರೆಸಿಕೊಂಡು ಕೂಡಲೆ ರಸ್ತೆ ಮೇಲ್ಮೈ ಹಾಳಾಗಿರುವ ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚಿ ಸೂಕ್ತ ಸಂಚಾರಕ್ಕೆ ಅವಕಾಶ ಮಾಡಿಕೊಡಿ. ಆಟದ ಮೈದಾನ, ಕೆರೆ ಹಾಗೂ ಉದ್ಯಾನವನಗಳ ವರದಿ ನೀಡಿ ಈ ವಲಯ

### 80ಕ್ಕೂ ಹೆಚ್ಚು ದೂರು

**ಬಂಡೆಪಾಳ್ಯದಲ್ಲಿ ಒತ್ತುವರಿ ತೆರವು ಶೀಘ್ರ, ಹೊಂಗಸಂದ್ರ, ಬಂಡೆಪಾಳ್ಯದಲ್ಲಿ ಸುಮಾರು 9 ಎಕರೆ ಪಾಲಿಕೆ ಜಾಗವನ್ನು ಒತ್ತುವರಿ ಆಗಿದೆ. ಈ ಸ್ಥಳಲ್ಲಿ ಎಷ್ಟು ಮಂದಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿದೆ ಎಂಬುದನ್ನು ಪರಿಶೀಲನೆ ನಡೆಸಿ, ಅದನ್ನು ಹೊರತುಪಡಿಸಿ ಉಳಿದ ಜಾಗದಲ್ಲಿ ಒತ್ತುವರಿಯನ್ನು ಗುರುತಿಸಿ ತೆರವುಗೊಳಿಸಿ ಫೆನ್ಸಿಂಗ್ ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು ಈ ವೇಳೆ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಒಟ್ಟು 80ಕ್ಕೂ ಹೆಚ್ಚು ದೂರುಗಳನ್ನು ಸ್ವೀಕರಿಸಿದರು.**

ವ್ಯಾಪ್ತಿಯಲ್ಲಿ ಬರುವ ಆಟದ ಮೈದಾನಗಳು, ಕೆರೆಗಳು ಹಾಗೂ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡಬೇಕು. ಈ ಸಂಬಂಧ ಎಲ್ಲಾ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ಸಿದ್ದಪಡಿಸಬೇಕು. ಬೇಗೂರು ರಸ್ತೆ ಅಗಲೀಕರಕ್ಕೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ, ಬೇಗೂರು ರಸ್ತೆ ಅಗಲೀಕರಣದ ಕುರಿತಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ಅಗಲೀಕರಣದ ಜಾಗದಲ್ಲಿ ಬರುವ ಆಸ್ತಿ ಮಾಲೀಕರ ಜೊತೆ ಸಭೆ ನಡೆಸಿ ಟಿಡಿಆರ್ ನೀಡುವ ಸಲುವಾಗಿ ಸರಿಯಾದ ಮಾಹಿತಿ ನೀಡಿ ಅಗತ್ಯ ಕ್ರಮ ಕೈಗೊಳ್ಳಲು ಜಂಟಿ ಆಯುಕ್ತರಿಗೆ ಸೂಚಿಸಿದರು.

BWSSB ಎಸ್‌ಟಿಪಿಗೆ ಜಾಗ ನೀಡಲು ಕೋರಿಕೆ ಬಿಬಿಎಂಪಿಗೆ ಸಂಬಂಧಿಸಿದ ಮೂರು ಎಕರೆ ಜಾಗವು ಮಡಿವಾಳ ಕೆರೆ ಭಾಗದಲ್ಲಿದೆ. ಆ ಸ್ಥಳದಲ್ಲಿ 45 ಎಂ.ಎಲ್.ಡಿ ತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ ಮಾಡಲು ಸ್ಥಳಾವಕಾಶ ಕಲ್ಪಿಸಿಕೊಡಲು ಜಲ ಮಂಡಳಿ ಅಧಿಕಾರಿಗಳು ಕೋರಿದರು. ಅದಕ್ಕೆ, 3 ಎಕರೆ ಪ್ರದೇಶ ಹಸ್ತಾಂತರ ಮಾಡುವ ಸಲುವಾಗಿ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

## ನವೆಂಬರ್ ಅಂತ್ಯದಿಂದ ಡಿಸೆಂಬರ್‌ವರೆಗೆ ಅಧಿಕ ಚಳಿ : ಹವಾಮಾನ ಇಲಾಖೆ ಮಾಹಿತಿ

• ಉದಯವಾಹಿನಿ, ಬೆಂಗಳೂರು

ನವೆಂಬರ್ ಅಂತ್ಯದಿಂದ ಡಿಸೆಂಬರ್ ತಿಂಗಳ ವರೆಗೆ ರಾಜ್ಯದಲ್ಲಿ ಅಧಿಕ ಚಳಿ ಇರುತ್ತದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕ ಸಿ ಎಸ್ ಪಾಟೀಲ್ ಮಾಹಿತಿ ನೀಡಿದರು. ಉತ್ತರ ಒಳನಾಡಿನ ಕೆಲ ಜಿಲ್ಲೆಗಳಲ್ಲಿ ಡಿಸೆಂಬರ್ ಹಾಗೂ ಜನವರಿಯಲ್ಲಿ 8 ರಿಂದ 10 ಡಿಗ್ರಿ ಉಷ್ಣಾಂಶ ಇರಬಹುದು.

ಬೆಂಗಳೂರಿನಲ್ಲಿ ಡಿಸೆಂಬರ್ ಹಾಗೂ ಜನವರಿಯಲ್ಲಿ 12 ರಿಂದ 14 ಡಿಗ್ರಿ ಸೆಲ್ಸಿಯಸ್ ಇರುವ ಸಾಧ್ಯತೆ ಇದೆ. ಚಳಿಗಾಲದಲ್ಲಿ ನಸುಕಿನ ಜಾವ 4 ಗಂಟೆಯಿಂದ ಬೆಳಗ್ಗೆ 8 ಗಂಟೆಯವರೆಗೂ ಶೀತದ ವಾತವರಣ ಇರಲಿದ್ದು, ಶೀತ –ಜ್ವರ ಹೆಚ್ಚಾಗಬಹುದು ಎಂದು ಅವರು ಮಾಹಿತಿ ನೀಡಿದರು. ಫೆಸಿಫಿಕ್ ಮಹಾಸಾಗರದಲ್ಲಿ ಮೇಲ್ಮೈ ಉಷ್ಣಾಂಶ ಕಡಿಮೆಯಾಗುವ ಹಿನ್ನೆಲೆಹೆಚ್ಚಿನ ಚಳಿ ಅನುಭವವಾಗಲಿದೆ.ಹಾಗಾಗಿ ಈ ವರ್ಷ ಚಳಿಗಾಲ ತೀವ್ರವಾಗುವ ಹೆಚ್ಚಿನ ಸಾಧ್ಯತೆ ಇದೆ.

ನವೆಂಬರ್ ಅಂತ್ಯದಿಂದ ಡಿಸೆಂಬರ್‌ವರೆಗೂ ಅಧಿಕ ಚಳಿ ಇರಲಿದ್ದು, ಈ ಚಳಿಯ ಅನುಭವ ಮುಂದಿನ ಜನವರಿಯಿಂದ ಮಾರ್ಚ್ ವರೆಗೂ ಕೂಡ ಮುಂದುವರೆಯುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

## ರಾಜ್ಯದ CET, NEET, JEE ಪರೀಕ್ಷಾರ್ಥಿಗಳಿಗೆ ಇನ್ಮುಂದೆ ಸರ್ಕಾರದಿಂದಲೇ ಫ್ರೀ ಕೋಚಿಂಗ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿನ ಸಿಇಟಿ, ನೀಟ್, ಜೆಇಇ ಪರೀಕ್ಷೆ ಬರೆಯೋದಕ್ಕೆ ಸಿದ್ಧತೆ ನಡೆಸುತ್ತಿರುವಂತ ವಿದ್ಯಾರ್ಥಿಗಳಿಗೆ ಗುಡ್ ನ್ಯೂಸ್ ಒಂದು ಹೊರಬಿದ್ದಿದೆ. ಇಂದು ಸಚಿವ ಮಧು ಬಂಗಾರಪ್ಪ ಉಚಿತ CET, NEET, JEE ತರಬೇತಿಗೆ ಚಾಲನೆ ನೀಡಲಿದ್ದಾರೆ. ಹೀಗಾಗಿ ಇನ್ಮುಂದೆ ರಾಜ್ಯ ಸರ್ಕಾರದಿಂದಲೇ ಫ್ರೀ ಕೋಚಿಂಗ್ ನೀಡಲಾಗುತ್ತದೆ. ಈ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯಿಂದ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಬಜೆಟ್ ಆಯವ್ಯಯ ಕಂಡಿಕೆ 101ರಲ್ಲಿ ಘೋಷಿಸಿರುವಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ 25,000 ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಸಿಇಟಿ, ನೀಟ್, ಜೆಇಇ ಆನ್ ಲೈನ್ ತರಬೇತಿಯನ್ನು ಆರಂಭಿಸುತ್ತಿರುವುದಾಗಿ ತಿಳಿಸಿದ್ದಾರೆ. ದಿನಾಂಕ 20-11-2024ರಂದು ಬೆಳಿಗ್ಗೆ 10.30ಕ್ಕೆ ಶಾಲಾ ಶಿಕ್ಷಣ ಮತ್ತು ಸುರಕ್ಷತಾ ಸಚಿವ ಮಧು ಎಸ್ ಬಂಗಾರಪ್ಪ ಅವರು ಈ ತರಬೇತಿಗೆ ವಿಧಾನಸೌಧದಲ್ಲಿ ಚಾಲನೆ ನೀಡಲಿದ್ದಾರೆ. ಆ ಬಳಿಕ ರಾಜ್ಯದಲ್ಲಿನ 25,000 ವಿದ್ಯಾರ್ಥಿಗಳಿಗೆ ಸರ್ಕಾರದಿಂದಲೇ ಉಚಿತವಾದಂತ ತರಬೇತಿಯನ್ನು ಸಿಇಟಿ, ನೀಟ್, ಜೆಇಇ ಪರೀಕ್ಷೆಗೆ ಆನ್ ಲೈನ್ ಮೂಲಕ ನೀಡಲಾಗುತ್ತದೆ ಎಂದು ತಿಳಿಸಿದೆ.

## ಬಿಪಿಎಲ್ ರೇಷನ್ ಕಾರ್ಡ್ ರದ್ದಾಗುವ ಆತಂಕದಲ್ಲಿದ್ದವರಿಗೆ ಗುಡ್ ನ್ಯೂಸ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದು ಮಾಡಲಾಗುತ್ತದೆ. ಆ ಬಳಿಕ ಎಪಿಎಲ್ ಕಾರ್ಡ್ ಆಗಿ ಪರಿವರ್ತಿಸಲಾಗುತ್ತದೆ. ಕೆಲವರ ಕಾರ್ಡ್ ಸಂಪೂರ್ಣ ರದ್ದಾಗಲಿದೆ ಎನ್ನಲಾಗುತ್ತಿತ್ತು. ಹೀಗಾಗಿ ರಾಜ್ಯದಲ್ಲಿ ಬಿಪಿಎಲ್ ರೇಷನ್ ಕಾರ್ಡ್ ರದ್ದಾಗುವ ಆತಂಕದಲ್ಲಿದ್ದವರಿಗೆ ಸರ್ಕಾರ ಮರುಸ್ಪಷ್ಟನೆ ಮೂಲಕ ಗುಡ್ ನ್ಯೂಸ್ ನೀಡಿದೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಮಾಹಿತಿ ಹಂಚಿಕೊಂಡಿರುವಂತ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ಅವರು, ಲವು ಕುಟುಂಬಗಳಲ್ಲಿ ಹಿಂದೆ ಬಿಪಿಎಲ್ ಕಾರ್ಡ್ ಹೊಂದಿದ್ದವರು ಉತ್ತಮ ಆದಾಯ ಗಳಿಸುವ ಉದ್ಯೋಗಗಳಿಗೆ ಸೇರಿ ಆದಾಯ ತೆರಿಗೆ ಪಾವತಿಸುತ್ತಿದ್ದಾರೆ. ಅಂಥವರ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಿಸಲಾಗುತ್ತದೆ. ಇದೊಂದು ಸಹಜ ಪ್ರಕ್ರಿಯೆ ಎಂಬುದಾಗಿ ತಿಳಿಸಿದ್ದಾರೆ. ಯಾವುದೇ ಸರ್ಕಾರ ಇದ್ದರೂ, ಇದನ್ನೇ ಮಾಡಬೇಕಾಗುತ್ತದೆ. ನಮ್ಮ ಸರ್ಕಾರವು ಅರ್ಹರ ಬಿಪಿಎಲ್ ಕಾರ್ಡ್‌ಗಳನ್ನು ಯಾವುದೇ ಕಾರಣಕ್ಕೂ ರದ್ದುಪಡಿಸುವುದಿಲ್ಲ ಎಂದು ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್ ಎಂಬುದಾಗಿ ಸ್ಪಷ್ಟಪಡಿಸಿದ್ದಾರೆ.

## ಒಬ್ಬರೇ ಒಬ್ಬ ಅರ್ಹ ಬಿಪಿಎಲ್ ಕಾರ್ಡ್ ದಾರರನ್ನು ತಪ್ಪಿಸಬೇಡಿ: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಸದ್ಯ ರಾಜ್ಯದಲ್ಲಿ ವಕ್ಫ್ ವಿವಾದ ಬೆನ್ನಲ್ಲೆ, ರಾಜ್ಯ ಸರ್ಕಾರ ಬಿಪಿಎಲ್ ಕಾರ್ಡ್ ಪರಿಷ್ಕರಣೆಗೆ ಮುಂದಾಗಿದೆ. ಇದರಿಂದ ರಾಜ್ಯದ ಅರ್ಹ ಬಿಪಿಎಲ್ ಕಾರ್ಡ್‌ಗಳು ಸಹ ಕ್ಯಾನ್ಸಲ್ ಆಗಿವೆ. ಈ ಕುರಿತಾಗಿ ಸಿಎಂ ಸಿದ್ದರಾಮಯ್ಯ ಅವರು



ಸಚಿವ ಕೆಎಚ್ ಮುನಿಯಪ್ಪ ಅವರಿಗೆ ಒಬ್ಬರೇ ಒಬ್ಬ ಅರ್ಹ ಬಿಪಿಎಲ್ ಕಾರ್ಡ್ದಾರರನ್ನು ತಪ್ಪಿಸಬೇಡಿ ಕಾರ್ಡ್ ಒದಗಿಸಿ ಎಂದು ಸೂಚನೆ ನೀಡಿದ್ದಾರೆ.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಇಂದಿರಾಗಾಂಧಿ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ಮುನಿಯಪ್ಪಗೆ ಅದಕ್ಕೆ ಹೇಳಿದ್ದೇನೆ, ಒಬ್ಬರೇ ಒಬ್ಬ ಅರ್ಹ ಬಿಪಿಎಲ್ ಕಾರ್ಡ್ ನವರನ್ನು ತಪ್ಪಿಸಬೇಡಿ. ಯಾರು ಶ್ರೀಮಂತರು? ಯಾರು ಸರ್ಕಾರಿ ನೌಕರರು ಯಾರು? ಇನ್ಕಮ್ ಟ್ಯಾಕ್ಸ್ ಕಟ್ಟುತ್ತಾರೆ ಅವರು ಬಿಪಿಎಲ್ ಕಾರ್ಡಿಗೆ ಅರ್ಹರಲ್ಲ. ಬಿಪಿಎಲ್ ಕಾರ್ಡ್ ಹೊಂದಿದವರು ಒಬ್ಬರೇ ಒಬ್ಬರು ಕೂಡ ಬಿಟ್ಟು ಹೋಗಬಾರದು. ಅರ್ಹರು ಅರ್ಜಿ ಕೊಟ್ಟರೆ ಅಂತವರಿಗೆ ಬಿಪಿಎಲ್ ಕಾರ್ಡ್ ಕೊಡುತ್ತೇವೆ. ಬಿಜೆಪಿಯಿಂದ ನಾವು ಪಾಠ ಕಲಿಯಬೇಕಾಗಿಲ್ಲ.ಕೆಲವರು ಬಿಪಿಎಲ್ ಕಾರ್ಡ್ ರದ್ದು ಅಂತ ಹೇಳುತ್ತಿದ್ದಾರೆ. ನಾವು ಬಿಪಿಎಲ್ ರದ್ದು ಮಾಡುತ್ತಿದ್ದೀವಾ ಇಲ್ಲ ಯಾವುದೇ ಕಾರಣಕ್ಕೂ ರದ್ದು ಮಾಡುತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದರು.

## ಗ್ಯಾರಂಟಿ ಯೋಜನೆಗಳ ಬಗ್ಗೆ ಸುಳ್ಳು ಜಾಹೀರಾತು ಕ್ರಮಕ್ಕೆ ಚಿಂತನೆ

• ಉದಯವಾಹಿನಿ, ಬೆಂಗಳೂರು

ಮಹಾರಾಷ್ಟ್ರ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಕರ್ನಾಟಕದ ಬಗ್ಗೆ ಅವಮಾನ ಆಗುವ ರೀತಿಯಲ್ಲಿ ಜಾಹೀರಾತು ನೀಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳಲು ಚಿಂತನೆ ನಡೆಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಸದಾಶಿವನಗರದಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಮಹಾರಾಷ್ಟ್ರ ಚುನಾವಣೆಯಲ್ಲಿ ಮಹಾ ವಿಕಾಸ್ ಅಘಾಡಿ ಮೈತ್ರಿಕೂಟವು ಗ್ಯಾರಂಟಿ ಕಾರ್ಡ್ ಬಿಡುಗಡೆ ಮಾ ಡಿದ ಬಳಿಕ ಬಿಜೆಪಿಯವರು ಕರ್ನಾ ಟಕದಲ್ಲಿ ಐದು ಗ್ಯಾರಂಟಿ ಯೋಜ ನೆಗಳು ಅನುಷ್ಟಾನಗೊಂಡಿಲ್ಲ. ಮಹಾರಾಷ್ಟ್ರದಲ್ಲಿಯೂ ಅನುಷ್ಟಾನ ವಾಗುವುದಿಲ್ಲ ಎಂದು ಸುಳ್ಳು ಜಾಹೀರಾತು ನೀಡಿದ್ದಾರೆ. ಇದಕ್ಕೆ ಯಾವ ರೀತಿ ಕ್ರಮ ತೆಗೆದುಕೊಳ್ಳಬೇಕು ಎಂಬುದರ ಕುರಿತು ಚಿಂತನೆ ನಡೆಸಲಾಗಿದೆ ಎಂದರು. ನಮ್ಮ ಸರ್ಕಾರವು ಐದು

> **ತುಮಕೂರಿನಲ್ಲಿ ಗ್ಯಾರಂಟಿ ಯೋಜನೆಗ ಸಮಾವೇಶ ಹಮ್ಮಿಕೊಂಡಿಲ್ಲ. ತುಮಕೂರು ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮ ಹಾಗೂ ಅನೇಕ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತು ವಿತರಿಸ ಲಾಗುತ್ತದೆ. ಇದೇ ರೀತಿ ಎಂಟು ತಿಂಗಳ ಹಿಂದೆಯೂ ಕಾರ್ಯ ಕ್ರಮ ಮಾಡಲಾಗಿತ್ತು**
>
> **– ಡಾ. ಜಿ.ಪರಮೇಶ್ವರ, ಗೃಹ ಸಚಿವ**



ಗ್ಯಾರಂಟಿ ಯೋಜನೆಗಳಿಗೆ ಬಜೆಟ್‌ನಲ್ಲಿ 56 ಸಾವಿರ ಕೋಟಿ ರೂ. ಮೀ ಸಲಿಟ್ಟು, ಸಂಪೂರ್ಣವಾಗಿ ಅನುಷ್ಟಾನಗೊಳಿಸಿದೆ. ಇದಕ್ಕೆ ವಿರುದ್ಧವಾಗಿ ಇಡೀ ದೇಶದಲ್ಲಿ ಕರ್ನಾಟಕದ ಬಗ್ಗೆ ಅವಮಾನ ಆಗುವ ರೀತಿಯಲ್ಲಿ ಜಾಹೀರಾತು ಪ್ರಕಟಿಸಿದ್ದಾರೆ ಎಂದರೆ ನಾವು ಖಂಡಿತವಾಗಿ ಸಹಿ ಸುವುದಿಲ್ಲ. ಸಂಬಂಧಪಟ್ಟ ಐದು ಇಲಾಖೆಗಳು ಜಾಹೀರಾತು ನೀಡಿದವರ ಮೇಲೆ ಕ್ರಮ ತೆಗೆದುಕೊಳ್ಳಲು ದೂರು ನೀಡಬೇಕಾಗುತ್ತದೆ ಎಂದು ಹೇಳಿದರು.

ಬಿಜೆಪಿ ಮತ್ತು ಜೆಡಿಎಸ್‌ನವರು ಸರ್ಕಾರದಲ್ಲಿ ಅನುದಾನವಿಲ್ಲ, ಅಭಿವೃದ್ಧಿ ಕೆಲಸಗಳಾಗುತ್ತಿಲ್ಲ ಎಂದು ಜನರಲ್ಲಿ ತಪ್ಪು ಮಾಹಿತಿಯನ್ನು ಹೇಳಿಕೊಂಡು ಬರುತ್ತಿದ್ದಾರೆ. ಎಲ್ಲಾ ಇಲಾಖೆಗಳಿಗೆ ಅನುದಾನ ಕೊಟ್ಟಿದ್ದೇವೆ. ಯೋಜನೆಗಳನ್ನು ಜನಸಮುದಾಯಕ್ಕೆ ತಲುಪಿಸುತ್ತಿದ್ದೇವೆ ಎಂಬ ಸಂದೇಶ ಈ ಕಾರ್ಯಕ್ರಮದಿಂದ ಹೋಗುತ್ತದೆ ಎಂದರು. ಕಳೆದೊಂದು ವಾರದಿಂದ ನಕ್ಸಲ್ ಚಟುವಟಿಕೆಗಳ ಮೇಲೆ ಪೊಲೀಸರು ಮೇಲೆ ನಿಗಾವಹಿಸಿದ್ದರು. ಕಳೆದ ವಾರ ರಾಜು ಮತ್ತು ಲತಾ ಎಂಬ ನಕ್ಸಲರು ಪತ್ತೆ ಆಗಿದ್ದ ಹಿನ್ನೆಲೆಯಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಿದ್ದರು.

ಕೂಂಬಿಂಗ್ ವೇಳೆ ಮಾಹಿತಿ ಆಧರಿಸಿ ಕಾರ್ಯಾಚರಣೆ ಮುಂದುವರಿಸಿದ್ದರು.

## ಶೀಘ್ರದಲ್ಲಿ ನಟ ದರ್ಶನ್ ಜಾಮೀನು ರದ್ದು ಕೋರಿ ಸುಪ್ರೀಂಗೆ ಮೇಲ್ಮನವಿ ಸಲ್ಲಿಕೆ : ಕಮಿಷನರ್ ಬಿ.ದಯಾನಂದ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬೆನ್ನು ನೋವಿನ ಸಮಸ್ಯೆಯ ಕಾರಣ ತಿಳಿಸಿ ಹೈಕೋರ್ಟ್ ನಿಂದ ಮಧ್ಯಂತರ ಜಾಮೀನು ಪಡೆದುಕೊಂಡು ಇತ್ತೀಚಿಗೆ ನಟ ದರ್ಶನ್ ಬಳ್ಳಾರಿ ಜೈಲಿಂದ



ಬಿಡುಗಡೆಯಾಗಿದ್ದರು.ಇದೀಗ ಪೊಲೀಸರು ನಟ ದರ್ಶನ್ ವಿರುದ್ಧ ಸುಪ್ರೀಂ ಕೋರ್ಟಿಗೆ ಮೇಲ್ಮನವಿ ಸಲ್ಲಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊಲೆ ಆರೋಪಿ ದರ್ಶನ್‌ಗೆ ಜಾಮೀನು ಮಂಜೂರು ವಿಚಾರವಾಗಿ ದರ್ಶನ್ ಜಾಮೀನು ರದ್ದು ಕೋರಿ ಶೀಘ್ರದಲ್ಲೇ ಮೇಲ್ಮನವಿ ಸಲ್ಲಿಸಲಾಗುತ್ತದೆ. ಸು ಪ್ರೀಂ ಕೋರ್ಟ್‌ಗೆ ಮೇಲ್ಮನ ವಿಸಲ್ಲಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಮೇಲ್ಮನವಿ ಸಲ್ಲಿಸಲು ಈಗಾಗಲೇ ದಾಖಲೆಗಳನ್ನು ಸಿದ್ಧ

> **ಬಳ್ಳಾರಿ ಜೈಲಿನಿಂದ ಬಿಡುಗಡೆಯಾದ ನಟ ದರ್ಶನ್ ಎರಡು ದಿನ ಪತ್ನಿ ಮಗ ಹಾಗೂ ಕುಟುಂಬದ ಜೊತೆಗೆ ಕಾಲ ಕಳೆದರು. ನಂತರ ನೇರವಾಗಿ ಬೆಂಗಳೂರಿನ ಕೆಂಗೇರಿ ಬಳಿ ಇರುವ ಬಿಜಿಎಸ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಹೈಕೋರ್ಟಿನ ಷರತ್ತಿನ ಮೇರೆಗೆ ಒಂದು ವಾರದಲ್ಲಿ ನಟ ದರ್ಶನ್ ಅವರ ವೈದ್ಯಕೀಯ ವರದಿ ಹೈಕೋರ್ಟಿಗೆ ನಟ ದರ್ಶನ್ ಅವರ ಪರ ವಕೀಲರು ಸಲ್ಲಿಸಿದ್ದಾರೆ. ಇದೀಗ ನಟ ದರ್ಶನ್ ಬಿಡುಗಡೆಯಾದರೂ ಕೂಡ ನೆಮ್ಮದಿ ಇಲ್ಲದಂತಾಗಿದ್ದು, ಪೊಲೀಸರು ಸುಪ್ರೀಂಕೋರ್ಟಿಗೆ ಮೇಲ್ಮನಿ ಸಲ್ಲಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ.**

ಪಡಿಸಿಕೊಳ್ಳಲಾಗಿದೆ. ಕನ್ನಡದಲ್ಲಿರುವ ಮಾಹಿತಿಯನ್ನು ಇಂಗ್ಲೀಷ್‌ಗೆ ಭಾಷಾಂತರ ಮಾಡಿ ಸಲ್ಲಿಕೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

## ಕೆಐಎಡಿಬಿ ಹಗರಣ : ಇಡಿ ತನಿಖಾ ಪ್ರಕ್ರಿಯೆ ಹಿನ್ನೆಲೆ ಎಚ್ಚೆತ್ತುಕೊಂಡ ಸಿದ್ದು ಸರ್ಕಾರ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಆಡಳಿತ ವರ್ಗದಲ್ಲಿ ಸಂಚಲನ ಸೃಷ್ಟಿಸಿರುವ ಕೆಐಎಡಿಬಿ ಹಗರಣ ಆರೋಪ ಕುರಿತಂತೆ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ತನಿಖಾ ಪ್ರಕ್ರಿಯೆಯನ್ನು ಆರಂಭಿಸಿದೆ. ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಭೂಪರಿಹಾರ ವಿತರಣೆ ಕುರಿತಂತೆ 'ಸಿಟಿಜನ್ ರೈಟ್ಸ್ ಫೌಂಡೇಷನ್' ಸಲ್ಲಿಸಿರುವ ದೂರಿನ ಹಿನ್ನೆಲೆಯಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೆಐಎಡಿಬಿ ಕಾರ್ಯನಿರ್ವಹಣಾಧಿಕಾರಿಗಳಿಗೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ನಿರ್ದೇಶನ ನೀಡಿದ್ದಾರೆ.

ದೇವನಹಳ್ಳಿ ಸುತ್ತಮುತ್ತ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಪರಿಹಾರ ಹಣ ವಿತರಣೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ 'ಸಿಟಿಜನ್ ರೈಟ್ಸ್ ಫೌಂಡೇಷನ್

ಉದಯವಾಹಿನಿ ಚಿತ್ರ



ಅಧ್ಯಕ್ಷ ಕೆ.ಎ.ಪಾಲ್ ಅವರು, ಮುಖ್ಯಮಂತ್ರಿ, ಕೈಗಾರಿಕಾ ಸಚಿವರಿಗೆ ದೂರು ನೀಡಿದ್ದರು. ಕೆಐಎಡಿಬಿ ಭೂಸ್ವಾಧೀನಾಧಿಕಾರಿಯಾಗಿರುವ ಕೆಎಎಸ್ ಅಧಿಕಾರಿ ಬಾಳಪ್ಪ ಹಂದಿಗುಂದ ಅವರ ವಿರುದ್ಧ ಗುರುತರ ಆರೋಪ ಮಾಡಿ ಈ ದೂರು ಸಲ್ಲಿಕೆಯಾಗಿದೆ. ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳ ಒಡೆತನದ ಭೂಮಿ ಎಂದು ಪರಿಗಣಿಸಿ ಅಕ್ರಮವಾಗಿ ಪರಿಹಾರದ ಹಣ ಪಾವತಿಸಲಾಗಿದೆ ಎಂದು, ನಿವೇಶನ ಹಂಚಿಕೆಯಲ್ಲೂ ಅಕ್ರಮ ನಡೆದಿದೆ ಎಂದೂ, ಒಂದೇ ಜಮೀನಿಗೆ ಎರಡು ಬಾರಿ ಪರಿಹಾರವನ್ನು

> **ಈ ದೂರನ್ನು ಸರ್ಕಾರ ನಿರ್ಲಕ್ಷಿಸಿದ ಹಿನ್ನೆಲೆ ಲೋಕಾಯುಕ್ತರಿಗೆ ಪಾಲ್ ಅವರು ದೂರು ಸಲ್ಲಿಸಿದ್ದರು. ಆದರೂ ಕ್ರಮ ಕೈಗೊಳ್ಳದಿದ್ದಾಗ ಕೆ.ಎ.ಪಾಲ್ ಅವರು ಜಾರಿ ನಿರ್ದೇಶನಾಲಯಕ್ಕೆ ದೂರು ಸಲ್ಲಿಸಿದ್ದಾರೆ.ಇ.ಡಿ.ಗೆ ಸಲ್ಲಿಸಿರುವ ದೂರಿನಲ್ಲಿ ಬಾಳಪ್ಪ ಹಂದಿಗುಂದ ಮಾತ್ರವಲ್ಲ, ಸಿಎಂ ಸಿದ್ದರಾಮಯ್ಯ ಹಾಗೂ ಕೈಗಾರಿಕಾ ಸಚಿವರ ಬಗ್ಗೆಯೂ ಪಾಲ್ ಅರೂಪ ಮಾಡಿದ್ದಾರೆ.**

ಅಕ್ರಮವಾಗಿ ಪಾವತಿಸಲಾಗಿದೆ ಎಂದೂ ಸಿಟಿಜನ್ ರೈಟ್ಸ್ ಫೌಂಡೇಷನ್ ಅಧ್ಯಕ್ಷ ಕೆ.ಎ.ಪಾಲ್ ಆರೋಪಿಸಿದ್ದರು. ಈ ಬಗ್ಗೆ ಹೈಕೋರ್ಟ್ ಪರಿವೀಕ್ಷಣೆಯಲ್ಲಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ದೂರುದಾರರು ಕೋರಿದ್ದರು.

ಅತ್ತ, ಜಾರಿ ನಿರ್ದೇಶನಾಲಯವು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸುತ್ತಿದ್ದಂತೆಯೇ ಎಚ್ಚೆತ್ತುಕೊಂಡಿರುವ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ತರಾತುರಿಯಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಗೆ ನಿರ್ದೇಶನ ನೀಡಿ, ಪ್ರಕರಣ ತನಿಖೆ ಬಗ್ಗೆ ಪರಿಶೀಲಿಸುವಂತೆ ನಿರ್ದೇಶನ ನೀಡಿದ್ದಾರೆ. ಸಚಿವರ ಪತ್ರ ಆಧರಿಸಿ ಕೆಐಎಡಿಬಿ ಸಿಇಒ ಅವರಿಗೆ ಪತ್ರ ಬರೆದಿರುವ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಸಿಟಿಜನ್ ರೈಟ್ಸ್ ಫೌಂಡೇಷನ್ ನೀಡಿರುವ ದೂರಿನ ಹಿನ್ನೆಲೆಯಲ್ಲಿ ಸೂಕ್ತ ಕ್ರಮ ಕೈಗೊಂಡು ಸರ್ಕಾರಕ್ಕೆ ವರದಿ ನೀಡುವಂತೆ ಆದೇಶಿಸಿದ್ದಾರೆ.

## ಹರಿದಾಸ ನಮನ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ನವೆಂ ಬರ್ 21, ಗುರುವಾರ ಸಂಜೆ 5-30ಕ್ಕೆ ಕು|| ರಕ್ಷಿತಾ ಶರ್ಮಾ ಅವರ ನಿರ್ದೇಶನದಲ್ಲಿ ಇಂಪು ಸಂಗೀತ ಶಾಲೆಯ ವಿದ್ಯಾರ್ಥಿಗಳಿಂದ ಹರಿದಾಸ ನಮನ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಶ್ರೀಮತಿ ಅರ್ಚನಾ ಮರಾಠೆ ಪಿಟೀಲು ವಾದನದಲ್ಲಿ ಹಾಗೂ ಶ್ರೀಧರ್ ಮೃದಂಗ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

## ಶಬರಿಮಲೆಯಿಂದ ಬರುವಾಗ ಕರ್ನಾಟಕ ಭಕ್ತರಿದ್ದ ಬಸ್ ಪಲ್ಟಿ: ಯಾತ್ರಿಕರಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ಶಬರಿಮಲೆಯ ಅಯ್ಯಪ್ಪ ಸ್ವಾಮಿ ದರ್ಶನ ಪಡೆದುಕೊಂಡು ಹಿಂತಿರುಗುವಾಗ ಕರ್ನಾಟಕದ ಯಾತ್ರಿಕರು ಇದ್ದಂತಹ ಮಿನಿ ಬಸ್ ಒಂದು ಕೇರಳದ ವಯನಾಡ್ ಎಂಬಲ್ಲಿ ಬಸ್ ಪಲ್ಟಿಯಾಗಿದೆ. ಈ ಒಂದು ಅಪಘಾತದಲ್ಲಿ 25ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಕಿರಿದಾದ ತಿರುನೆಲ್ಲಿ ಘಟ್ಟು ರಸ್ತೆಯಲ್ಲಿ ಮಂಗಳವಾರ ಮುಂಜಾನೆ ಈ ಘಟನೆ ನಡೆದಿದೆ. ಅಪಘಾತದಲ್ಲಿ ಹಲವಾರು ಪ್ರಯಾಣಿಕರಿಗೆ ಗಾಯಗಳಾಗಿವೆ. ಶಬರಿಮಲೆಗೆ ಭೇಟಿ ನೀಡಿ ಹಿಂತಿರುಗುತ್ತಿದ್ದ ಕರ್ನಾಟಕದ ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಬೆಳಗ್ಗೆ 6 ಗಂಟೆ ಸುಮಾರಿಗೆ ಅಪಘಾತಕ್ಕೀಡಾಗಿದೆ. ಗಾಯಾಳುಗಳನ್ನು ವಿವಿಧ ವಾಹನಗಳಲ್ಲಿ ಮಾನಂತವಾಡಿ ವೈದ್ಯಕೀಯ ಕಾಲೇಜಿಗೆ ಸಾಗಿಸಲಾಯಿತು. ಬಸ್ ನಿಯಂತ್ರಣ ತಪ್ಪಿ ರಸ್ತೆಗೆ ಅಡ್ಡಲಾಗಿ ಪಲ್ಟಿಯಾಗಿದೆ. ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ ಕೂಡ ಘಟನಾ ಸ್ಥಳಕ್ಕೆ ಆಗಮಿಸಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದು ತಿಳಿದುಬಂದಿದೆ.

## ಕನ್ನಡ ಪುಸ್ತಕಗಳಿಗೆ ಶೇ. 50ರಷ್ಟು ಭಾರಿ ರಿಯಾಯಿತಿ: ಸಿದ್ದರಾಮಯ್ಯ ಘೋಷಣೆ

• ಉದಯವಾಹಿನಿ, ಬೆಂಗಳೂರು

ಅಕಾಡೆಮಿಗಳು, ಪ್ರಾಧಿಕಾರದಿಂದ ಪ್ರಕಟಿಸುವ ಪುಸ್ತಕಗಳನ್ನು ಶೇಕಡ 50 ದರದಲ್ಲಿ ಮಾರಾಟ ಮಾಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೋಮವಾರ ಬೆಂಗಳೂರಿನಲ್ಲಿ ಆಯೋಜಿಸಿದ್ದ ಸಂತಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಹಾವೇರಿ ಜಿಲ್ಲೆ ಬಂಕಾಪುರದಲ್ಲಿ ಕನಕದಾಸರು ನೆಲೆಸಿದ್ದ ಸ್ಥಳ ಅಭಿವೃದ್ಧಿ ಪಡಿಸಬೇಕು.

ರಿಯಾಯಿತಿ ದರದಲ್ಲಿ ಪುಸ್ತಕ ಮಾರಾಟ ಮಾಡುವುದಕ್ಕೆ ಒಪ್ಪಿಗೆ ನೀಡುವಂತೆ ಸಂಘಟಕರು ವೇದಿಕೆಯಲ್ಲಿ ಸಲ್ಲಿಸಿದ ಮನವಿಗೆ ಮುಖ್ಯಮಂತ್ರಿಗಳು

ಉದಯವಾಹಿನಿ ಚಿತ್ರ



ಅನುಮೋದನೆ ನೀಡಿದ್ದು, ಎರಡು ಕಾರ್ಯಕ್ರಮಗಳ ಜಾರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಮತ್ತು ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

ಶರಣ ಸಾಹಿತ್ಯ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡಿರುವವರನ್ನು ಪ್ರೋತ್ಸಾಹಿಸುವುದು ಬಹಳ ಮುಖ್ಯ. ಬಸವಾದಿ ಶರಣರ ವಿಚಾರಗಳು ಇಡೀ ಜಗತ್ತಿಗೆ ತಲುಪಬೇಕು. ನಮಗೆ ಮಾತ್ರ ಸೀಮಿತವಾಗಿ ತಲುಪಿದರೆ ಸಾಲುವುದಿಲ್ಲ. ಬಸವಾದಿ ಶರಣರ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರಿಗೆ ನಿಜವಾದ ಗೌರವವನ್ನು ಸಲ್ಲಿಸಿದಂತಾಗುತ್ತದೆ. ಸಮಾಜಕ್ಕೆ ಬಸವಣ್ಣ ಮತ್ತು ಅವರ ಅನುಯಾಯಿಗಳ ಕೊಡುಗೆ ಅಪಾರವಾದುದು. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ಜಾರಿಗೆ ಬಂದಾಗ ವೈರುಧ್ಯತೆಯಿರುವ ಸಮಾಜಕ್ಕೆ ಕಾಲಿಡುತ್ತಿದ್ದೇವೆ ಎಂದರು. ಆರ್ಥಿಕ ಹಾಗೂ ಸಾಮಾಜಿಕ ಅಸಮಾನತೆ ಇದೆ. ರಾಜಕೀಯ ಸಮಾನತೆ ಸಿಕ್ಕಿದ್ದರೂ, ಆರ್ಥಿಕ ಮತ್ತು ಸಾಮಾಜಿಕ ಪ್ರಜಾಪ್ರಭುತ್ವ ಸಿಕ್ಕಿಲ್ಲ. ಬಸವಾದಿ ಶರಣರು ಇದನ್ನು 850 ವರ್ಷಗಳ ಹಿಂದೆಯೇ ಪ್ರತಿಪಾದಿಸಿದ್ದರು.

# ಬೆಂಗಳೂರಿನ ಸಮಸ್ಯೆಗಳನ್ನು ಬಗೆಹರಿಸಲು ಪಣತೊಟ್ಟ ಡಿಕೆಶಿ

## ಬೆಂಗಳೂರು ಉಸ್ತುವಾರಿ ಹೊತ್ತಿರುವ ನಾನು ಈ ಸಮಸ್ಯೆಗಳನ್ನು ಸರಿಪಡಿಸುವ ತನಕ ವಿರಮಿಸುವುದಿಲ್ಲ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರು ವೇಗವಾಗಿ ಬೆಳೆಯುತ್ತಿದೆ. ಇದರಿಂದಾಗಿ ಹಲವಾರು ಸಮಸ್ಯೆಗಳು ಉದ್ಭವಿಸುತ್ತಿವೆ. ಈ ಸಮಸ್ಯೆಗಳು ಬೃಹದಾಕಾರವಾಗಿ ಬೆಳಯುವ ಮೊದಲು ನಾವೆಲ್ಲರೂ ಸೇರಿ ಅದನ್ನು ಸರಿಪಡಿಸಬೇಕಾಗಿದೆ. ಬೆಂಗಳೂರು ಉಸ್ತುವಾರಿ ಹೊತ್ತಿರುವ ನಾನು ಈ ಸಮಸ್ಯೆಗಳನ್ನು ಸರಿಪಡಿಸುವ ತನಕ ವಿರಮಿಸುವುದಿಲ್ಲ ಎಂದು ಡಿ ಕೆ ಶಿವಕುಮಾರ್ ಭರವಸೆ ನೀಡಿದರು.

ನಗರದ ಅರಮನೆ ಮೈದಾನದಲ್ಲಿ ಮಂಗಳವಾರ ನಡೆದ ಬೆಂಗಳೂರು ಟೆಕ್ ಸಮ್ಮಿಟ್ 2024 ರ ಉದ್ಘಾಟನಾ ಸಮಾರಂಭದಲ್ಲಿ ಶಿವಕುಮಾರ ಅವರು ಮಾತನಾಡಿ, ದೆಹಲಿ, ಮಹಾರಾಷ್ಟ್ರ ಮತ್ತು ತಮಿಳುನಾಡು ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕವು ಪೇಟೆಂಟ್ ವಿಚಾರದಲ್ಲಿ ಮುಂಚೂಣಿಯಲ್ಲಿದೆ. ಪೇಟೆಂಟ್ ಅರ್ಜಿಗಳ ಸಂಖ್ಯೆಯಲ್ಲಿ ಕರ್ನಾಟಕ ಇಡೀ ದೇಶದಲ್ಲಿಯೇ ಅಗ್ರಸ್ಥಾನದಲ್ಲಿದೆ. ಕರ್ನಾಟಕ ಮಾಹಿತಿ ತಂತ್ರಜ್ಞಾನದ ಜೊತೆಗೆ ಚಿಪ್ ವಿನ್ಯಾಸದಲ್ಲಿ ದೇಶದಲ್ಲಿಯೇ ತನ್ನದೇ ಆದ ಛಾಪು ಮೂಡಿಸಿದೆ ಎಂದರು.

ನಾವು ಅಧಿಕಾರಕ್ಕೆ ಬಂದ ಕಡಿಮೆ ಅವಧಿಯಲ್ಲಿಯೇ ಬೆಂಗಳೂರಿನ ಅಭಿವೃದ್ದಿಗೆ ಅನೇಕ ಬೃಹತ್ ಯೋಜನೆಗಳನ್ನು ಪ್ರಾರಂಭಿಸಿದ್ದೇವೆ. ಸುರಂಗ ರಸ್ತೆ ಯೋಜನೆ ಹಾಗೂ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಬೆಂಗಳೂರು ಬಿಜಿನೆಸ್ ಕಾರಿಡಾರ್ ಯೋಜನೆಗೆ ಚಾಲನೆ ನೀಡಿದ್ದೇವೆ. ಮುಂದಿನ 6 ತಿಂಗಳಲ್ಲಿ ಕಾಮಗಾರಿ ಆರಂಭವಾಗಲಿದೆ. ಈ ಯೋಜನೆಯಿಂದ ನಗರದ ಸಂಚಾರ ದಟ್ಟಣೆಗೆ ಪರಿಹಾರ ದೊರೆಯಲಿದೆ. ಸುರಂಗ ರಸ್ತೆ ಯೋಜನೆಗೆ ಸಚಿವ ಸಂಪುಟದ ಒಪ್ಪಿಗೆ ಸಿಕ್ಕಿದೆ. ಆದಷ್ಟು ಬೇಗ ಈ ಕನಸನ್ನು ನನಸು ಮಾಡಲಾಗುವುದು ಎಂದು ತಿಳಿಸಿದರು.

ಹಲವಾರು ಯೋಜನೆಗಳ ಮೂಲಕ ಬೆಂಗಳೂರನ್ನು ಭವಿಷ್ಯದಲ್ಲಿ ವ್ಯಾಪಾರಿ, ನಾಗರಿಕ ಸ್ನೇಹಿ, ವಾಸಿಸಲು ಯೋಗ್ಯವಾದ ನಗರವನ್ನಾಗಿ ಮಾಡಲು ನಮ್ಮ ಕರ್ನಾಟಕ ಸರ್ಕಾರ ಬದ್ಧವಾಗಿದೆ. ಬೆಂಗಳೂರು ಟೆಕ್ ಸಮ್ಮಿಟ್ ವಿಶ್ವದ ಅತ್ಯಂತ ಮಹತ್ವದ ಟೆಕ್ ಸಮ್ಮಿಟ್‌ಗಳಲ್ಲಿ ಒಂದು. ಎಲ್ಲಾ ಸರ್ಕಾರಗಳು, ಐಟಿ

> **ಬೆಂಗಳೂರು ಟೆಕ್ ಸಮ್ಮಿಟ್ ನವೋದ್ಯಮಿಗಳ, ಉದ್ಯಮಿಗಳು, ತಂತ್ರಜ್ಞರು, ಸೃಜನಶೀಲರು, ಅಸಾಧಾರಣ ಕನಸುಗಾರರ ಸಮ್ಮೇಳನ. ಕರ್ನಾಟಕ ದಾರ್ಶನಿಕರ, ಆಧುನಿಕ ಚಿಂತಕರ ಭೂಮಿ. ಭಾರತದ ಐಟಿ ಕ್ರಾಂತಿಯ, ಜೈವಿಕ ತಂತ್ರಜ್ಞಾನದ ಹುಟ್ಟೂರು. ಮಾಹಿತಿ ತಂತ್ರಜ್ಞಾನದ ಮೂಲಕ ನಮ್ಮ ರಾಜ್ಯದ ಹೆಸರು ಜಾಗತಿಕ ಮಟ್ಟದಲ್ಲಿದೆ**
>
> **-ಡಿ.ಕೆ.ಶಿವಕುಮಾರ್, ಡಿಸಿಎಂ**



ಉದ್ಯಮ, ಅಧಿಕಾರಿಗಳು, ರಾಜಕೀಯ ಮುಖಂಡರು ಈ ಕಾರ್ಯಕ್ರಮ ಇಷ್ಟು ದೊಟ್ಟ ಮಟ್ಟಕ್ಕೆ ಬೆಳೆಯಲು ಶ್ರಮಪಟ್ಟಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಆಯೋಗದ ಆವಿಷ್ಕಾರ ಸೂಚ್ಯಂಕದಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ಅಲ್ಲದೇ ಐಟಿ-ಬಿಟಿ ಹಾಗೂ ನವೋದ್ಯಮ ಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ.

ಕರ್ನಾಟಕ ಅದರಲ್ಲೂ ಬೆಂಗಳೂರು ದೇಶದ ತಂತ್ರಜ್ಞಾನ ವಲಯದ ಹೃದಯ ಬಡಿತವಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

### ಜನರಿಗೆ ಆಸರೆ ಒದಗಿಸುತ್ತಿರಲಿಲ್ಲ

**ಅಜೀಂ ಪ್ರೇಮ್ ಜೀ ಅವರು ಮತ್ತು ನಾರಾಯಣ ಮೂರ್ತಿ ಅವರು ಬೆಂಗಳೂರು ಹೊರತು ಪಡಿಸಿ ಬೇರೆ ನಗರಗಳನ್ನು ಆಯ್ಕೆ ಮಾಡಿಕೊಂಡಿದ್ದರೆ ಬೆಂಗಳೂರು ಐಟಿ ಹಬ್ ಬೆಳೆಯುತ್ತಿರಲಿಲ್ಲ. ಸಾವಿರಾರು ಜನರು ತಮ್ಮ ಸ್ಟಾರ್ಟ್ ಆ್ಯಪ್‌ಗಳಿಗೆ ಬೆಂಗಳೂರನ್ನು ಆಯ್ಕೆ ಮಾಡದೇ ಇದ್ದಿದ್ದರೆ ಬೆಂಗಳೂರು ಲಕ್ಷಾಂತರ ಜನರಿಗೆ ಆಸರೆ ಒದಗಿಸುತ್ತಿರಲಿಲ್ಲ ಎಂದರು.**

**ಬೆಂಗಳೂರು ತನ್ನ ಅಸ್ತಿತ್ವವನ್ನು ಕಾಪಾಡಿ ಕೊಂಡಿದೆ**

ಯಂತ್ರೋಪಕರಣಗಳ ತಯಾರಿಕೆಯಲ್ಲಿಯೂ ಕರ್ನಾಟಕ ಮುಂದಿದ್ದು, ಸುಮಾರು 85 ಕ್ಕೂ ಹೆಚ್ಚು ಫ್ಯಾಬ್ಲೆಸ್ ಚಿಪ್ ವಿನ್ಯಾಸ ಘಟಕಗಳು ನಮ್ಮ ರಾಜ್ಯದಲ್ಲಿವೆ. ಸೆಮಿ ಕಂಡಕ್ಟರ್ ತಯಾರಿಕೆಗೆ ಕರ್ನಾಟಕವೇ ಆಧಾರ. ದೇಶದ ಜೈವಿಕ ತಂತ್ರಜ್ಞಾನ ವಲಯಕ್ಕೆ ಶೇ.52 ರಷ್ಟು ಉದ್ಯೋಗಿಗಳನ್ನು ಕರ್ನಾಟಕವೇ ಪೂರೈಕೆ ಮಾಡುತ್ತದೆ ಎಂದರು.

ದೇಶದ ಮೊದಲ ಪ್ರಧಾನಿ ಪಂಡಿತ್ ಜವಾ ಹರಲಾಲ್ ನೆಹರು ಅವರು ಬೆಂಗಳೂರನ್ನು ಕೇಂದ್ರ ವಾಗಿಟ್ಟುಕೊಂಡು ಸಾರ್ವಜನಿಕ ಉದ್ದಿಮೆಗಳನ್ನು ಸ್ಥಾಪಿಸಿದ ಕಾರಣಕ್ಕೆ ಇಂದು ನಮ್ಮ ನಗರ ಜಾಗತಿಕ ಮಟ್ಟದಲ್ಲಿ ಹೆಸರುವಾಸಿಯಾಗಿದೆ. ಹಲವಾರು ಶಿಕ್ಷಣತಜ್ಞರು ಹೆಸರಾಂತ ಇಂಜಿನಿಯರಿಂಗ್ ಕಾಲೇಜುಗಳು, ತಂತ್ರಜ್ಞಾನ ಸಂಸ್ಥೆಗಳನ್ನು ಸ್ಥಾಪಿಸಿದ ಕಾರಣಕ್ಕೆ ಇಂದು ಬೆಂಗಳೂರು ತನ್ನ ಅಸ್ತಿತ್ವವನ್ನು ಕಾಪಾಡಿಕೊಂಡಿದೆ. ಬೆಂಗಳೂರು ಬೆಳವಣಿಗೆಗೆ ನೆಹರು ಅವರು, ಅನೇಕರ ದೂರದೃಷ್ಟಿಯ ಕೊಡುಗೆಯಿದೆ ಎಂದು ತಿಳಿಸಿದರು.

# ಹೈವೋಲ್ಟೇಜ್ ಕಣವಾಗಿರುವ ಕ್ಷೇತ್ರದ ಫಲಿತಾಂಶದ ಮೇಲೆ ಎಲ್ಲರ ಕಣ್ಣು

## ಚನ್ನಪಟ್ಟಣ ಉಪ ಚುನಾವಣೆ ಫಲಿತಾಂಶಕ್ಕೆ ಇನ್ನು ನಾಲ್ಕು ದಿನವಷ್ಟೇ ಬಾಕಿ ಇದ್ದು ಬೆಟ್ಟಿಂಗ್ ಭರಾಟೆ ಜೋರು

• **ಉದಯವಾಹಿನಿ, ರಾಮನಗರ**

ಚನ್ನಪಟ್ಟಣ ಉಪ ಚುನಾವಣೆ ಫಲಿತಾಂಶಕ್ಕೆ ಇನ್ನು ನಾಲ್ಕು ದಿನವಷ್ಟೇ ಬಾಕಿ ಇದ್ದು ಬೆಟ್ಟಿಂಗ್ ಭರಾಟೆ ಜೋರಾಗಿದೆ. ಸ್ಥಳೀಯವಾಗಿ ಅಷ್ಟೇ ಅಲ್ಲದೆ ಹೊರಗಡೆಯೂ ಹೈವೋಲ್ಟೇಜ್ ಕಣವಾಗಿರುವ ಕ್ಷೇತ್ರದ ಫಲಿತಾಂಶದ ಮೇಲೆ ಎಲ್ಲರ ಕಣ್ಣು ನೆಟ್ಟಿದೆ. ಸದ್ಯದ ಬೆಟ್ಟಿಂಗ್ ಟ್ರೆಂಡ್ ಪ್ರಕಾರ ಸ್ಥಳೀಯ ಬುಕ್ಕಿಗಳಿಗೆ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್, ಹೊರಗಿನವರಿಗೆ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಫೇವರಿಟ್ ಆಗಿದ್ದಾರೆ.

ಸಮಬಲದ ಪೈಪೋಟಿಯಲ್ಲಿ ಗೆಲುವಿನ ಅಂದಾಜು ಸವಾಲಾಗಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಆದರೂ ಬೆಟ್ಟಿಂಗ್ ಪ್ರಿಯರು ರಾಜಕೀಯ, ಮಾಧ್ಯಮ ಹಾಗೂ ಸಮೀಕ್ಷೆ ಮೂಲಗಳನ್ನು ಆಧರಿಸಿ ಅಭ್ಯರ್ಥಿಗಳ ಗೆಲುವಿನ ಅದೃಷ್ಟದ ಮೇಲೆ ಕೋಟಿವರೆಗೆ ಹೂಡಿಕೆ ಮಾಡುತ್ತಿದ್ದಾರೆ. ಕೆಲವೆಡೆ ಜಮೀನು, ಕುರಿ, ಕೋಳಿ ಮಟ್ಟಕ್ಕೂ ಬಾಜಿ ಕಟ್ಟಲಾಗುತ್ತಿದೆ.


ಉದಯವಾಹಿನಿ ಚಿತ್ರ

**ಜಮೀನು ಕುರಿ ಕೋಳಿ ಬಾಜಿಗೆ**

**ಲೆಕ್ಕಾಚಾರ ಬದಲು:** ಮತದಾನ ನಡೆದ ಮಾರನೇ ದಿನ ಯೋಗೇಶ್ವರ್, ಪ್ರಚಾರದ ವೇಳೆ ಸಚಿವ ಜಮೀರ್ ಅಹಮದ್ ಖಾನ್, ಎಚ್.ಡಿ. ಕುಮಾರಸ್ವಾಮಿ ಮತ್ತು ಎಚ್.ಡಿ. ದೇವೇ ಗೌಡರ ಕುರಿತು ಆಡಿದ ಮಾತುಗಳಿಂದ ಲಾಭದಷ್ಟೇ ನಷ್ಟವೂ ಆಗಿದೆ. ನಿಖಿಲ್ ಮತ್ತು ನನ್ನ ಮಧ್ಯೆ ಸಮಬಲದ ಪೈಪೋಟಿ ಇದ್ದು, ಯಾರೇ ಗೆದ್ದರೂ ಕೂದಲೆಳೆಯಷ್ಟೇ ಅಂತರವಿರಲಿದೆ' ಎಂದಿದ್ದರು. ಯೋಗೇಶ್ವರ್ ಈ ಮಾತು ಬೆಟ್ಟಿಂಗ್ ಲೆಕ್ಕಾಚಾರ ಬದಲಿಸಿರುವುದು ನಿಜ. 'ಕೈ' ಅಭ್ಯರ್ಥಿ ಫಲಿತಾಂಶಕ್ಕೆ ಮುಂಚೆಯೇ ಸೋಲು ಒಪ್ಪಿಕೊಂಡಿದ್ದಾರೆ ಎಂಬ ಸಂದೇಶವನ್ನು ಅವರ ಮಾತುಗಳು ಹೊರಗಿನವರಿಗೆ ನೀಡಿವೆ.

> **ನಿಖಿಲ್ ಪರ ಹೆಚ್ಚಿದ ಟ್ರೆಂಡ್ 'ಮತದಾನದ ದಿನ 'ಕೈ' ಅಭ್ಯರ್ಥಿ ಮುಖದಲ್ಲಿ ಅಷ್ಟೊಂದು ಕಳೆ ಇರಲಿಲ್ಲ. ನಂತರದಲ್ಲೂ ಯೋಗೇಶ್ವರ್ ಅವರಲ್ಲಿ ಗೆಲುವಿನ ವಿಶ್ವಾಸ ಎದ್ದು ಕಾಣುತ್ತಿಲ್ಲ. ಆದರೆ, ನಿಖಿಲ್ ಮೊದಲ ದಿನದಿಂದ ಇಲ್ಲಿಯವರೆಗೆ ಗೆದ್ದೇ ಗೆಲ್ಲುತ್ತೇನೆಂಬ ವಿಶ್ವಾಸದಲ್ಲಿದ್ದಾರೆ. ಮಾತುಗಳಲ್ಲೂ ಅದೇ ಭರವಸೆ ಇದೆ. ಯೂಟ್ಯೂಬ್, ಫೇಸ್‌ಬುಕ್‌ನಲ್ಲಿ ಕೆಲವರು ಫಲಿತಾಂಶದ ಕುರಿತು ಹರಿಬಿಟ್ಟಿರುವ ಬಸವ ಭವಿಷ್ಯ, ಗಿಣಿ ಭವಿಷ್ಯದಲ್ಲೂ ನಿಖಿಲ್ ಹೆಸರೇ ಮೊದಲ ಸ್ಥಾನದಲ್ಲಿದೆ. ಕೆಲ ಮತಗಟ್ಟೆ ಸಮೀಕ್ಷೆಯಲ್ಲೂ ನಿಖಿಲ್ ಮುಂದಿದ್ದಾರೆ. ಶಾಸ್ತ್ರ-ಸಮೀಕ್ಷೆ ನಂಬುವವರು ನಿಖಿಲ್ ಪರವಾಗಿಯೇ ಬೆಟ್ಟಿಂಗ್ ಹಾಕುತ್ತಿದ್ದಾರೆ. ಸದ್ಯ ನಿಖಿಲ್ ಅವರೇ ಟ್ರೆಂಡಿಂಗ್ ನಲ್ಲಿದ್ದಾರೆ' ಎನ್ನುತ್ತಾರೆ ಬುಕ್ಕಿಯೊಬ್ಬರು.**

ಹಾಗಾಗಿ ಮಂಡ್ಯ, ಮೈಸೂರು, ಹಾಸನ, ಬೆಂಗಳೂರು ಸೇರಿದಂತೆ ಹೊರಗಿನ ಹೆಚ್ಚಿನವರು ನಿಖಿಲ್ ಪರ ಬೆಟ್ಟಿಂಗ್ ಕಟ್ಟುತ್ತಿದ್ದಾರೆ' ಎಂದು ಸ್ಥಳೀಯ ರಾಜಕೀಯ ಮುಖಂಡರೊಬ್ಬರು ತಿಳಿಸಿದರು.

**ಅತೀವ ವಿಶ್ವಾಸ:** ಉಪ ಚುನಾವಣೆ ಕುರಿತು ಯೋಗೇಶ್ವರ್ ಮಾತು ಗಳಲ್ಲಿರುವ ವಾಸ್ತವ ಅಲ್ಲಗಳೆಯಲು ಸಾಧ್ಯವಿಲ್ಲ. ಆದರೆ, ಹಿಂದಿನ ಚುನಾವಣೆಗಳಲ್ಲೂ ಅವರು ಸೋಲು ಒಪ್ಪಿಕೊಂಡಂತಹ ಮಾತುಗಳನ್ನಾಡಿದ್ದರು.

ಅವರ ಬೆಂಬಲಿಗರು ಯೋಗೇಶ್ವರ್ ಗೆಲ್ಲುತ್ತಾರೆಂಬ ಅತೀವ ವಿಶ್ವಾಸದಲ್ಲಿ ಬೆಟ್ಟಿಂಗ್ ಕಟ್ಟುತ್ತಿದ್ದಾರೆ ಎನ್ನುತ್ತಾರೆ ಬೆಟ್ಟಿಂಗ್ ಪ್ರಿಯರೊಬ್ಬರು.

**ಜಾತಿವಾರು ಲೆಕ್ಕಾಚಾರ:** ಕ್ಷೇತ್ರದಲ್ಲಿ ಜಾತಿವಾರು ಮತ ಹಂಚಿಕೆಯ ಚರ್ಚೆ ಬಿರುಸುಗೊಂಡಿದೆ. ವಾಟ್ಸ್ ಆಯಪ್ ಗ್ರೂಪ್‌ಗಳಲ್ಲಿ ಜಾತಿವಾರು ಮತ ಹಂಚಿಕೆಯ ಪಟ್ಟಿ ಹರಿದಾಡುತ್ತಿದೆ. ಯಾವ ಬೂತ್, ಮತಗಟ್ಟೆಯಲ್ಲಿ ಯಾರಿಗೆ ಎಷ್ಟು ಮತ ಬಂದಿವೆ ಎಂಬ ಪಟ್ಟಿಗಳು ಹರಿದಾಡುತ್ತಿವೆ. ಇದನ್ನು ಆಧರಿಸಿಯೇ ಅಭ್ಯರ್ಥಿಗಳ ಗೆಲುವನ್ನು ತೀರ್ಮಾನಿಸಿ ಹಲವರು ಬೆಟ್ಟಿಂಗ್ ಕಟ್ಟುತ್ತಿದ್ದಾರೆ ಎನ್ನುತ್ತಾರೆ ಸ್ಥಳೀಯ ರಾಜಕೀಯ ಕಾರ್ಯಕರ್ತರು.

ಬೆಟ್ಟಿಂಗ್‌ನಲ್ಲಿ ತೊಡಗಿರುವ ಕೆಲವರು ಬೆಟ್ ಕಟ್ಟುವ ಮೊದಲು ಮಾಧ್ಯಮ ಪ್ರತಿನಿಧಿಗಳು, ರಾಜಕೀಯ ವಿಶ್ಲೇಷಕರು, ರಾಜಕೀಯ ಕಾರ್ಯಕರ್ತರಿಗೆ ಫೋನಾಯಿಸಿ ಯಾರು ಗೆಲ್ಲಬಹುದು ಎಂಬ ಟಿಪ್ಸ್ ಪಡೆಯುತ್ತಿದ್ದಾರೆ.

ಈ ಮೊದಲು ಯಾವ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದರೋ ಈಗಲೂ ಅದೇ ಪಕ್ಷದ ಅಭ್ಯರ್ಥಿಗಳು ಗೆಲ್ಲುತ್ತಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಇದರ ಆಧಾರದ ಮೇಲೆ ಬೆಟ್ಟಿಂಗ್ ನಡೆಯುತ್ತಿದೆ.

**ಒಂದೊಂದು ಕ್ಷೇತ್ರ ದೊರೆಯಲಿವೆ**

**ಉಪ ಚುನಾವಣೆ ನಡೆಯುತ್ತಿರುವ ಮೂರು ಕ್ಷೇತ್ರಗಳಲ್ಲಿ ಪ್ರಮುಖ ಮೂರು ರಾಜಕೀಯ ಪಕ್ಷಗಳಾದ ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ತಲಾ ಒಂದೊಂದು ಕ್ಷೇತ್ರ ದೊರೆಯಲಿವೆ ಎಂಬ ವಿಶ್ಲೇಷಣೆ ಜೋರಾಗಿದೆ. ಈ ವಿಶ್ಲೇಷಣೆ ಆಧಾರದ ಮೇಲೆಯೂ ಕೆಲವರು ಬೆಟ್ಟಿಂಗ್ ನಡೆಸುತ್ತಿದ್ದಾರೆ.**

## ಚಳಿಗಾಲಕ್ಕೂ ಮೊದಲೇ ಕಬ್ಬಿನಲ್ಲಿ ಹೂವು: ಕೃಷಿಕರಿಗೆ ಸೂಲಂಗಿ ಶೂಲ

• **ಉದಯವಾಹಿನಿ, ಯಳಂದೂರು**

ತಾಲ್ಲೂಕಿನ ಕಬ್ಬಿನ ತಾಕುಗಳಲ್ಲಿ ಹೂವು ರಾರಾಜಿಸುತ್ತಿದೆ. ಡಿಸೆಂಬರಿಗೂ ಮೊದಲೇ ಕಬ್ಬಿನಲ್ಲಿ ಹೂವು ಅಬ್ಬರಿಸಿದೆ. ಇದು ಕಬ್ಬು ಬೆಳವಣಿಗೆಯನ್ನು ಮೂರು ತಿಂಗಳ ಮೊದಲೇ ತಗ್ಗಿಸಲಿದೆ. ಇದರಿಂದ ಕೃಷಿಕರಲ್ಲಿ ಇಳುವರಿ ಕುಸಿಯುವ ಆತಂಕವೂ ಕಾಡಿದೆ.

ಸೂಲಂಗಿ ಕಾಟದಿಂದ ಬೇಸತ್ತಿರುವ ಬೆಳೆಗಾರರು ಕಬ್ಬು ತೂಕ ಕಳೆದುಕೊಳ್ಳುವ ಮೊದಲೇ ಕಟಾವು ಮಾಡಿ, ಬೆಲ್ಲ ತಯಾರಿಸಿ ಮಾರುಕಟ್ಟೆಗೆ ಸಾಗಿಸಲು ಸಿದ್ಧತೆ ನಡೆಸುತ್ತಿದ್ದಾರೆ. ತಾಲ್ಲೂಕಿನಲ್ಲಿ 2, 500 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿದೆ. ಸ್ಥಳೀಯ ಕಬ್ಬಿನ ಜೊತೆ ಕಬ್ಬನ್ನು ಹೊಸ ತಳಿಯ ಕಬ್ಬಿಗೂ ಆದ್ಯತೆ ನೀಡಲಾಗಿದೆ. ಮಳೆಯೂ ಉತ್ತಮವಾಗಿ ಬಂದಿದೆ. ಮಳೆ ಮತ್ತು ಕೊಳವೆ ಬಾವಿ ನೀರಾವರಿ ನಂಬಿಕೊಂಡು ವ್ಯವಸಾಯ ಮಾಡಲಾಗಿದೆ. ಕಟಾವಿಗೆ ಇನ್ನೂ 2ರಿಂದ3 ತಿಂಗಳು ಬಾಕಿ ಇರುವಾಗಲೇ ಕಬ್ಬು ತೂಕ ಕಳೆದುಕೊಳ್ಳುವ ಆತಂಕ ಎದುರಾಗಿದೆ. ಈ ಬಾರಿ ಮೂರು ತಿಂಗಳಿಂದ ಸತತ ಮಳೆಯಾಗಿ, ಗದ್ದೆಗಳಲ್ಲಿ ತೇವಾಂಶವೂ ಹೆಚ್ಚಿದೆ. ಶೀತ ಬಾಧೆಯಿಂದ ಗಿಡಗಳು ಬೆಳವಣಿಗೆ ವೇಗ ತಗ್ಗಿದೆ. ಜನವರಿಯಲ್ಲಿ ಕಟಾವು ಮಾಡಿಕೂಳೆ ಕಬ್ಬು ಉಳಿಸಿಕೊಂಡಿದ್ದೇವೆ. ಡಿಸೆಂಬರ್ ಅಂತ್ಯದಲ್ಲಿ ಕೊಯ್ಲು ಮಾಡಬೇಕಿತ್ತು. ಕಬ್ಬಿನಲ್ಲಿ ಸೂಲಂಗಿ ಬಂದಿರುವುದರಿಂದ ಬಹುಬೇಗ ಆಲೆಮನೆಗೆ ಸಾಗಣೆ ಮಾಡಬೇಕಿದೆ. ಮೂರು ತಿಂಗಳ ಮೊದಲೇ ಕಟಾವು ಮಾಡಿದರೆ ಇಳುವರಿಯೂ ಕುಸಿಯಲಿದೆ ಎನ್ನುತ್ತಾರೆ ಅಂಬಳೆ ಕಬ್ಬು ಬೆಳೆಗಾರ ನಾಗೇಶ್. ಹೊಸ ತಳಿಯ ಕಬ್ಬುಗಳಲ್ಲಿ ಸೂಲಂಗಿ ಅಷ್ಟಾಗಿ ಬರುವುದಿಲ್ಲ. ಕಬ್ಬು ಎತ್ತರವಾಗಿ. ಉತ್ತಮ ಇಳುವರಿಯೂ ಕೈಸೇರುತ್ತದೆ. ಕಬ್ಬು ಎತ್ತರ ಬೆಳೆಯುವುದರಿಂದ ತೂಕವೂ ಹೆಚ್ಚಾಗುತ್ತದೆ. ಇಂತಹ ಕಬ್ಬು ಆಲೆಮನೆ ಇಲ್ಲವೆ ಸಕ್ಕರೆ ಕಾರ್ಖಾನೆಯಲ್ಲಿ ಬಳಕೆಯಾಗುತ್ತದೆ.


ಉದಯವಾಹಿನಿ ಚಿತ್ರ

ಇತ್ತೀಚಿನ ವರ್ಷಗಳಲ್ಲಿ ಬೇಸಾಯಗಾರರು ಸೂಲಂಗಿ ರಹಿತ ತಳಿಯ ಕಬ್ಬು ನೆಟ್ಟಿದ್ದಾರೆ. ಆದರೂ, ಹೂವು ಬರುವುದು ನಿಂತಿಲ್ಲ' ಎಂದು ಹೊನ್ನೂರು ಮಹದೇವಶೆಟ್ಟಿ ಹೇಳಿದರು. ಕಬ್ಬು ವಾರ್ಷಿಕ ಬೆಳೆ. ಸೂಲಂಗಿ ಬಂದಿರುವುದರಿಂದ ಏಳೆಂಟು ತಿಂಗಳಿಗೆ ಕಟಾವು ಮಾಡಬೇಕಿದೆ. ಇದರಿಂದ ಆಲೆಮನೆಗಳಿಗೆ ಬೇಡಿಕೆಯೂ ಹೆಚ್ಚಿದೆ. ತುಂತುರು ಮಳೆ ಆಗಾಗ ಕಾಡುವುದರಿಂದ ಬೆಲ್ಲದ ಉತ್ಪಾದನೆಯಲ್ಲೂ ಹಿನ್ನಡೆಯಾಗಿದೆ. ಈ ವರ್ಷ ಬೆಳೆ ಕೈಸೇರುವ ಹೊತ್ತಿನಲ್ಲಿ ಕಬ್ಬು ಹೂವು ಬಿಟ್ಟಿದೆ' ಎನ್ನುತ್ತಾರೆ ಬೆಳೆಗಾರರು.

> **ತಾಲ್ಲೂಕಿನ ಹವಾಮಾನ ಕಬ್ಬು ಬೆಳೆಗೆ ಸೂಕ್ತವಾಗಿದೆ. ಮಳೆ ಪ್ರಮಾಣ 150 ರಿಂದ 200 ಸೆ.ಮೀ. ಸುರಿದಿದೆ. ಆರಂಭದಲ್ಲಿ ಉಷ್ಣಾಂಶವೂ ಹೆಚ್ಚಿದ್ದು ಬೆಳೆಗೆ ಪೂರಕವಾಗಿತ್ತು. ಸೂಲಂಗಿ ಬೆಳೆಯದ ಸಿಒ 13014ನ ಹೊಸ ತಳಿಯ ಕಬ್ಬನ್ನು ರೈತರಿಗೆ ಪರಿಚಯಿಸಲಾಗಿದೆ. ಆದರೆ ಈ ಬಾರಿ ಅಕ್ಟೋಬರ್ ವೇಳೆಗೆ ಶೇ 25 ರಷ್ಟು ಕಬ್ಬು ತಾಲ್ಲೂಕಿನಲ್ಲಿ ಸೂಲಂಗಿ ಅರಳಿದೆ. ಕಬ್ಬಿನ ಬೆಳವಣಿಗೆ ವೇಗ ತಗ್ಗಲಿದೆ. ಇದರಿಂದ ಇಳುವರಿ ಪ್ರಮಾಣ ಶೇ 30 ಕುಸಿಯಲಿದೆ**
>
> **-ಎ.ವೆಂಕಟರಂಗಶೆಟ್ಟಿ**
> **ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ**

## ಕನಕದಾಸರ ತತ್ವ, ಆದರ್ಶ ಪಾಲಿಸಿ: ಶಾಸಕ

• **ಉದಯವಾಹಿನಿ, ಮಡಿಕೇರಿ**

ಸಾಮಾಜಿಕ ನ್ಯಾಯ ಹಾಗೂ ಏಕತೆಗಾಗಿ 15ನೇ ಶತಮಾನದಲ್ಲೇ ಹೋರಾಡಿದವರು ಕನಕದಾಸರು. ಅವರ ಮೌಲ್ಯಗಳು ಇಂದಿಗೂ ಪ್ರಸ್ತುತ ಎಂದು ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಮಂತರ್‌ಗೌಡ ಹೇಳಿದರು. ಇಲ್ಲಿನ ಗಾಂಧಿಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೋಮವಾರ ಏರ್ಪಡಿಸಿದ್ದ 'ಕನಕದಾಸರ ಜಯಂತಿ ಆಚರಣೆ 2024 ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಕನಕದಾಸರ ತತ್ವ ಮತ್ತು ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು' ಎಂದು ಕರೆ ನೀಡಿದ ಅವರು, 'ಸಮಾಜದಲ್ಲಿ ಎಲ್ಲರೂ ಒಂದಾಗಬೇಕು ಮತ್ತು ಏಕತೆ ಬರಬೇಕು ಎಂಬುದು ಅವರ ಆಲೋಚನೆಯಾಗಿತ್ತು. ಈ ವಿಷಯನ್ನು ಅವರ ಕೃತಿಗಳಲ್ಲಿ ಹಾಗೂ ಕಾವ್ಯಗಳಲ್ಲಿ ಇಂದಿಗೂ ಕಾಣಬಹುದು. ಅವರು ಪ್ರತಿಪಾದಿಸಿದ ಮೌಲ್ಯಗಳನ್ನು ನಾವು ಅನುಸರಿಸಬೇಕು' ಎಂದರು. ರಾಗಿ ಮತ್ತು ಭತ್ತದ ಜೊತೆ ಜಗಳವಾದ ಪ್ರಸಂಗವಿರುವ ಕನಕದಾಸರ ಕಾವ್ಯವನ್ನು ಪ್ರಸ್ತಾಪಿಸಿದ ಶಾಸಕರು ಭತ್ತ ಬೇಗ ಕೊಳೆಯುತ್ತದೆ, ರಾಗಿ ಉಳಿಯುತ್ತದೆ. ಹೊರನೋಟಕ್ಕೆ ಚೆಂದವಾಗಿ ಕಂಡರೂ ಒಳಗೆ ತಿರುಳು ಇರಬೇಕು ಎಂದರು. ಯಾವುದೇ ಜಯಂತಿಯನ್ನಾದರೂ ಸರಿ, ಆಯಾ ಜನಾಂಗದವರು ಹೆಚ್ಚು ಎಲ್ಲಿ ವಾಸ ಇರುತ್ತಾರೋ ಅಲ್ಲಿಯೇ ಆಚರಣೆ ಮಾಡಬೇಕು ಎಂದು ಅವರು ಇದೇ ವೇಳೆ ಜಿಲ್ಲಾಡಳಿತಕ್ಕೆ ಸಲಹೆ ನೀಡಿದರು.ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ, 'ಕನಕದಾಸರ ಕೀರ್ತನೆಯಲ್ಲಿರುವ ಸಂದೇಶವನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು' ಎಂದರು.ಕೊಡಗು ಜಿಲ್ಲಾ ಕುರುಬ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎ.ಗಂಗಾಧರ ಮಾತನಾಡಿ, 'ದಾಸ ಶ್ರೇಷ್ಠ ಕನಕದಾಸರು ಸಮಾಜದಲ್ಲಿನ ಅಸಮಾನತೆ ಹೋಗಲಾಡಿಸಲು ತಮ್ಮ ಕೀರ್ತನೆಗಳ ಮೂಲಕ ಶ್ರಮಿಸಿದ್ದಾರೆ' ಎಂದು ತಿಳಿಸಿದರು.ನಿವೃತ್ತ ಕಲಾ ಶಿಕ್ಷಕ ಉ.ರಾ.ನಾಗೇಶ್ ಕನಕದಾಸರ ಕುರಿತು ವಿಶೇಷ ಉಪನ್ಯಾಸ ನೀಡಿದರು.


ಉದಯವಾಹಿನಿ ಚಿತ್ರ

## ತಲಕಾವೇರಿ, ಭಾಗಮಂಡಲ ಕ್ಷೇತ್ರಗಳಲ್ಲಿ 10.93 ಲಕ್ಷ ಸಂಗ್ರಹ

• **ಉದಯವಾಹಿನಿ, ನಾಪೋಕ್ಲು**

ತುಲಾ ಸಂಕ್ರಮಣದ ಪ್ರಯುಕ್ತ ಅ.16ರಂದು ಭಾಗಮಂಡಲದಿಂದ ತಲಕಾವೇರಿಗೆ ಕೊಂಡೊಯ್ದು ಕಾವೇರಿ ಮಾತೆಗೆ ತೊಡಿಸಿದ್ದ ಚಿನ್ನಾಭರಣಗಳನ್ನು ಶಾಸ್ತ್ರೋಕ್ತವಾಗಿ ತಂದು ಆಡಳಿತಾಧಿಕಾರಿ ಚಂದ್ರಶೇಖರ್ ಅವರಿಗೆ ಹಸ್ತಾಂತರಿಸಲಾಯಿತು. ಜಾತ್ರೆಯ ಅಂಗವಾಗಿ ತಲಕಾವೇರಿ ತಕ್ಕರಾದ ಕೋಡಿ ಮೋಟಯ್ಯ ಅವರು ಆಡಳಿತಾಧಿಕಾರಿ ಚಂದ್ರಶೇಖರ್ ಅವರಿಂದ ಆಭರಣಗಳನ್ನು ಪಡೆದು ತಲಕಾವೇರಿಯಲ್ಲಿ ಮಾತೆಗೆ ತೊಡಿಸಿದ್ದರು.

ಕಿರುಸಂಕ್ರಮಣ ವರೆಗೆ ಕಾವೇರಿ ಕುಂಡಿಕೆಯಲ್ಲಿ ಆಭರಣ ಹಾಗೂ ಬೆಳ್ಳಿಯ ಕವಚಗಳನ್ನು ತೊಡಿಸಲಾಗಿತ್ತು. ಸಂಕ್ರಮಣ ಮುಗಿದ ಬಳಿಕ ಭಂಡಾರವನ್ನು ತರಲಾಯಿತು. ಚಿನ್ನಾಭರಣಗಳನ್ನು ಮರಳಿ ಆಡಳಿತಾಧಿಕಾರಿ ಚಂದ್ರಶೇಖರ್ ಅವರಿಗೆ ಹಸ್ತಾಂತರಿಸಲಾಯಿತು.


ಉದಯವಾಹಿನಿ ಚಿತ್ರ

ಬಳಿಕ ಹುಂಡಿ ಎಣಿಕೆ ಮಾಡಲಾಯಿತು. ಅಕ್ಟೋಬರ್ 29ರಿಂದ ನವಂಬರ್ 18ರವರೆಗೆ ತಲಕಾವೇರಿ ಮತ್ತು ಭಾಗಮಂಡಲ ಎರಡೂ ಕ್ಷೇತ್ರಗಳಲ್ಲಿ ಒಟ್ಟು 10,93,326 ಸಂಗ್ರಹವಾಗಿದೆ. ತಲಕಾವೇರಿ ಕ್ಷೇತ್ರದಲ್ಲಿ 5,39,810 ಭಾಗಮಂಡಲದ ಭಗಂಡೇಶ್ವರ ದೇವಾಲಯದಲ್ಲಿ 3,97, 500 ಹಾಗೂ ಭಗಂಡೇಶ್ವರ ದೇವಾಲಯದ ಅನ್ನಸಂತರ್ಪಣೆಯಿಂದ 1,56 ,016 ಸಂಗ್ರಹವಾಗಿದೆ.

ಜಾತ್ರೆಯ ಅಂಗವಾಗಿ ಭಾಗಮಂಡಲದಲ್ಲಿ ಒಂದು ತಿಂಗಳ ಕಾಲ ನಂದಾದೀಪವನ್ನು ಹಾಗೂ ಅಕ್ಷಯ ಪಾತ್ರೆಯನ್ನು ಇರಿಸಲಾಗಿದ್ದು ಸಾಂಪ್ರದಾಯಿಕ ಆಚರಣೆ ಸಮಾಪ್ತಿಗೊಂಡಿದೆ.

## ವಿದ್ಯುತ್ ಪ್ರವಹಿಸಿ ಕಾರ್ಮಿಕ ಸಾವು: ಬೆಸ್ಕಾಂ ಕಚೇರಿ ಎದುರು ಪ್ರತಿಭಟನೆ

• **ಉದಯವಾಹಿನಿ, ಕುದೂರು**

ಇಲ್ಲಿನ ಸೂರಪ್ಪನಹಳ್ಳಿ ಬಳಿ ವಿದ್ಯುತ್ ತಂತಿ ದುರಸ್ತಿ ಮಾಡುವಾಗ ವಿದ್ಯುತ್ ಪ್ರವಹಿಸಿ ಕಾರ್ಮಿಕರಬ್ಬರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಡೆದಿದೆ.

ಕುದೂರು ಹೋಬಳಿಯ ನಾರಸಂದ್ರ ನಿವಾಸಿ ಸಿದ್ದ ಲಿಂಗ (ಪುಟ್ಟರಾಜು) (35) ಮೃತರು.ಸಿದ್ದಲಿಂಗ ಅವರು ಎಲೆಕ್ಟ್ರಿಕಲ್ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದರು. ಹೋಬಳಿಯ ಸೂರಪ್ಪನಹಳ್ಳಿ ಗ್ರಾಮದ ಬಳಿ ವಿದ್ಯುತ್ ಜಂಪ್ ಕಟ್ಟಾಗಿದ್ದನ್ನು ದುರಸ್ತಿಪಡಿಸಲು ಗುತ್ತಿಗೆದಾರರ ಜೊತೆ ತೆರಳಿದ್ದರು. ಕಂಬ ಏರಿ ದುರಸ್ತಿ ಕೆಲಸ ಮಾಡುತ್ತಿದ್ದ ಅವರಿಗೆ ವಿದ್ಯುತ್ ಪ್ರವಹಿಸಿದ್ದರಿಂದ ಕೆಳಕ್ಕೆ ಬಿದ್ದಿದ್ದಾರೆ. ಗಂಭೀರವಾಗಿ ಗಾಯಗೊಂಡ ಅವರನ್ನು ಕುಣಿಗಲ್ ಆಸ್ಪತ್ರೆಗೆ ಕರೆದೊಯ್ದರೂ ಬದುಕುಳಿಯಲಿಲ್ಲ. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ತಾಲ್ಲೂಕಿನಲ್ಲಿ ಆಗಾಗ ವಿದ್ಯುತ್ ಅವಘಡಗಳು ನಡೆಯುತ್ತಿದ್ದರೂ, ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಅಧಿಕಾರಿಗಳ ಬೇಜವಾಬ್ದಾರಿಯಿಂದಾಗಿ ವಿದ್ಯುತ್ ಗುತ್ತಿಗೆದಾರರ ಬಳಿ ಕೆಲಸ ಮಾಡುವ ಕೂಲಿ ಕಾರ್ಮಿಕ ಜೀವ ಕಳೆದುಕೊಳ್ಳುವಂತಾಗಿದೆ' ಎಂದು ತಾಲ್ಲೂಕು ಬೆಸ್ಕಾಂ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸಿದ್ಧರಾಜು ದೂರಿದರು.ಪ್ರತಿಭಟನೆಯಲ್ಲಿ ಸ್ಥಳೀಯ ಮುಖಂಡರಾದ ಜಯರಾಮು, ಬಾಬಣ್ಣ ಸೇರಿದಂತೆ ನೂರಾರು ಸಾರ್ವಜನಿಕರು ಇದ್ದರು. ಸಿದ್ಧಲಿಂಗ ಮೃತ ಕಾರ್ಮಿಕನಟರಾಜು ಬೆಸ್ಕಾಂ ಇಇದುರಸ್ತಿ ಕಾರ್ಯ ಮಾಡುವಾಗ ವಿದ್ಯುತ್ ಪ್ರವಹಿಸಿ ಮೃತಪಟ್ಟ ಕಾರ್ಮಿಕನ ಕುಟುಂಬಕ್ಕೆ ಇಲಾಖೆಯಿಂದ ಸೂಕ್ತ ಪರಿಹಾರ ನೀಡಲಾಗುವುದು. ಮುಂದೆ ಇಂತಹ ಘಟನೆ ನಡೆಯದಂತೆ ಕ್ರಮ ಕೈಗೊಳ್ಳಲಾಗುವುದು.

**ಕಚೇರಿಮುಂದೆಪ್ರತಿಭಟನೆ**

**ಘಟನೆ ಖಂಡಿಸಿ ಸಿದ್ದಲಿಂಗ ಕುಟುಂಬಸ್ಥರು ಶವವನ್ನು ಕುದೂರು ಬೆಸ್ಕಾಂ ಕಚೇರಿ ಮುಂದೆ ಇಟ್ಟು ಪ್ರತಿಭಟನೆ ನಡೆಸಿದರು. ಸ್ಥಳಕ್ಕೆ ಬೆಸ್ಕಾಂ ಕಾರ್ಯನಿರ್ವಾಹಕ ಎಂಜಿನಿಯರ್ ನಟರಾಜ್, ಎಇಇ ಶಿವರಾಜು ಭೇಟಿ ನೀಡಿ ಪ್ರತಿಭಟನಾಕಾರರ ಮನವೊಲಿಸಿ ಸೂಕ್ತ ಪರಿಹಾರ ನೀಡುವ ಭರವಸೆ ನೀಡಿದರು.**

## ಅಮಾನತುಗೊಂಡಿದ್ದ ವೈದ್ಯೆ ಮರು ನಿಯೋಜನೆಗೆ ವಿರೋಧ

• **ಉದಯವಾಹಿನಿ, ಕನಕಪುರ**

ಭ್ರೂಣಲಿಂಗವನ್ನು ಅಕ್ರಮವಾಗಿ ಪತ್ತೆ ಮಾಡಿದ ಆರೋಪದಡಿ ಅಮಾನತುಗೊಂಡಿರುವ ಪಟ್ಟಣದ ವೈದ್ಯೆ ಡಾ. ದಾಕ್ಷಾಯಿಣಿ ಅವರನ್ನು ಮತ್ತೆ ಅದೇ ಜಾಗದಲ್ಲಿ ಮುಂದುವರಿಸುತ್ತಿರುವುದು ಸರಿಯಲ್ಲ. ಇದರಿಂದ ಸಮಾಜಕ್ಕೆ ತಪ್ಪು ಸಂದೇಶ ಹೋಗುತ್ತದೆ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುಮಾರಸ್ವಾಮಿ ಆರೋಪಿಸಿದರು.

ನಗರದ ಕೋಟೆ ಗಣೇಶ ದೇವಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ. ದಾಕ್ಷಾಯಿಣಿ ಅವರು ಬಸ್ ನಿಲ್ದಾಣದ ಬಳಿ ಇರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಪ್ರಸೂತಿ ತಜ್ಞೆ ವೈದ್ಯರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಸ್ಕ್ಯಾನಿಂಗ್ ಯಂತ್ರವನ್ನು ದುರ್ಬಳಕೆ ಮಾಡಿಕೊಂಡು ಭ್ರೂಣಲಿಂಗ ಪತ್ತೆ ಮಾಡಿದ ಆರೋಪದಡಿ, ಕ್ರಿಮಿನಲ್ ಪ್ರಕರಣ ದಾಖಲಾಗಿ ಅಮಾನತುಗೊಂಡಿದ್ದರು' ಎಂದರು.

ವೈದ್ಯೆ ಮೇಲಿರುವ ಆರೋಪದ ಪ್ರಕರಣವು ನ್ಯಾಯಾಲಯದಲ್ಲಿ ಬಾಕಿ ಇರುವಾಗಲೇ ಆರೋಗ್ಯ ಇಲಾಖೆಯು ಮತ್ತೆ ಅವರನ್ನು ಕರ್ತ ವ್ಯಕ್ಕೆ ನಿಯೋಜನೆ ಮಾಡಿಕೊಂಡಿದೆ. ಇದರಿಂದ ಅವರು ಸಾಕ್ಷಿಗಳನ್ನು ನಾಶಮಾಡುವ ಸಾಧ್ಯತೆ ಮತ್ತು ಅವರು ತಪ್ಪೇ ಮಾಡಿಲ್ಲವೆಂಬಂತೆ ಸಂದೇಶ ಹೋಗುತ್ತದೆ' ಎಂದು ದೂರಿದರು.

ವೈದ್ಯರ ಕೊರತೆ ಕಾರಣವನ್ನು ನೀಡಿ ಸರ್ಕಾರ ಮತ್ತೆ ಅವರನ್ನು ಕರ್ತವ್ಯಕ್ಕೆ ನಿಯೋಜನೆ ಮಾಡಿಕೊಂಡಿದೆ. ಅದಕ್ಕೆ ನಮ್ಮ ಅಭ್ಯಂತರವಿಲ್ಲ. ಆದರೆ ಅವರು ಅಮಾನತುಕೊಂಡಿದ್ದ ಸಂದರ್ಭದಲ್ಲಿ ಅವರ ಸ್ಥಳವನ್ನು ಖಾಲಿ ತೋರಿಸಿದ್ದರೆ, ಬೇರೆ ಕಡೆಯಿಂದ ಇಲ್ಲಿಗೆ ವೈದ್ಯರು ವರ್ಗಾವಣೆ ಮಾಡಿಕೊಂಡು ಬರುತ್ತಿದ್ದರು. ದಾಕ್ಷಾಯಿಣಿ ಅವರ ಪ್ರಭಾವದಿಂದ ಅವರ ಸ್ಥಳವನ್ನು ಖಾಲಿ ತೋರಿಸಿರಲಿಲ್ಲ ಎಂದು ಆರೋಪಿಸಿದರು.

ಬೇರೆ ಕಡೆಗೆ ವರ್ಗಾವಣೆಗೊಂಡಿದ್ದ ದಾಕ್ಷಾಯಿಣಿ ಅವರು ಅಲ್ಲಿಗೆ ಹೋಗಿ ಕರ್ತವ್ಯ ನಿರ್ವಹಿಸಿಲ್ಲ. ಹಠ ಹಿಡಿದು ಇದೇ ಜಾಗಕ್ಕೆ ಬರಬೇಕೆಂದು ತಮ್ಮ ಪ್ರಭಾವ ಬಳಸಿ ಇಲಾಖೆ ಮೇಲೆ ಒತ್ತಡ ತಂದು ಕೆಲಸಕ್ಕೆ ಮತ್ತೆ ಬಂದಿದ್ದಾರೆ. ಇಲಾಖೆ ಮತ್ತೆ ಇದೇ ಸ್ಥಳದಲ್ಲಿ ನಿಯೋಜನೆ ಮಾಡಿರುವುದು ಸರಿಯಾದ ಕ್ರಮವಲ್ಲ. ಕೂಡಲೇ ಅವರನ್ನು ಬೇರೆಡೆಗೆ ವರ್ಗಾವಣೆ ಮಾಡಬೇಕು' ಎಂದು ಆಗ್ರಹಿಸಿದರು.

## ಕಾಳುಮೆಣಸು ಜಿಎಸ್‌ಟಿ ವ್ಯಾಪ್ತಿಗೆ ಬೇಡ: ಬೆಳೆಗಾರರ ಒತ್ತಾಯ

• **ಉದಯವಾಹಿನಿ, ಮಡಿಕೇರಿ**


ಉದಯವಾಹಿನಿ ಚಿತ್ರ

ಕಾಳುಮೆಣಸನ್ನು ಜಿಎಸ್‌ಟಿ ವ್ಯಾಪ್ತಿಗೆ ತರಬಾರದು ಎಂದು ಕರ್ನಾಟಕ ಬೆಳೆಗಾರರ ಸಂಘವು ಕೇಂದ್ರ ಮತ್ತು ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ. ನಗರ ಹೊರವಲಯದಲ್ಲಿ ಸೋಮವಾರ ನಡೆದ ಸಂಘದ 66ನೇ ವಾರ್ಷಿಕ ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸಿದ ಸಂಘದ ಅಧ್ಯಕ್ಷ ಕೆ.ಜಿ.ರಾಜೀವ್, ಹವಾ ಮಾನ ಬದಲಾವಣೆಯಿಂದ ಕಾಳುಮೆಣಸು ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಗುರಿಯಾಗಿದ್ದಾರೆ ಎಂದರು.

ಉತ್ಪಾದನಾ ವೆಚ್ಚ ಹೆಚ್ಚಳ, ಅತೀವ ಸ್ಪರ್ಧಾತ್ಮಕತೆ, ಕಾರ್ಮಿಕರ ಕೊರತೆ, ರೋಗಬಾಧೆ, ಕೀಟಗಳ ಕಾಟ, ಮಾನವ-ವನ್ಯಜೀವಿ ಸಂಘರ್ಷ ಸೇರಿದಂತೆ ಬೆಳೆಗಾರರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಕೂಡಲೇ ನೆರವಿಗೆ ಬರಬೇಕು ಎಂದು ಆಗ್ರಹಿಸಿದರು. ಕಾಫಿಯನ್ನು ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆ ವ್ಯಾಪ್ತಿಗೆ ತರಬೇಕು, ಹೊಸ ರಫ್ತು ಮಾರುಕಟ್ಟೆಗಳ ಹುಡುಕಾಟ ನಡೆಸಬೇಕು, ಕಾರ್ಮಿಕರ ಕೊರತೆ ನಿವಾರಿಸಲು ಹೊಸ ಸಂಶೋಧನೆಗಳನ್ನು ಉತ್ತೇಜಿಸಬೇಕು, ಕೀಟ, ರೋಗ, ಬರ ನಿರೋಧಕ ಹಾಗೂ ಅಧಿಕ ಇಳುವರಿ ನೀಡುವ ಕಾಫಿ ತಳಿಗಳ ಅಭಿವೃದ್ಧಿಗೂ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.ಅರಣ್ಯದ ಸುತ್ತ ರೈಲ್ವೆ ಬ್ಯಾರಿಕೇಡ್ ಹಾಕಲು ಹೆಚ್ಚಿನ ಹಣ ಮೀಸಲಿರಿಸಬೇಕು, ಕಾಡಾನೆಗಳನ್ನು ಸ್ಥಳಾಂತರಿಸಬೇಕು, ವನ್ಯಜೀವಿಗಳಿಂದಾಗುವ ಬೆಳೆ ಹಾಗೂ ಪ್ರಾಣಹಾನಿಗೆ ಹೆಚ್ಚಿನ ಪರಿಹಾರ ನೀಡಬೇಕು.

ಸರ್ಫೇಸಿ ಕಾಯ್ದೆಯಿಂದ ಬೆಳೆಗಾರರನ್ನು ಹೊರಗಿಡಬೇಕು ಎಂದು ಕೋರಿದರು. ದೇಶದಲ್ಲಿ ಶೇ 60ರಷ್ಟು ಕಾಫಿ ಹಾಗೂ ಶೇ 36ರಷ್ಟು ಏಲಕ್ಕಿ ಕರ್ನಾಟಕದಿಂದಲೇ ಉತ್ಪಾದನೆಯಾಗುತ್ತಿದೆ. ಇತ್ತೀಚಿನ ವರ್ಷಗಳಲ್ಲಿ ಹವಾಮಾನ ವೈಪರೀತ್ಯದಿಂದ ಕಾಳುಮೆಣಸಿನ ಉತ್ಪಾದನೆ ಇಳಿಕೆಯಾಗುತ್ತಿದೆ ಎಂದರು.

# ಕಾಟಾಚಾರಕ್ಕೆ ಕನಕ ಜಯಂತಿ ಆಚರಣೆ; ತಹಶೀಲ್ದಾರ್‌ಗೆ ತರಾಟೆ

## ಕನಕದಾಸರ ತತ್ವಗಳನ್ನು ಆಳವಡಿಸಿಕೊಂಡವರು ಜಾತಿ ಹೆಸರು ಹೇಳಬಾರದು, ಜಾತಿ ಹುಟ್ಟಿನಿಂದ ಬರುವುದಿಲ್ಲ


• **ಉದಯವಾಹಿನಿ, ಶಿರಾ**

ಕಾಟಾಚಾರಕ್ಕೆ ಕನಕ ಜಯಂತಿ ಆಚರಿಸಲಾಗುತ್ತಿದೆ ಎಂದು ಆರೋಪಿಸಿ ತಾಲ್ಲೂಕು ಆಡಳಿತವನ್ನು ಕುರುಬ ಸಮಾಜದ ಮುಖಂಡರು ತರಾಟೆಗೆ ತೆಗೆದುಕೊಂಡರು. ಸರ್ಕಾರ ಕನಕ ಜಯಂತಿ ಆಚರಣೆಗೆ ರಜಾ ಮಂಜೂರು ಮಾಡಿದೆ. ಆದರೆ ಅಧಿಕಾರಿಗಳು ಕನಕ ಜಯಂತಿ ಆಚರಣೆಗೆ ಮಾಡದೆ ಗೈರು ಹಾಜರಾಗಿದ್ದಾರೆ.ತಾಲ್ಲೂಕು ಕಚೇರಿಯಲ್ಲಿ ಬೆರಳೆಣಿಕೆಯಷ್ಟು ಮಂದಿ ಅಧಿಕಾರಿಗಳು ಹಾಜರಿದ್ದಾರೆ.

ಜೊತೆಗೆ ಜನಾಂಗದ ಮುಖಂಡರಿಗೆ ಸಹ ಸರಿಯಾಗಿ ಮಾಹಿತಿ ನೀಡದೆ ದಾಖಲೆಗಳಿಗೆ ಸೀಮಿತವಾಗುವಂತೆ ಕನಕ ಜಯಂತಿ ಆಚರಣೆಗೆ ಮುಂದಾಗಿರುವುದು ಖಂಡನೀಯ ಎಂದು ಮುಖಂಡರಾದ ಬಿ.ಕೆ.ಮಂಜುನಾಥ್, ಬರಗೂರು ನಟರಾಜು, ಶಿವಶಂಕರ್, ಎಸ್.ಎಲ್.ರಂಗನಾಥ್, ರಂಗನಾಥ ಎಸ್.ಕೆ.ದಾಸಪ್ಪ ಅಸಮಾಧಾನ ವ್ಯಕ್ತಪಡಿಸಿದರು.

ತಹಶೀಲ್ದಾರ್ ಅವರನ್ನು ತರಾಟೆಗೆ ತೆಗೆದುಕೊಂಡ ಮುಖಂಡರು, ಯಾವುದೇ ಕಾರಣಕ್ಕೂ ಕನಕ ಜಯಂತಿ ಆಚರಣೆ ಬೇಡ ಶಾಸಕರು ಬರಲಿ ಅವರೇ ತೀರ್ಮಾನ ಮಾಡಲಿ ಎಂದು ಪಟ್ಟು ಹಿಡಿದರು.

ಸ್ಥಳಕ್ಕೆ ಆಗಮಿಸಿದ ಶಾಸಕ ಟಿ.ಬಿ.ಜಯಚಂದ್ರ ಅವರು ಅಧಿಕಾರಿಗಳು ಹಾಗೂ ಮುಖಂಡರ ಸಭೆ ನಡೆಸಿದರು. ಮುಂದೆ ಈ ರೀತಿ ಲೋಪವಾಗದಂತೆ ಎಚ್ಚರ ವಹಿಸಬೇಕೆಂದು ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

ಕನಕದಾಸರನ್ನು ಕುರುಬ ಜಾತಿಗೆ ಸೀಮಿತಗೊಳಿಸಬಾರದು. ಜಾತಿಯನ್ನು ಮೀರಿ ಬೆಳೆದ ಅವರು ದೇವರು ಇದ್ದಾನೆ ಎಂಬುದನ್ನು ಜಗತ್ತಿಗೆ ತೋರಿಸಿದ ಏಕೈಕ ವ್ಯಕ್ತಿ. ಅವರ ತತ್ವಸಿದ್ಧಾಂತಗಳು ನಮಗೆ ಆದರ್ಶವಾಗಬೇಕು ಎಂದು ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಹೇಳಿದರು. ನಗರದ ಮಿನಿವಿಧಾನಸೌಧದಲ್ಲಿ ಸೋಮವಾರ ತಾಲ್ಲೂಕು ಆಡಳಿತ ಹಮ್ಮಿಕೊಂಡಿದ್ದ ಕನಕ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಕನಕದಾಸರ ತತ್ವಗಳನ್ನು ಆಳವಡಿಸಿ ಕೊಂಡವರು ಜಾತಿ ಹೆಸರು ಹೇಳಬಾರದು. ಜಾತಿ ಹುಟ್ಟಿನಿಂದ ಬರುವುದಿಲ್ಲ. ನಾವು ಮಾಡುವ ಕಸುಬಿನಿಂದ ಬಂದಿದೆ. ಕನಕ ಎಂಬುದು ಅಗಾಧ ಶಕ್ತಿ ಅದಮ್ಯ ಚೇತನ ಅವರು ಭಗವಂತನಿಗೆ ಹತ್ತಿರವಾಗಿದ್ದವರು ಎಂದು ಹೇಳಿದರು. ವಿಧಾನ ಪರಿಷತ್ ಸದಸ್ಯ ಚಿದಾನಂದ ಎಂ.ಗೌಡ ಮಾನವ ಜಾತಿ ಒಂದೇ ಎಂದು ಕೀರ್ತನೆಗಳ ಮೂಲಕ ಸಂದೇಶ ನೀಡಿ ಜಾತಿ ಪದ್ಧತಿಯನ್ನು ತೊಲಗಿಸುವ ಕೆಲಸ ಮಾಡಿದರು ಎಂದರು. ನಾರು ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಿ.ಕೆ.ಮಂಜುನಾಥ್ ಕನಕದಾಸರು ಎಲ್ಲಾ ಜಾತಿಯವರು ಸಮಾನರು ಎನ್ನುವ ತತ್ವ ಸಾರಿದರು. ಉಡುಪಿ ಶ್ರೀಕೃಷ್ಣ ಮಠ ಇಂದು ವಿಶ್ವದ ಗಮನ ಸೆಳೆಯಲು ಕನಕದಾಸರ ಭಕ್ತಿಯೇ ಕಾರಣ ಎಂದರು.

> **ಸರ್ಕಾರ ಮಹನೀಯರ ಜಯಂತಿಗೆ ರಜೆ ನೀಡುವುದು ಸಂಸ್ಕೃತಿ ಪರಂಪರೆ ಉಳಿಸಿ, ಅವರ ತತ್ವ ಸಿದ್ಧಾಂತವನ್ನು ಮುಂದಿನ ಪೀಳಿಗೆಗೆ ತಿಳಿಸುವ ಕೆಲಸವಾಗಲಿ ಎಂದು. ಅಧಿಕಾರಿಗಳು ಮಜಾ ಮಾಡಲು ಅಲ್ಲ. ಸರ್ಕಾರದ ಮೂಲ ಉದ್ದೇಶವನ್ನು ಅರ್ಥ ಮಾಡಿಕೊಂಡಿಲ್ಲ. ಇನ್ನು ಮುಂದೆ ನಡೆಯುವ ಎಲ್ಲಾ ಜಯಂತಿಗಳಲ್ಲಿ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಇಲ್ಲದಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದರು.**

ತಹಶೀಲ್ದಾರ್ ಸಚ್ಚಿದಾನಂದ ಕುಚನೂರು ನಗರಸಭೆ ಪೌರಾಯುಕ್ತ ರುದ್ರೇಶ್ ಅಧ್ಯಕ್ಷ ಜೀಷಾನ್ ಮಹಮೂದ್ ಉಪಾಧ್ಯಕ್ಷ ಲಕ್ಷ್ಮೀಕಾಂತ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬರಗೂರು ನಟರಾಜು ಸ್ಥಾಯಿ ಸಮಿತಿ ಅಧ್ಯಕ್ಷ ಶಿವಶಂಕರ್ ಸದಸ್ಯರಾದ ಎಸ್.ಎಲ್.ರಂಗನಾಥ್ ಅಜೇಯ್ ಕುಮಾರ್ ತೇಜಾ ಭಾನು ಪ್ರಕಾಶ್ ಬಿ.ಎಂ.ರಾಧಾಕೃಷ್ಣ ಧೃವ ಕುಮಾರ್ ಸುಶೀಲಾ ವಿರೂಪಾಕ್ಷ ರಂಗನಾಥ್ ಎಸ್. ಕೆ.ದಾಸಪ್ಪ ಭಾನುಪ್ರಕಾಶ್ ಬಿಇಒ ಕೃಷ್ಣಪ್ಪ ವಲಯ ಅರಣ್ಯಾಧಿಕಾರಿ ನವನೀತ್ ಕೃಷಿ ಸಹಾಯಕ ನಿರ್ದೇಶಕ ನಾಗರಾಜು ತಾಲ್ಲೂಕು ವೈದ್ಯಾಧಿಕಾರಿ ಸಿದ್ದೇಶ್ವರ್ ಇದ್ದರು. ಒಂದು ಜಾತಿಗೆ ಸೀಮಿತವಲ್ಲ.

**ಸಭೆ ಬಳಿಕ ಜಯಂತಿ ಆಚರಣೆ**

**ಇಲ್ಲಿ ತಹಶೀಲ್ದಾರ್ ಮತ್ತು ಬಿಸಿಎಂ ಇಲಾಖೆ ಅಧಿಕಾರಿ ಇಬ್ಬರು ಹೊಸಬರು ಕಂದಾಯ ತನಿಖಾಧಿಕಾರಿ ಮುಂದೆ ಇದ್ದು ಕಾರ್ಯಕ್ರಮ ನಡೆಸಬೇಕು ಅವರೇ ಗೈರು ಹಾಜರಾಗಿದ್ದು ಅವರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಸಭೆಗೆ ಗೈರು ಹಾಜರಾದ ಎಲ್ಲರಿಗೂ ನೋಟೀಸ್ ನೀಡುವಂತೆ ತಹಶೀಲ್ದಾರ್ ಅವರಿಗೆ ಸೂಚಿಸಿದರು. ವಿಧಾನಸಭೆಯಲ್ಲಿ ಈ ಬಗ್ಗೆ ಪ್ರಸ್ತಾಪ ಮಾಡಿ ಇನ್ನು ಮುಂದೆ ರಾಜ್ಯದಲ್ಲಿ ನಡೆಯುವ ಎಲ್ಲಾ ಜಯಂತಿಗಳಲ್ಲಿ ಪ್ರತಿಯೊಬ್ಬ ಅಧಿಕಾರಿ ಕಡ್ಡಾಯವಾಗಿ ಹಾಜರಿರುವಂತೆ ಕಾನೂನು ರೂಪಿಸಲಾಗುವುದು ಎಂದರು.**


**ಉದಯವಾಹಿನಿ**

**ಪ್ರಾದೇಶಿಕ**

ಬುಧವಾರ
20 ನವೆಂಬರ್ 2024



## ಮಿನಿ ನ್ಯೂಸ್

### ಹಾಸ್ಟೆಲ್ ವಿದ್ಯಾರ್ಥಿಗಳು ಅಸ್ವಸ್ಥ, ಆಸ್ಪತ್ರೆಗೆ ದಾಖಲು

• **ಉದಯವಾಹಿನಿ, ತಿಪಟೂರು**

ಪಟ್ಟಣದ ಡಾ. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಮಂಗಳವಾರ ಬೆಳಗಿನ ಜಾವ ವಿದ್ಯಾರ್ಥಿಗಳಿಗೆ ವಾಂತಿ-ಭೇದಿಯಾಗಿದ್ದು, ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ.ಬೆಳಗಿನ ಜಾವ 3 ಗಂಟೆಯ ಸಮಯದಲ್ಲಿ 9 ಮಂದಿ ಬಾಲಕರ ಆರೋಗ್ಯದಲ್ಲಿ ಏರುಪೇರಾಗಿದೆ. ವಿದ್ಯಾರ್ಥಿಗಳಲ್ಲಿ ವಾಂತಿ,ಭೇದಿ ಕಾಣಿಸಲು ಕಾರಣ ಏನು ಎಂಬುವುದು ಇನ್ನೂ ಸ್ಪಷ್ಟವಾಗಿಲ್ಲ. ಉಪವಿಭಾಗಾಧಿಕಾರಿ ಸಪ್ತಶ್ರೀ ಹಾಸ್ಟೆಲ್ ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಲೋಕಾಯುಕ್ತ ವಿಚಾರಣೆಗೆ ಹಾಜರಾದ ಮಾಜಿ ಆಯುಕ್ತ ಡಿಬಿ ನಟೇಶ್

• **ಉದಯವಾಹಿನಿ, ಮೈಸೂರು**

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಮಾಜಿ ಆಯುಕ್ತ ಡಿಬಿ ನಟೇಶ್ ಅವರು ಇಂದು ಮೈಸೂರಿನಲ್ಲಿರುವ ಲೋಕಾಯುಕ್ತ ಕಚೇರಿಗೆ ತೆರಳಿ ಲೋಕಾಯುಕ್ತ ವಿಚಾರಣೆಗೆ ಹಾಜರಾದರು. ಲೋಕಾಯುಕ್ತ ಎಸ್ ಪಿ ಟಿಜೆ ಉದೇಶ್‌ರವರು ವಿಚಾರಣೆಗೆ ಹಾಜರಾಗುವಂತೆ ನಟೇಶ್ ಗೆ ನೋಟಿಸ್ ಜಾರಿ ಮಾಡಿದ್ದರು.

ಹಾಗಾಗಿ ನಟೇಶ್ ಲೋಕಾಯುಕ್ತ ವಿಚಾರಣೆಗೆ ಹಾಜರಾಗಿದ್ದಾರೆ. ಹೌದು ಮೈಸೂರಿನಲ್ಲಿ ವಿಚಾರಣೆಗೆ ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಿತ್ತು ಲೋಕಾಯುಕ್ತ ನೋಟಿಸ್ ನೀಡಿದರಿಂದ ವಿಚಾರಣೆಗೆ ಹಾಜರಾಗಿದ್ದಾರೆ. ಮುಡಾದಲ್ಲಿ ಸಿಎಂ ಪತ್ನಿ ಪಾರ್ವತಿಗೆ ಬದರಿ ನಿವೇಶನ ನೀಡಿರುವ ಆರೋಪ ಕೇಳಿ ಬಂದ ಹಿನ್ನಲೆಯಲ್ಲಿ ನಟೇಶ್ ವಿಚಾರಣೆಗಾಗಿ ಲೋಕಾಯುಕ್ತ ಮುಖ್ಯ ಕಾರ್ಯದರ್ಶಿಗಳ ಅನುಮತಿಯನ್ನು ಕೋರಿದ್ದರು. ಕಳೆದ ಎರಡು ದಿನಗಳ ಹಿಂದೆ ವಿಚಾರಣೆಗೆ ಮುಖ್ಯ ಕಾರ್ಯದರ್ಶಿ ಅನುಮತಿ ನೀಡಿದ್ದರು. ಈ ಹಿನ್ನಲೆಯಲ್ಲಿ ನಟೇಶ್ ಮಂಗಳವಾರ ಮೈಸೂರಿನಲ್ಲಿ ಲೋಕಾಯುಕ್ತ ಕಚೇರಿಯಲ್ಲಿ ವಿಚಾರಣೆಗೆ ಹಾಜರಾಗಿದ್ದಾರೆ ಎನ್ನಲಾಗಿದೆ. ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ಲೋಕಾಯುಕ್ತ ವಿಚಾರಣೆಗೆ ಹಾಜರಾಗಿದ್ದರು.

### ವಿಷಯುಕ್ತ ಕುಲಾಂತರಿ ಬೆಳೆ ಪ್ರಯೋಗ ನಿಲ್ಲಲಿ: ಹಾಡ್ಯ ರಮೇಶ್‌ರಾಜು

• **ಉದಯವಾಹಿನಿ, ಮಂಡ್ಯ**

ದೇಶದ ದೆಹಲಿ ಸೇರಿದಂತೆ ವಿಶ್ವದ ಅನೇಕ ಕಡೆಗಳಲ್ಲಿ ಪರಿಸರ ಮಾಲಿನ್ಯ ಉಂಟಾಗುತ್ತಿರುವಾಗ ವಿಷಯುಕ್ತ ಆಹಾರ ನೀಡುವ ಜೈವಿಕ ತಂತ್ರಜ್ಞಾನದಿಂದ ಕಂಡುಹಿಡಿಯಲಾದ ಕುಲಾಂತರಿ ಬೆಳೆಗಳನ್ನು ರೈತರ ಮೇಲೆ ಪ್ರಯೋಗ ಮಾಡಲು ಬಹುರಾಷ್ಟ್ರೀಯ ಕಂಪನಿಗಳು ಹುನ್ನಾರ ನಡೆಸುತ್ತಿವೆ ಎಂದು ಭಾರತೀಯ ಕಿಸಾನ್ ಸಂಘದ ದಕ್ಷಿಣ ಪ್ರಾಂತ ಅಧ್ಯಕ್ಷ ಹಾಡ್ಯ ರಮೇಶ್‌ರಾಜು ಆರೋಪಿಸಿದರು.

ಮನುಕುಲವೇ ವಿಷಮುಕ್ತ ಆಹಾರದ ಕಡೆ ವಾಲುತ್ತಿದೆ. ರೈತ ರನ್ನಾಗಲೀ, ಫಲಾನುಭವಿಗಳನ್ನಾಗಲೀ ಸಮಾಲೋಲನೆ ನಡೆಸದೆ 2002ರಲ್ಲಿ ಜೈವಿಕ ತಂತ್ರಜ್ಞಾನದ ಹತ್ತಿ ಬೀಜಗಳನ್ನು ಉಪಯೋಗಿಸಲಾಯಿತು. ಗುಲಾಬಿ ಬೋಲವರ್ಮ ಕೀಟದ ನಿವಾರಣೆ ಮಾಡಲು ಬೆಸಿಲಸ್ ತುರಿನ್ ಜೆನಿಸ್ಸಿಸ್ ಎಂಬ ಬ್ಯಾಕ್ಟೀರಿಯಾವನ್ನು ಬಿ.ಟಿ.ಹತ್ತಿ ಬೀಜಗಳಿಗೆ ಸೇರಿಸಿ ನಂತರ ಹಲವು ವಂಶವಾಹಿನಿಗಳನ್ನು ಹೆಚ್ಚು ವಿಷಕಾರಿಯಾಗಿ ಮಾಡಲಾಯಿತು' ಎಂದು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು. 2005ರಲ್ಲಿ ಬಿಜಿಐ ಮತ್ತು 2009ರಲ್ಲಿ ಬಿಜಿ2 ಎಂಬ ವಿಫಲವಾದ ಹತ್ತಿ ಬೀಜಗಳನ್ನು ರೈತರಿಗೆ ಮಾರಾಟ ಮಾಡಿ ಶೋಷಿಸ ಲಾಯಿತು. ಇದು ರೈತರನ್ನು ಆತ್ಮಹತ್ಯೆಯ ಪ್ರೇರಣೆಗೆ ತಳ್ಳಿತು, ಪ್ರಾಣಿ ಜನ್ಯದಿಂದ ಸಸ್ಯಪ್ರಬೇಧಗಳಿಗೆ ಕಸಿ ಮಾಡಿ ಅದರಿಂದ ಬೀಜಗಳನ್ನು ಸಂಶೋಧಿಸಲಾಗುತ್ತಿದೆ. ಇದು ಪ್ರಕೃತಿಗೆ ವಿರುದ್ಧವಾಗಿದ್ದು, ಇಂತಹ ತಳಿ ಬೀಜಗಳನ್ನು ಸಂಶೋಧಿಸಿರುವ ಅಮೆರಿಕಾ ದೇಶವೇ ತಿರಸ್ಕರಿಸಿದೆ ಎಂದರು.

### ಶ್ರೀಗಂಧದ ತುಂಡು ವಶ

• **ಉದಯವಾಹಿನಿ, ಚನ್ನಪಟ್ಟಣ**

ನಗರದ ತಟ್ಟೆಕೆರೆ ಬಳಿ ಕಾರಿನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಶ್ರೀಗಂಧದ ತುಂಡುಗಳನ್ನು ಸೋಮವಾರ ವಶಪಡಿಸಿಕೊಂಡಿರುವ ಪೊಲೀಸರು, ಕಾರು ಚಾಲಕ ಮಹತಾಬ್ ಖಾನ್ (40) ಎಂಬಾತನನ್ನು ಬಂಧಿಸಿದ್ದಾರೆ. ಪಟ್ಟಣದ ಟಿಪ್ಪುನಗರದ ನಿವಾಸಿಯಾದ ಈತ ಕಲಾನಗರದ ನಿವಾಸಿ ಮುನೀರ್ ಎಂಬುವರ ಮನೆಯಲ್ಲಿ ಶ್ರೀಗಂಧದ ತುಂಡುಗಳನ್ನು ಖರೀದಿ ಮಾಡಿ, ಕಾರಿನಲ್ಲಿ ಸಾಗಿಸುವಾಗ ಪೊಲೀಸರು ದಾಳಿ ನಡೆಸಿದ್ದಾರೆ. ವೇಗವಾಗಿ ಕಾರು ಚಾಲನೆ ಮಾಡಿ ತಪ್ಪಿಸಿಕೊಳ್ಳಲು ಯತ್ನಿಸಿದ ಚಾಲಕನ ನಡೆಯಿಂದ ಅನುಮಾನಗೊಂಡ ಪೊಲೀಸರು, ಕಾರನ್ನು ಹಿಂಬಾಲಿಸಿ ಆರೋಪಿಯನ್ನು ಬಂಧಿಸಿದ್ದಾರೆ.ಕಾರು ಪರಿಶೀಲನೆ ಮಾಡಿದಾಗ ಪ್ಲಾಸ್ಟಿಕ್ ಚೀಲದಲ್ಲಿ 10 ಗಂಧದ ತುಂಡುಗಳು ಪತ್ತೆಯಾಗಿವೆ. ವಶಪಡಿಸಿಕೊಂಡಿರುವ ತುಂಡುಗಳು 15 ಕೆ.ಜಿ ತೂಕವಿದ್ದು, ಇದರ ಬೆಲೆ 1.20 ಲಕ್ಷ ಎಂದು ಅಂದಾಜಿಸಲಾಗಿದೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಶ್ರೀಗಂಧದ ತುಂಡುಗಳನ್ನು ಮಾರಾಟ ಮಾಡಿದ ಮತ್ತೊಬ್ಬ ಆರೋಪಿ ಮುನೀರ್ ತಲೆ ಮರೆಸಿಕೊಂಡಿದ್ದು, ಆತನ ಬಂಧನಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೂರ್ವ ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಪಿ. ಆಕಾಶ್, ಸಿಬ್ಬಂದಿ ಹಿರೇಮನಿ, ಕಾಶಿನಾಥ್, ಮಂಜು ನಾಥ ಸುಣ್ಣಗಾರ, ಕಾರ್ತಿಕ್ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

### ಮಹಾರಾಷ್ಟ್ರ ಸರ್ಕಾರದ ವಿರುದ್ಧ ಮಾನನಷ್ಟ ಮೊಕದ್ದಮೆಗೆ ಸಿದ್ಧತೆ

• **ಉದಯವಾಹಿನಿ, ತುಮಕೂರು**


ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳು ಜಾರಿಯಾಗಿಲ್ಲ' ಎಂದು ಸುಳ್ಳು ಜಾಹೀರಾತು ನೀಡಿರುವ ಮಹಾರಾಷ್ಟ್ರ ಸರ್ಕಾರದ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಮಂಗಳವಾರ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, 'ಸುಳ್ಳು ಜಾಹೀರಾತು ನೀಡಿದ ಮಹಾರಾಷ್ಟ್ರ ಸರ್ಕಾರದ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಈಗಾಗಲೇ ಸೂಚನೆ ನೀಡಿದ್ದಾರೆ. ಎಲ್ಲಾ ರೀತಿಯ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುವಂತೆ ತಿಳಿಸಿದ್ದಾರೆ. ಮತ್ತೊಮ್ಮೆ ಜಾಹೀರಾತು ಪರಿಶೀಲಿಸಿ ಮೊಕದ್ದಮೆ ದಾಖಲಿಸಲಾಗುವುದು' ಎಂದು ಹೇಳಿದರು.

ಕರ್ನಾಟಕದಲ್ಲಿ ಅಭಿವೃದ್ಧಿ ವಿಚಾರಗಳನ್ನು ಬದಿಗೊತ್ತಿ ಗ್ಯಾರಂಟಿ ಘೋಷಣೆ ಮಾಡಲಾಗಿತ್ತು. ಆದರೆ ಅನುಷ್ಠಾನ ಮಾಡಿಲ್ಲ. ಕಾಂಗ್ರೆಸ್ ಸುಳ್ಳು ಹೇಳುತ್ತಿದೆ' ಎಂಬ ರೀತಿಯಲ್ಲಿ ಜಾಹೀರಾತು ನೀಡಿ ರಾಜ್ಯ ಸರ್ಕಾರವನ್ನು ಅವಮಾನ ಮಾಡಲಾಗಿದೆ. ಹಾಗಾಗಿ ಕಾನೂನು ಕ್ರಮ ಅನಿವಾರ್ಯವಾಗಿದೆ ಎಂದರು

ಅಂತರಾಳದಿಂದ..
EDITORIAL

# ಮಣಿಪುರ: ಶಾಂತಿ ಸ್ಥಾಪನೆಗೆ ಬೇಕಿದೆ ವಿಶ್ವಾಸ ಮೂಡಿಸುವ ಕೆಲಸ


ಉದಯವಾಹಿನಿ ಚಿತ್ರ

ಮಣಿಪುರ ಮತ್ತೆ ಪ್ರಕ್ಷುಬ್ಧಗೊಂಡಿದೆ. ಈ ಬಾರಿಯ ಸಂಘರ್ಷವು ಕುಕಿ, ಮೈತೇಯಿ ಸಮುದಾಯಗಳಿಗೆ ಸೀಮಿತವಾಗಿ ಉಳಿದಿಲ್ಲ. ಶೋಭೆಯು ಅಧಿಕಾರದ ಕೇಂದ್ರಗಳನ್ನು ತಾಕಿದೆ. ಉದ್ರಿಕ್ತ ಜನರ ಗುಂಪುಗಳು ಮಣಿಪುರದ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್ ಅವರ ಪೂರ್ವಿಕರ ಮನೆ ಯ ಮೇಲೆ, ಕೆಲವು ಸಚಿವರು ಹಾಗೂ ಶಾಸಕರಿಗೆ ಸೇರಿದ ಮನೆಗಳ ಮೇಲೆ ದಾಳಿ ನಡೆಸಿವೆ. ರಾಜ್ಯದಲ್ಲಿ ಹಿಂಸಾಚಾರದ ಘಟನೆಗಳು ಈಗ ಮತ್ತೆ ಮತ್ತೆ ನಡೆಯುತ್ತಿವೆ. ಮೈತೇಯಿ ಹಾಗೂ ಕುಕಿ ಸಮುದಾಯಗಳ ನಡುವೆ ದಾಳಿ, ಪ್ರತಿದಾಳಿಗಳು ನಡೆಯುತ್ತಿವೆ. ಹಿಂಸಾಚಾರವು ಅಲ್ಲಿ ದಿನ ಕಳೆದಂತೆ ತೀವ್ರಗೊಳ್ಳುತ್ತಿದೆ. ಈ ತಿಂಗಳ ಆರಂಭದಲ್ಲಿ ಮೈತೇಯಿ ಸಮುದಾಯದ ಶಸ್ತ್ರಸಜ್ಜಿತ ಗುಂಪೊಂದು ಕುಕಿ ಸಮುದಾಯದ ಗ್ರಾಮದ ಮೇಲೆ ದಾಳಿ ನಡೆಸಿದ ನಂತರ ಮತ್ತೆ ಹಿಂಸಾಚಾರ ಆರಂಭವಾಯಿತು. ಆ ಬಳಿಕ ಭದ್ರತಾ ಶಿಬಿರವೊಂದರ ಮೇಲೆ ಕುಕಿ ಸಮುದಾಯದವರು ದಾಳಿ ನಡೆಸಿದರು, ನಂತರದಲ್ಲಿ ಕುಕಿ ಸಮುದಾಯದವರು ಮೈತೇಯಿ ಸಮುದಾಯದ ಮಹಿಳೆಯರು ಹಾಗೂ ಮಕ್ಕಳು ಸೇರಿ ಕೆಲವರನ್ನು ಅಪಹರಿಸಿ ಹತ್ಯೆ ಮಾಡಿದರು.

> **ಮೈತೇಯಿ ಹಾಗೂ ಕುಕಿ ಸಮುದಾಯಗಳಿಗೆ ಸೇರಿದ ಸ್ಥಳಗಳ ನಡುವಿನ ಬಫರ್ ಪ್ರದೇಶದಲ್ಲಿ ಗುಂಡಿನ ಚಕಮಕಿಗಳು ನಡೆದಿವೆ, ಆಧುನಿಕ ಶಸ್ತ್ರಾಸ್ತ್ರಗಳನ್ನು ರಾಜ್ಯದಲ್ಲಿ ಬಳಕೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಹಿಂಸಾಚಾರ ವ್ಯಾಪಕವಾಗುತ್ತಿರುವುದು ಹಾಗೂ ಪರಿಸ್ಥಿತಿ ದಿನ ಕಳೆದಂತೆಲ್ಲ ವಿಷಮ ಗೊಳ್ಳುತ್ತಿರುವುದು ರಾಜಕೀಯ ಪರಿಣಾಮಗಳನ್ನು ಉಂಟುಮಾಡಿದೆ.**

ಏಳು ಮಂದಿ ಶಾಸಕರ ಬಲ ಹೊಂದಿರುವ ನ್ಯಾಷನಲ್ ಪೀಪಲ್ಸ್ ಪಾರ್ಟಿ (ಎನ್‌ಪಿಪಿ) ಬಿರೇನ್ ಸಿಂಗ್ ನೇತೃತ್ವದ ಸರ್ಕಾರಕ್ಕೆ ನೀಡಿದ್ದ ಬೆಂಬಲವನ್ನು ಹಿಂಪಡೆದಿದೆ. ಬಿಕ್ಕಟ್ಟನ್ನು ಶಮನ ಗೊಳಿಸುವಲ್ಲಿ ಸರ್ಕಾರವು ಸಂಪೂರ್ಣವಾಗಿ ವಿಫಲಗೊಂಡಿದೆ ಎಂದು ಎನ್‌ಪಿಪಿ ಆರೋಪಿಸಿದೆ. ಬೆಂಬಲವನ್ನು ಹಿಂಪಡೆದಿರುವುದು ಸರ್ಕಾರದ ಪತನಕ್ಕೆ ಕಾರಣವಾಗುವುದಿಲ್ಲ. ಏಕೆಂದರೆ ಬಿರೇನ್ ಸಿಂಗ್ ಅವರಿಗೆ ಸದನದಲ್ಲಿ ಬಹುಮತ ಇದೆ. ಹೀಗಿದ್ದರೂ ಸರ್ಕಾರದ ಭಾಗವೇ ಆಗಿದ್ದ ಪಕ್ಷವೊಂದು ವಿಶ್ವಾಸ ಕಳೆದುಕೊಂಡಿರುವುದನ್ನು ಅದು ತೋರಿಸುತ್ತದೆ. ಬಿಜೆಪಿಯ ಒಳಗೆ ಕೂಡ ಬಿರೇನ್ ಸಿಂಗ್ ಅವರಿಗೆ ವಿರೋಧ ಇದೆ. ಕುಕಿ ಸಮುದಾಯದ ಕಡೆಯವರು ಸೇರಿದಂತೆ ಕೆಲವು ಶಾಸಕರು ಸರ್ಕಾರದಿಂದ ಅಂತರ ಕಾಯ್ದುಕೊಳ್ಳಲು ಆರಂಭಿಸಿದ್ದಾರೆ. ಮಣಿಪುರ ರಾಜ್ಯದಲ್ಲಿ ಕಳೆದ ವರ್ಷ ಹಿಂಸಾಚಾರ ಶುರು ವಾಗಿದ್ದಾಗಲೇ, ಬಿರೇನ್ ಸಿಂಗ್ ಕೂಡ ಈ ಸಮಸ್ಯೆಯ ಒಂದು ಭಾಗ ಎಂಬುದು ಸ್ಪಷ್ಟವಾಗಿತ್ತು. ಆದರೆ ಕೇಂದ್ರ ಸರ್ಕಾರವು ಬಿರೇನ್ ಸಿಂಗ್ ಅವರನ್ನು ರಕ್ಷಿಸುತ್ತ ಬಂದಿದೆ. ಮಣಿಪುರದ ಪರಿಸ್ಥಿತಿಯ ವಿಚಾರವಾಗಿ ಕೇಂದ್ರ ಸರ್ಕಾರವು ಆರಂಭದಿಂದಲೂ ತಾತ್ಸಾರ ಧೋರಣೆಯನ್ನು ಪ್ರದರ್ಶಿಸಿದೆ, ಸಿನಿಕವಾಗಿ ವರ್ತಿಸಿದೆ ಕೂಡ. ಈಗ ಕೇಂದ್ರವು ರಾಜ್ಯದ ಕೆಲವು ಭಾಗಗಳಲ್ಲಿ ಕರಾಳವಾದ 'ಸಶಸ್ತ್ರ ಪಡೆಗಳ ವಿಶೇಷ ಅಧಿಕಾರ ಕಾಯ್ದೆ'ಯನ್ನು (ಎಎಫ್‌ಎಸ್‌ಪಿಎ) ಜಾರಿಗೆ ತಂದಿದೆ. ಮಣಿಪುರದಲ್ಲಿ ಎಎಫ್‌ಎಸ್‌ಪಿಎ ಬಹಳ ಕುಖ್ಯಾತಿಯನ್ನು ಪಡೆದಿದೆ. ಅದನ್ನು ಅಲ್ಲಿ ಮತ್ತೆ ಹೇರಿರುವುದರಿಂದ ಜನರಲ್ಲಿನ ಅವಿಶ್ವಾಸವು ಇನ್ನಷ್ಟು ಹೆಚ್ಚಾಗುವ ಅಪಾಯವೂ ಇದೆ. ರಾಜ್ಯದಲ್ಲಿ ಶಾಂತಿಯನ್ನು ಮರುಸ್ಥಾಪಿಸಲು ಕ್ರಮ ಕೈಗೊಳ್ಳುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಆದರೆ ಆ ರಾಜ್ಯದಲ್ಲಿನ ಸಮಸ್ಯೆಯನ್ನು ಅಧಿಕಾರಿಗಳು ಅಥವಾ ಸಶಸ್ತ್ರ ಪಡೆಗಳು ಬಗೆಹರಿಸಲು ಆಗುವುದಿಲ್ಲ. ಕರಾಳವಾದ ಕಾನೂನುಗಳ ಮೂಲಕ, ಕರ್ಫ್ಯೂ ಮೂಲಕ ಅಥವಾ ಇಂಟರ್‌ನೆಟ್ ಸೇವೆಗಳನ್ನು ಸ್ಥಗಿತಗೊಳಿಸುವ ಮೂಲಕವೂ ಅಲ್ಲಿನ ಸಮಸ್ಯೆಯನ್ನು ಬಗೆಹರಿಸಲು ಆಗುವುದಿಲ್ಲ. ಅಲ್ಲಿನ ಸಮಸ್ಯೆಯನ್ನು ಪರಿಹರಿಸಲು ರಾಜಕೀಯ ಉಪಕ್ರಮವೊಂದರ ಅಗತ್ಯವಿದೆ, ಅದು ಅಲ್ಲಿ ಇನ್ನೂ ಕಾಣುತ್ತಿಲ್ಲ. ಮೈತೇಯಿ ಹಾಗೂ ಕುಕಿ ಸಮುದಾಯಗಳಿಗೆ ಸೇರಿದ ಶಾಸಕರ ಜಂಟಿ ಸಭೆಯು ಅಲ್ಲಿ ಇನ್ನೂ ಆಗಿಲ್ಲ. ಸಂಘರ್ಷ ಆರಂಭವಾದ ನಂತರ ಅಮಿತ್ ಶಾ ಅವರು ಮಣಿಪುರಕ್ಕೆ ಎರಡು ಬಾರಿ ಮಾತ್ರ ಭೇಟಿ ನೀಡಿದ್ದಾರೆ, ಅದರಲ್ಲಿ ಒಂದು ಚುನಾವಣಾ ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದ ಭೇಟಿ. ಪ್ರಧಾನಿ ನರೇಂದ್ರ ಮೋದಿ ಅವರು ಮಣಿಪುರಕ್ಕೆ ಭೇಟಿ ನೀಡಿಲ್ಲ. ಮೈತೇಯಿ ಮತ್ತು ಕುಕಿ ಸಮುದಾಯಗಳ ನಡುವೆ ಮಾತುಕತೆಗೆ ಅವಕಾಶ ಕಲ್ಪಿಸಿ, ವಿಶ್ವಾಸ ಮೂಡಿಸುವ ಕೆಲಸವನ್ನು ಸರ್ಕಾರ ಮಾಡದೇ ಇದ್ದರೆ, ಮಣಿಪುರದಲ್ಲಿ ಶಾಂತಿಯು ಮರೀಚಿಕೆಯಾಗಿಯೇ ಉಳಿಯಬಹುದು.



# ರಾಮಾಯಣ

## ಸಗರಚಕ್ರವರ್ತಿಯು ಸ್ವರ್ಗಸ್ಥನಾದದ್ದು

• ಹಿಂದಿನ ಸಂಚಿಕೆಯಿಂದ 26ನೆಯ ಅಧ್ಯಾಯ

ಈಶಾನ್ಯ ದಿಕ್ಕನ್ನು ಅಗೆದು ಪಾತಾಳವನ್ನು ಪ್ರವೇಶಿಸಿದರು. ಅಲ್ಲಿ ಪರಮ ಪುರುಷನ ಅಂಶಾವತಾರನಾದ ಕಪಿಲ ಮಹಾಮುನಿಯನ್ನು ಕಂಡು ಆತನ ಸಮೀಪದಲ್ಲಿ ತಮ್ಮ ಕುದುರೆಯು ಸಂಚರಿಸುತ್ತಿದ್ದುದನ್ನು ಕಂಡರು. ಆತನೇ ಅಶ್ವವನ್ನು ಕದ್ದವನೆಂದೂ ಕದಿಯದವನ ಹಾಗೆ ತಪಸ್ಸನ್ನು ಮಾಡುವವನ ಹಾಗಿದ್ದಾನೆಂತಲೂ ನಿಶ್ಚಯಿಸಿ ನೇಗಿಲು ಮರಗಳು ಕಲ್ಲುಗಳು ಮೊದಲಾದುವನ್ನು ಎತ್ತಿ ಹಿಡಿದುಕೊಂಡು ಅಟ್ಟಿಸಿಕೊಂಡು ಹೋಗಿ ''ಎಲೈ ಅಜ್ಞಾನಿಯೆ, ನಮ್ಮ ಯಜ್ಞಾರ್ಥವಾದ ಕುದುರೆಯನ್ನು ಕದ್ದುಕೊಂಡು ಬರಬಹುದೆ ನಾವು ಸಗರನ ಮಕ್ಕಳೆಂದು ಅರಿಯೆಯಾ ಎಂದು ಆರ್ಭಟಿಸುತ್ತಿದ್ದರು. ಅವರ ಮಾತನ್ನು ಕೇಳಿ ಕಪಿಲಮಹಾಮುಸನಿಯು ಕೋಪದಿಂದ ಹೂಂಕಾರವನ್ನು ಮಾಡಿದನು. ಆ ಹೂಂಕಾರದಿಂದ ಅಗ್ನಿಯು ಹುಟ್ಟಲು ಸಗರಚಕ್ರವರ್ತಿಯ ಅರುವತ್ತುಸಾವಿರ ಮಕ್ಕಳೂ ಉರಿದು ಭಸ್ಮರಾಶಿಯಾದರು ಇತ್ತ ಯಾಗಶಾಲೆಯಲ್ಲಿ ಸಗರಚಕ್ರವರ್ತಿಯು ಅದ್ಭುತಗಳಾದ ದುರ್ನಿಮಿತ್ತ ಗಳನ್ನು ಕಂಡು ಆಶ್ಚರ್ಯಪಟ್ಟು ಧ್ಯಾನಾರೂಢನಾಗಿದ್ದನು. ಆಮೇಲೆ ಸಗರಚಕ್ರವರ್ತಿಯು, ಕುದುರೆಯನ್ನು ಹುಡುಕುವುದಕ್ಕೆ ಹೋದ ತನ್ನ ಮಕ್ಕಳು ಬಹುಕಾಲವಾದರೂ ಬರದಿರಲು ಮನಸ್ಸಿನಲ್ಲಿ ವ್ಯಥೆಪಟ್ಟು ತನ್ನ ಮೊಮ್ಮಗನಾದ ಅಂಶುಮಂತನನ್ನು ಕರೆದು ಅಂಶುಮಂತ, ನೀನು ಮಹಾಪರಾಕ್ರಮಿಯೂ ಸಕಲವಿದ್ಯಾಪ್ರವೀಣನೂ ಸಾಮರ್ಥ್ಯದಲ್ಲಿ ಪೂರ್ವದ ರಾಯರಿಗೆ ಸಮಾನನೂ ಆಗಿದ್ದೀಯೆ. ನಿನ್ನ ತಂದೆಯ ಸೋದರರು ಕುದುರೆಯನ್ನು ಹುಡುಕುವುದಕ್ಕೆ ಹೋಗಿ ಬಹುಕಾಲವಾದರೂ ತಿರುಗಿ ಬರಲಿಲ್ಲ. ಆ ಕುದುರೆಯನ್ನು ಯಾರು ತೆಗೆದು ಕೊ೦ಡು ಹೋದರೋ ತಿಳಿಯಲಿಲ್ಲ. ನೀನು ಆ ಕುದುರೆಯನ್ನು ಹುಡುಕಿಕೊಂಡು ಹೋಗಿ ನಿನ್ನ ಚಿಕ್ಕತಂದೆಗಳು ಏಕೆ ಬರಲಿಲ್ಲವೆಂಬ ವೃತ್ತಾಂಶವನ್ನು ತಿಳಿದು ಬಾ. ದಾರಿಯಲ್ಲಿ ಯಾರಾದರೂ ನಿನಗೆ ಎದುರಾದರೆ ಅವರನ್ನು ನಿಗ್ರಹಿಸುವುದಕ್ಕಾಗಿ ಬಿಲ್ಲು ಬಾಣಗಳನ್ನು ತೆಗೆದುಕೊಂಡು ಹೋಗು. ಹೋಗುವ ಸ್ಥಳೆಗಳಲ್ಲಿರುವ ಪೂಜ್ಯರಾದವರಿಗೆ ಅಭಿವಂದಿಸು. ನಿನಗೆ ಎದುರಾದವರನ್ನು ಯುದ್ಧದಲ್ಲಿ ಸಂಹರಿಸು ಅಶ್ವವೆನ್ನು ಹುಡುಕಿ ಕೆಲಸಮಾಡಿ ಕೊಂಡು ನನ್ನ ಯಾಗವು ನೆರವೇರುವಹಾಗೆ ಯತ್ನವನ್ನು ಮಾಡು ಎಂದು ಹೇಳಿದನು. ಅಂಶುಮಂತನು ಮಹಾಪ್ರಸಾದವೆಂದು ತನ್ನ ಪಿತಾಮಹನ ವಾಕ್ಯವನ್ನು ಶಿರಸಾವಹಿಸಿ ಬಿಲ್ಲು ಬಾಣ ಖಡ್ಗಗಳನ್ನು ತೆಗೆದುಕೊಂಡು ತನ್ನ ಚಿಕ್ಕಪ್ಪಂದಿರು ಭೂಮಿಯನ್ನು ಅಗೆದಾ ಪಾತಾಳಕ್ಕೆ ಪ್ರವೇಶಿಸಿದ ದಾರಿಹಿಡಿದು ಆ ಲೋಕವನ್ನು ಪ್ರವೇಶಿಸಿದನು ಅಲ್ಲಿ ದೈತ್ಯ ದಾನವ ಪಿಶಾಚ ನಾಗರು ಜಯ ಜಯ ಎಂದು ಕೊಂಡಾಡುತ್ತಿರಲು ಅವರ ಸನ್ಮಾನಗಳನ್ನು ಪಡೆದು, ಪಡುವಣ ದಿಕ್ಕಿನಲ್ಲಿದ್ದ ದಿಗ್ಗಜವನ್ನು ಕಂಡು ಪ್ರದಕ್ಷಿಣ ನಮಸ್ಕಾರಗಳನ್ನು ಮಾಡಿ ತನ್ನ ಪಿತಾಮಹನ ಅಶ ಶ್ರ ಮೇಧಾಂಗಮದ ಕುದುರೆಯನ್ನು ಯಾರು ಹಿಡಿದುಕೊಂಡು ಹೋದರೆಂದು ಕೇಳಿದನು.

ಮುಂದುವರಿಯುವುದು...

# ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಅಪೂರ್ಣ ಕಾಮಗಾರಿಗಳ ವರದಿ ಸಿದ್ಧಪಡಿಸಿ

## ಅರಕೆರೆ, ಹುಳಿಮಾವು ಕೆರೆಗೆ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರ ಪೂರ್ಣಗೊಳಿಸಿ ಸರಿಯಾಗಿ ನಿರ್ವಹಣೆ ಮಾಡಲು ಮನವಿ

• ಉದಯವಾಹಿನಿ, ಬೆಂಗಳೂರು

ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಅಪೂರ್ಣ ಕಾಮಗಾರಿಗಳ ವರದಿ ಸಿದ್ಧಪಡಿಸಲು ಮುಖ್ಯ ಆಯುಕ್ತರಾದ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೊಮ್ಮನಹಳ್ಳಿ ವಲಯ ಜಂಟಿ ಆಯುಕ್ತರ ಕಛೇರಿಯಲ್ಲಿ ಮಂಗಳವಾರ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಡಿ ಸಾರ್ವಜನಿಕರ ಅಹವಾಲು ಸ್ವೀಕಾರದ ವೇಳೆ ಮಾತನಾಡಿದ ಅವರು, ವಲಯ ವ್ಯಾಪ್ತಿಯಲ್ಲಿ ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಿರುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕಿದೆ. ಈ ಸಂಬಂಧ ಎಲ್ಲಾ ಅಪೂರ್ಣ ಕಾಮಗಾರಿಗಳನ್ನು ಪಟ್ಟಿ ಮಾಡಿಕೊಂಡು ವರದಿ ಸಿದ್ಧಪಡಿಸಲು ಸೂಚನೆ ನೀಡಲಾಯಿತು.

**ಕೆರೆಗಳ ಪರಿಶೀಲನೆ ನಡೆಸಿ:** ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕೆರೆಗಳಿಗೆ ಭದ್ರತಾ ಸಿಬ್ಬಂದಿಯನ್ನು ನಿಯೋಜನೆ ಮಾಡಿರಬೇಕು. ಈ ಸಂಬಂಧ ಮಾರ್ಷಲ್‌ಗಳ ಗಸ್ತು ತಿರುಗುವ ವಾಹನವು ರಾತ್ರಿ ವೇಳೆ ಎಲ್ಲಾ ಕೆರೆಗಳಿಗೆ ಭೇಟಿ ನೀಡಿ ಭದ್ರತಾ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆಯೇ ಎಂಬುದನ್ನು ಪರಿಶೀಲನೆ ನಡೆಸಿ ವರದಿ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗಸ್ತು ತಿರುಗುವ ವೇಳೆ ಕಸ ಬಿಸಾಡುವ ಹಾಗೂ ಬೀದಿ ದೀಪಗಳ ಅಳವಡಿಕೆಯ ಮೇಲೆಯೂ ನಿಗಾವಹಿಸಲು ಮಾರ್ಷಲ್ ಮೇಲ್ವಿಚಾರಕರಿಗೆ ಸೂಚನೆ ನೀಡಿದರು.

**ಪ್ರಮುಖ ರಸ್ತೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿ:** ಬೊಮ್ಮನಹಳ್ಳಿ ವಲಯದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ರಸ್ತೆ ಮೇಲ್ಮೈ ಪದರ ಹಾಳಾಗಿರುವ ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಪರಿಶೀಲನೆ ನಡೆಸಿ ಪಟ್ಟಿ ಮಾಡಿಕೊಂಡು, ಅವಶ್ಯಕ ಡಾಂಬರನ್ನು ತರಿಸಿಕೊಂಡು ಕೂಡಲೆ ರಸ ಮೇಲ್ಮೈ ಹಾಳಾಗಿರುವ ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

**ಆಟದ ಮೈದಾನ, ಕೆರೆ, ಉದ್ಯಾನವನಗಳ ವರದಿ ಸಿದ್ದಪಡಿಸಿ:** ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಬರುವ ಆಟದ ಮೈದಾನಗಳು, ಕೆರೆಗಳು ಹಾಗೂ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡಬೇಕು. ಈ ಸಂಬಂಧ ಎಲ್ಲಾ ಕಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ಸಿದ್ಧಪಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

**ಬೇಗೂರು ಮುಖ್ಯ ರಸ್ತೆ ಅಗಲೀಕರಣಕ್ಕೆ ಕ್ರಮವಹಿಸಿ:** ಬೇ ಗೂರು ರಸ್ತೆ ಅಗಲೀಕರಕ್ಕೆ ಸಂಬಂಧಿಸಿದಂತೆ ಕೇಳಿದ ಪ್ರ ಶ್ನೆಗೆ, ಬೇಗೂರು ರಸ್ತೆ ಅಗಲೀಕರಣದ ಕುರಿತಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅಗಲೀಕರಣದ ಜಾಗದಲ್ಲಿ ಬರುವ ಆಸ್ತಿ ಮಾಲೀಕರ ಜೊತೆ ಸಭೆ ನಡೆಸಿ ಟಿಡಿಆರ್ ನೀಡುವ ಸಲುವಾಗಿ ಸರಿಯಾದ ಮಾಹಿತಿ ನೀಡಿ ಅಗತ್ಯ ಕ್ರಮ ಕೈಗೊಳ್ಳಲು ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು.

**ತ್ಯಾಜ್ಯ ಸಂಸ್ಕರಣ ಘಟಕ ನಿರ್ಮಾಣಕ್ಕೆ ಜಾಗ ಹಸ್ತಾಂತರ:** ಮಡಿವಾಳ ಕೆರೆ ಭಾಗದಲ್ಲಿ ಪಾಲಿಕೆಯ 3 ಎಕರೆ ಜಾಗವಿದ್ದು, ಆ ಸ್ಥಳದಲ್ಲಿ 45 ಎಂ.ಎಲ್.ಡಿ ತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ ಮಾಡಲು ಸ್ಥಳಾವಕಾಶ ಕಲ್ಪಿಸಿಕೊಡಲು ಜಲಮಂಡಳಿ ಅಧಿಕಾರಿಗಳು ಮನವಿ ಮಾಡಿದರು. ಅದಕ್ಕೆ, 3 ಎಕರೆ ಪ್ರದೇಶ ಹಸ್ತಾಂತರ ಮಾಡುವ ಸಲುವಾಗಿ ಪ್ರಸ್ತಾವನೆ ಸಲ್ಲಿಸಲು ಸೂಚನೆ ನೀಡಿದರು.

**ಬಂಡೆಪಾಳ್ಯದಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿ:** ಹೊಂಗಸಂದ್ರ, ಬಂಡೆಪಾಳ್ಯದಲ್ಲಿ ಸುಮಾರು 9 ಎಕರೆ ಪಾಲಿಕೆ ಜಾಗವನ್ನು ಒತ್ತುವರಿ ಮಾಡಿಕೊಂಡಿದ್ದು, ಅ ದನ್ನು ತೆರವುಗೊಳಿಸಲು ಕೇಳಿದ ಪ್ರಶ್ನೆಗೆ, ಈ ಸ್ಥಳಲ್ಲಿ ಎಷ್ಟು ಮಂದಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿದೆ ಎಂಬುದನ್ನು ಪರಿಶೀಲನೆ ನಡೆಸಿ, ಅದನ್ನು ಹೊರತುಪಡಿಸಿ ಉಳಿದ ಜಾಗದಲ್ಲಿ ಒತ್ತುವರಿ ಮಾಡಿಕೊಂಡಿರುವುದನ್ನು ಸ್ಥಳ ಪರಿಶೀಲಿಸಿ ಗುರುತಿಸಿ ಅದನ್ನು ತೆರವುಗೊಳಿಸಿ ಫೆನ್ಸಿಂಗ್ ಮಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಜಂಟಿ ಆಯುಕ್ತರಿಗೆ ಸೂಚನೆ ನೀಡಲಾಯಿತು.

**ಆಯುಕ್ತರ ನಡೆ ವಲಯದ ಕಡೆ**

### 50 ಕೋಟಿ ರೂ. ಫೆನ್ಸಿಂಗ್‌ಗಾಗಿ

**ನಗರದ ಎಲ್ಲಾ ಪಾಲಿಕೆ ಜಾಗಗಳಿಗೆ ಫೆನ್ಸಿಂಗ್ ಅಳವಡಿಸುವುದಕ್ಕಾಗಿ 50 ಕೋಟಿ ರೂ. ಅನುದಾನ ಮೀಸಲಿಡಲಾಗಿದ್ದು, ಆಯಾ ವಲಯ ವ್ಯಾಪ್ತಿಯಲ್ಲಿ ಫೆನ್ಸಿಂಗ್ ಅಳವಡಿಸುವ ಜಾಗದ ಮಾಹಿತಿ ಪಟ್ಟಿ ಮಾಡಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿದರೆ ಕೂಡಲೆ ಅಗತ್ಯವಿರುವ ಹಣ ಬಿಡುಗಡೆ ಮಾಡಲಾಗುವುದೆಂದು ತಿಳಿಸಿದರು.**

**80ಕ್ಕೂ ಹೆಚ್ಚು ದೂರುಗಳು ಸ್ವೀಕಾರ:** ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಮಂಗಳವಾರ ನಡೆದ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಲ್ಲಿ 80ಕ್ಕೂ ಹೆಚ್ಚು ದೂರಗಳನ್ನು ಸ್ವೀಕರಿಸಿ, ಶೀಘ್ರ ಬಗೆಹರಿಯುವ ಸಮಸ್ಯೆಗಳನ್ನು ಕೂಡಲೆ ಬಗೆಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ನಾಗರೀಕರಿಂದ ಬಂದ ಪ್ರಮುಖ ಅಹವಾಲುಗಳ ವಿವರ:**

1. ಹೆಚ್.ಎಸ್.ಆರ್ ಬಡಾವಣೆಯ 6ನೇ, 7ನೇ ಸೆಕ್ಟರ್‌ನಲ್ಲಿ ಮಳೆಗಾಲದಲ್ಲಿ ನೀರು ನಿಂತು ಜಲಾವೃತವಾಗುತ್ತಿದ್ದು, ರಾಜಕಾಲುವೆಗಳಲ್ಲಿ ಹೂಳೆತ್ತಿ ಸರಾಗವಾಗಿ ನೀರು ಹರಿದು ಹೋಗುವಂತೆ ಮಾಡಿ.
2. ಅರಕೆರೆ ವಾರ್ಡ್‌ನಲ್ಲಿ ರಸ್ತೆಗಳು ಕಿತ್ತು ಹೋಗಿದ್ದು, ಸರಿಪಡಿಸಿಕೊಡಿ.
3. ಬೊಮ್ಮನಹಳ್ಳಿ ವ್ಯಾಪ್ತಿಯಲ್ಲಿ ಕ್ರೀಡಾಂಗಣಕ್ಕೆ ಅನುದಾನ ಇದೆ ಆದರೆ ಬಳಕೆಯಾಗುತ್ತಿಲ್ಲ: ಹೇಗೆ ಪೂರ್ಣಗೊಳಿಸಬೇಕೆಂದು ವರದಿ ಕೊಡಿ, ರಿವೈಸ್ಡ್ ಎಸ್ಟಿಮೇಟ್ ಸಿದ್ಧಪಡಿಸಿಕೊಂಡು ಅನುದಾನ ಪಡೆದು ಕೊಂಡು ಕೆಲಸ ಪ್ರಾರಂಭಿಸಿ
4. ಅರಕೆರೆ, ಹುಳಿಮಾವು ಕೆರೆಗೆ ಕಾಮಗಾರಿ ಪ್ರಗತಿಯಲ್ಲಿದ್ದು, ಅದನ್ನು ಶೀಘ್ರ ಪೂರ್ಣಗೊಳಿಸಿ ಸರಿಯಾಗಿ ನಿರ್ವಹಣೆ ಮಾಡಲು ಮನವಿ.
5. ಬೀದಿ ದೀಪಗಳ ನಿರ್ವಹಣೆ ಮಾಡಲು ಮನವಿ.
6. ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಿ
7. ಕೆರೆ, ಉದ್ಯಾನವನಗಳ ನಿರ್ವಹಣೆ ಸರಿಯಾಗಿ ಮಾಡಲು ಮನವಿ.
8. ರಾಜಕಾಲುವೆಯಲ್ಲಿ ಸ್ಯಾನಿಟರಿ ನೀರು ಬರುತ್ತಿದ್ದು, ಅದನ್ನು ನಿರ್ವಹಣೆ ಮಾಡಲು ಹಾಗೂ ರಾಜಕಾಲುವೆಗೆ ಕಸ ಬಿಸಾಡದಂತೆ ಫೆನ್ಸಿಂಗ್ ಅಳವಡಿಸಿ
9. ಬೇಗೂರು ರಸ್ತೆ ಅಗಲೀಕರಣ ಮಾಡಲು ಮನವಿ.
10. ಅನಧಿಕೃತ ಕಟ್ಟಡ ನಿರ್ಮಾಣ ಮಾಡುತ್ತಿದ್ದು, ಅದನ್ನು ತಡೆಯಲು ಮನವಿ.
11. ಮಂಗಮ್ಮನ ಪಾಳ್ಯದ ಮದಿನಾ ನಗರದಲ್ಲಿ ರಸ್ತೆ, ಸೈಡ್ ಡ್ರೈನ್ ದುರಸ್ತಿ ಕಾರ್ಯ ಮಾಡಿಕೊಡಲು ಮನವಿ.
12. ರಸ್ತೆ ಬದಿ ಹಾಗೂ ಖಾಲಿ ಜಾಗಗಳಲ್ಲಿ ಸ್ವಚ್ಛತೆ ಕಾಪಾಡಲು ಮನವಿ
13. ಮಂಗಮ್ಮನ ಪಾಳ್ಯ ಪಾದಚಾರಿ ಮಾರ್ಗಗಳಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಸರಿಯಾಗಿ ನಿರ್ವಹಣೆ ಮಾಡಲು ಮನವಿ
14. ಬಂಡೆಪಾಳ್ಯ, ರಾಜಕಾಲುವೆ ಹಾಗೂ ಗಾರೆಬಾವಿ ಪಾಳ್ಯದ ಹೊಂಗಸಂದ್ರ ಕೆರೆ ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ಮನವಿ.
15. ಅರಕೆರೆ ರಾಘವೇಂದ್ರ ಲೇಔಟ್ ಸೀವೇಜ್ ಪೈಪ್ ಲೈನ್ ಹಾಕಲು ಬಿಡುತ್ತಿಲ್ಲ, ಅದಕ್ಕೆ ಸೂಕ್ತ ಕ್ರಮ ಕೈಗೊಳ್ಳಲು ಮನವಿ.
16. ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಮನವಿ.
17. ಒಂಟಿ ಮನೆಗಳಿಗೆ ಅರ್ಜಿ ಸಲ್ಲಿಸಿದ್ದು, ಅನುದಾನ ಒದಗಿಸಲು ಮನವಿ.

ಈ ವೇಳೆ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಸತೀಶ್ ರೆಡ್ಡಿ, ವಲಯ ಜಂಟಿ ಆಯುಕ್ತರಾದ ಅಜಿತ್, ಉಪ ಆಯುಕ್ತರಾದ ಡಿ.ಕೆ ಬಾಬು, ಮುಖ್ಯ ಅಭಿಯಂತರರಾದ ಶಶಿ ಕುಮಾರ್, ಪಾಲಿಕೆ, ಜಲಮಂಡಳಿ, ಬೆಸ್ಕಾಂ, ಪೊಲೀಸ್ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

## ದಿನಕ್ಕೊಂದು ಮುಕ್ತಕ -29



ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ, ವಿಶೇಷ

ದುಃಖದಲಿ ಬಳಲಿದಳು ಮುಕ್ತಕದ ಕವಯತ್ರಿ ದುಃಖದಲಿ ನೊಂದಷ ಟ್ಪ ದಿಯ ಬೊಮ್ಮ ದುಃಖವನು ಜಯಿಸಿದರು ಚು ಟುಕು ಸಾಹಿತಿಯಿಂದು ದುಃಖ ಶಾಶ್ವತವಲ್ಲ ಲಕ್ಷ್ಮಿ ದೇವಿ...

**ಭಾವಾರ್ಥ:** ದುಃಖದಲ್ಲಿ ಮುಕ್ತ ಕವಿತ್ರಿಯು ಬಳಲುತ್ತಿದ್ದಾಳೆ. ಅಂತಯೇ ದುಃಖದಲ್ಲಿ ನೊಂದ ಷಟ್ಪದಿಯ ಬೊಮ್ಮನು ಇದ್ದಾನೆ. ಆದರೆ ಚುಟುಕು ಸಾಹಿತಿಯು ದುಃಖವನ್ನು ಜಯಿಸುತ್ತಿದ್ದಾನೆ. ಎಂದಿಗೂ ಅರ್ಥಮಾಡಿಕೊಳ್ಳಿ ದುಃಖವೇ ಶಾಶ್ವತವಲ್ಲ ಎಂಬುದನ್ನು ಕಾಲಚಕ್ರ ಕಳೆದಂತೆ ಎಲ್ಲವೂ ಕಳೆದಂತೆ ದುಃಖವೂ ಕಳೆಯುತ್ತದೆ. ಬದುಕಿನಲ್ಲಿ ಸುಖವು ಬಂದೇ ಬರುತ್ತದೆ. ದುಃಖವು ಶಾಶ್ವತವಲ್ಲ ಎಂಬುದನ್ನು ತಿಳಿದು ಬಾಳಿ ಬದುಕಿನಲ್ಲಿ ಬರುವಂತಹ ವಿಚಾರಗಳನ್ನು ಸರಿಯಾದಂತಹ ಮಾರ್ಗದರ್ಶನದಿಂದ ಸರಿಪಡಿಸಿಕೊಂಡು ಬಾಳಿನಲ್ಲಿ ಮುಂದುವರೆಯುವುದನ್ನು ನೋಡಬೇಕು.

# ಬಿಬಿಎಂಪಿ ವಿಭಾಗದ 7-ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಮತದಾರರ ಪಟ್ಟಿ ಪರಿಷ್ಕರಣೆ

• ಉದಯವಾಹಿನಿ, ಬೆಂಗಳೂರು

ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ 18ವರ್ಷ ಮೇಲ್ಪಟ್ಟವರನ್ನು ಹೊಸ ಮತದಾರರ ಮಾಹಿತಿ ಪಡೆದು ಅವರಿಗೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಲು ಅರಿವು ಮೂಡಿಸುವ ಕಾರ್ಯವನ್ನು ಮತ್ತಷ್ಟು ಚುರುಕುಗೊಳಿಸಬೇಕೆಂದು ಬಿಬಿಎಂಪಿ(ಕೇಂದ್ರ) ಮತದಾರರ ಪಟ್ಟಿ ವೀಕ್ಷಕರಾದ ಶ್ರೀ ವಿಪುಲ್ ಬನ್ಸಾಲ್ ರವರು ತಿಳಿಸಿದರು. ಬಿಬಿಎಂಪಿ(ಕೇಂದ್ರ) ವಿಭಾಗದ 7-ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ 2025ರ ಸಂಬಂಧ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಮತ್ತು ಬಿಬಿಎಂಪಿ(ಕೇಂದ್ರ) ಮತದಾರರ ಪಟ್ಟಿ ವೀಕ್ಷಕರಾದ ಶ್ರೀ ವಿಪುಲ್ ಬನ್ಸಾಲ್ ರವರು ಎಲ್ಲಾ ರಾಜಕೀಯ ಪಕ್ಷದ ಪ್ರತಿನಿಧಿಗಳ ಜೊತೆ ಇಂದು ಪಾಲಿಕೆ ಕೇಂದ್ರ ಕಛೇರಿಯ ಸಭಾಂಗಣ-1ರಲ್ಲಿ ಸಭೆ ನಡೆಸಿದರು. ಪಾಲಿಕೆ ವ್ಯಾಪ್ತಿಯಲ್ಲಿನ ಅಪಾರ್ಟ್ಮೆಂಟ್ ಗಳಲ್ಲಿ ವಾಸಿಸುತ್ತಿರುವಂತಹ ಸಾರ್ವಜನಿಕರನ್ನು ಬೂತ್ ಮಟ್ಟದ ಅಧಿಕಾರಿಗಳು ಸಂಪರ್ಕಿಸಿ ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧ ಅರಿವು ಮೂಡಿಸುವಂತೆ ರಾಜಕೀಯ ಪಕ್ಷದ ಪ್ರತಿನಿಧಿಗಳು ನೀಡಿದ ಕೋರಿಕೆ ಮೇರೆಗೆ, ಈ ಸಂಬಂಧ ಎಲ್ಲಾ ಮತದಾರರ ನೋಂದಣಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

**2025ರ ಸಂಬಂಧ ಮತದಾರರ ಪಟ್ಟಿ ವೀಕ್ಷಕರಿಂದ ಸಭೆ**


ಉದಯವಾಹಿನಿ ಚಿತ್ರ

**ಪಾಲಿಕೆಯ ಘನತ್ಯಾಜ್ಯ ಸಂಗ್ರಹಿಸುವ ಆಟೋಗಳಲ್ಲಿ ಪ್ರಚಾರ ಮಾಡುವುದರ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧ ಅರಿವು ಮೂಡಿಸುವುದು ಅವಶ್ಯಕತೆ ಇರುತ್ತದೆ ಎಂದು ರಾಜಕೀಯ ಪಕ್ಷದ ಪ್ರತಿನಿಧಿಗಳು ಅಭಿಪ್ರಾಯಪಟ್ಟರು.**

ಯಾವುದೇ ಮತದಾರರು ಹಾಲಿ ವಾಸ ಸ್ಥಳದಿಂದ ಬೇರೆಡೆಗೆ ಸ್ಥಳಾಂತರಗೊಂಡಿದ್ದಲ್ಲಿ, ಹಳೆಯ ಮನೆಯ ವಿಳಾಸದಲ್ಲಿನ ಮತದಾರರ ಹೆಸರನ್ನು ಮತದಾರರ ಪಟ್ಟಿಯಿಂದ ಕೈ ಬಿಟ್ಟು, ಹೊಸ ವಿಳಾಸದಲ್ಲಿ ಅವರ ಹೆಸರನ್ನು ಸೂಕ್ತ ರೀತಿಯಲ್ಲಿ ಮತದಾರರ ಪಟ್ಟಿಯಲ್ಲಿ ಸೇರಿಸುವ ಕಾರ್ಯ ಮಾಡಬೇಕೆಂದು ತಿಳಿಸಿದರು.

ಈ ವೇಳೆ ಅಪರ ಜಿಲ್ಲಾ ಚುನಾವಣಾಧಿಕಾರಿಗಳು (ಕೇಂದ್ರ) ಮತ್ತು ಆಡಳಿತ ವಿಭಾಗದ ವಿಶೇಷ ಆಯುಕ್ತರಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಚುನಾವಣಾ ವಿಭಾಗದ ಸಹಾಯಕ ಆಯುಕ್ತರು, ಬಿಬಿಎಂಪಿ(ಕೇಂದ್ರ) ವ್ಯಾಪ್ತಿಯ ಮತದಾರರ ನೊಂದಣಾಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಜರಿಗಳ ಆತಂಕದಲ್ಲಿ ಇರುವವರಿಗೆ ಗುಡ್ ನ್ಯೂಸ್ ರಾಜ್ಯ ಸರ್ಕಾರದಿಂದ ನೂತನ ಕಾರ್ಯಕ್ರಮ ಜಾರಿ

• ಉದಯವಾಹಿನಿ, ಬೆಂಗಳೂರು



ಸರ್ಜರಿಗಳ ಕುರಿತು ಆತಂಕದಲ್ಲಿ ಇರುವವರಿಗೆ ರಾಜ್ಯ ಸರ್ಕಾರವು ಸಿಹಿಸುದ್ದಿ ನೀಡಿದ್ದು, ರೋಗಿಗಳಿಗೆ ಸೂಕ್ತ ಮಾರ್ಗದರ್ಶನ ಹಾಗೂ ಆತ್ಮವಿಶ್ವಾಸ ತುಂಬುವತ್ತ ನೂತನ ಕಾರ್ಯಕ್ರಮ ಜಾರಿಗೆ ತರಲಾಗಿದೆ.

ಹೌದು, ಆರೋಗ್ಯ ಇಲಾಖೆ ಶಸ್ತ್ರಚಿಕಿತ್ಸೆಗಳ ಕುರಿತು ಉಚಿತವಾಗಿ ಎರಡನೇ ವೈದ್ಯಕೀಯ ಅಭಿಪ್ರಾಯ ಪಡೆಯಲು ವೇದಿಕೆ ಕಲ್ಪಿಸಿದೆ ಸರ್ಜರಿ ಅವಶ್ಯಕತೆ ಇದೆಯೋ, ಇಲ್ಲವೋ ಹಾಗೂ ಪರ್ಯಾಯ ಚಿಕಿತ್ಸಾ ವಿಧಾನಗಳು ಏನು? ಎಂಬುದರ ಬಗ್ಗೆ ಸಿಗಲಿದೆ ತಜ್ಞ ವೈದ್ಯರು ಸಲಹೆ ನೀಡಲಿದ್ದಾರೆ. 1800 4258 330 ಸಹಾಯವಾಣಿಗೆ ಕರೆ ಮಾಡಿ ತಜ್ಞ ವೈದ್ಯರ ಸಲಹೆ ಪಡೆಯಬಹುದು.

ಆರೋಗ್ಯ ಇಲಾಖೆಯ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ದಿನದ 24/7 ಗಂಟೆ ಕಾರ್ಯ ನಿರ್ವಹಿಸುವ ಸಹಾಯವಾಣಿಯಾಗಿದೆ.

ನೂತನ ಕಾರ್ಯಕ್ರಮಕ್ಕೆ ಮಂಗಳವಾರ ಸಂಜೆ 4 ಗಂಟೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಲಿದ್ದಾರೆ. ಪ್ರಾಥಮಿಕ ಹಂತದಲ್ಲಿ TKR/THR ಚಿಕಿತ್ಸಾ ವಿಧಾನಗಳಿಗೆ ಎರಡನೇ ವೈದ್ಯಕೀಯ ಅಭಿಪ್ರಾಯ ಲಭ್ಯವಿದೆ. ಮೊಣಕಾಲು ಕೀಲು ಬದಲಿ, ಸೊಂಟದ ಕೀಲು ಬದಲಿ ಶಸ್ತ್ರಚಿಕಿತ್ಸೆಗಳು ಹಾಗೂ ಇನ್ನಿತರೇ ಕ್ಲಿಷ್ಟಕರ ಸಮಸ್ಯೆಗಳ ಕುರಿತು ನುರಿತ ವೈದ್ಯರಿಂದ ಎರಡನೇ ಅಭಿಪ್ರಾಯ ಪಡೆಯಬಹುದಾಗಿದೆ. ಸಾರ್ವಜನಿಕರು ಅಥವಾ ರೋಗಿಗಳು ಪರಿಣಿತ ಶಸ್ತ್ರಚಿಕಿತ್ಸಕರೊಂದಿಗೆ ಸಂಪರ್ಕ ಸಾಧಿಸಬಹುದು, ಪ್ರಶ್ನೆಗಳನ್ನು ಕೇಳಬಹುದು, ಚಿಕಿತ್ಸಾ ಯೋಜನೆಗಳ ಕುರಿತು ಎರಡನೇ ಅಭಿಪ್ರಾಯವನ್ನು ಪಡೆಯಬಹುದು. ವಾಟ್ಸಾಪ್ ಮೂಲಕವೂ ತಜ್ಞ ವೈದ್ಯರಿಗೆ ವೈದ್ಯಕೀಯ ದಾಖಲೆಗಳನ್ನು ಸಲ್ಲಿಸಿ ರೋಗ ನಿರ್ಣಯ ಮತ್ತು ಶಸ್ತ್ರಚಿಕಿತ್ಸೆಯ ಬಗೆಗಿನ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ಶಸ್ತ್ರಚಿಕಿತ್ಸೆ ಒಳಪಡುವ ಅವಶ್ಯಕತೆ ಅಥವಾ ಇತರೆ ಯಾವುದೇ ಗೊಂದಲ, ಸಂದೇಹಗಳನ್ನು ನಿವಾರಿಸಿಕೊಳ್ಳಬಹುದು.. ರೋಗ ಮತ್ತು ಚಿಕಿತ್ಸೆ, ಶಸ್ತ್ರಚಿಕಿತ್ಸಾ ಆಯ್ಕೆಗಳ ಬಗ್ಗೆ ಖಾತ್ರಿಪಡಿಸಿಕೊಳ್ಳಬಹುದು. ಯೋಜನೆಯಲ್ಲಿ ಮೊಣಕಾಲು ಮತ್ತು ಸೊಂಟ ಸಮಸ್ಯೆಗಳನ್ನು ಹೊಂದಿರುವ ರೋಗಿಗಳಿಗೆ ಸಾಕ್ಷ್ಯ ಆಧಾರಿತ ಮಾರ್ಗದರ್ಶನವನ್ನು ಒದಗಿಸುವ ಗುರಿಯನ್ನು ಹೊಂದಲಾಗಿದೆ. ಲಭ್ಯವಿರುವ ಅತ್ಯುತ್ತಮ ಚಿಕಿತ್ಸಾ ಆಯ್ಕೆಯ ಬಗ್ಗೆ ಪ್ರಬುದ್ಧ ನಿರ್ಧಾರವನ್ನು ತೆಗೆದುಕೊಳ್ಳಲು ರೋಗಿಗಳಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಮಾರ್ಗದರ್ಶನ ನೀಡಲಾಗುವುದು.

# ಕಾಂಗ್ರೇಸ್, ಇಂದಿರಾಗಾಂಧಿ ಜಾರಿಗೆ ತಂದ ಯೋಜನೆಗಳನ್ನು ನಿಲ್ಲಿಸಲು ಯಾರಿಂದಲೂ ಸಾಧ್ಯವಿಲ್ಲ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರ ಹಾಗೂ ಇಂದಿರಾ ಗಾಂಧಿ ಅವರು ಜಾರಿಗೆ ತಂದಿರುವ ಉಳುವವನೆ ಭೂಮಿಯ ಒಡೆಯ, ಪಿಂಚಣಿ, ಮಧ್ಯಾಹ್ನದ ಬಿಸಿಯೂಟ, ಪಡಿತರ ವ್ಯವಸ್ಥೆ ಸೇರಿದಂತೆ ಅನೇಕ ಯೋಜನೆಗಳನ್ನು ಯಾರಿಂದಲೂ ಹಾಗೂ ಯಾವುದೇ ಸರ್ಕಾರಗಳಿಂದಲೂ ನಿಲ್ಲಿಸಲು ಸಾಧ್ಯವಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷರು, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಕೆಪಿಸಿಸಿ ಕಚೇರಿಯ ಭಾರತ ಜೋಡೋ ಸಭಾಂಗಣದಲ್ಲಿ ರಾಜ್ಯ ಮಹಿಳಾ ಕಾಂಗ್ರೆಸ್ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಜನ್ಮದಿನಾಚರಣೆಯಲ್ಲಿ ಶಿವಕುಮಾರ್ ಅವರು ಭಾಗವಹಿಸಿ ಮಾತನಾಡಿದರು. ಜವಹಾರ್ ಲಾಲ್ ನೆಹರು ಅವರಿಂದ ಹಿಡಿದು ಮನಮೋಹನ್ ಸಿಂಗ್ ಅವರ ಕಾಲದ ತನಕ ಕಾಂಗ್ರೆಸ್ ಸರ್ಕಾರಗಳು ಜಾರಿಗೆ ತಂದ ಒಂದೇ ಒಂ ದು ಯೋಜನೆಗಳನ್ನು ನಿಲ್ಲಿಸುವ ಶಕ್ತಿ, ಧೈರ್ಯ ಯಾರಿಗೂ ಬರಲಿಲ್ಲ ಎಂದರು. ಚನ್ನಪಟ್ಟಣದ ಉಪಚುನಾವಣಾ ಸಭೆ ಯಲ್ಲಿ ಮಾತನಾಡುವಾಗ ಹಿರಿಯ ಮಹಿಳೆಯೊಬ್ಬರು ಇಂದಿರಾ ಗಾಂಧಿ ಅವರ ಪಿಂಚಣಿ ಯೋಜನೆಯನ್ನು ನೆನಪಿಸಿಕೊಂಡು ಮೊದ ಲಿಗೆ 40 ರೂಪಾಯಿ ಕೊಡುತ್ತಿದ್ದರು ಎಂದು ತುಂಬಿದ ಸಭೆ ಯಲ್ಲಿ ಹೇಳಿದರು. ಜನರು ಅವರನ್ನು ಅನೇಕ ಜನಪರ ಯೋಜನೆಗಳಿಗಾಗಿ ಈಗಲೂ ನೆನಪಿಸಿಕೊಳ್ಳುತ್ತಾರೆ. ಬ್ಯಾಂಕ್ ರಾಷ್ಟ್ರೀಕರಣದಿಂದ ದೇಶ ಆರ್ಥಿಕವಾಗಿ ಸಬಲವಾಯಿ ತು. ನೆಹರು ಅವರ ಕುಟುಂಬ ಹಾಗೂ ಕಾಂಗ್ರೆಸ್ ಪಕ್ಷ ಈ ದೇಶವನ್ನು ಒಗ್ಗಟ್ಟಾಗಿ ಇಟ್ಟಿದೆ ಎಂದರು. ಭಾರತ್ ಜೋಡೋ ಯಾತ್ರೆ ಸಂದರ್ಭ ಮೊಣಕಾಲ್ಮೂರು ಬಳಿ ಟೀ ಕುಡಿಯಲು ಬಿಡುವು ತೆಗೆದುಕೊಂಡಾಗ ಅಜ್ಜಿಯೊಬ್ಬರು ಕೈಯಲ್ಲಿ ಸೌತೆಕಾಯಿ ಹಿಡಿದುಕೊಂಡು ನಿಂತಿದ್ದರು. ಆಗ ರಾಹುಲ್ ಗಾಂಧಿ ಅವರು ಗಮನಿಸಿ ಕೇಳಿದಾಗ, ನಿಮ್ಮ ಅಜ್ಜಿ ಇಂದಿರಮ್ಮ ಕೊಟ್ಟ ಭೂಮಿಯಲ್ಲಿ ಇದನ್ನು ಬೆಳೆದಿದ್ದೇವೆ ಎಂದು ಅದನ್ನು ರಾಹುಲ್ ಗಾಂಧಿ ಅವರಿಗೆ ನೀಡಿದರು.



ಇದು ಉಳುವವನಿಗೆ ಭೂಮಿ ಕಾರ್ಯಕ್ರಮದ ಫಲ ಎಂದರು. ರಾಜ್ಯದ ಜನರಿ ಗೆ ನಮ್ಮ ಸರ್ಕಾರ ಮುಂದಿನ ದಿನಗಳಲ್ಲಿ ಹೊಸ ಯೋಜನೆಗಳನ್ನು ನೀಡುತ್ತದೆ. ಮತ್ತೆ ಈ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಲು ನಮ್ಮ ಬಳಿ ತಂತ್ರ, ಮಂತ್ರ, ಒಗ್ಗಟ್ಟು, ನಾಯಕತ್ವ, ಶಕ್ತಿಯಿದೆ. ಕಾರ್ಯಕರ್ತರು ಆಶಾಭಾವನೆ, ಒಗ್ಗಟ್ಟಿನಿಂದ ನಮ್ಮ ಜೊತೆ ಇದ್ದರೆ ಸಾಕು ಎಂದು ಹೇಳಿದರು.

# ಕೆಂಪೇಗೌಡರ ಸ್ಮರಣೆಗೆ ಕಾರಣಗಳು



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಅದ್ಭುತ ಕನಸುಗಾರರಾಗಿದ್ದ ಕೆಂಪೇಗೌಡರು, ಒಂದಾನೊಂದು ಕಾಲದಲ್ಲಿ ನಿರ್ಮಿಸಿದ ಬೆಂಗಳೂರು ಇಂದು ಕೋಟ್ಯಂತರ ಜನರಿಗೆ ಆಶ್ರಯತಾಣವಾಗಿದೆ. ಇಂಥ ಕನಸುಗಾರನ ಜನ್ಮದಿನವಾದ ಜೂನ್ 27ರಂದು ಅವರನ್ನು ಸ್ಮರಿಸಲು ಇರುವ ಐದು ಪ್ರಮುಖ ಕಾರಣಗಳನ್ನು ಇಲ್ಲಿ ಕೊಡಲಾಗಿದೆ. 1537ರಲ್ಲಿ ಬೆಂದಕಾಳೂರು ಎಂಬ ನಗರವನ್ನು ಕಟ್ಟುವ ಮೂಲಕ ಬೆಂಗಳೂರು ಎಂಬ ಹೆಸರಿನ ನಗರವಿಂದು ಜಗತ್ಪ್ರಸಿದ್ಧ ನಗರವಾಗಿ ಬೆಳೆಯಲು ಕಾರಣರಾದವರು ಈ ಪ್ರಾಂತ್ಯದ ಅರಸ ಕೆಂಪೇಗೌಡ ಅವರ ಸಂಸ್ಮರಣಾ ದಿವಸವಿದು. ಉದ್ಯಾನ ನಗರಿ, ಉದ್ಯೋಗಿಗಳ, ಉದ್ಯೋಗದಾತರ ಆಶ್ರಯ ತಾಣ, ಅಭಿವೃದ್ಧಿಯ ಅವಕಾಶಗಳ ಆಗರ ಎಂಬಿತ್ಯಾದಿ ಹೆಸರುಗಳನ್ನು ಈ ಆಧುನಿಕ ಕಾಲದಲ್ಲಿ ಗಳಿಸಿಕೊಂಡು ತನ್ನದೇ ಆದ ವಿಶಿಷ್ಟ ವೇಗದಲ್ಲಿ ಬೆಳೆಯುತ್ತಿರುವ ಈ ನಗರವು ಹಲವಾರು ಸಾಧನೆಗಳ ಮೂಲಕ ವಿಶ್ವಮಟ್ಟದಲ್ಲಿ ಗಮನ ಸೆಳೆದಿದೆ.

ಜಾಗತಿಕ ಐಟಿ ಕ್ಷೇತ್ರದಲ್ಲಂತೂ ಬ್ರಾಂಡ್ ಬೆಂಗಳೂರು ಎಂಬ ಮಹಾಛಾಪನ್ನೂ ಮೂಡಿಸಿರುವ ಈ ಊರಿನ ಮತ್ತೊಂದು ಹೆಗ್ಗಳಿಕೆ. ಉದ್ಯೋಗ ಅರಸಿ ಬರುವವರಿಗೆ ತನ್ನೊಡಲಲ್ಲಿ ಜಾಗ ನೀಡಿ ಅವರ ಜೀವನಕ್ಕೆ ದಾರಿ ತೋರುತ್ತಿರುವ, ರಾಜ್ಯದ ವಿವಿಧ ಜಿಲ್ಲೆಗಳ ಯುವ ಪೀಳಿಗೆಯ ಆಶಾಕಿರಣವಾಗಿರುವ ಈ ಬೆಂಗಳೂರು ಕಟ್ಟಿದ ಪುಣ್ಯಾತ್ಮ ಕೆಂಪೇಗೌಡರಿಗೆ ಬೆಂಗಳೂರಿಗರು, ಕನ್ನಡಿಗರು ಚಿರಋಣಿಗಳಾಗಿರಲೇಬೇಕು. ಈ ಮಹಾಶಯರ ಜನ್ಮದಿನದಂದು ಅವರನ್ನು ಮರೆಯದೇ ಸ್ಮರಿಸಲು ಇರುವ ಐದು ಕಾರಣಗಳನ್ನು ಇಲ್ಲಿ ಪಟ್ಟಿ ಮಾಡಿಕೊಡಲಾಗಿದೆ.

**ನಗರ ಕಟ್ಟುವ ಕನಸು ಕಂಡ ಕೆಂಪೇಗೌಡರು:** ಬೆಂದಕಾಳೂರಿನ ನಿರ್ಮಾಣವಾಗುವ ಮೊದಲು ಕೆಂಪೇಗೌಡರು, ವಿಜಯ ನಗರದ ಅರಸರಿಗೆ ಸಾಮಂತರಾಗಿದ್ದರು. ಶ್ರೀ ಕೃಷ್ಣದೇವರಾಯ ಮಡಿದ ನಂತರ ಅವರ ದಾಯಾದಿ ಅಚ್ಯುತರಾಯರಿಗೆ ವಿಧೇಯರಾಗಿದ್ದ ಕೆಂಪೇಗೌಡರಿಗೆ ಬೆಂದಕಾಳೂರೆಂಬ ನಗರ ಕಟ್ಟುವ ಮನಸ್ಸಾಯಿತು. ಇದನ್ನು ಅರಸರ ಬಳಿ ತೋಡಿಕೊಂಡರು. ತಕ್ಷಣವೇ ಅಚ್ಯುತರಾಯರು ಕೆಂಪೇಗೌಡರಿಗೆ ಬೇಕಾದ ಸವಲತ್ತುಗಳನ್ನು ನೀಡಿ, ಕೆಂಗೇರಿ, ಹಲಸೂರು, ಕುಂಬಳಗೋಡು ಸೇರಿದಂತೆ 12 ಹೋಬಳಿಗಳನ್ನು ಕೆಂಪೇಗೌಡರಿಗೆ ಬಳುವಳಿಯಾಗಿ ನೀಡಿ ನಗರ ಕಟ್ಟಲು ಪ್ರೋತ್ಸಾಹ ನೀಡಿದರು. ಅದೇ ಬೆಂಗಳೂರು ನಿರ್ಮಾಣಕ್ಕೆ ಶ್ರೀಕಾರ.

**ಉತ್ತಮ ಹವಾಮಾನ:** ಅಷ್ಟಕ್ಕೂ ಕೆಂಪೇಗೌಡರು ಬೆಂಗಳೂರನ್ನು ಆಯ್ಕೆ ಮಾಡಿಕೊಂಡಿದ್ದರ ಹಿಂದೆ ವೈಜ್ಞಾನಿಕ ಕಾರಣಗಳಿವೆ. ಮುಖ್ಯವಾಗಿ ಸಮುದ್ರ ಮಟ್ಟಕ್ಕಿಂತ ಸುಮಾರು 900 ಮೀ. ಎತ್ತರವಿರುವ ಈ ಪ್ರದೇಶವು ತಂಪಾಗಿದ್ದು, ಮಲೆನಾಡಿನ ಸೊಬಗನ್ನು ಹೋಲುವ ಹವಾಮಾನವನ್ನು ಸೂಸುತ್ತಿತ್ತು. ನಾನಾ ಕೆರೆಗಳು, ವೃಷಭಾವತಿ, ನಂದಿ ತೀರ್ಥ ಎಂಬಿತ್ಯಾದಿ ಚಿಲುಮೆಗಳು ಜನರಿಗೆ ಕುಡಿಯಲು ಹಾಗೂ ವ್ಯವಸಾಯಕ್ಕೆ ಯೋಗ್ಯವಾದ ನೀರನ್ನು ಒದಗಿಸುತ್ತಿದ್ದವು.

**ನಗರ ಕಟ್ಟುವ ಕನಸು ಕಂಡ ಕೆಂಪೇಗೌಡರು**

**ವಾಸಯೋಗ್ಯ ಪ್ರದೇಶದ ಗುರುತು:** ಹವಾಮಾನ, ಭೂಮಿಯ ಫಲವತ್ತತೆ, ಎಲ್ಲೆಲ್ಲೂ ಹಸಿರುಗಳು ತುಂಬಿದ್ದು, ನೋಡುವ ನೋಟದಲ್ಲೇ ನೋಡುಗರ ಆಯಾಸ ಪರಿಹರಿಸುವಂಥ ಶಕ್ತಿಯಿತ್ತು ಇಲ್ಲಿನ ರಮಣೀಯತೆಯಿತ್ತು. ಈ ಪ್ರದೇಶಕ್ಕೆ ಮರುಳಾದ ಕೆಂಪೇಗೌಡರು ಇದನ್ನು ಜನರ ವಾಸಕ್ಕೆ ಯೋಗ್ಯವಾದ ನಗರವನ್ನಾಗಿಸುವ ಉದ್ದೇಶದಿಂದ ಇಲ್ಲಿ ನಗರ ನಿರ್ಮಾಣಕ್ಕೆ ಕೈ ಹಾಕಿದರು.

**ಇವೆಲ್ಲಾ ಕೆಂಪೇಗೌಡರ ಕೊಡುಗೆ:** ಬೆಂಗಳೂರು ಕಟ್ಟುವ ನಿಟ್ಟಿನಲ್ಲಿ ಕೆಂಪೇಗೌಡರು ಅದೆಷ್ಟು ಮಹತ್ವಾಕಾಂಕ್ಷಿಯಾಗಿದ್ದರೆಂದರೆ, ಈ ಪ್ರದೇಶದ ಸಂಪನ್ಮೂಲಗಳನ್ನು ಅರಿತು ಮುಂದಿನ ಜನಾಂಗಕ್ಕೆ ಬೇಕಾದ ಎಲ್ಲಾ ಸೌಕರ್ಯಗಳನ್ನು ಅವರು ಆಗಲೇ ನಿರ್ಮಿಸಿದ್ದರು. ಉದಾಹರಣೆಗೆ, ಆಗ ಈ ಪ್ರದೇಶದಲ್ಲಿದ್ದ ಕೆರೆಗಳಿಗೆ ಹೆಚ್ಚುವರಿಯಾಗಿ ಮತ್ತಷ್ಟು ಕೆರೆಗಳನ್ನು ಕಟ್ಟಿಸಿದ ಕೆಂಪೇಗೌಡರು, ಒಂದು ಕೆರೆ ತುಂಬಿದರೆ ಮತ್ತೊಂದು ಕೆರೆಗೆ ನೀರು ಹೋಗುವಂಥ ಸೌಕರ್ಯಗಳನ್ನು ಆಗಲೇ ಕಲ್ಪಿಸಿದ್ದರು. ಬೆಂಗಳೂರಿಗೆ ಯಾವುದೇ ನದಿಯ ಆಸರೆಯಿಲ್ಲ. ಹಾಗಾಗಿ, ಮುಂದಿನ ಪೀಳಿಗೆಗೆ ನೀರಿನ ತೊಂದರೆಯಾಗಬಾರದೆಂಬ ಸದುದ್ದೇಶ ಅದರ ಹಿಂದಿತ್ತು. ಅವರ ದೂರದೃಷ್ಟಿತ್ವಕ್ಕೆ ಅದೇ ಸಾಕ್ಷಿ.


ಉದಯವಾಹಿನಿ ಚಿತ್ರ

# ದಾರಿಯಿಲ್ಲದ ಊರು, ಕಾಡಿನ ಬದುಕು: ಕಮರಿದ ಮದುವೆ ಕನಸು

## ದಕ್ಷಿಣ ಕನ್ನಡ ಜಿಲ್ಲೆಯ ಅಂಚಿನಲ್ಲಿ ಕಾಡಿನ ನಡುವೆ ಉಳಿದ ಬಿದರತಳ ಎಂಬ ಪುಟ್ಟ ಗ್ರಾಮದ ಜನರ ಗೋಳಿನ ಕಥೆ

• ಉದಯವಾಹಿನಿ, ಚಿಕ್ಕಮಗಳೂರು

ದಾರಿಯಿಲ್ಲದ ಊರು, ಬೇಡವೆಂದರೂ ಬಂದು ನಿಲ್ಲುವ ಕಾಡಾನೆ-ಕಾಡುಕೋಣಗಳು. ಬೇಕೆಂದರೂ ಆಗದ ಮದುವೆ, ಕಾಡಿನಿಂದ ಹೊರತನ್ನಿ ಎಂದರೂ ಕಿವಿಗೊಡದ ಸರ್ಕಾರ. ಪಶ್ಚಿಮಘಟ್ಟದ ಅರಣ್ಯದಲ್ಲೇ ಉಳಿದ 10 ಕುಟುಂಬ, ಇದು ಮೂಡಿಗೆರೆ ತಾಲ್ಲೂಕಿನ ಕೊಟ್ಟಿಗೆಹಾರದಿಂದ ಪಶ್ಚಿಮಘಟ್ಟದ ಕಡೆಗೆ ಸಾಗಿದರೆ ದಕ್ಷಿಣ ಕನ್ನಡ ಜಿಲ್ಲೆಯ ಅಂಚಿನಲ್ಲಿ ಕಾಡಿನ ನಡುವೆ ಉಳಿದ ಬಿದರತಳ ಎಂಬ ಪುಟ್ಟ ಗ್ರಾಮದ ಜನರ ಗೋಳಿನ ಕಥೆ.

ಕೊಟ್ಟಿಗೆಹಾರದಿಂದ ಚಾರ್ಮಾಡಿ ಘಾಟಿಯಲ್ಲಿ 8 ಕಿಲೋ ಮೀಟರ್ ಇಳಿದು ಸಾಗಿದರೆ ಬಲಕ್ಕೆ ಕಡಿದಾದ ಮುಗಿಲೆತ್ತರದ ಗುಡ್ಡಗಳ ಎದುರಾಗುತ್ತವೆ. ಆ ಗುಡ್ಡಗಳನ್ನು ಏರಿ ನಾಲ್ಕು ಕಿಲೋ ಮೀಟರ್ ನಡೆದು ಸಾಗಿದರೆ ಬಿದರತಳ ಎಂಬ ಪುಟ್ಟ ಜನವಸತಿ ಎದುರಾಗುತ್ತದೆ. ಆದರೆ, ಈ ಊರಿಗೆ ಹೋಗಲು ದಾರಿಯೇ ಇಲ್ಲ.

ಹಿಂದೆ ಇದ್ದ ದಾರಿ ಸಂಪೂರ್ಣವಾಗಿ ಗುಡ್ಡದೊಂದಿಗೆ ಬೆರೆತು ಹೋಗಿದೆ. ಮನೆ ಸೇರುವ ತನಕವೂ ಕಡಿದಾದ ಗುಡ್ಡ ಏರಬೇಕು, ಮಳೆಗಾಲದಲ್ಲಿ ಮನೆ

> ನಮ್ಮ ಜಮೀನು ಸರ್ಕಾರವೇ ವಾಪಸ್ ಪಡೆದು ಬೇರೆಡೆ ಜಮೀನು ನೀಡಬೇಕು ಎಂದು ಮನವಿ ಸಲ್ಲಿಸಿ ಸಾಕಾಗಿದೆ. ಕಾಡಿನಿಂದ ಹೊರತಂದು ನಾಗರಿಕ ಸಮಾಜದಲ್ಲಿ ಬದುಕಲು ನಮಗೂ ಅವಕಾಶ ನೀಡಬೇಕು
> -ಸತೀಶ್ ಬಿದರತಳ ಗ್ರಾಮದ ನಿವಾಸಿ

ಸೇರುವುದೇ ಈ ಜನರಿಗೆ ಸಾಹಸದ ಕೆಲಸ. ಚಿಕ್ಕಮಗಳೂರು ಜಿಲ್ಲೆ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಗಡಿಭಾಗದಲ್ಲಿ ಈ ಗ್ರಾಮವಿದೆ. ಮನೆಗಳ ಮುಂದೊಂದು ನೀರು ಹರಿಯುವ ಕೊಳ್ಳವಿದೆ. ಮಳೆಗಾಲದಲ್ಲಿ ಭಾರಿ ಪ್ರಮಾಣದಲ್ಲಿ ಹರಿಯುವ ನೀರು ದಾಟಿ ಬರುವುದೇ ಅಸಾಧ್ಯ. ಆದ್ದರಿಂದ ಮಳೆಗಾಲದಲ್ಲಿ ಸಂಪರ್ಕವನ್ನೇ ಈ ಗ್ರಾಮ ಕಳೆದುಕೊಳ್ಳುತ್ತದೆ.

ಇರುವ ಜಮೀನಿನಲ್ಲಿ ಬೆಳೆ ಬೆಳೆಯುವುದನ್ನು ನಿಲ್ಲಿಸಿಯೇ ಹಲವು ವರ್ಷಗಳು ಕಳೆದಿವೆ. ಬೆಳೆ ಬೆಳೆದರೂ ಕಾಡು ಪ್ರಾಣಿಗಳು ಉಳಿಸುವುದಿಲ್ಲ. ವಿದ್ಯುತ್ ಸಂಪರ್ಕ ಇಲ್ಲ, ಮೊಬೈಲ್ ದೂರವಾಣಿ

**ಪ್ರವಾಸಿ ತಾಣವಾಗಿ ಮಾರ್ಪಾಡು**


ಉದಯವಾಹಿನಿ ಚಿತ್ರ

ನೆಟ್‌ವರ್ಕ್ ಇಲ್ಲ. ನಾಡಿಗೆ ಬಂದು ಕೂಲಿ ಮಾಡಿಕೊಂಡು ಮತ್ತೆ ಕಾಡಿಗೆ ಹೋಗಿ ಕುಟುಂಬ ಸೇರಬೇಕಾದ ಸ್ಥಿತಿ ಇದೆ.

'ಇನ್ನು ಇಲ್ಲಿರುವ ಹತ್ತು ಮನೆಗಳಲ್ಲಿ ಒಂಬತ್ತು ಯುವಕರಿದ್ದು, ಎಲ್ಲರಿಗೂ ಮದುವೆ ವಯಸ್ಸು ಮೀರಿದೆ. ಕೆಲವರಿಗೆ 45 ವರ್ಷ ದಾಟಿದೆ. ಕಾಡಿನ ನಡುವೆ ಇರುವ ಈ ಊರಿಗೆ ಮದುವೆಯಾಗಿ ಬರಲು ಯಾವ ಯುವತಿಯರೂ ಒಪ್ಪುವುದಿಲ್ಲ. ಯಾವ ರಸ್ತೆಯಲ್ಲಿ ಅವರನ್ನು ಮನೆಗೆ ಕರೆತರುವುದು' ಎಂದು ಗ್ರಾಮದ ಸತೀಶ್ ಪ್ರಶ್ನಿಸುತ್ತಾರೆ. 'ಎಲ್ಲಾದರೂ ಕೂಲಿ ಮಾಡಿ ಜೀವನ ಸಾಗಿಸೋಣ ಎಂದು ಊರುಬಿಟ್ಟು

### ನಿರ್ಜನ ಪ್ರದೇಶದ ಅರಣ್ಯದಲ್ಲಿ ಕಾಲ್ನಡಿಗೆ

**ಕೊಟ್ಟಿಗೆಹಾರಕ್ಕೆ ಹೋಗಿ ಬರುವುದಾಗಿ ಹೇಳಿ ಬಿದರತಳ ಗ್ರಾಮದಿಂದ ಹೋದ ಲಕ್ಷ್ಮಣಗೌಡ ಎಂಬ ನಿವಾಸಿ 12 ವರ್ಷಗಳಿಂದ ವಾಪಸ್ ಬಂದೇ ಇಲ್ಲ. ನಿರ್ಜನ ಪ್ರದೇಶದ ಅರಣ್ಯದಲ್ಲಿ ಕಾಲ್ನಡಿಗೆಯಲ್ಲೇ ಸಾಗಿ ನಾಡಿನ ಸಂಪರ್ಕ ಪಡೆಯಬೇಕು. ಕಾಡುಪ್ರಾಣಿಗಳ ದಾಳಿಗೆ ತುತ್ತಾಗಿರಬಹುದು ಎಂಬ ಅನುಮಾನ ಗ್ರಾಮಸ್ಥರಲ್ಲಿದೆ. 'ಕೆಲ ದಿನ ಕಾದು ಪೊಲೀಸ್ ಠಾಣೆಗೆ ದೂರು ನೀಡಿದ್ದೆವು. ಪ್ರಯೋಜನ ಆಗಿಲ್ಲ. ಅವರು ಜೀವಂತ ಬರುವ ಆಸೆ ಈಗ ಉಳಿದಿಲ್ಲ' ಎಂದು ಲಕ್ಷ್ಮಣಗೌಡ ಮಗ ವಿಕ್ರಮ್ ಹೇಳುತ್ತಾರೆ.**

ಹೋಗಿದ್ದೆ. ವಯಸ್ಸಾದ ತಾಯಿ ಒಬ್ಬರೇ ಮನೆಯಲ್ಲಿದ್ದರು. ಅವರಿಗಾಗಿ ಮತ್ತೆ ವಾಪಸ್ ಬಂದಿದ್ದೇನೆ. ಹಗಲು-ರಾತ್ರಿ ಎನ್ನದೆ ಮನೆ ಮುಂದೆ ಬಂದು ನಿಲ್ಲುವ ಕಾಡು ಪ್ರಾಣಿಗಳು, ಮನೆಗೆ ಬರಲು ದಾರಿಯೇ ಇಲ್ಲದ ಊರಿನಿಂದ ಮದುವೆಯ ಆಸೆ ಕಮರಿ ಹೋಗಿದೆ. ಜೀವನದಲ್ಲಿ ಯಾವ ಉತ್ಸಾಹವೂ ಉಳಿದಿಲ್ಲ' ಎಂದು ಯುವಕ ಗಿರೀಶ್ ಬೇಸರ ವ್ಯಕ್ತಪಡಿಸುತ್ತಾರೆ.

'ಇಷ್ಟು ಪ್ರಯಾಸದ ನಡುವಿನ ಬದುಕಿನಿಂದ ಹೊರ ಬರಲು ಗ್ರಾಮಸ್ಥರು ಹಲವು ವರ್ಷಗಳಿಂದ ಪ್ರಯತ್ನಿಸಿದ್ದಾರೆ. ಆದರೆ, ಬದಲಿ ಜಮೀನು ನೀಡಿ ಸ್ಥಳಾಂತರ ಮಾಡುವ ಪ್ರಕ್ರಿಯೆ ನಡೆದಿಲ್ಲ. ಜನರನ್ನು ಕಾಡಿನಲ್ಲೇ ಉಳಿಸಿ ನಮ್ಮದು ನಾಗರಿಕ ಸಮಾಜ ಎಂದು ಹೇಳುವುದು ಹೇಗೆ' ಎಂದು ಕೊಟ್ಟಿಗೆಹಾರದ ಸಾಮಾಜಿಕ ಕಾರ್ಯಕರ್ತ ಸಂಜಯ್ ಪ್ರಶ್ನಿಸುತ್ತಾರೆ.

ಸುತ್ತಲೂ ಅರಣ್ಯ ಭೂಮಿ ಇದೆ. ನಡುವೆ ಇರುವ ಇವರ ಹಿಡುವಳಿ ಜಾಗವನ್ನು ಅರಣ್ಯ ಇಲಾಖೆಗೆ ವರ್ಗಾಯಿಸಿ ಬೇರೆಡೆ ಇವರಿಗೆ ಜಮೀನು ನೀಡಬೇಕು.

ಹೆಚ್ಚಿನ ಅನಾಹುತ ಸಂಭವಿಸುವ ಮುನ್ನ ಸರ್ಕಾರ ಮತ್ತು ಜಿಲ್ಲಾಡಳಿತ ಎಚ್ಚೆತ್ತುಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಅಂಚೆ ಇಲಾಖೆಗೆ ಪ್ರೀತಿಯಿಂದ ಪತ್ರ ಬರೆಯಿರಿ, 25 ಸಾವಿರ ರೂ. ಬಹುಮಾನ ಗೆಲ್ಲಿ

• ಉದಯವಾಹಿನಿ, ವಿಜಯಪುರ

ಭಾರತೀಯ ಅಂಚೆ ಇಲಾಖೆಯು ಪತ್ರ ಬರೆಯುವ ಸ್ಪರ್ಧೆಯನ್ನು ಹಮ್ಮಿಕೊಂಡಿದೆ. ಈಗಲೂ ಪತ್ರ ಬರೆಯುವ ಹವ್ಯಾಸವಿದ್ದವರು, ಡಿಜಿಟಲ್ ಯುಗದಲ್ಲೂ ಇನ್ನೂ ಪತ್ರ ಬರೆಯುವ ಅಭ್ಯಾಸವನ್ನು ಬಿಟ್ಟಿಲ್ಲದವರು ಈಗಲೂ ಪತ್ರ ಬರೆಯಬಹುದು. ಅಷ್ಟೇ ಅಲ್ಲ ಭಾರೀ ಮೊತ್ತದ ಬಹುಮಾನವನ್ನೂ ಪಡೆದುಕೊಳ್ಳಬಹುದು. ಭಾರತೀಯ ಅಂಚೆ ಇಲಾಖೆ ವತಿಯಿಂದ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಪತ್ರ ಬರೆಯುವ ಸ್ಪರ್ಧೆ ಏರ್ಪಡಿಸಲಾಗಿದೆ. ವಿವಿಧ ವಯೋಮಾನದವರು ಸ್ಪರ್ಧೆಯಲ್ಲಿ ಭಾಗಿಯಾಗಬಹುದು.

ಮೊದಲು ರಾಜ್ಯ ಮಟ್ಟದಲ್ಲಿ ಸ್ಪರ್ಧೆ ನಡೆಯಲಿದ್ದು, ಆನಂತರ ರಾಷ್ಟ್ರ ಮಟ್ಟದಲ್ಲೂ ಭಾಗಿಯಾಗಿ ಅಲ್ಲೂ ಹೆಚ್ಚಿನ ಬಹುಮಾನ ಪಡೆಯಬಹುದು. ಅತ್ಯುತ್ತಮವಾಗಿ ಪತ್ರ ಬರೆಯುವವರಿಗೆ ನಗದು ಬಹುಮಾನವಿದ್ದು, ರಾಜ್ಯ ಮಟ್ಟದಲ್ಲಿ ಗೆದ್ದವರು ರಾಷ್ಟ್ರಮಟ್ಟದಲ್ಲೂ ಭಾಗಿಯಾಗಬಹುದುಪತ್ರ ಬರೆಯಲು ಇರುವ ವಿಷಯ 'ಬರವಣಿಗೆಯಲ್ಲಿ ಸಂತೋಷ' (ದಿ ಜಾಯ್ ಆಫ್ ರೈಟಿಂಗ್) ಹಾಗೂ 'ಡಿಜಿಟಲ್ ಯುಗದಲ್ಲಿ ಅಕ್ಷರಗಳ ಪ್ರಾಮುಖ್ಯತೆ' (ಇಂಪಾರ್ಟೆಂಟ್ಸ್ ಆಫ್ ಲೆಟರ್ಸ್ ಇನ್ ಎ ಡಿಜಿಟಲ್ ಏಜ್)'. ಸಾರ್ವಜನಿಕರು ಈ ಸ್ಪರ್ಧೆಯಲ್ಲಿ ಭಾಗವಹಿಸಲು ಅಂಚೆ ಕಚೇರಿಯಲ್ಲಿ ದೊರೆಯುವ ಇನ್ ಲ್ಯಾಂಡ್ ಲೆಟರ್ ಕಾರ್ಡ್ ಅಥವಾ ಎನ್‌ವಲಪ್‌ಗಳನ್ನು ಉಪಯೋಗಿಸಬೇಕು ಎನ್ನುವುದು ಭಾರತೀಯ ಅಂಚೆ ಇಲಾಖೆಯು ಸ್ಪರ್ಧಾಳುಗಳಿಗೆ ನೀಡಿರುವ ಸೂಚನೆ. ಇನ್‌ಲ್ಯಾಂಡ್ ಲೆಟರ್ ಕಾರ್ಡ್ ಉಪಯೋಗಿಸುವವರು 500 ಪದಗಳಿಗೆ ಮೀರದಂತೆ ಮತ್ತು ಎನ್‌ವಲಪ್ ಉಪಯೋಗಿಸುವವರು 1000 ಪದಗಳಿಗೆ ಮೀರದಂತೆ ಎ4 ಶೀಟ್‌ನಲ್ಲಿ ಬರೆದು ಎನ್‌ವಲಪ್ ಒಳಗೆ ಹಾಕಿ ಕಳುಹಿಸಬೇಕು. ಪತ್ರಗಳನ್ನು ಕನ್ನಡ, ಹಿಂದಿ, ಇಂಗ್ಲೀಷ್ ಭಾಷೆಯಲ್ಲಿ ಬರೆಯಬಹುದು ಎಂದು ತಿಳಿಸಲಾಗಿದೆ.

**ಡಿಸೆಂಬರ್ 14 ಕಡೆಯ ದಿನ**

ಸ್ಪರ್ಧೆಗೆ ಉಪಯೋಗಿಸಿದ ಐಎಲ್‌ಸಿ/ಎನ್‌ವಲಪ್ ಮೇಲೆ ಸೂಪರ್‌ಡೆಂಟ್ ಆಫ್ ಪೋಸ್ಟ್ ಆಫಿಸಸ್, ಎನ್ನುವ ಹೆಸರಿನಲ್ಲಿ ವಿಜಯಪುರ ಜಿಲ್ಲೆಯ ಅಂಚೆ ಮುಖ್ಯ ಅಧೀಕ್ಷಕರ ಹೆಸರಿನಲ್ಲಿ 'ಪತ್ರ ಬರೆಯುವ ಸ್ಪರ್ಧೆ' ಎಂದು ವಿಳಾಸ ಬರೆದು ಜನ್ಮ ದಿನಾಂಕವನ್ನು ಕಡ್ಡಾಯವಾಗಿ ನಮೂದಿಸಬೇಕು. ನಂತರ ಐಎಲ್‌ಸಿ/ಎನ್‌ವಲಪ್ ಅನ್ನು ನಿಮ್ಮ ಹತ್ತಿರದ ಅಂಚೆ ಕಚೇರಿಗೆ ತಲುಪಿಸಬೇಕು. ಪತ್ರ ಅಂಚೆ ಕಚೇರಿಗೆ ತಲುಪಲು ಡಿಸೆಂಬರ್, 14 ಕೊನೆಯ ದಿನವಾಗಿದೆ.ಈ ಸ್ಪರ್ಧೆಯಲ್ಲಿ 18 ವರ್ಷ ಒಳಗಿನ ಮತ್ತು 18 ವರ್ಷ ಮೇಲ್ಪಟ್ಟ ವರ್ಗ ಎಂದು ಎರಡು ವಿಭಾಗದಲ್ಲಿ ನಡೆಸಲಾಗುವುದು. ಕರ್ನಾಟಕ ವೃತ್ತ ಮಟ್ಟದ ಪ್ರತಿ ವಿಭಾಗದಲ್ಲಿ ವಿಜೇತರಿಗೆ ಬಹುಮಾನ ನೀಡಲಾಗುವುದು. ಪ್ರತಿ ವಿಭಾಗದಲ್ಲಿ ಮೊದಲ ಬಹುಮಾನ ರೂ.25 ಸಾವಿರ, ಎರಡನೇ ಬಹುಮಾನ ರೂ.10 ಸಾವಿರ, ಮೂರನೇ ಬಹುಮಾನ ರೂ.5 ಸಾವಿರ.ಹಾಗೆಯೇ ರಾಷ್ಟ್ರೀಯ ಮಟ್ಟದಲ್ಲಿ ಪ್ರತಿ ವಿಭಾಗದಲ್ಲಿ ವಿಜೇತರಿಗೆ ಬಹುಮಾನ ನೀಡಲಾಗುವುದು. ಮೊದಲ ವಿಜೇತರಿಗೆ ರೂ.50 ಸಾವಿರ, ಎರಡನೇ ವಿಜೇತರಿಗೆ ರೂ.25 ಸಾವಿರ ಮತ್ತು ತೃತೀಯ ಬಹುಮಾನ ರೂ.10 ಸಾವಿರ ನಗದು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ www.karnatakapost.gov.in ನ್ನು ಸಂಪರ್ಕಿಸಿ ಪಡೆಯಬಹುದು.ಇದರಲ್ಲಿ ಅಂಚೆ ಇಲಾಖೆ ಸ್ಪರ್ಧೆಗೆ ನೀಡಿರುವ ಸೂಚನೆಗಳು, ನಿಬಂಧನೆಗಳು ಹಾಗೂ ಬಹುಮಾನದ ವಿವರಗಳನ್ನು ಒದಗಿಸಲಾಗಿದೆ. ಆಸಕ್ತರು ಮೊ.9945457976 ಸಂಪರ್ಕಿಸಬಹುದು ಅಥವಾ ವಿಜಯಪುರ ಜಿಲ್ಲಾ ಅಂಚೆ ಅಧೀಕ್ಷಕರ ಕಚೇರಿಗೆ ತೆರಳಿ ಮಾಹಿತಿ ಪಡೆಯಬಹುದು ಎಂದು ಕರ್ನಾಟಕ ವಿಭಾಗದ ಅಂಚೆ ಮುಖ್ಯಸ್ಥರು ತಿಳಿಸಿದ್ದಾರೆ.

# ಗೊಂದಲ ಸೃಷ್ಟಿಸಿದ ಆರೋಪ: 12 ಮಂದಿ ವಿರುದ್ಧ ಪ್ರಕರಣ

• ಉದಯವಾಹಿನಿ, ಸಿಂಧನೂರು

ಕರ್ನಾಟಕ ಲೋಕಸೇವಾ ಆಯೋಗದಿಂದ ಭಾನುವಾರ ಸಿಂಧನೂರು ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜಿನಲ್ಲಿ ನಡೆದ ಪಿಡಿಒ ಹುದ್ದೆಗಳ ಪರೀಕ್ಷೆಯಲ್ಲಿ ಕೆಲ ಪರೀಕ್ಷಾರ್ಥಿಗಳು ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಪ್ರತಿಭಟಿಸಿ ಗೊಂದಲ ಸೃಷ್ಟಿಸಿದ ಆರೋಪದ ಮೇಲೆ 12 ಪರೀಕ್ಷಾರ್ಥಿಗಳ ವಿರುದ್ಧ ಪ್ರಕರಣ ದಾಖಲಾಗಿದೆ.

ಪಶುಪತಿ ಎಂಬ ಪರೀಕ್ಷಾರ್ಥಿಯನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರಶ್ನೆ ಪತ್ರಿಕೆಗಳನ್ನು ವಿತರಿಸುವ ಸಮಯದಲ್ಲಿ ಪಶುಪತಿ ಎಂಬ ಪರೀಕ್ಷಾರ್ಥಿ ಪ್ರಶ್ನೆ ಪತ್ರಿಕೆಯ ಬಂಡಲ್ ಮೊದಲೇ ತೆಗೆಯಲಾಗಿದೆ ಎಂದು ಅನುಮಾನ ವ್ಯಕ್ತಪಡಿಸಿ, ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಕೂಗಿ ಉಳಿದ ಪರೀಕ್ಷಾರ್ಥಿಗಳನ್ನು ಪ್ರಚೋದಿಸಿದ್ದಾರೆ. ಸಿಂಧನೂರು-ಕುಷ್ಟಗಿ ಮುಖ್ಯ ಹೆದ್ದಾರಿಯಲ್ಲಿ ಕುಳಿತು ವಾಹನ ಸಂಚಾರ ತಡೆದು ಪ್ರತಿಭಟಿಸಿ, ಪರೀಕ್ಷೆ ನಡೆಸಲು ತೊಂದರೆ ನೀಡಿದ್ದಾರೆ. ಪಶುಪತಿಯ ಜೊತೆಗೆ ಸುರಪುರದ ಬಾಬು, ಅಯ್ಯನಗೌಡ, ಅಮಿತ್, ವೆಂಕಟೇಶ್, ರವಿಶಂಕರ್, ವಿಶ್ವರಾಧ್ಯ, ಬಸವರಾಜ್, ವೆಂಕಟೇಶ್, ರಾಘವೇಂದ್ರ, ಸಾಬರೆಡ್ಡಿ ಅವರು ಸಹ ಪರೀಕ್ಷಾ ಕೊಠಡಿಯಲ್ಲಿ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ ಎಂದು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕ ಬಸವರಾಜ್ ತಡಕಲ್ ಅವರು ಶಹರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸ್ ಇನ್‌ಸ್ಪೆಕ್ಟರ್ ದುರುಗಪ್ಪ ಡೊಳ್ಳಿನ್ ತನಿಖೆ ಕೈಗೊಳ್ಳುತ್ತಿದ್ದಾರೆ.

**ಪ್ರಶ್ನೆ ಪತ್ರಿಕೆ ವಿತರಣೆಯಲ್ಲಿ ವಿಳಂಬ**

**ಪ್ರತಿಭಟನೆ:** ಪಿಡಿಒ ಹುದ್ದೆಗಳ ಪರೀಕ್ಷಾ ಕೇಂದ್ರದಲ್ಲಿ ಪಶ್ನೆ ಪತ್ರಿಕೆ ವಿತರಣೆಯಲ್ಲಿ ವಿಳಂಬ, ಸೋರಿಕೆ ಆಗಿದೆ ಎಂಬ ಗೊಂದಲದ ಬಗ್ಗೆ ತನಿಖೆ ನಡೆಸಬೇಕು ಹಾಗೂ ಪ್ರತಿಭಟಿಸಿದ ಪರೀಕ್ಷಾರ್ಥಿಗಳ ವಿರುದ್ಧ ಪ್ರಕರಣ ದಾಖಲಿಸಿರುವುದನ್ನು ಖಂಡಿಸಿ ದಲಿತ ವಿದ್ಯಾರ್ಥಿ ಪರಿಷತ್ ತಾಲ್ಲೂಕು ಘಟಕದಿಂದ ನವೆಂಬರ್ 19ರಂದು ಬೆಳಿಗ್ಗೆ 10.30 ಗಂಟೆಗೆ ನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಪರಿಷತ್ ಜಿಲ್ಲಾ ಘಟಕದ ಸಂಚಾಲಕ ಮೌನೇಶ ಜಾಲವಾಡಗಿ ತಿಳಿಸಿದ್ದಾರೆ.

# ಬಸ್‌ಗಳ ಮೇಲೆ ಕಲ್ಲು ತೂರಿ ದರೋಡೆಗೆ ಯತ್ನ

• ಉದಯವಾಹಿನಿ, ಹಟ್ಟಿಚಿನ್ನದಗಣಿ

ಲಿಂಗಸುಗೂರು ತಾಲ್ಲೂಕಿನ ಗುರುಗುಂಟಾ ವ್ಯಾಪ್ತಿಯ ಗೋಲಪಲ್ಲಿ ಬಳಿ ಮಂಗಳವಾರ ಬೆಳಗಿನ ಜಾವ ದರೋಡೆಕೋರರ ಗುಂಪೊಂದು ರಸ್ತೆ ಸಾರಿಗೆ ಸಂಸ್ಥೆಯ ಮೂರು ಬಸ್ ಸೇರಿ 30 ವಾಹನಗಳ ಮೇಲೆ ಕಲ್ಲು ತೂರಾಟ ಮಾಡಿ ವಾಹನಗಳನ್ನು ನಿಲ್ಲಿಸಲು ಯತ್ನಿಸಿದೆ.

ಬೀದರ್, ಔರಾದ್, ಚಿತ್ತಾಪುರ ಹಾಗೂ ಕಲಬುರಗಿ ಕಡೆಯಿಂದ ಬಂದು ಬಳ್ಳಾರಿಗೆ ತೆರಳುತ್ತಿದ್ದ ವಾಹನಗಳ ಮೇಲೆ ನಿರ್ಜನ ಪ್ರದೇಶದಲ್ಲಿ ದರೋಡೆಕೋರರು ಕಲ್ಲು ತೂರಾಟ ಮಾಡಿ ವಾಹನಗಳನ್ನು ತಡೆಯಲು ಪ್ರಯತ್ನಿಸಿದ್ದಾರೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆ ತಲೆಗೆ ಗಾಯವಾಗಿದ್ದು, ಲಿಂಗಸುಗೂರು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ.

ರಸ್ತೆ ಸಾರಿಗೆ ಸಂಸ್ಥೆಯ ಲಿಂಗಸುಗೂರು ಘಟಕದ ಅಧಿಕಾರಿಗಳು ಬೆಳಿಗ್ಗೆ ಭೇಟಿ ನೀಡಿ ಪರಿಶೀಲಿಸಿದರು. 'ದರೋಡೆಕೋರರು ಗುರುಗುಂಟಾ ಮಾರ್ಗವಾಗಿ ಸಾಗುವ 20 ಬಸ್‌ಗಳ ಮೇಲೆ ಕಲ್ಲು ತೂರಿದ್ದಾರೆ. ಬಸ್‌ಗಳ ಚಾಲಕರು ಸ್ಥಳದಲ್ಲಿ ನಿಲ್ಲಿಸಿದ್ದರೆ ದರೋಡೆಕೋರರು ಲೂಟಿ ಮಾಡುವ ಸಾಧ್ಯತೆ ಇತ್ತು. ಈ ಕುರಿತು ಚಾಲಕರಿಂದ ನಿಖರವಾದ ಮಾಹಿತಿ ಪಡೆಯುತ್ತಿದ್ದೇವೆ. ಒಟ್ಟು ಎಷ್ಟು ಬಸ್‌ಗಳಿಗೆ ದರೋಡೆಕೋರರು ಕಲ್ಲು ಎಸೆದಿದ್ದಾರೆ


ಉದಯವಾಹಿನಿ ಚಿತ್ರ

ಎನ್ನುವ ಮಾಹಿತಿ ಪಡೆದು ದೂರು ದಾಖಲು ಮಾಡಲಾಗುವುದು' ಎಂದು ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ತಿಳಿಸಿದ್ದಾರೆ.

ಗೋಲಪಲ್ಲಿಯಿಂದ ತಿಂಥಣಿ ಬ್ರಿಡ್ಜ್ 5 ಕಿ.ಮೀ ಅಂತರದಲ್ಲಿ ಇದೆ. ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳ ಚಾಲಕರು ಗೋಲಪಲ್ಲಿಯಲ್ಲಿ ಘಟನೆ ನಡೆದ ನಂತರ ತಿಂಥಣಿ ಬ್ರಿಡ್ಜ್ ಬಳಿ ಬಂದು ಒಂದೆಡೆ ಸೇರಿ ರಸ್ತೆ ಸಾರಿಗೆ ಸಂಸ್ಥೆಯ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಹಟ್ಟಿ ಚಿನ್ನದ ಗಣಿ ಪೊಲೀಸ್ ಠಾಣೆಯ ಆವರಣದಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ಮೂರು ಬಸ್‌ಗಳನ್ನು ತಂದು ನಿಲ್ಲಿಸಲಾಗಿದೆ. ಗೋಲಪಲ್ಲಿ ಬಳಿ ಬಸ್‌ಗಳ ಮೇಲೆ ಕಲ್ಲುತೂರಾಟ ನಡೆಸಲಾಗಿದೆ. ಈ ಕುರಿತು ತನಿಖೆ ಚುರುಕುಗೊಳಿಸಲಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ತಿಳಿಸಿದರು.

# ಬಿಸಿಲೂರಲ್ಲಿ ತಾರಾಲೋಕ ಸೃಷ್ಟಿಸಿದ 'ನಿತ್ಯೋತ್ಸವ'

• ಉದಯವಾಹಿನಿ, ರಾಯಚೂರು

ಪ್ರಖರ ಬಿಸಿಲಿನಿಂದಾಗಿ ದಿನವಿಡೀ ಧಗೆ ಮೂಡಿಸಿದರೂ ಸಂಜೆಯ ವೇಳೆಗೆ ವಾತಾವರಣ ತಣ್ಣಗಾಗಿತ್ತು. ಪಡುವಣ ದಿಕ್ಕಿನಲ್ಲಿ ಸೂರ್ಯದೇವ ಬಾನಿನಿಂದ ಜಾರುತ್ತಲೇ ಇಲ್ಲಿ ಬಣ್ಣದ ಬೆಳಕಿನ ದೀಪಗಳು ಬೆಳಕು ಚೆಲ್ಲಿದವು. ಕತ್ತಲಾಗುತ್ತಲೇ ತಾರಾಲೋಕ ಸೃಷ್ಟಿಯಾಗಿ 'ನಿತ್ಯೋತ್ಸವ' ಕಲಾಪ್ರೇಮಿಗಳ ಕಣ್ಮನ ತಣಿಸಿತು.

ಅಮಿತಾಬ್, ರವಿಚಂದ್ರನ್, ಉಪೇಂದ್ರ, ಗಾಯಕಿ ರೇಮೊ ಕಲಾಲೋಕಕ್ಕೆ ಬಂದಿಳಿ ದರು. ಈ ಕ್ಷಣಕ್ಕಾಗಿ ತಾಸುಗಟ್ಟಲೆ ಕಾಯುತ್ತ ಕುಳಿತಿದ್ದ ಅಭಿಮಾನಿಗಳ ಹಾಗೂ ಕಲಾ ಪ್ರೇಮಿಗಳು ಕಲಾವಿದರನ್ನು ಕಣ್ಣೆದುರು ನೋಡುತ್ತಲೇ ಯುವ ಸಮೂಹ ಶಿಳ್ಳೆ, ಕೇಕೆ ಹಾಕುವ ಜತೆಗೆ ಘೋಷಣೆಗಳನ್ನು ಮೊಳಗಿಸಿತು. ಹಿರಿಯರು ಸಹ ಕರಾಡತಾಡನ ಮೂಲಕ ಕಲಾವಿದರನ್ನು ಅದ್ದೂರಿಯಾಗಿ ಸ್ವಾಗತಿಸಿದರು. ಹೌದು ಇಲ್ಲಿಯ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ರಾಜ್ಯೋತ್ಸವದ ಪ್ರಯುಕ್ತ ಓಂಕಾರ್ ಫಿಲಂಸ್ ವತಿಯಿಂದ ಆಯೋಜಿಸಿದ್ದ


ಉದಯವಾಹಿನಿ ಚಿತ್ರ

'ನಿತ್ಯೋತ್ಸವ' ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕಂಡುಬಂದ ದೃಶ್ಯವಿದು.

ರಂಗ ಮಂದಿರದಲ್ಲಿ ಸೇರಿದವರೆಲ್ಲರೂ ಅಮಿತಾಬ್ ಬಚ್ಚನ್, ರವಿಚಂದ್ರನ್, ಉಪೇಂದ್ರ ಅವರ ಅಭಿಮಾನಿಗಳೇ ಆದ್ದರು. ಒರಿಜಿನಲ್ ಚಲನಚಿತ್ರ ತಾರೆಯರನ್ನು ಪ್ರತ್ಯಕ್ಷವಾಗಿ ನೋಡಲು ಸಾಧ್ಯವಾಗದಿದ್ದರೂ ತದ್ರೂಪಿ ತಲಾವಿದರನ್ನು ಕಣ್ಣಾರೆ ಕಂಡು ಖುಷಿ ಪಟ್ಟರು.

ಈ ಕಲಾವಿದರೂ ಸಹ ಮೂಲ ಚಲನಚಿತ್ರಗಳ ತಾರೆಯರ ಹಾಡು ಹಾಗೂ ನೃತ್ಯಗಳಿಗೆ ಹೆಜ್ಜೆ ಹಾಕಿ ಪ್ರೇಕ್ಷಕರ ಮನ ತಣಿಸಿದರು.

ಅಂಧೇರಿ ರಾತೋಮೆ... ಸುನ್ಸಾನ್ ರಾಹೋಪರ್... ಹಾಡನ್ನು ಹಾಡುತ್ತ ವೇದಿಕೆ ಮುಂಭಾಗಕ್ಕೆ ಬಂದು ವೇದಿಕೆ ಮುಂಭಾಗದಲ್ಲಿ ಕುಳಿತಿದ್ದ ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಅವರಿಗೆ ಹಸ್ತಲಾಘವ ನೀಡಿ ವೇದಿಕೆ ಮೇಲೆ ಬಂದರು. ಅಮಿತಾ ಬಚ್ಚನ್ ಅವರು ಸುಪ್ರಸಿದ್ಧ ಚಲನಚಿತ್ರಗಳಲ್ಲಿನ ಡೈಲಾಗ್‌ಗಳನ್ನು ಹೇಳಿ ಪ್ರೇಕ್ಷಕರ ಮನ ರಂಜಿಸಿದರು.

### ಹುಚ್ಚೆಬ್ಬಿಸಿದ ಶೆಹೆನ್‌ಶಾ

**ಪ್ರೇಕ್ಷಕರಲ್ಲಿ ಹುಚ್ಚೆಬ್ಬಿಸಿದ ಶೆಹೆನ್‌ಶಾ, ಶೆಹೆನ್‌ಶಾ ಹಿಂದಿ ಚಲನಚಿತ್ರದಲ್ಲಿ ಅಮಿತಾ ಬಚ್ಚನ್ ಧರಿಸಿದ ಪೋಷಾಕದ ಮಾದರಿಯಲ್ಲೇ ವೇಷಭೂಷಣ ಮಾಡಿಕೊಂಡು ಬಂದಿದ್ದ ಮುಂಬೈನ್ ಕಲಾವಿದ ಗುಲ್ಶನ್ ಅವರು ಪ್ರೇಕ್ಷಕರ ಮಧ್ಯದಿಂದ ರಂಗ ಮಂದಿರ ಪ್ರವೇಶಿಸಿದರು.**

# ಅಣವಾರ, ಕಾರ್ತಿಕ ದೀಪೋತ್ಸವ ಸಮಾರಂಭ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಅಣವಾರ ಗ್ರಾಮದಲ್ಲಿ ಮಾರುತೇಶ್ವರ ದೇವಾಲಯ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಕಾರ್ತಿಕ ದೀಪೋತ್ಸವ ಸಮಾರಂಭ ಕಾರ್ಯಕ್ರಮಕ್ಕೆ ನಿಡಗುಂದಾದ ಕಂಚಾಳಕುಂಟಿ ನಂದೀಶ್ವರ ಮಠದ ಪೂಜ್ಯ ಶ್ರೀ ಷ.ಬ್ರ.ಕರುಣೇಶ್ವರ ಶಿವಾಚಾರ್ಯರು ದಿವ್ಯ ಸಾನ್ನಿಧ್ಯ ವಹಿಸಿ ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಚಂದನಕೇರಾ ಕಟ್ಟಿ ಮಠದ ಪೂಜ್ಯ ಷ.ಬ್ರ.ಅಭಿನವ ರಾಚೋಟೇಶ್ವರ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಡಾ.ಶಿವಶರಣಪ್ಪ ಮೋತಕಪಳ್ಳಿ. ಡಾ.ಸಿದ್ದಲಿಂಗ ದೇಶಮುಖ,ಕರ್ನಾಟಕ ರೈತ ಪ್ರಾಂತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ,ಸುರೇಶ ದೇಶಪಾಂಡೆ,ನಾಗರೆಡ್ಡಿ ಹೋನಗುಂಟ್ಟಿ,ಬಾಬುಗೌಡ ಪಾಟೀಲ,ಸಂಗಯ್ಯಸ್ವಾಮಿ.ಶಿವಪುತ್ರಪ್ಪ ದೇಶಮುಖ,ವಿಶ್ವನಾಥ ರಡ್ಡಿ ಬೋರಾಳ,ಬಸವರಾಜ ದೇಶಮುಖ,ರೇವಣಸಿದ್ಧಪ್ಪ ಹಿತ್ತಲ,ನಾಗೇಂದ್ರಪ್ಪ ಬೀರಾದರ,ಪ್ರಕಾಶ ಬೀರಾದರ. ಏಕನಾಥ ಅಣವಾರ,ಗವಾಯಿಗಳು ಶರಣಯ್ಯಸ್ವಾಮಿ ಐನೋಳ್ಳಿ,ಸಿದ್ದಯ್ಯಸ್ವಾಮಿ ಸೇರಿದಂತೆ ಗ್ರಾಮದ ಸದ್ಭಕ್ತರು ಮತ್ತು ಮಹಿಳೆಯರು ಅನೇಕರಿದ್ದರು.


ಉದಯವಾಹಿನಿ ಚಿತ್ರ

# ಜಾತಿ ರಹಿತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಿ: ಶಾಸಕ ಸಿ.ಸಿ. ಪಾಟೀಲ

• ಉದಯವಾಹಿನಿ, ನರಗುಂದ

ಮಹಾನ್ ವ್ಯಕ್ತಿಗಳನ್ನು ಜಾತಿಗೆ ಸೀಮಿತ ಮಾಡುವುದು ಸಲ್ಲ. ಅವರು ಜಾತಿ ವ್ಯವಸ್ಥೆ ವಿರುದ್ಧ ಸಮರ ಸಾರಿ ಎಲ್ಲರ ಮನದಲ್ಲಿ ಉಳಿದಿದ್ದಾರೆ. ಅಂಥ ಶ್ರೇಷ್ಠರ ಆದರ್ಶ ಪಾಲಿಸಿ ಜಾತಿ ರಹಿತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಬೇಕು' ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಪಟ್ಟಣದ ಪುರಸಭೆ ಆವರಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಹಾಗೂ ಪುರಸಭೆ ಆಶ್ರಯದಲ್ಲಿ ನಡೆದ ಕನಕದಾಸರ ಜಯಂತಿ ಸಮಾರಂಭದಲ್ಲಿ ಅವರು ಮಾತನಾಡಿದರು.

'ಅವರು ನೀಡಿದ ಆದರ್ಶಗಳು ಸರ್ವಕಾಲಿಕ. ಜಾತಿ ವ್ಯವಸ್ಥೆ ವಿರುದ್ಧ ಹೋರಾಡಿದ ಶ್ರೇಷ್ಠರಲ್ಲಿ


ಉದಯವಾಹಿನಿ ಚಿತ್ರ

ದಾಸ ಶ್ರೇಷ್ಠ ಕನಕದಾಸರು ಒಬ್ಬರು. ಅವರ ಜೀವನ ಎಲ್ಲರಿಗೂ ಮಾದರಿ. ಅವರ ಸಾಹಿತ್ಯ ವಿದ್ಯಾರ್ಥಿಗಳಿಗೆ ತಿಳಿಯಬೇಕು. ಅದನ್ನು ಶಿಕ್ಷಕರು ತಿಳಿಸಬೇಕಿದೆ' ಎಂದರು. ಕನಕದಾಸರು ಸಮಾಜ ಸುಧಾರಣೆಯಲ್ಲಿ ಪ್ರಮುಖ ಪಾತ್ರವಹಿಸಿದರು. ಅಧ್ಯಾತ್ಮ ಹಾಗೂ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು' ಎಂದು ಶಾಸಕ ಸಿ.ಸಿ. ಪಾಟೀಲ ಸಲಹೆ ಮಾಡಿದರು. ಉಪನ್ಯಾಸ ನೀಡಿದ ಶಿರೋಳದ ಬಿಸಿಎಂ ವಸತಿ ನಿಲಯದ ಮೇಲ್ವಿಚಾರಕ ಪ್ರಭಾಕರ ಉಳ್ಳಾಗಡ್ಡಿ ಮಾತನಾಡಿ, 'ಕನಕನಾಯಕ ಕನಕದಾಸರಾಗಿದ್ದು ವಿಶೇಷ. ಅದನ್ನು ಎಲ್ಲರೂ ಅರಿಯಬೇಕಿದೆ. ಯುದ್ಧದಲ್ಲಿ ಆದ ನೋವು ಅವರನ್ನು ದಾಸರನ್ನಾಗಿಸಿತು. ಇಂದಿನ ಯುವಕರಲ್ಲಿ ತಲ್ಲಣ ಗೊಳ್ಳದೇ ಕನಕರ ಕೀರ್ತನೆ ಓದಿ ತಿಳಿಯಬೇಕು. ತಮ್ಮ ಭವಿಷ್ಯದ ಬಗ್ಗೆ ಆಲೋಚಿಸಬೇಕು. ಕನಕದಾಸರ ಸಾಹಿತ್ಯ ಎಲ್ಲರೂ ಅಧ್ಯಯನ ಮಾಡಬೇಕು. ಪರಸ್ಪರ ನಂಬಿಕೆ ಅಗತ್ಯವಿದೆ. ಅದಕ್ಕೆ ಕನಕರ ಸಾಹಿತ್ಯ ಅರಿತಾಗ ಸಾಧ್ಯ' ಎಂದರು.

# ದೇಶಕ್ಕೆ ಸಹಕಾರ ಕ್ಷೇತ್ರ ಕೊಡುಗೆ ಅಮೋಘ: ಸಚಿವ ಈಶ್ವರ ಖಂಡ್ರೆ

## ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಸಂದರ್ಭದಲ್ಲಿ ಬಡತನ, ಅನಕ್ಷರತೆ ಇತ್ತು, ಆದರೆ, ಸಹಕಾರ ಕ್ಷೇತ್ರದಿಂದ ದೇಶ ವಿಕಾಸ ಪಥದತ್ತ ಮುನ್ನಡೆಯುತ್ತಿದೆ

• ಉದಯವಾಹಿನಿ ಬೀದರ್

ದೇಶದ ಪ್ರಗತಿಗೆ ಸಹಕಾರ ಕ್ಷೇತ್ರದ ಕೊಡುಗೆ ಅಪೂರ್ವ, ಅಮೋಘವಾದುದು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಇತರೆ ಸಹಕಾರ ಸಂಘಗಳ ಸಹಯೋಗದಲ್ಲಿ ನಗರದಲ್ಲಿ ಏರ್ಪಡಿಸಿದ್ದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಉದ್ಘಾಟಿಸಿ ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಸಂದರ್ಭದಲ್ಲಿ ಬಡತನ, ಅನಕ್ಷರತೆ ಇತ್ತು. ಆದರೆ, ಸಹಕಾರ ಕ್ಷೇತ್ರದಿಂದ ದೇಶ ವಿಕಾಸ ಪಥದತ್ತ ಮುನ್ನಡೆಯುತ್ತಿದೆ. ಆರ್ಥಿಕವಾಗಿ ಇಂದು ಬಲಿಷ್ಠವಾಗಿ ಬೆಳೆದಿದ್ದೇವೆ. ಇದಕ್ಕೆ ಸಹಕಾರ ಕ್ಷೇತ್ರವೇ ಕಾರಣ. ಹಾಲು ಉತ್ಪಾದಕರ ಸಂಘ ಸಹಕಾರ, ಗೃಹ ನಿರ್ಮಾಣ ಸಹಕಾರ ಸಂಘ, ಸಹಕಾರ ಸಕ್ಕರೆ ಕಾರ್ಖಾನೆ, ಕೇಂದ್ರ ಸಹಕಾರ ಬ್ಯಾಂಕ್, ಕೃಷಿ ಪತ್ತಿನ ಬ್ಯಾಂಕ್ ಹೀಗೆ ಹಲವು ಕ್ಷೇತ್ರಗಳಲ್ಲಿ ಸಹಕಾರ ರಂಗ ಕೆಲಸ ಮಾಡುತ್ತಿದೆ. ಹಿಂದೆ ಮಹಿಳೆಯರು ಹೊರಗೆ ಬರುತ್ತಿರಲಿಲ್ಲ. ಆದರೆ, ಈಗ ಮಹಿಳಾ ಸ್ತ್ರೀಶಕ್ತಿ ಸಂಘಗಳು ಹುಟ್ಟಿಕೊಂಡಿವೆ. ಹಣಕಾಸು ವಹಿವಾಟಿನ ಅರಿವು ಮಹಿಳೆಯರಿಗೆ ಬಂದಿದೆ ಎಂದು ಹೇಳಿದರು.

**ಸಹಕಾರ ಕ್ಷೇತ್ರದಿಂದ ದೇಶ ವಿಕಾಸ ಪಥದತ್ತ**

ಭೀಮಣ್ಣ ಖಂಡ್ರೆ, ಸಿದ್ದಪ್ಪ ಖೇಳಗಿ, ಬಸವರಾಜ ಬಿರಾದಾರ, ಖೇಣಿ, ಗುರುಪಾದಪ್ಪ ನಾಗಮಾರಪಳ್ಳಿ, ವೀರಶೆಟ್ಟಿ ಕುಶನೂರ ಸೇರಿದಂತೆ ಹಲವರು ಜಿಲ್ಲೆಯಲ್ಲಿ ಸಹಕಾರ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸಿದ್ದಾರೆ. ಸಹಕಾರಿ ಕ್ಷೇತ್ರ ಬರುವ ದಿನಗಳಲ್ಲಿ ಇನ್ನಷ್ಟು ಗಟ್ಟಿಯಾಗಿ ಬೆಳೆಯಬೇಕು. ಮಧ್ಯವರ್ತಿಗಳಿಂದ ದುರ್ಬಳಕೆ ಆಗಬಾರದು. ಸಾಲ ಮರುಪಾವತಿಯಲ್ಲಿ ಉತ್ತಮ ಪ್ರಗತಿ ಸಾಧಿಸಬೇಕು. ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಹೆಚ್ಚಿನ ಸೇವಾ ಸೌಲಭ್ಯ ಜನರಿಗೆ ಕೊಟ್ಟು ಪ್ರಗತಿ ಸಾಧಿಸಬೇಕು ಎಂದು ಸಲಹೆ ನೀಡಿದರು. ಬರುವ ದಿನಗಳಲ್ಲಿ ಸಹಕಾರ ಸಂಘಗಳು ಉಳಿಯುತ್ತವೆಯೋ ಇಲ್ಲವೋ ಎಂಬ ಅನುಮಾನ ಕಾಡುತ್ತಿದೆ. ನಾನು ಬಿಎಸ್‌ಎಸ್‌ಕೆ ಅಧ್ಯಕ್ಷ ಸ್ಥಾನದಿಂದ ನಿರ್ಗಮಿಸುವಾಗ ಕಾರ್ಖಾನೆ ಮೇಲೆ 28 ಕೋಟಿ ಸಾಲ ಇತ್ತು. ಅದೀಗ 300 ಕೋಟಿ ಸಾಲವಾಗಿದೆ. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್‌ಎಸ್‌ಕೆ) ಹಾಗೂ ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಬಿಡಿಸಿಸಿ) ಎರಡೂ ಉಳಿಯಬೇಕು. ಎರಡೂ ಕಟ್ಟಿ ಬೆಳೆಸಿದ್ದು ರೈತರೇ. ಬ್ಯಾಂಕುಗಳು ಸಾಲ ಕೊಟ್ಟಾಗ ರೈತರು ಸಕಾಲಕ್ಕೆ ಮರುಪಾವತಿಸಬೇಕು. ಬರುವ ದಿನಗಳಲ್ಲಿ ಬಿಎಸ್‌ಎಸ್‌ಕೆ ಪುನಶ್ಚೇತನಕ್ಕೆ ಸರ್ಕಾರದಿಂದ ಅಗತ್ಯ ಕ್ರಮ ಜರುಗಿಸಲಾಗುವುದು. ಎಲ್ಲಾ ಜನಪ್ರತಿನಿಧಿಗಳ ಸಹಕಾರದೊಂದಿಗೆ ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

> ಪೌರಾಡಳಿತ ಸಚಿವ ರಹೀಂ ಖಾನ್, ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಮಾತನಾಡಿ, ಸಹಕಾರ ಕ್ಷೇತ್ರದ ಬೆಳವಣಿಗೆಗೆ ಎಲ್ಲಾ ರೀತಿಯ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು. ಸಹಕಾರ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ಸಹಕಾರಿಗಳಿಂದ ವಸ್ತು ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು.

ಬೀದರ್ ಜಿಲ್ಲೆ ಕೂಡ ಮಹಿಳಾ ಸ್ವಸಹಾಯ ಸಂಘಗಳ ಮೂಲಕ ದೇಶದ ಗಮನ ಸೆಳೆದಿದೆ ಎಂದು ಹೇಳಿದರು. 'ನೆಹರೂ ಜನ್ಮದಿನಕ್ಕೆ ಸಹಕಾರ ಸಪ್ತಾಹ'' ನಬಾರ್ಡ್ ಈ ಹಿಂದೆ ರಾಜ್ಯಕ್ಕೆ ಪ್ರತಿವರ್ಷ 6 ಲಕ್ಷ ಕೋಟಿ ಸಾಲ ಕೊಡುತ್ತಿತ್ತು. ಈಗ ಅದನ್ನು 2.50 ಲಕ್ಷ ಕೋಟಿಗೆ ಇಳಿಕೆ ಮಾಡಿದೆ. ಈ ಸಂಬಂಧ ರಾಜ್ಯದ ಮುಖ್ಯಮಂತ್ರಿ, ಸಂಸದ ಸಾಗರ್ ಖಂಡ್ರೆ ಸೇರಿದಂತೆ ಇತರೆ ಸಂಸದರು ಪತ್ರ ಬರೆದು ಸಾಲದ ಪ್ರಮಾಣ ಕಡಿತ ಮಾಡದಂತೆ ಆಗ್ರಹಿಸಿದ್ದಾರೆ' ಎಂದು ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು. ಪ್ರತಿವರ್ಷ ನಬಾರ್ಡ್ ಸಾಲ ಕೊಡುವ ಪ್ರಮಾಣ ಹೆಚ್ಚಾಗಬೇಕು. ಅದರ ಬದಲಾಗಿ ಕಡಿತಗೊಳಿಸುತ್ತಿರುವುದು ಸರಿಯಲ್ಲ. ಇದರ ವಿರುದ್ಧ ಕೂಗು ಏಳಬೇಕು. ಜನಾಭಿಪ್ರಾಯ ರೂಪುಗೊಳ್ಳಬೇಕು ಎಂದು ಹೇಳಿದರು.

### ಇಡೀ ರಾಜ್ಯದಲ್ಲಿ ಒಂದು ವಾರ ಸಹಕಾರ ಸಪ್ತಾಹ

**ಸಹಕಾರ ಸಪ್ತಾಹದಲ್ಲಿ ಪಾಲ್ಗೊಂಡಿದ್ದ ಸಹಕಾರಿಗಳು'ದೇಶದ ಮೊದಲ ಪ್ರಧಾನಿ ಪಂಡಿತ ಜವಾಹರಲಾಲ್ ನೆಹರೂ ಅವರ ಜನ್ಮದಿನದ ಪ್ರಯುಕ್ತ ಪ್ರತಿ ವರ್ಷ ಇಡೀ ರಾಜ್ಯದಲ್ಲಿ ಒಂದು ವಾರ ಸಹಕಾರ ಸಪ್ತಾಹ ಆಚರಿಸಲಾಗುತ್ತದೆ' ಎಂದು ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು. ಕಳೆದ 71 ವರ್ಷಗಳಿಂದ ಸಹಕಾರ ಸಪ್ತಾಹ ಆಚರಿಸಿಕೊಂಡು ಬರಲಾಗುತ್ತಿದೆ. 'ನಾನು ಎಲ್ಲರಿಗಾಗಿ ಎಲ್ಲರೂ ನನಗಾಗಿ' ಎಂಬ ತತ್ವದಡಿ ಸಹಕಾರ ಕ್ಷೇತ್ರ ಇದೆ. ಗದುಗಿನ ಕಣಗಿನಹಾಳ ಗ್ರಾಮದಲ್ಲಿ ಆರಂಭಗೊಂಡ ಸಹಕಾರ ಚಳವಳಿ ಇಡೀ ದೇಶಕ್ಕೆ ವಿಸ್ತರಿಸಿದೆ.**

## ಮಿನಿ ನ್ಯೂಸ್

### ಹೊಂಡದಲ್ಲಿ ತಾಯಿ, ಮಗಳ ಶವ ಪತ್ತೆ

• ಉದಯವಾಹಿನಿ, ಮುದ್ದೇಬಿಹಾಳ

ತಾಲೂಕಿನ ಹಂಡರಗಲ್ ಗ್ರಾಮದ ಹೊರವಲಯದಲ್ಲಿರುವ ಆಳವಾದ, ಸುತ್ತಲೂ ಜೇನಿಕಂಟಿಗಳಿಂದ ಕೂಡಿ ಸಂಕೀರ್ಣವಾಗಿರುವ ಹೊಂಡದಲ್ಲಿ (ತೆರೆದ ಬಾವಿ) ತಾಯಿ, ಮಗಳ ಶವ ಸಂಜೆ ಪತ್ತೆ ಆಗಿದೆ. ಶವಗಳನ್ನು ಅದೇ ಗ್ರಾಮದ ರಿಹಾನಾ ಮಹೆ ಬೂಬಸಾಬ ಇನಾಮದಾರ (24), ಮಗಳು ಅಮೀರಾ ಮಹೆಬೂಬಸಾಬ ಇನಾಮದಾರ (4) ಎಂದು ಗುರುತಿಸಲಾಗಿದೆ.


ಉದಯವಾಹಿನಿ ಚಿತ್ರ

ಮುದ್ದೇಬಿಹಾಳ ಅಗ್ನಿಶಾಮಕ ಠಾಣಾಧಿಕಾರಿ ಪ್ರಮೋದ ಸುಂಕದ, ಸಹಾಯಕ ಠಾಣಾಧಿಕಾರಿ ರಮೇಶ ಚಳ್ಳಣ್ಣವರ್, ಸಿಬ್ಬಂದಿಗಳಾದ ಸುಭಾಷ ರಾಠೋಡ, ಸಿದ್ದಣ್ಣ ಪೋಲೇಶಿ, ಪ್ರಕಾಶ ಸುಬ್ಬನಗೋಳ, ಸುನೀಲ ನಾಯಕ, ಶ್ರೀಶೈಲಗೌಡ ಪಾಟೀಲ, ರವೀಂದ್ರ ರತ್ನಾಕರ ಅವರು ಸ್ಥಳಕ್ಕೆ ಧಾವಿಸಿ ಜೆಸಿಬಿ ಯಂತ್ರ ಬಳಸಿ ಹರಸಾಹಸಪಟ್ಟು ಶವಗಳನ್ನು ಹೊರತೆಗೆದು ಪೊಲೀಸರಿಗೆ ಹಸ್ತಾಂತರಿಸಿದರು.

ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಮುದ್ದೇಬಿಹಾಳದ ಸರ್ಕಾರಿ ಆಸ್ಪತ್ರೆಗೆ ತರಲಾಗಿದೆ. ಮುದ್ದೇಬಿಹಾಳ ಪೊಲೀಸ್ ಠಾಣೆಯ ಪಿಎಸೈಗಳಾದ ಸಂಜಯ್ ತಿಪ್ಪರಡ್ಡಿ, ಆರ್.ಎಲ್.ಮನ್ನಾಭಾಯಿ ಸ್ಥಳಕ್ಕೆ ಭೇಟಿ ನೀಡಿ ಕಾನೂನು ಪ್ರಕ್ರಿಯೆ ಕೈಕೊಂಡಿದ್ದಾರೆ. ಸಾವಿಗೆ ನಿಖರ ಕಾರಣ ತಕ್ಷಣಕ್ಕೆ ತಿಳಿದುಬಂದಿಲ್ಲ. ಗೋವಾದಲ್ಲಿದ್ದ ಮಗಳು ಅಮೀರಾ ಊರಿಗೆ ಬಂದು ತಾಯಿಯೊಂದಿಗೆ ಪ್ರಾಣ ಕಳೆದುಕೊಂಡಿದ್ದು ವಿಧಿಯಾಟ ಎಂದು ಸ್ಥಳೀಯರು ಮರುಕಪಡುತ್ತಿದ್ದಾರೆ.

### ನಕ್ಸಲ್ ಎನ್‌ಕೌಂಟರ್ ನಡೆದ ಸ್ಥಳಕ್ಕೆ ಐಎಸ್‌ಡಿ ಐಜಿಪಿ ಡಿ. ರೂಪಾ ಭೇಟಿ

• ಉದಯವಾಹಿನಿ ಉಡುಪಿ

ಹೆಬ್ರಿ ತಾಲ್ಲೂಕಿನ ಪೀತ್‌ಬೈಲಿನಲ್ಲಿ ಎಎನ್‌ಎಫ್ ನವರು ನಡೆಸಿದ ಎನ್ ಕೌಂಟರ್ ನಲ್ಲಿ ಹತನಾದ ಹೆಬ್ರಿ ತಾಲ್ಲೂಕಿನ ಕೂಡ್ಲುವಿನ ವಿಕ್ರಂ ಗೌಡನ ವಿರುದ್ಧ ಕೊಲೆ ಪ್ರಕರಣವೂ ಸೇರಿದಂತೆ 61 ಪ್ರಕರಣಗಳು ದಾಖಲಾಗಿದ್ದವು ಎಂದು ಸ್ಥಳಕ್ಕೆ ಭೇಟಿ ನೀಡಿದ ರಾಜ್ಯ ಆಂತರಿಕ ಭದ್ರತಾ ವಿಭಾಗದ ಡಿಜಿಪಿ ಡಿ.ರೂಪ ತಿಳಿಸಿದರು.

ಈತನ ವಿರುದ್ಧ ಕೇರಳದಲ್ಲೂ 19 ಪಕರಣಗಳು ದಾಖಲಾಗಿವೆ ಎಂದರು. 15 ದಿನಗಳಿಂದಲೂ ಶೋಧ ಕಾರ್ಯಾಚರಣೆ ನಡೆಯುತ್ತಿತ್ತು ಎಂದೂ ಹೇಳಿದರು. ಮಾಧ್ಯಮದವರನ್ನು ಘಟನಾ ಸ್ಥಳದಿಂದ ಒಂದು ಕಿ.ಮೀ ದೂರದಲ್ಲೇ ಪೊಲೀಸರು ತಡೆದರು. ಸೋಮವಾರ ರಾತ್ರಿ ನಡೆದ ಎನ್‌ಕೌಂಟರ್ ನಲ್ಲಿ ನಕ್ಸಲ್ ನಾಯಕ ವಿಕ್ರಮ್ ಗೌಡ ಹತನಾಗಿದ್ದಾನೆ. ಸೋಮವಾರ ರಾತ್ರಿ ಐದು ಮಂದಿ ನಕ್ಸಲರ ತಂಡ ಸೀತಂಬೈಲು ಸಮೀಪ ಬಂದಿದ್ದ ವೇಳೆ ಎಎನ್‌ಎಫ್ ತಂಡ ಮತ್ತು ನಕ್ಸಲರ ನಡುವೆ ಗುಂಡಿನ ಚಕಮಕಿ ನಡೆದಿದೆ. ಈ ವೇಳೆ ವಿಕ್ರಮ್ ಹತನಾಗಿದ್ದು, ಉಳಿದವರು ಪರಾರಿಯಾಗಿದ್ದಾರೆ ಎನ್ನಲಾಗಿದೆ.

### 63 ಲಕ್ಷ ಮೌಲ್ಯದ ಚಿನ್ನಾಭರಣ ಕಳವು

• ಉದಯವಾಹಿನಿ ಉಡುಪಿ

ಮುಂಬೈನಿಂದ ಉಡುಪಿಗೆ ರೈಲಿನಲ್ಲಿ ಬಂದಿದ್ದ ಕುಟುಂಬವೊಂದರ 63 ಲಕ್ಷ ಮೌಲ್ಯದ ಚಿನ್ನಾಭರಣ ರೈಲಿನಲ್ಲಿ ಕಳವಾಗಿರುವ ಬಗ್ಗೆ ಮಣಿಪಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮುಂಬೈನಲ್ಲಿ ನೆಲೆಸಿರುವ ಅವಿನಾಶ್ ಎಂಬುವವರು ಕುಟುಂಬದವರೊಂದಿಗೆ ನ.15ರಂದು ಸಿಎಸ್‌ಟಿ- ಮಂಗಳೂರು ಎಕ್ಸ್‌ಪ್ರೆಸ್ ರೈಲಿನಲ್ಲಿ ಮುಂಬೈನಿಂದ ಹೊರಟಿದ್ದರು. ಒಡವೆ ಹಾಗೂ ಬಟ್ಟೆಗಳಿದ್ದ ನಾಲ್ಕು ಸೂಟ್ ಕೇಸ್‌ಗಳನ್ನು ಬೀಗ ಹಾಕದೇ ಜಿಪ್ ಲಾಕ್ ಮಾಡಿ ಸೀಟಿನ ಕೆಳಗೆ ಇಟ್ಟಿದ್ದರು. ನ.16ರಂದು ಉಡುಪಿಯ ಇಂದ್ರಾಳಿ ರೈಲು ನಿಲ್ದಾಣದಲ್ಲಿ ಇಳಿದಿದ್ದರು. ಮನೆಗೆ ಹೋಗಿ ಬ್ಯಾಗ್‌ಗಳನ್ನು ತೆರೆದಾಗ ಎರಡು ಬ್ಯಾಗ್‌ಗಳಲ್ಲಿ ಇಟ್ಟಿದ್ದ 63 ಲಕ್ಷ ಬೆಲೆ ಬಾಳುವ 900 ಗ್ರಾಂ ತೂಕದ ಚಿನ್ನದ ಒಡವೆಗಳು ಕಾಣೆಯಾಗಿರುವುದು ಗಮನಕ್ಕೆ ಬಂದಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಒಡವೆಗಳನ್ನು ಪನ್‌ವೆಲ್‌ನಿಂದ ಕಣಕವಲಿ ರೈಲು ನಿಲ್ದಾಣಗಳ ಮಧ್ಯೆ ಕಳವು ಮಾಡಿರಬಹುದು ಎಂದು ದೂರಿನಲ್ಲಿ ತಿಳಿಸಲಾಗಿದೆ. ಸಂಬಂಧಿಯ ಮದುವೆ ಸಮಾರಂಭಕ್ಕಾಗಿ ಇವರು ಮುಂಬೈನಿಂದ ಊರಿಗೆ ಬಂದಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ಬಾಂಗ್ಲಾ ನುಸುಳುಕೋರರು ಅರೆಸ್ಟ್

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗದಲ್ಲಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, 6 ಜನ ಬಾಂಗ್ಲಾ ನುಸುಳುಕೋರರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಚಿತ್ರದುರ್ಗ ನಗರದಲ್ಲಿ ಖಾಸಗಿ ಗಾರ್ಮೆಂಟ್ಸ್ ಮೇಲೆ ಪೊಲೀಸರು ದಾಳಿ ನಡೆಸಿದ ವೇಳೆ ಬಾಂಗ್ಲಾ ನುಸುಳುಕೋರರು ಪತ್ತೆಯಾಗಿದ್ದು, ಸದ್ಯ ಆರು ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಚಿತ್ರದುರ್ಗ ಡಿವೈಎಸ್ಪಿ ದಿನಕರ್, ಸಿಪಿಐ ಗುಡ್ಡಪ್ಪ, ವೆಂಕಟೇಶ ನೇತೃತ್ವದಲ್ಲಿ ದಾಳಿ ನಡೆದಿದೆ. ಬಳಿಕ ಪೊಲೀಸರು ಪರಿಶೀಲನೆ ಮುಂದುವರಿಸಿ, 15 ಜನ ಶಂಕಿತ ಬಾಂಗ್ಲಾ ನುಸುಳುಕೋರರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

### ಕಾರ್ಮಿಕರ ಸಮೇತ ಕಾಲುವೆಗೆ ಬಿದ್ದ ಗೂಡ್ಸ್ ಆಟೋ: ತಪ್ಪಿದ ಭಾರಿ ಅನಾಹುತ

• ಉದಯವಾಹಿನಿ ರಾಯಚೂರು

ರಾಯಚೂರಿನಲ್ಲಿ ಭಾರಿ ಅನಾಹುತ ಒಂದು ತಪ್ಪಿದ್ದು, ಕೂಲಿ ಕಾರ್ಮಿಕರನ್ನು ಹೊತ್ತುಯ್ಯುತ್ತಿದ್ದ ಗೂಡ್ಸ್ ಆಟೋ ಒಂದು ಚಾಲಕನ ನಿಯಂತ್ರಣ ತಪ್ಪಿ ಕಾಲುವೆ ಬಿದ್ದ ಪರಿಣಾಮ ಹಲವರಿಗೆ ಗಾಯಗಳಾಗಿರುವ ಘಟನೆ ರಾಯಚೂರು ಜಿಲ್ಲೆಯ ದೇವದುರ್ಗದ NRBC ಕಾಲುವೆ ಬಳಿ ನಡೆದಿದೆ. ಹೌದು ಕೂಲಿ ಕಾರ್ಮಿಕರ ಸಮೇತ ಕಾಲುವಿಗೆ ಬಿದ್ದು ದುರಂತ ಸಂಭವಿಸಿದೆ. ನಿನ್ನೆ ಸಂಜೆ ದೇವದುರ್ಗದ ಎನ್ ಆರ್ ಬಿ ಸಿ ಕಾಲುವೆಯಲ್ಲಿ ಈ ಒಂದು ಘಟನೆ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿ ಆಟೋ ಕಾಲುವೆಗೆ ಬಿದ್ದಿದೆ. ಕಾಲುವೆಯೊಳಗೆ ಚಾಲಕ ಸೇರಿ 10 ಕೂಲಿ ಕಾರ್ಮಿಕರು ಸಿಲುಕಿ ಒದ್ದಾಟ ನಡೆಸಿದ್ದಾರೆ. ಕೂಡಲೇ ಸ್ಥಳೀಯರು ಆಟೋದಲ್ಲಿ ಇದ್ದವರ ರಕ್ಷಣೆಗೆ ಧಾವಿಸಿದ್ದಾರೆ. ಹಗ್ಗ ಕಟ್ಟಿ ಗೂಡ್ಸ್ ಆಟೋವನ್ನು ಮೇಲೆ ಎತ್ತಿದ್ದಾರೆ.


ಉದಯವಾಹಿನಿ ಚಿತ್ರ

ಗೂಡ್ಸ್ ಆಟೋಗಳಲ್ಲಿ ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದ ಚಾಲಕರ ವಿರುದ್ಧ ಇದೀಗ ಸ್ಥಳೀಯರು ಕಿಡಿಕಾರಿದ್ದು, ಗೂಡ್ಸ್ ಆಟೋ ಚಾಲಕನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು.

**ವೃಷಭ** ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು.

**ಮಿಥುನ** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು.

**ಕರ್ಕಾಟಕ** ನಿಮ್ಮಲ್ಲಿ ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ.

**ಸಿಂಹ** ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ. ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ. ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ.

**ಕನ್ಯಾ** ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಭೂಮಿ ಅಥವಾ ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ನಿಮಗೆ ಮಾರಕವಾಗಬಹುದು.

**ತುಲಾ** ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸವನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ.

**ವೃಶ್ಚಿಕ** ನೀವು ಇಂದು ಪಡೆದ ಹೆಚ್ಚುವರಿ ಜ್ಞಾನವು ಸಮಕಾಲೀನರೊಂದಿಗೆ ವ್ಯವಹರಿಸುವಾಗ ನಿಮಗೆ ಸಹಾಯ ಮಾಡುತ್ತದೆ. ಪ್ರಯಾಣ ಮತ್ತು ಶೈಕ್ಷಣಿಕ ಅನ್ವೇಷಣೆಗಳು ನಿಮ್ಮಲ್ಲಿ ಜಾಗೃತಿ ಮೂಡಿಸುತ್ತವೆ.

**ಧನಸ್ಸು** ನಿಮ್ಮ ದಯಾಳು ಪ್ರಕೃತಿ ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ. ನೀವು ಮಕ್ಕಳೊಡನೆ ಸ್ವಲ್ಪ ಸಮಯ ಕಳೆಯಬೇಕು.

**ಮಕರ** ಇಂದಿನ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಕುಂಭ** ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

**ಮೀನ** ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಪ್ರೀತಿಯ ಸಂಗೀತವನ್ನು ಯಾವಾಗಲೂ ಅದರಲ್ಲೇ ಮುಳುಗಿರುವವರು ಕೇಳಬಹುದು.

# ಆರೋಗ್ಯವನ್ನು ವೃದ್ಧಿಸುವ ಚಿಕಿತ್ಸಾ ಪದ್ದತಿ ಪ್ರಕೃತಿ ಚಿಕಿತ್ಸೆ

## ಪ್ರಕೃತಿ ಚಿಕಿತ್ಸೆಯ ಕ್ಲಿನಿಕ್‌ಗಳು ಹೆಚ್ಚಿದರೆ ಕಾಯಿಲೆಗಳು ಬರದಂತೆ ತಡೆಯಲು ಸಾಧ್ಯ: ಬಸವಪ್ರಭು ಸ್ವಾಮೀಜಿಗಳು

• ಉದಯವಾಹಿನಿ ದಾವಣಗೆರೆ

7ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಅಂಗವಾಗಿ ಶ್ರೀಮತಿ ತುಳಸಿ ರಾಮರಾಜು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ, ವಿದ್ಯಾನಗರ, ದಾವಣಗೆರೆ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿಕೊಂಡಿದ್ದ ಬಸವಪ್ರಭು ಸ್ವಾಮೀಜಿಗಳು ಮಾತನಾಡಿ ಯೋಗ ಮತ್ತು ಪ್ರಕೃತಿ ಚಿಕಿತ್ಸೆಯು ಭಾರತೀಯ ಪರಂಪರೆಯ ಚಿಕಿತ್ಸೆಯಾಗಿದ್ದು ಇದು ಕೇವಲ ಪಾರ್ಶ್ವವಾಯು, ಸಯಾಟಿಕ, ಬೊಜ್ಜುತನ, ಸಂಧಿವಾತ ಇತ್ಯಾದಿ ದೀರ್ಘಕಾಲಿಕ ತೊಂದರೆಗಳನ್ನು ಸರಿಮಾಡುವ ಪದ್ಧತಿಯಾಗಿರದೆ, ರೋಗವು ಬರದಂತೆ ತಡೆಯುವ ಮತ್ತು ಆರೋಗ್ಯವನ್ನು ವೃದ್ಧಿಸುವ ಚಿಕಿತ್ಸಾ ಪದ್ದತಿಯಾಗಿದೆ.

**ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ**

ಈ ಪ್ರಕೃತಿ ಚಿಕಿತ್ಸೆಯನ್ನು ಪಡೆಯಬೇಕೆಂದರೆ ದೊಡ್ಡ-ದೊಡ್ಡ ಕೇಂದ್ರಗಳಿಗೇ ಹೋಗಿ ಚಿಕಿತ್ಸೆಯನ್ನು ಪಡೆಯಬೇಕೆಂಬ ಕಲ್ಪನೆಯಿಂದ ಹೊರಬಂದು, ಕ್ಲಿನಿಕ್‌ಗಳಲ್ಲಿಯೇ ಪ್ರಕೃತಿ ಚಿಕಿತ್ಸಾ ಪದ್ದತಿಯನ್ನು ಬಳಸಿ ನೀಡುವಂತಹ ಚಿಕಿತ್ಸೆಯಿಂದ ನಾವು ನಮ್ಮ ಆರೋಗ್ಯವನ್ನು ಪಡೆಯಬಹುದಾಗಿದೆ. ಇಂದಿನ ಒತ್ತಡಯುಕ್ತ ಬದುಕಿನಲ್ಲಿ ಪ್ರಕೃತಿ ಚಿಕಿತ್ಸಾ ಕೇಂದ್ರಗಳಿಗೆ ಹೋಗಿ ಒಂದು ತಿಂಗಳ ಕಾಲ ತಂಗುವುದು ಕಷ್ಟ ಸಾಧ್ಯವಾದ್ಯವಾದ ಮಾತಾಗಿರುವುದರಿಂದ, ಶ್ರೀಮತಿ ತುಳಸಿ ರಾಮರಾಜು ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆಯಂತಹ ಕ್ಲೀನಿಕ್‌ಗಳು ಹೆಚ್ಚಿದರೆ ಕಾಯಿಲೆಗಳು ಬರದಂತೆ ತಡೆಯಲು ಸಾಧ್ಯ, ಮಾತ್ರವಲ್ಲದೆ ಬಂದಂತಹ ಕಾಯಿಲೆಗಳನ್ನು ಸರಿಪಡಿಸಿಕೊಳ್ಳಲು ಕೂಡ ಸಾಧ್ಯವೆಂದು ತಿಳಿಸಿದರು.

ಈ ವೈದ್ಯ ಪದ್ದತಿಯು ಕಾಯಿಲೆಯ ಮೂಲವನ್ನು ಕಂಡುಹಿಡಿದು ಕಾಯಿಲೆಯನ್ನು ಪರಿಪೂರ್ಣವಾಗಿ ಸರಿಪಡಿಸುತ್ತದೆ ಹಾಗಾಗಿ ಇಂತಹ ಪದ್ಧತಿಯ ಕ್ಲೀನಿಕ್‌ಗಳು ಹೆಚ್ಚುವುದರಿಂದ ಸಾರ್ವಜನಿಕರ ಆರೋಗ್ಯವನ್ನು ಇಮ್ಮಡಿಗೊಳಿಸಬಹುದೆಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಖ್ಯಾತ ಪುತ್ತೂರು ಶಲ್ಯ ವೈದ್ಯರಾದ ಬಿ. ರಾಮರಾಜುರವರು ಮಾತನಾಡಿ, ಈ ಪ್ರಕೃತಿ ಚಿಕಿತ್ಸಾ ಪದ್ಧತಿಯು ಹಳೇತಲೆಮಾರಿನಿಂದ ನಡೆದುಕೊಂಡು ಬಂದಿರುವ ಚಿಕಿತ್ಸಾ ಪದ್ಧತಿಯಾಗಿದ್ದು, ಈ ಚಿಕಿತ್ಸೆಯು ಮನೆಮದ್ದಿನ ರೂಪದಲ್ಲಿ ಅದೆಷ್ಟೋ ಭಾರತೀಯರ ದೈನಂದಿನ ಭಾಗವಾಗಿದೆ. ಪ್ರಕೃತಿ ಚಿಕಿತ್ಸೆ ಪದ್ಧತಿಯ ಬಗ್ಗೆ ಸಾರ್ವಜನಿಕರಿಗೆ ತಿಳಿಯಪಡಿಸಲು ಇದು ಉತ್ತಮ ವೇದಿಕೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಡಾ. ಗಂಗಾಧರ ವರ್ಮರವರು ಮಾತನಾಡಿ ಪ್ರಕೃತಿ ಚಿಕಿತ್ಸೆಯಿಂದ ಮೂಳೆ, ನರ, ಶ್ವಾಸಕೋಶ, ಜೀರ್ಣಾಂಗವ್ಯೂಹ, ಚರ್ಮ, ದೀರ್ಘಕಾಲಿಕ, ಮುಟ್ಟಿನ ಸಮಸ್ಯೆಗಳು ಸಂಪೂರ್ಣವಾಗಿ ಔಷಧಗಳ ಪ್ರಮೇಯವೇ ಇಲ್ಲದೆ ಸಂಪೂರ್ಣ ಗುಣವಾಗುತ್ತವೆಯೆಂಬುದು ನನ್ನ ಇಷ್ಟು ವರ್ಷಗಳ ಅನುಭವ ಎಂದು ಹೇಳಿದರು ಮಾತ್ರವಲ್ಲದೆ 7ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಧ್ಯೇಯ ವಾಕ್ಯವು ಪ್ರಕೃತಿ ಚಿಕಿತ್ಸೆಯಿಂದ ಆರೋಗ್ಯಯುತ ದೀರ್ಘಾಯುಷ್ಯ ಎಂದು ತಿಳಿಸಿದರು.

ಈ ಕಾರ್ಯಕ್ರಮದ ನಿರೂಪಣೆಯನ್ನು ಶ್ರೀಮತಿ ಕನಕ ಬಿಂದುರವರು ನೆರವೇರಿಸಿದರು, ಈ ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಮ್ಯಾನೇಜರ್ ಪ್ರಹ್ಲಾದ್, ಸುಧಾ ಜಾಧವ್, ಪವಿತ್ರಾ, ನಾಗಣ್ಣ, ಗಾಯತ್ರಿ, ಶಿಲ್ಪಾ, ಶ್ರೀಧರ್, ಅಬ್ದುಲ್ ಸಾಬ್ ಹಾಗೂ ಸಾಧಕರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> ಈ ದಿನ ನಾವೆಲ್ಲರೂ ಪ್ರಕೃತಿಯನ್ನು ಕಾಪಾಡುವ ಅಂದರೆ ನಾವು ತಿನ್ನುವ ಹಣ್ಣುಗಳ ಬೀಜಗಳನ್ನು ಮಣ್ಣಿಗೆ ಹಾಕುವ ಮುಖಾಂತರ ಮತ್ತಷ್ಟು ಗಿಡ-ಮರಗಳನ್ನು ಪ್ರಕೃತಿಯಲ್ಲಿ ಹೆಚ್ಚಿಸಿದರೆ ಮಾತ್ರ ಪ್ರಕೃತಿ ಚಿಕಿತ್ಸಾ ಪದ್ದತಿಗೆ ಉಳಿಗಾಲ. ಪ್ರಕೃತಿಯೇ ಇಲ್ಲದ ಪ್ರಕೃತಿಚಿಕಿತ್ಸೆ ವ್ಯರ್ಥವೆಂದು ತಿಳಿಸಿದರು
> - ಶ್ರೀಮತಿ ತುಳಸಿ

> ಪ್ರಕೃತಿ ಚಿಕಿತ್ಸೆಯು ನಿರೌಷಧ ಚಿಕಿತ್ಸಾ ಪದ್ಧತಿಯಾಗಿದ್ದು, ಇದು ಬಹಳಷ್ಟು ದೀರ್ಘಕಾಲಿಕ ತೊಂದರೆಗಳಿಗೆ ರಾಮಬಾಣವಾದ ಚಿಕಿತ್ಸಾ ಪದ್ಧತಿಯಾಗಿದೆ. ಪ್ರಕೃತಿ ಚಿಕಿತ್ಸೆಯ ಸಿದ್ಧಾಂತದ ಪ್ರಕಾರ ದೇಹದಲ್ಲಿ ವಿಷಕಾರಿ ವಸ್ತುಗಳ ಸಂಗ್ರಹಣೆಯಿಂದಾಗಿ ಕಾಯಿಲೆಗಳು ಬರುತ್ತವೆ. ಪ್ರಕೃತಿ ಚಿಕಿತ್ಸಾ ವೈದ್ಯರುಗಳು ಈ ಮೂಲಕಾರಣವನ್ನು ಹುಡುಕಿ ಇಡೀ ದೇಹವನ್ನು ಶುದ್ದೀಕರಣಗೊಳಿಸುವ ಚಿಕಿತ್ಸೆಯನ್ನು ನೀಡುತ್ತಾರೆ ಮಾತ್ರವಲ್ಲದೆ ಅಕ್ಯುಪಂಕ್ಚರ್, ಮಸಾಜ್ ಚಿಕಿತ್ಸೆ, ಫಿಸಿಯೋಥೆರಪಿಯಂತಹ ಚಿಕಿತ್ಸೆಗಳಿಂದ ತ್ವರಿತ ರೋಗಲಕ್ಷಣಗಳನ್ನು ಹರಿಸುವ ಚಿಕಿತ್ಸೆಗಳನ್ನೂ ನೀಡುತ್ತಾರೆ. ಪ್ರಕೃತಿ ಚಿಕಿತ್ಸೆಯನ್ನು ಬಳಸಿಕೊಂಡು ಸರಿಯಾಗುವ ಎಲ್ಲಾ ಖಾಯಿಲೆಗಳು ಮತ್ತೆ ಮರಳಿ ಬರದಷ್ಟರ ಮಟ್ಟಿಗೆ ಗುಣವನ್ನು ಕಾಣಿಸಿಕೊಳ್ಳುತ್ತವೆ ಡಾ. ವಿಂಧ್ಯ ಗಂಗಾಧರ ವರ್ಮ

# ಮಟ್ಕಾ, ಇಸ್ಪೀಟ್, ಬೆಟ್ಟಿಂಗ್, ಮೀಟರ್ ಬಡ್ಡಿ ದಂಧೆ, ಅಕ್ರಮ ಮದ್ಯ ಮಾರಾಟ ತಡೆಯಲು ಎಸ್ಪಿಗೆ ಮನವಿ

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

ಜಿಲ್ಲೆಯ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಸಾಮಾಜಿಕ ಕಾರ್ಯ ಕರ್ತೆ ರುದ್ರಾಂಬಿಕ. ಆರ್. ಪಾಟೀಲ್‌ರವರು ಭೇಟಿ ಮಾಡಿ ಸನ್ಮಾನಿಸಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಹೆಗ್ಗಿಲ್ಲದೆ ನಡೆಯುತ್ತಿರುವ ಮಟ್ಕಾ ಜೂಜು ಬೆಟ್ಟಿಂಗ್ ಮೀಟರ್ ಬಡ್ಡಿ ದಂಧೆ ಅಕ್ರಮ ಮಧ್ಯ ಮಾರಾಟ ಸೇರಿದಂತೆ ಇನ್ನಿತರ ಅಕ್ರಮ ಚಟುವಟಿಕೆಗಳನ್ನು ತಡೆಯುವಂತೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಅಕ್ರಮ ಚಟುವಟಿಕೆಗಳ ಹಾವಳಿಯಿಂದ ಅದೇಷ್ಟೊ ಬಡ ಕುಟುಂಬಗಳ ಸಂಸಾರ ಬೀದಿಗೆ ಬಂದಿವೆ ಮತ್ತು ಹಳ್ಳಿಗಳಲ್ಲಿ ಚಹಾ ಹೋಟೆಲ್ ಕಿರಾಣಿ ಅಂಗಡಿಗಳಲ್ಲಿ ಮಧ್ಯ ಮಾರಾಟ ಮಾಡುತ್ತಿದ್ದು ಇದರಿಂದ ಹಿರಿಯರು ಯುವಕರನ್ನದೆ ಕುಡಿತದ ಚಟಕ್ಕೆ ಬಲಿಯಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ ಜೊತೆಗೆ ದಿನನಿತ್ಯ ಕುಡಿದು ಬಂದು ಮಹಿಳೆಯರ ಮೇಲೆ ಹಲ್ಲೆ ದೌರ್ಜನ ಮಾಡುತ್ತಿರುವುದು ದಿನನಿತ್ಯ ಕಂಡುಬರುತ್ತಿದೆ ಸಂಬಂಧಿಸಿದ ಅಧಿಕಾರಿಗಳು ಮಾತ್ರ ಅಕ್ರಮ ಚಟುವಟಿಕೆಗಳ ನಡೆಸುವ ವಿರುದ್ಧ ಸರಿಯಾದ ಕ್ರಮ ಕೈಗೊಳ್ಳಲು ಹಿಂದೇಟು ಹಾಕು ತ್ತಿದ್ದಾರೆ ಆದ್ದರಿಂದ ದಯಾಳುಗಳಾದ ತಾವು ಈ ಕುರಿತು ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿಕೊಂಡರು.

ಸನ್ಮಾನ ಹಾಗೂ ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೂ ಅಕ್ರಮ ಚಟುವಟಿಕೆಗಳು ಕುರಿತು ಮಾಹಿತಿ ಕಲೆಹಾಕಿ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಯುವ ಹೋರಾಟಗಾರರಾದ ಶರತ್ ಅಲಿಪುರ, ಹಣಮಂತ್ರಾಯ ಗೌಡ ತೇಕರಾಳ, ಶ್ರೀನಿವಾಸ್, ಮಹೇಶ್ , ರಾಘವೇಂದ್ರ ಹಾಗೂ ಇನ್ನಿತರರು ಹಾಜರಿದ್ದರು.

# ರಾಯರ ಮಠದಲ್ಲಿ ಅದ್ದೂರಿ ದೀಪೋತ್ಸವ ಕಾರ್ಯಕ್ರಮ

• ಉದಯವಾಹಿನಿ, ಸಿಂಧನೂರು

ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಅದ್ದೂರಿಯಾಗಿ ನಡೆದ ಚೊಕ್ಕೊತ್ಸವ ಸಿಂಧನೂರು ನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ರಾತ್ರಿ ಕಾರ್ತಿಕ ದೀಪೋತ್ಸವದ ನಿಮಿತ್ಯ ಚೊಕೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು

ಈ ವೇಳೆ ಮಾತನಾಡಿದ ರಾಯರ ಮಠದ ವಿಚಾರಣ ಕರ್ತ ರಾಘವೇಂದ್ರ ರಾವ್ ಕುಲಕರ್ಣಿ ಮಾತನಾಡಿ ಪ್ರತಿ ವರ್ಷ ಕಾರ್ತಿಕ ಮಾಸದ ಪೌರ್ಣಮಿಯಂದು ಗುರುರಾಯರಿಗೆ ದೃಷ್ಟಿ ತೆಗೆಯುವ ಈ ಕಾರ್ಯಕ್ರಮಕ್ಕೆ ಚೊಕೊತ್ಸವ ಎನ್ನುವರು. ಇದನ್ನು ಮಂತ್ರಾಲಯದ ಸುಭುದೇಂದ್ರ ತೀರ್ಥರ ಅಜ್ಞಾನಸಾರ ಹಮ್ಮಿಕೊಳ್ಳಲಾಗಿದೆ.


ಉದಯವಾಹಿನಿ ಚಿತ್ರ

ಇದೊಂದು ವಿಶಿಷ್ಟ ಪೂರ್ಣ ಕಾರ್ಯಕ್ರಮವಾಗಿದ್ದು,ರಾಯರ ಬೃಂದಾವನ ಎದುರಿನ ಆವರಣದಲ್ಲಿ ಎಣ್ಣೆಯಲ್ಲಿ ಅದ್ದಿದ ಮಡಿ ಮಾಡಿದ ಬಿಳಿ ವಸ್ತ್ರಕ್ಕೆ ಧಾರ್ಮಿಕ ವಿಧಿ ವಿಧಾನಗಳಿಗನುಗುಣವಾಗಿ, ಮಂತ್ರಪೂರ್ವಕ ಅಗ್ನಿ ಸ್ಪರ್ಶ ಮಾಡಿ ಚೊಕ್ಕೋತ್ಸವವನ್ನು ಆಚರಿಸಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಮುನ್ನ ರಾಮಕೃಷ್ಣ ಆಚಾರ್ ಗೋನವಾರ್ ನೇತೃತ್ವದಲ್ಲಿ ಭಜನೆ ನಡೆಯಿತು ಗಾಯಕ ಕೃಷ್ಣಮಲಕಸಮುದ್ರ ಸುಸ್ರಾವ್ಯವಾಗಿ ಹಾಡಿದರು. ನೂರಾರು ಮಹಿಳೆಯರು ಕಾರ್ತಿಕ ದೀಪೋತ್ಸವದಲ್ಲಿ ಪಾಲ್ಗೊಂಡು,ಶ್ರದ್ದಾ ಭಕ್ತಿಯಿಂದ ವಿವಿಧಡೆ ದೀಪಗಳನ್ನು ಹಚ್ಚಿ ಭಕ್ತಿ ಸಮರ್ಪಿಸಿದರು.

ಮಠದ ಅರ್ಚಕ ನವೀನ್ ಆಚಾರ್ ಸುಬ್ಬಣ್ಣಾಚಾರ್, ಮುಖಂಡರಾದ ಎಂ.ಕೆ. ಗೌರಕರ,ಮನೋಹರರಾವ್ ಕುಲಕರ್ಣಿ, ಗುರುರಾಜ ಅಲ್ದಾಳ್, ಗೋಪಾಲ್ ಆಚಾರ್ ಜೋಶಿ, ಡಾ. ವಿಜಯಕುಮಾರ್ ಜೋಶಿ ವೆಂಕಟೇಶ ಆಚಾರ್ ಕೆಂಗಲ್, ವೆಂಕಟರಾವ್ ಚನ್ನಳ್ಳಿ, ಆಡವಿರಾವ್ ಸಿದ್ದರಾಂಪುರ್, ವೆಂಕಟೇಶ ಸಿದ್ದರಾಂಪುರ್, ಮೂರ್ತಿ ಪ್ರಾಣೇಶ್ ಆಚಾರ್, ಜಯತೀರ್ಥದಾಸ್,ಅಜಯ ಕಾನಿಹಾಳ, ವಾದಿರಾಜ ಸುಧಾ ಬಾಯಿ ಜೋಶಿ, ಸುಧಾಬಾಯಿ ಗೌರ್ಕರ್, ಅರ್ಚನಾ ಕಾನಿಹಾಳ ಸೇರಿದಂತೆ ಅನೇಕರು ಇದ್ದರು.

# ನಮ್ಮ ಶೌಚಾಲಯ ನಮ್ಮ ಗೌರವ ಎನ್ನುವ ಧ್ಯೆಯ ವಾಕ್ಯಕ್ಕೆ ಬದ್ಧ

• ಉದಯವಾಹಿನಿ, ಸಿಂಧನೂರು

ನಮ್ಮ ಶೌಚಾಲಯ ನಮ್ಮ ಗೌರವ. ಎನ್ನುವ ಧ್ಯೆಯ ವಾಕ್ಯಕ್ಕೆ ನಾವು ಭದ್ದರಾಗೋಣ ಎಂದು ಹೇಳಿದರು. ತಾಲ್ಲೂಕಿನ ಬಾದರ್ಲಿ ಗ್ರಾಮ ಪಂಚಾಯಿತಿಯ ಬಾದರ್ಲಿ ಗ್ರಾಮದಲ್ಲಿ ತಾಲ್ಲೂಕ ಮಟ್ಟದ ಕಾರ್ಯಕ್ರಮ.ಹಮ್ಮಿಕೊಳ್ಳಲಾಗಿತ್ತು. ಸಮುದಾಯ ಶೌಚಾಲಯಕ್ಕೆ ಬಣ್ಣ ಹಚ್ಚುವುದರ ಮೂಲಕ ಈ ಕಾರ್ಯಕ್ರಮಕ್ಕೆ ಮಾನ್ಯ ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಹಾಗೂ ಸಹಾಯಕ ನಿರ್ದೇಶಕರಾದ ಅಮರಗುಂಡಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ದಿಲೀಪ್ ರವರು ಚಾಲನೆ ನೀಡಿದರು.


ಉದಯವಾಹಿನಿ ಚಿತ್ರ
**ವಿಶ್ವ ಶೌಚಾಲಯ ದಿನಾಚರಣೆ**

ಈ ಸಂದರ್ಭದಲ್ಲಿ ಸ್ವಚ್ಛತಾ ಸಿಬ್ಬಂದಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು, ಫಲಾನುಭವಿಗೆ ಕಾರ್ಯಾದೇಶ ವಿತರಿಸಿ, ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣ ಮಾಡುವಂತೆ ತಿಳಿಸಿದ್ದರು. ಈ ಸಂದರ್ಭದಲ್ಲಿ ಬಾದರ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಯಾದ ವಿಶ್ವನಾಥ್ ಜಾದವ್ ಎಸ್ ಬಿ ಎಂ ಸಮಾಲೋಚಕರಾದ ಅನಿಲ್, ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋ ಧನ್ಯ ಪ್ರಭು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ದತ್ತಾತ್ರೆಯ, ಇಸ್ರಾ ತಂಡದ ನಾಯಕ ಶಾಂತಮುತ್ತಯ್ಯ ಗುರುವಿನ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕರಾದ ಎಂ.ಜಯ ಲಲಿತ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಬಸವರಾಜ್ ಸೂಡಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸಿಬ್ಬಂದಿಗಳು ಹಾಗೂ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮದ ಸಾರ್ವಜನಿಕರು ಭಾಗವಹಿಸಿದ್ದರು.

> ಶೌಚಾಲಯ ಮುಂದಿನ ಭಾಗದಲ್ಲಿ ಸ್ವಚ್ಛತೆ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಹೊರಾಂಗಣ ಮೈದಾನದಲ್ಲಿ ಸಸಿ ನೆಟ್ಟು ನೀರು ಹಾಕಿದರು. ನಮ್ಮ ಗ್ರಾಮ- ಸ್ವಚ್ಛ ಗ್ರಾಮ, ಬಯಲು ಬಹಿರ್ದೆಸೆ ಮುಕ್ತ ಗ್ರಾಮ, ಮತ್ತು ಆರೋಗ್ಯ ಗ್ರಾಮ ಆಗಬೇಕೆಂದರೆ ಪ್ರತಿಯೊಬ್ಬರೂ ಶೌಚಾಲಯವನ್ನು ಬಳಸಿ ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ನಮ್ಮ ಶೌಚಾಲಯ ನಮ್ಮ ಗೌರವ ಎನ್ನುವ ಧ್ಯೆಯ ವಾಕ್ಯಕ್ಕೆ ಭದ್ದರಾಗೋಣ ಎಂಬ ಕರೆಯನ್ನು ನೀಡಲಾಯಿತು.

# ಕೆರೆಗಳಿಗಿಲ್ಲ ತಡೆಗೋಡೆ, ತಪ್ಪದ ಜೀವ ಹಾನಿ

• ಉದಯವಾಹಿನಿ, ಹೊಳಲ್ಕೆರೆ

ಒಂದು ಕಡೆ ಪ್ರಪಾತ ಮತ್ತೊಂದು ಕಡೆ ಆಳ ನೀರು. ಇವೆರಡರ ಮಧ್ಯದ ರಸ್ತೆಯಲ್ಲಿ ಜೀವ ಕೈಯಲ್ಲಿ ಹಿಡಿದು ಸಾಗುವ ಪರಿಸ್ಥಿತಿ. ಸ್ವಲ್ಪ ಎಚ್ಚರ ತಪ್ಪಿದರೂ ಪ್ರಪಾತಕ್ಕೆ ಇಲ್ಲವೇ ನೀರಿನಲ್ಲಿ ಬೀಳುವ ಆತಂಕ…

ಇದು ತಾಲ್ಲೂಕಿನಲ್ಲಿರುವ ಕೆರೆಗಳ ಏರಿಯ ಮೇಲಿರುವ ಮುಖ್ಯ ರಸ್ತೆಗಳಲ್ಲಿನ ಸಂಚಾರಿಸುವ ವಾಹನ ಸವಾರರ ಸ್ಥಿತಿ.

**ನೀರಿನಲ್ಲಿ ಬೀಳುವ ಆತಂಕ**

ಇಲ್ಲಿನ ದಾವಣಗೆರೆ ರಸ್ತೆಯಲ್ಲಿರುವ ಹಿರೇಕೆರೆ ರಾಜ್ಯ ಹೆದ್ದಾರಿಯ ಪಕ್ಕದಲ್ಲಿದೆ. ಈ ಕೆರೆಯ ಏರಿ ಸುಮಾರು 2 ಕಿ.ಮೀ. ಉದ್ದವಿದೆ. ಕೆರೆಯ ಎಡಭಾಗದ ಏರಿಯ ಪಕ್ಕದಲ್ಲಿ ಪ್ರಪಾತವಿದ್ದು, ಅಲ್ಲಲ್ಲಿ ಹಳೆಯ ಕಾಲದ ಬಾವಿಗಳೂ ಇವೆ. ಬಲಕ್ಕೆ ಕೆರೆಯ ತುಂಬಾ ಅಪಾರ ಜಲರಾಶಿ ರಸ್ತೆಗೆ ತಗುಲುವಂತೆ ಇದೆ. ಈ ಕೆರೆಯ ಎರಡೂ ಕಡೆಗಳಲ್ಲಿ ತಡೆಗೋಡೆಯಾಗಲೀ, ಕಬ್ಬಿಣದ ಸುರಕ್ಷತಾ ಪಟ್ಟಿಯಾಗಲೀ ಇಲ್ಲ. ಕೆರೆ ಏರಿ ಅಂಕು ಡೊಂಕಾಗಿದ್ದು ಈ ರಸ್ತೆಯಲ್ಲಿ ಸಂಚರಿಸುವ ಚಾಲಕರು ತಮ್ಮ ವಾಹನವನ್ನು ಕೆರೆಗೆ ಬೀಳಿಸುವ ಆತಂಕ ಇದೆ. ರಾತ್ರಿ ವೇಳೆ ಕೆರೆ ಕಾಣಿಸುವುದೇ ಇಲ್ಲ. ಕೆರೆಯ ಸ್ಥಿತಿಗತಿ ಗೊತ್ತಿರದ ಅಪರಿಚತ ಚಾಲಕರಾದರೆ ಕೆರೆಗೆ ಬೀಳುವ ಸಾಧ್ಯತೆ ಹೆಚ್ಚು.


ಉದಯವಾಹಿನಿ ಚಿತ್ರ

ಎರಡು ವರ್ಷಗಳ ಕೆಳಗೆ ಈ ಕೆರೆ ಕೋಡಿ ಬಿದ್ದಾಗ ಬೆಳಗಿನ ಜಾವದ 3.30ರ ಸುಮಾರಿಗೆ ಕಾರೊಂದು ಕೆರೆಯಲ್ಲಿ ಬಿದ್ದಿತ್ತು. ಅದೃಷ್ಟವಶಾತ್ ಅಲ್ಲೇ ಮೀನಿನ ಬಲೆ ಬೀಸುತ್ತಿದ್ದ ಮೀನುಗಾರರ ತಂಡ ಕಾರಿನಲ್ಲಿದ್ದ 11 ಜನರನ್ನು ರಕ್ಷಿಸಿತ್ತು. ನಂತರದಲ್ಲಿ ಅನೇಕ ಬಾರಿ ವಾಹನಗಳು ಕೆರೆಗೆ ಬಿದ್ದಿವೆ.

# ನ.25ರಂದು ವಿಶೇಷ ಚೇತನರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆ

• ಉದಯವಾಹಿನಿ, ಚಿತ್ರದುರ್ಗ

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಇದೇ ನ.25ರಂದು ಬೆಳಿಗ್ಗೆ 10ಕ್ಕೆ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ವಿಶೇಷಚೇತನರಿಗೆ ಜಿಲ್ಲಾ ಮಟ್ಟದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಕ್ರೀಡಾ ಸ್ಪರ್ಧೆ ವಿಭಾಗದಲ್ಲಿ 18 ವರ್ಷ ಮೇಲ್ಪಟ್ಟ ಶ್ರವಣ ದೋಷ ಮತ್ತು ದೈಹಿಕ ವಿಕಲಚೇತರಿಗೆ 100 ಮೀ ಓಟ, ಗುಂಡು ಎಸೆತ, ಜಾವಲಿನ್ ಥ್ರೋ ಮತ್ತು ಬುದ್ಧಿಮಾಂದ್ಯರಿಗೆ 100 ಮೀ ಓಟ, ಬಕೆಟ್‌ನಲ್ಲಿ ರಿಂಗ್ ಎಸೆತ, ಮ್ಯೂಜಿಕಲ್ ಚೇರ್ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಅಂಧ ವಿಶೇಷಚೇತನರಿಗೆ ಮಡಿಕೆ ಹೊಡೆಯುವುದು, ಕೇನ್ ರೇಸ್ ಆಯೋಜಿಸಲಾಗಿದೆ.

ಸಾಂಸ್ಕೃತಿಕ ಸ್ಪರ್ಧೆ ವಿಭಾಗದಲ್ಲಿ 18 ವರ್ಷ ಮೇಲ್ಪಟ್ಟ ದೃಷ್ಟಿದೋಷ, ದೈಹಿಕ ಮತ್ತು ಬೌದ್ಧಿಕ ವಿಕಲತೆ ವಿಕಲಚೇತನರಿಗೆ ಜಾನಪದ ಗೀತೆ, ಭಾವಗೀತೆ, ಭಕ್ತಿಗೀತೆ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಆಸಕ್ತ ವಿಶೇಷಚೇತನರು ನಗರದ ಒನಕ ಓಬವ್ವ ಕ್ರೀಡಾಂಗಣದಲ್ಲಿ ನಡೆಯುವ ಜಿಲ್ಲಾ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಥಳೀಯ ಸಂಸ್ಥೆಗಳ ಉಪಚುನಾವಣೆ ಕಾರ್ಮಿಕರಿಗೆ ಮತದಾನ ಮಾಡಲು ಅವಕಾಶ

• ಉದಯವಾಹಿನಿ, ಚಿತ್ರದುರ್ಗ

ರಾಜ್ಯ ಚುನಾವಣಾ ಆಯೋಗವು ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆ ಘೋಷಿಸಿದ್ದು, ಮತದಾನ ದಿನದಂದು ಇದೇ ನ.23ರಂದು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಕಾರ್ಮಿಕರಿಗೆ ಮತದಾನ ಮಾಡಲು ಅವಕಾಶ ಕಲ್ಪಿಸಿದೆ. ಜಿಲ್ಲೆಯ ಚಿತ್ರದುರ್ಗ ನಗರಸಭೆ 15ನೇ ವಾರ್ಡ್, ಚಳ್ಳಕೆರೆ ನಗರಸಭೆ 4ನೇ ವಾರ್ಡ್ ಹಾಗೂ ನಾಯಕನಹಟ್ಟಿ ಪಟ್ಟಣ ಪಂಚಾಯತಿ 1ನೇ ವಾರ್ಡ್‌ನಲ್ಲಿ ಸ್ಥಳೀಯ ಮತದಾನ ನಡೆಯಲಿದ್ದು, ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾನ ದಿನದಂದು ಸ್ಥಳೀಯ ಸಂಸ್ಥೆಗಳಲ್ಲಿ ಬರುವ ಕಾರ್ಖಾನೆಗಳು, ಗಾರ್ಮೆಂಟ್ ಪ್ಯಾಕ್ಟರಿಗಳಲ್ಲಿ, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಮತದಾನ ಮಾಡಲು ಅವಕಾಶ ಕಲ್ಪಿಸುವಂತೆ ಸಂಬಂಧಪಟ್ಟ ಎಲ್ಲಾ ಉದ್ಯೋಗದಾತರಿಗೆ ಸೂಚಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ತಿಳಿಸಿದ್ದಾರೆ.

# ಸಹಕಾರ ಕ್ಷೇತ್ರದಲ್ಲಿ ಬೇಕು ಸೇವಾ ಮನೋಭಾವ

• ಉದಯವಾಹಿನಿ, ಗುಡಗೇರಿ


ಉದಯವಾಹಿನಿ ಚಿತ್ರ

ಸಹಕಾರ ಸಂಘಗಳಿಗೆ ಬರುವವರು ಸೇವಾ ಮನೋಭಾವದಿಂದ ಕೆಲಸ ಮಾಡಿದಾಗ ಮಾತ್ರ ಸಂಘಗಳು ಆರ್ಥಿಕವಾಗಿ ಸದೃಢವಾಗಲು ಸಾಧ್ಯವಾಗುತ್ತದೆ ಎಂದು ಶಾಸಕ ಎಂ.ಆರ್. ಪಾಟೀಲ ಹೇಳಿದರು. ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ 71ನೇ ಸಹಕಾರ ಸಪ್ತಾಹದ ಅಂಗವಾಗಿ ರಾಜ್ಯ ಸಹಕಾರ ಮಹಾಮಂಡಳ, ಜಿಲ್ಲಾ ಸಹಕಾರ ಯೂನಿಯನ್, ಜಿಲ್ಲಾ ಕೆ.ಸಿ.ಸಿ.ಬ್ಯಾಂಕ್ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ತಾಲ್ಲೂಕು ಎಲ್ಲಾ ಸಹಕಾರ ಸಂಘಗಳು ಮತ್ತು ಸಹಕಾರ ಇಲಾಖೆ ಆಶ್ರಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಹಕಾರ ಸಂಸ್ಥೆಗಳ ನಡುವೆ ಸಹಕಾರ ಬಲಪಡಿಸುವ ದಿನದ ಆಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಇಲ್ಲಿ ನಿಸ್ವಾರ್ಥವಾಗಿ ಸೇವೆ ಮಾಡಿದಾಗ ಮಾತ್ರ ಜನನಾಯಕನಾಗಲು ಸಾಧ್ಯ. ನಾನು ಸಹ 25 ವರ್ಷ ಸಹಕಾರ ಸಂಘದಲ್ಲಿ ಸೇವೆ ಮಾಡಿದ್ದೇನೆ. ಅದರ ಫಲವಾಗಿ ಇಂದು ಶಾಸಕನಾಗಿದ್ದೇನೆ' ಎಂದು ಹೇಳಿದರು. ಕೆಸಿಸಿ ಬ್ಯಾಂಕ್ ನಿರ್ದೇಶಕ ಉಮೇಶ ಹೆಬಸೂರ ಮಾತನಾಡಿ, 'ಈ ಸಹಕಾರ ಸಂಘವು ಆರ್ಥಿಕವಾಗಿ ಹಿಂದುಳಿದಿದ್ದು, ಬಲಿಷ್ಠವಾಗಿ ಬೆಳೆಯಲು ನಾವೆಲ್ಲ ಸಹಕಾರ ನೀಡುತ್ತೇವೆ' ಎಂದು ಹೇಳಿದರು.

# ಪತಿಯ ಸಾವಿನಿಂದ ಮನನೊಂದ ಪತ್ನಿ, ಪುತ್ರಿ ಆತ್ಮಹತ್ಯೆ

• ಉದಯವಾಹಿನಿ, ಚಿತ್ರದುರ್ಗ

ಪತಿಯ ಸಾವಿನಿಂದ ಮನನೊಂದ ಪತ್ನಿ ಹಾಗೂ ಪುತ್ರಿಯು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚಿಕ್ಕಂದವಾಡಿ ಗ್ರಾಮದಲ್ಲಿ ಈ ಒಂದು ದುರಂತ ಸಂಭವಿಸಿದೆ.ಹೊಳಲ್ಕೆರೆ ತಾಲ್ಲೂಕಿನ ಚಿಕ್ಕಂದವಾಡಿ ಗ್ರಾಮದಲ್ಲಿ ತಾಯಿ ಗೀತಾ (45) ಮಗಳು ಲಾವಣ್ಯ (17) ಆತ್ಮಹತ್ಯೆಗೆ ಶರಣಾಗಿರುವ ಘಟನೆ ಒಂದು ವಾರದ ಬಳಿಕ ಬೆಳಕಿಗೆ ಬಂದಿದೆ. ವಾರದ ಹಿಂದೆಯೇ ತಾಯಿ ಮಗಳು ಮನೆಯಲ್ಲಿ ನೇಣಿಗೆ ಶರಣಾಗಿದ್ದಾರೆ. ಕೊಳೆತ ಸ್ಥಿತಿಯಲ್ಲಿ ತಾಯಿ ಮತ್ತು ಮಗಳ ಶವಗಳು ಪತ್ತೆಯಾಗಿವೆ. ಪತಿ ಸಾವಿನಿಂದ ಖಿನ್ನತೆಗೆ ಒಳಗಾಗಿ ಗೀತಾ ಹಾಗೂ ಪುತ್ರಿ ಲಾವಣ್ಯ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿದುಬಂದಿದೆ. ಆರು ತಿಂಗಳ ಹಿಂದೆ ಗೀತಾಪತಿ ಬಸವರಾಜ್ ಹೃದಯಘಾತದಿಂದ ಸಾವನ್ನಪ್ಪಿದ್ದರು. ಪತಿ ಬಸವರಾಜ್ ಸಾವಿನಿಂದ, ಗೀತಾ ಹಾಗೂ ಮಗಳು ಲಾವಣ್ಯ ತೀವ್ರವಾಗಿ ಮನನೊಂದಿದ್ದರು ಹಾಗಾಗಿ ಒಂದು ವಾರದ ಹಿಂದೆ ಮನೆಯಲ್ಲಿ ನೇಣಿಗೆ ಶರಣಾಗಿದ್ದಾರೆ. ಘಟನೆ ಕುರಿತಂತೆ ಚಿಕ್ಕಜಾಜೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕುಕ್ಕೆ ಸುಬ್ರಮಣ್ಯಕ್ಕೆ ಸೂರ್ಯ ಕುಮಾರ ಯಾದವ್ ಭೇಟಿ

• ಉದಯವಾಹಿನಿ, ದಕ್ಷಿಣಕನ್ನಡ

ಭಾರತದ ಕ್ರಿಕೆಟ್ ತಂಡದ ಖ್ಯಾತ ಬ್ಯಾಟರ್ ಸೂರ್ಯ ಕುಮಾರ್ ಯಾದವ ಅವರು, ಕರ್ನಾಟಕದ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕುಕ್ಕೆ ಸುಬ್ರಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿ, ಪೂಜೆಗಳನ್ನು ಸಲ್ಲಿಸಿದರು.

ಸೂರ್ಯಕುಮಾರ್ ಯಾದವ್ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನಲ್ಲಿರುವ ಪ್ರಸಿದ್ಧ ಯಾತ್ರಾ ಸ್ಥಳ ಕುಕ್ಕೆ ಸುಬ್ರಹ್ಮಣ್ಯಕ್ಕೆ ಭೇಟಿ ನೀಡಿದರು.

ಪತ್ನಿ ಸಮೇತ ದೇಗುಲಕ್ಕೆ ಆಗಮಿಸಿದ ಅವರು, ಆಶ್ಲೇಷ ಬಲಿ ಪೂಜೆ, ಮಹಾಪೂಜೆ ಹಾಗೂ ಅಭಿಷೇಕ ನೆರವೇರಿಸಿದರು. ಈ ವೇಳೆ, ಸೂರ್ಯಕುಮಾರ್ ಯಾದವ್ ದಂಪತಿಗೆ ದೇವಸ್ಥಾನದ ವತಿಯಿಂದ ಗೌರವಾರ್ಪಣೆ ಮಾಡಲಾಯಿತು.


ಉದಯವಾಹಿನಿ ಚಿತ್ರ

# ನಗರಸಭೆಯ ಕೋಟ್ಯಂತರ ಬೆಲೆ ಬಾಳುವ ಆಸ್ತಿ ಖಾಸಗಿಯವರ ಪಾಲು

## • ನಗರಸಭೆಯ ಪೌರಾಯುಕ್ತರು, ಅಧಿಕಾರಿಗಳು, ಸಿಬ್ಬಂದಿಗಳು, ಸದಸ್ಯರೂ ಪಾಲುದಾರರು ಎಂದೇ ಹೇಳಲಾಗುತ್ತಿದೆ

• ಉದಯವಾಹಿನಿ, ಶಿವಮೊಗ್ಗ

ಜಿಲ್ಲೆಯ ಸಾಗರ ನಗರಸಭೆಯಲ್ಲಿ ಸೇಲ್ ಸರ್ಟಿಫಿಕೇಟ್ ಹಗರಣ ಇನ್ನೂ ಹಸಿಯಾಗೇ ಇದೆ. ಈ ನಡುವೆಯೂ ನಗರಸಭೆಯ ಕೋಟ್ಯಂತರ ಬೆಲೆ ಬಾಳುವ ಆಸ್ತಿಯೇ ಖಾಸಗಿ ಬಲಾಢ್ಯ ವ್ಯಕ್ತಿಯೊಬ್ಬರ ಪಾಲಾಗಿದೆ ಎನ್ನಲಾಗುತ್ತಿದೆ.

ಇದರಲ್ಲಿ ನಗರಸಭೆಯ ಪೌರಾಯುಕ್ತರು, ಅಧಿಕಾರಿಗಳು, ಸಿಬ್ಬಂದಿಗಳು, ಸದಸ್ಯರೂ ಪಾಲುದಾರರು ಎಂದೇ ಹೇಳಲಾಗುತ್ತಿದೆ.

ಶಿವಮೊಗ್ಗ ಜಿಲ್ಲೆಯ ಸಾಗರ ನಗರದ ಸಾಗರ ನಗರಸಭೆ ವ್ಯಾಪ್ತಿಯ 29ನೇ ವಾರ್ಡ್ ನಲ್ಲಿ ನಗರಸಭೆ ಖಾಲಿ ಜಾಗವಿತ್ತು. 2019ರಿಂದಲೂ ಈ ಜಾಗವನ್ನು ಅಂಗನವಾಡಿ ಸೇರಿದಂತೆ ವಿವಿಧ ಸರ್ಕಾರಿ ಕಟ್ಟಡಗಳನ್ನು ನಿರ್ಮಿಸಿ, ಬಳಕೆ ಮಾಡಲು ಅವಕಾಶ ಕೋರಿ ನಗರಸಭೆಯ ಸದಸ್ಯರು, ಸ್ಥಳೀಯ ನಿವಾಸಿಗಳು ಕೂಡ ನಗರಸಭೆಗೆ ಮನವಿ ಮಾಡಿದ್ದರು.

ದಿನಾಂಕ 07-08-2021ರಂದು ಕೂಡ 29ನೇ ವಾರ್ಡ್ ನಲ್ಲಿನ ಸರ್ವೆ ನಂಬರ್.02ರ ಸರ್ಕಾರಿ ಜಾಗವನ್ನು ಸಮುದಾಯ ಭವನ ಹಾಗೂ ಅಂಗನವಾಡಿ ಕೇಂದ್ರ ನಿರ್ಮಿಸಿಕೊಡಲು 29ನೇ ವಾರ್ಡಿನ ಸಾರ್ವಜನಿಕರು ಸಾಗರ ನಗರಸಭೆ ಅಧ್ಯಕ್ಷರಾಗಿರುವ ಮಧುರ ಶಿವಾನಂದ ಅವರಿಗೆ ಪತ್ರದಲ್ಲಿ ಕೋರಿದ್ದರು.

ಸಾಗರ ನಗರಸಭೆ ವ್ಯಾಪ್ತಿಯ 29ನೇ ವಾರ್ಡಿನ ಸಾರ್ವಜನಿಕರಿಗೆ ಧಾರ್ಮಿಕ ಕಾರ್ಯಕ್ರಮ ನಡೆಸಲು ಯಾವುದೇ ರೀತಿಯ ಕಟ್ಟಡ ಇರುವುದಿಲ್ಲ. ಇದರಿಂದ ಈ ವಾರ್ಡಿನ ನಾಗರೀಕರು ರಸ್ತೆಯ ಬದಿಯಲ್ಲಿಯೇ ಕಾರ್ಯಕ್ರಮಗಳ್ನು ನಡೆಸಿಕೊಂಡು ಬರುತ್ತಿದ್ದಾರೆ ಎಂದಿದ್ದರು.

ಈ ಹಿನ್ನಲೆಯಲ್ಲಿ ಸಾಗರನ ನಗರದ 29ನೇ ವಾರ್ಡಿನ ಆವಿನಹಳ್ಳಿ ರಸ್ತೆ, ಸರ್ವೆ ನಂಬರ್.02ರಲ್ಲಿ ಸರ್ಕಾರಿ ಜಾಗವಿದ್ದು, ಅದರ ಅಳತೆ ಅಂದಾಡು 80,150 ಅಡಿಗಳಷ್ಟು ಖಾಲಿ ನಿವೇಶನವಾಗಿರುತ್ತದೆ. ಇದರಲ್ಲಿ ಸಾರ್ವಜನಿಕರಿಗೆ ಉಪಯೋಗವಾಗುವಂತಹ ಸಮುದಾಯ ಭವನ ಹಾಗೂ ಅಂಗನವಾಡಿ ಕೇಂದ್ರವನ್ನು ನಿರ್ಮಿಸಿಕೊಡಬೇಕಾಗಿ ವಿನಂತಿಸಿದ್ದಾರೆ.

ಈ ಪತ್ರದಲ್ಲಿ ಸಾರ್ವಜನಿಕರಾದಂತ ನವ್ಯ.ಆರ್, ಲಲಿತಾ, ಸೌಮ್ಯ.ಆರ್, ರಾಘವೇಂದ್ರ, ಲತಾ, ರವಿಚಂತ್ರ, ಮಂಜುನಾಥ್ ಸೇರಿದಂತೆ ಇತರರ ಸಹಿ ಕೂಡ ಇದೆ. ಇದನ್ನು ಸಾಗರ ನಗರಸಭೆಯ ಟಪಾಲು ವಿಭಾಗಕ್ಕೆ ನೀಡಲಾಗಿದ್ದು ದಿನಾಂಕ 07-08-2021ರಂದು ಸ್ವೀಕರಿಸಿರುವುದಾಗಿ ಸೀಲ್‌ನೊಂದಿಗೆ ಹಿಂದಿರುಗಿಸಲಾಗಿದೆ. 2019, 2020ರ ವೇಳೆಯಲ್ಲಿ ಸಾಗರ ನಗರಸಭೆಯ ವಾರ್ಡ್ ನಂಬರ್.29ರ ನಗರಸಭೆ ಸದಸ್ಯ ಉಮೇಶ್ ಅವರು ಕೂಡ ವಾರ್ಡಿನ ಸಾರ್ವಜನಿಕರೊಂದಿಗೆ ಸರ್ವೆ ನಂ.2ರಲ್ಲಿನ ಸರ್ಕಾರಿ ಖಾಲಿ ಜಾಗದಲ್ಲಿ ಅಂಗನವಾಡಿ ಕೇಂದ್ರ ನಿರ್ಮಿಸಲು ಅವಕಾಶ ನೀಡಬೇಕು. ಸರ್ಕಾರಿ ಖಾಲಿ ಜಾಗವೊಂದು ಸರ್ಕಾರಿ ಕಚೇರಿ ನಿರ್ಮಾಣಕ್ಕೆ ಬಳಕೆಯಾಗಲಿ ಅಂತ ಧ್ವನಿ ಗೂಡಿಸಿದ್ದರು. ಆದರೇ ಈಗ ಅವರೇ ಸೈಲೆಂಟ್ ಆಗಿದ್ದಾರೆ ಎನ್ನಲಾಗುತ್ತಿದೆ.

**ಸಾಗರ ನಗರಸಭೆಯ ಬಹುದೊಡ್ಡ ಹಗರಣ**

ಈ ಜಾಗ ಉಳಿಸಲು ಮುಂದಾಗಬೇಕು. ಈಗ ಹೋರಾಟಕ್ಕೆ ಇಳಿಯಬೇಕು. ಸರ್ಕಾರಿ ಜಾಗವೊಂದು ಸಾರ್ವಜನಿಕರ ಉಪಯೋಗಕ್ಕೆ ಬಳಕೆಯಾಗಲು ಮಾಡಬೇಕು ಅಂತ ಸ್ಥಳೀಯರ ಆಗ್ರಹವಾಗಿದೆ.

ಕಳೆದ ಕೆಲ ವರ್ಷಗಳಿಂದ ವಾರ್ಡ್ ನಂ.29ರ ಸರ್ವೆ ನಂ.02ರಲ್ಲಿನ ಖಾಲಿ ಜಾಗಕ್ಕೆ ಇದು ನಗರಸಭೆ ಜಾಗ. ಒತ್ತುವರಿ ಮಾಡುವಂತಿಲ್ಲ. ಒತ್ತುವರಿ ಮಾಡಿದ್ರೆ, ಅಂತವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳೋದಾಗಿ ಬೋರ್ಡ್ ಹಾಕಲಾಗಿತ್ತು ಎಂಬುದು ಸ್ಥಳೀಯ ನಿವಾಸಿಗಳ ಮಾತು. ಆದರೇ ಅದೇ ಖಾಲಿ ಜಾಗಕ್ಕೆ ಇದೀಗ ಖಾಸಗಿ ವ್ಯಕ್ತಿಯೊಬ್ಬರು ಇದು ತಮ್ಮ ಜಾಗ ಅಂತ ಬೇಲಿ ಹಾಕಿದ್ದಾರೆ. ಹಾಗಾದ್ರೇ ಸಾಗರ ನಗರಸಭೆಯ ಖಾಲಿ ಜಾಗಕ್ಕೆ ಖಾಸಗಿ ವ್ಯಕ್ತಿಗಳು ಕಾಂಪೌಂಡ್ ಹಾಕಿರೋದು ಯಾಕೆ ಎನ್ನುವುದೇ ಅನುಮಾನಗಳಿಗೆ ಕಾರಣವಾಗಿದೆ.


ಉದಯವಾಹಿನಿ ಚಿತ್ರ

**ಪ್ರಭಾವಿ ವ್ಯಕ್ತಿಗಳ ಕೈವಾಡ ಇದ್ಯಾ..?**

ಈ ಹಿಂದೆ ನಗರಸಭೆಯ ಜಾಗವಾಗಿದ್ದು, ಈಗ ಖಾಸಗಿಯವರು ತಮ್ಮದು ಅಂತ ಕಾಂಪೌಂಡ್ ಹಾಕಿರೋದರ ಹಿಂದಿನ ಕಾರಣವೇನು.? ನಗರಸಭೆಯ ಅಧಿಕಾರಿಗಳು, ಸಿಬ್ಬಂದಿ, ಪ್ರಭಾವಿ ವ್ಯಕ್ತಿಗಳ ಕೈವಾಡ ಇದ್ಯಾ..? ಆ ಬಗ್ಗೆ ಸಂಬಂಧಿಸಿದಂತವರೇ ಉತ್ತರಿಸಿದಾಗಲೇ ಖಚಿತ ಆಗಬೇಕಿದೆ.

> ಈ ಕುರಿತಂತೆ ಕನ್ನಡ ನ್ಯೂಸ್ ನೌ ಸಾಗರ ನಗರಸಭೆಯ ಪೌರಾಯುಕ್ತರಾದಂತ ಹೆಚ್.ಕೆ ನಾಗಪ್ಪ ಅವರಿಗೆ ಕರೆ ಮಾಡಿ, ಶಿವಪ್ಪ ನಾಯಕ ನಗರದ ಗ್ಯಾಸ್ ಗೋಡೌನ್ ಹಿಂಭಾಗದಲ್ಲಿನ ಕೋಟ್ಯಂತರ ರೂ ಬೆಲೆ ಬಾಳುವಂತ ನಗರಸಭೆ ಆಸ್ತಿಯನ್ನು ಕಬಳಿಸಿರೋದಾಗಿ ಹೇಳಲಾಗುತ್ತಿದೆ. ಇದು ನಿಜವೇ.? ಅಂತ ಪ್ರಶ್ನಿಸಿದ್ರೆ, ಅದಕ್ಕೆ ಸರಿಯಾಗಿ ಉತ್ತರವಿಲ್ಲ. ವಿಚಾರಿಸುತ್ತೇನೆ, ಮಾಹಿತಿ ತಿಳಿದು ಹೇಳುತ್ತೇನೆ ಅನ್ನೋ ಉತ್ತರ ನೀಡಿದ್ದಾರೆ. ಹಾಗಾದರೆ ಸರಿಯಾದ ಮಾಹಿತಿ ಕೊಡಬೇಕಾದವರು ಯಾರು.? ಆಯುಕ್ತರಿಗೆ ಈ ಹಗರಣದಲ್ಲಿ ಪಾಲಿದ್ಯಾ.? ಇವರು ಶಾಮೀಲಾಗಿದ್ದಾರಾ? ಅನ್ನೋದು ಸಾಗರ ಜನತೆಯ ಪ್ರಶ್ನೆಯಾಗಿದೆ.

# ಅಮೆರಿಕದಲ್ಲಿ ತುರ್ತು ಪರಿಸ್ಥಿತಿ ಘೋಷಿಸಲು ಡೊನಾಲ್ಡ್ ಟ್ರಂಪ್ ಸಿದ್ಧತೆ

## ಸೂಕ್ತ ದಾಖಲೆಗಳಿಲ್ಲದೆ ದೇಶದಲ್ಲಿ ವಾಸಿಸುತ್ತಿರುವ ವಲಸಿಗರನ್ನು ಗಡಿಪಾರು ಮಾಡಲು ಸೇನೆಯನ್ನು ಬಳಸಲು ಸಿದ್ಧರಾಗಿದ್ದಾರೆ

**ವಾಷಿಂಗ್ಟನ್:** ಅಮೇರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಜಯ, ದೇಶದಲ್ಲಿ ನೆಲೆಸಿದ್ದ ಅಕ್ರಮ ವಲಸಿಗರಲ್ಲಿ ನಡುಕು ಸೃಷ್ಟಿಸಿತ್ತು ಎಂದರೆ ತಪ್ಪಲ್ಲ. ಇದೀಗ ಡೊನಾಲ್ಡ್ ಟ್ರಂಪ್ ರಾಷ್ಟ್ರೀಯ ತುರ್ತು ಪರಿಸ್ಥಿತಿ ಘೋಷಿಸಲು ಹಾಗೂ ಸೂಕ್ತ ದಾಖಲೆಗಳಿಲ್ಲದೆ ದೇಶದಲ್ಲಿ ವಾಸಿಸುತ್ತಿರುವ ವಲಸಿಗರನ್ನು ಗಡಿಪಾರು ಮಾಡಲು ಸೇನೆಯನ್ನು ಬಳಸಲು ಸಿದ್ಧರಾಗಿದ್ದಾರೆ ಎಂದು ವರದಿಯಾಗಿದೆ.

ಟ್ರಂಪ್ ಇತ್ತೀಚೆಗೆ ವಲಸೆ ವಿರೋಧಿ ಅಭಿಯಾನ ಕೈಗೊಂಡಿದ್ದರು. ಇದಕ್ಕೆ ಸಂಬಂಧಿಸಿದ ನಿಯಮಗಳನ್ನು ಹೇಗೆ ಜಾರಿಗೊಳಿಸಲಾಗುತ್ತದೆ ಎಂಬ ಬಗ್ಗೆ ಸೂಕ್ತ ವಿವರಗಳನ್ನು ನೀಡದೆ, ದಾಖಲೆ ಹೊಂದಿರದ ವಲಸಿಗರನ್ನು ಗಡಿಪಾರು ಮಾಡುವುದಾಗಿ ಭರವಸೆ ನೀಡಿದ್ದರು. ಇದೀಗ ಗಡಿಪಾರು ಮಾಡಲು ಸೇನಾ ಪಡೆಗಳನ್ನು ಬಳಸುವ ಸಾಧ್ಯತೆ ಇದೆ. ಜತೆಗೆ ಅಪರಾಧ ಹಿನ್ನೆಲೆಯುಳ್ಳ ವಲಸಿಗರನ್ನು ಮೊದಲು ಗಡಿಪಾರು ಮಾಡಲು ಟ್ರಂಪ್ ಈಗಾಗಲೇ ಸೂಚಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಯುಎಸ್‌ನಲ್ಲಿ 11 ಮಿಲಿಯನ್ ಜನರು ಕಾನೂನುಬಾಹಿರವಾಗಿ ಉಳಿದುಕೊಂಡಿದ್ದಾರೆ

- ಅಮೇರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಗೆಲುವು
- ಅಮೇರಿಕಾದಲ್ಲಿ ನೆಲೆಸಿರುವ ಅಕ್ರಮ ವಲಸಿಗರಿಗೆ ನಡುಕ
- 'ರಾಷ್ಟ್ರೀಯ ತುರ್ತು ಪರಿಸ್ಥಿತಿ ಘೋಷಿಸಲು' ಡೊನಾಲ್ಡ್ ಟ್ರಂಪ್ ಸಿದ್ಧತೆ
- ವಲಸಿಗರ ಗಡಿಪಾರಿಗೆ ಸೇನೆ ಬಳಕೆ

ಎಂದು ಹೋಮ್‌ಲ್ಯಾಂಡ್ ಸೆಕ್ಯುರಿಟಿ ಇಲಾಖೆ ಅಂದಾಜಿಸಿದೆ.

ಟ್ರಂಪ್ ಆಡಳಿತ ರಾಷ್ಟ್ರೀಯ ತುರ್ತು ಪರಿಸ್ಥಿತಿ ಘೋಷಿಸಲು ಸಿದ್ಧವಾಗಿದೆ ಹಾಗೂ ಅಕ್ರಮ ವಲಸಿಗರ ಗಡಿಪಾರಿಗೆ ಮಿಲಿಟರಿ ಸೊತ್ತುಗಳನ್ನು ಬಳಸುತ್ತದೆ ಎಂದು ಜ್ಯುಡಿಶಿಯಲ್ ವಾಚ್ ಆರ್ಗನೈಝೇಶನ್ ಮುಖ್ಯಸ್ಥ ಟಾಮ್ ಫಿಟ್ಟನ್ ನ.8 ರಂದು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದರು. ಇದನ್ನು ಟ್ರಂಪ್ ರಿ-ಪೋಸ್ಟ್ ಮಾಡಿ 'ನಿಜ' ಎಂದಿದ್ದರು.

ಈ ಹಿಂದಿನ ಟ್ರಂಪ್ ಆಡಳಿತ ಅವಧಿಯಲ್ಲಿ ಮೆಕ್ಸಿಕೊ ಗಡಿ ಭಾಗದ ಪ್ರದೇಶಗಳಲ್ಲಿ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚಿತ್ತು. ಇದರಿಂದ ಸುಲಿಗೆ, ಅಪಹರಣ, ಕಾನೂನು ಬಾಹಿರ ಚಟುವಟಿಕೆಗಳ ಪ್ರಮಾಣ ಹೆಚ್ಚಾಗಿತ್ತು. 2023ರಲ್ಲಿ ಅಮೆರಿಕದ ಅಧ್ಯಕ್ಷ ಜೋ ಬೈಡನ್ ಸಿಬಿಪಿ ಎಂಬ ಯೋಜನೆ ಮೂಲಕ ವಲಸಿಗರಿಗೆ ಕೆಲ ಅನುಕೂಲ ಮಾಡಿಕೊಟ್ಟಿದ್ದರು.




ಇದರಿಂದ ಗಡಿಭಾಗದಲ್ಲಿದ್ದವರು ಕಾನೂನಿ ಅಡಿಯಲ್ಲಿ ಅಮೇರಿಕಾದೊಳಗೆ ಪ್ರವೇಶಿಸಲು ಮುಂದಾಗಿದ್ದರು. ಸದ್ಯ ಅಕ್ರಮ ವಲಸಿಗರಿಗೆ ಕಡಿವಾಣ ಹಾಕಲು ಟ್ರಂಪ್ ನಿರ್ಧರಿಸಿದ್ದು, ರಾಷ್ಟ್ರೀಯ ಭದ್ರತೆ ಹೆಚ್ಚೊಸಲು ಮುಂದಾಗಿದ್ದಾರೆ.

### ಅಮೇರಿಕಾ-ಕೆನಡಾ ಗಡಿಯಲ್ಲಿ ಕಟ್ಟೆಚ್ಚರ

ವಲಸಿಗರು ನಮ್ಮ ದೇಶದ ರಕ್ತವನ್ನು ವಿಷಪೂರಿತಗೊಳಿಸುತ್ತಿದ್ದಾರೆ.. ಅಮೆರಿಕಾದ ಇತಿಹಾಸದಲ್ಲಿಯೇ ಅತಿ ದೊಡ್ಡ ಸಾಮೂಹಿಕ ಗಡೀಪಾರು ಮಾಡುವುದಾಗಿ ಅಮೆರಿಕದ ಅಧ್ಯಕ್ಷರಾಗಿ ಚುನಾಯಿತರಾಗಿರುವ ಡೊನಾಲ್ಡ್ ಟ್ರಂಪ್ ಅಮೇರಿಕನ್ನರಿಗೆ ಪ್ರಚಾರದ ಸಂದರ್ಭದಲ್ಲಿ ಭರವಸೆ ನೀಡಿದ್ದರು. ಚುನಾವಣೆಯಲ್ಲಿ ಟ್ರಂಪ್ ಗೆಲುವು ವಲಸಿಗರ ಆತಂಕಕ್ಕೆ ಕಾರಣವಾಗಿತ್ತು. ಪರಿಣಾಮ ಅಮೇರಿಕಾ-ಕೆನಡಾ ಗಡಿಯಲ್ಲಿ ಅಕ್ರಮ ವಲಸಿಗರ ಚಟುವಟಿಕೆ ತೀವ್ರಗೊಂಡಿದೆ. ಎರಡೂ ದೇಶಗಳ ಸೇನೆ ಕಟ್ಟೆಚ್ಚರ ವಹಿಸಿದೆ. ಇತ್ತ ಅಮೇರಿಕಾದಿಂದ ಕೆನಡಾಕ್ಕೆ ಬರುತ್ತಿರುವವರ ಸಂಖ್ಯೆ ಹೆಚ್ಚಿದೆ ಎಂದು ವರದಿಯಾಗಿದೆ. ಈಗಾಗಲೇ ಸಾಕಷ್ಟು ವಲಸಿಗರು ಕೆನಡಾದತ್ತ ಮುಖ ಮಾಡಿದ್ದಾರೆ.

### ವಲಸಿಗರ ಕುರಿತು ಕಠಿಣ ಕ್ರಮ

ಚುನಾವಣಾ ಪ್ರಚಾರದ ಸಂದರ್ಭದಲ್ಲಿ ತನ್ನ ವಲಸೆ-ವಿರೋಧಿ ನೀತಿಯನ್ನು ಹಲವು ಬಾರಿ ಉಲ್ಲೇಖಿಸಿದ್ದರು. ಅಕ್ರಮ ವಲಸೆ ಸಮಸ್ಯೆ ನಿಯಂತ್ರಿಸುವುದಾಗಿ ಈ ಹಿಂದೆ ಹೇಳಿಕೊಂಡಿದ್ದರು. ಜನವರಿ ವೇಳೆಗೆ ಟ್ರಂಪ್ ಅಧಿಕಾರಕ್ಕೇರಲಿದ್ದು, ಅಕ್ರಮ ವಲಸಿರು ಗಡಿಪಾರಾಗುವುದು ನಿಶ್ಚಿತ ಎನ್ನಲಾಗುತ್ತಿದೆ.

# ರಾಷ್ಟ್ರೀಯ ಭದ್ರತಾ ಪ್ರಕರಣದಲ್ಲಿ 45 ಮಂದಿಗೆ 10 ವರ್ಷ ಶಿಕ್ಷೆ

**ಹಾಂಗ್ ಕಾಂಗ್:** ಹಾಂಗ್ ಕಾಂಗ್‌ನ ಅತಿದೊಡ್ಡ ರಾಷ್ಟ್ರೀಯ ಭದ್ರತಾ ಪ್ರಕರಣದಲ್ಲಿ, ಹತ್ತಾರು ಪ್ರಮುಖ ಕಾರ್ಯಕರ್ತರಿಗೆ 10 ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಲಾಗಿದೆ. 2020 ರ ರಾಷ್ಟ್ರೀಯ ಭದ್ರತಾ ಕಾನೂನಿನ ಅಡಿಯಲ್ಲಿ ಅನಧಿಕತ ಪ್ರಾಥಮಿಕ ಚುನಾವಣೆಯಲ್ಲಿ ಅವರ ಪಾತ್ರಗಳಿಗಾಗಿ 2021 ರಲ್ಲಿ ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಲಾಯಿತು.




ಅವರು ಹಾಂಗ್ ಕಾಂಗ್ ಸರ್ಕಾರವನ್ನು ಸಂಕಷ್ಟಕ್ಕೆ ತಳ್ಳಲು ಪ್ರಯತ್ನಿಸಿದರು ಮತ್ತು ಶಾಸಕಾಂಗ ಬಹುಮತವನ್ನು ಗೆಲ್ಲುವ ಗುರಿಯೊಂದಿಗೆ ನಗರದ ನಾಯಕನನ್ನು ರಾಜೀನಾಮೆ ನೀಡುವಂತೆ ಒತ್ತಾಯಿಸಿದ ಆರೋಪ ಎದುರಿಸುತ್ತಿದ್ದರು. 45 ಅಪರಾಧಿಗಳು ನಾಲ್ಕು ವರ್ಷ ಮತ್ತು ಎರಡು ತಿಂಗಳಿಂದ 10 ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ಪಡೆದರು. ಕಾನೂನು ವಿದ್ವಾಂಸ ಬೆನ್ನಿ ತೈ ಅವರಿಗೆ ದೀರ್ಘಾವಧಿ ಶಿಕ್ಷೆಯನ್ನು ನೀಡಲಾಯಿತು.

ಅವರು ತಪ್ಪೊಪ್ಪಿಕೊಂಡರು ಅಥವಾ ಮೂವರು ಸರ್ಕಾರಿ-ಅನುಮೋದಿತ ನ್ಯಾಯಾಧೀಶರಿಂದ ವಿಧ್ವಂಸಕ ಕೃತ್ಯಕ್ಕೆ ಪಿತೂರಿ ಮಾಡಿದ ತಪ್ಪಿತಸ್ಥರೆಂದು ಕಂಡುಬಂದರು.

ಚುನಾವಣೆಯ ಮೂಲಕ ಬದಲಾವಣೆ ತರುವ ಕಾರ್ಯಕರ್ತರ ಯೋಜನೆಗಳು ಸರ್ಕಾರದ ಅಧಿಕಾರವನ್ನು ದುರ್ಬಲಗೊಳಿಸುತ್ತವೆ ಮತ್ತು ಸಾಂವಿಧಾನಿಕ ಬಿಕ್ಕಟ್ಟನ್ನು ಸಷ್ಟಿಸುತ್ತವೆ ಎಂದು ನ್ಯಾಯಾಧೀಶರು ತೀರ್ಪಿನಲ್ಲಿ ಹೇಳಿದ್ದಾರೆ. 47 ಮೂಲ ಆರೋಪಿಗಳ ಪೈಕಿ ಇಬ್ಬರನ್ನು ಖುಲಾಸೆಗೊಳಿಸಲಾಗಿದೆ.

# ವಿಷಕಾರಿ ನಗರ ದೆಹಲಿ ರಾಷ್ಟ್ರರಾಜಧಾನಿಯಾಗಿರಬೇಕೇ..?: ಶಶಿ ತರೂರ್

**ನವದೆಹಲಿ:** ವಿಶ್ವ ಆರೋಗ್ಯ ಸಂಸ್ಥೆಯ ಶಿಫಾರಸಿನ ದೈನಂದಿನ ಗರಿಷ್ಠ ಮಟ್ಟಕ್ಕಿಂತ 60 ಪಟ್ಟು ಹೆಚ್ಚಿರು ವಿಷಕಾರಿ ಹೊಗೆಯ ನಗರವಾಗಿರುವ ದೆಹಲಿ ಭಾರತದ ರಾಜಧಾನಿಯಾಗಿ ಉಳಿಯ ಬೇಕೇ ಎಂದು ಕಾಂಗ್ರೆಸ್‌ನ ಹಿರಿಯ ನಾಯಕ ಶಶಿ ತರೂರ್ ಪ್ರಶ್ನಿಸಿದ್ದಾರೆ.

ದಟ್ಟವಾದ ಹೊಗೆಯ ಪದರ ಹೊಗೆ ಮತ್ತು ಮಂಜಿನ ವಿಷಕಾರಿ ಮಿಶ್ರಣ ಕಳೆದ ಕೆಲವು ದಿನಗಳಿಂದ ದೆಹಲಿ-ರಾಷ್ಟ್ರೀಯ ರಾಜಧಾನಿ ಪ್ರದೇಶವನ್ನು ಆವರಿಸಿದೆ ವಾಯು ಗುಣ ಮಟ್ಟ ಸೂಚ್ಯಂಕ (ಎಕ್ಯೂಐ) ತೀವ್ರ-ಪ್ಲಸ್ ವರ್ಗಕ್ಕೆ ಕುಸಿಯುತ್ತಿದೆ. ಅಧಿಕಾರಿಗಳು ಶಾಲೆಗಳನ್ನು ಆನ್ಲೈನ್ ತರಗತಿಗಳಿಗೆ ಬದಲಾಯಿಸಲು ಮತ್ತು ಕಟ್ಟುನಿಟ್ಟಾದ ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ದೆಹಲಿಯು ಅಧಿಕತವಾಗಿ ವಿಶ್ವದ ಅತ್ಯಂತ ಕಲುಷಿತ ನಗರವಾಗಿದೆ ಮತ್ತು ಎರಡನೇ ಅತ್ಯಂತ ಕಲುಷಿತ ನಗರವಾದ ಢಾಕಾಕ್ಕಿಂತ ಸುಮಾರು ಐದು ಪಟ್ಟು ಕೆಟ್ಟದಾಗಿದೆ. ನಮ ಸರ್ಕಾರವು ಈ ದುಃಸ್ವಪ್ನವನ್ನು ವರ್ಷಗಳಿಂದ ನೋಡುತ್ತಿದೆ ಮತ್ತು ಅದರ ಬಗ್ಗೆ ಏನನ್ನೂ ಮಾಡದಿರುವುದು



### ನವೆಂಬರ್‌ನಿಂದ ಜನವರಿವರೆಗೆ ವಾಸಯೋಗ್ಯವಲ್ಲ

ಅಸಮಂಜಸವಾಗಿದೆ ಎಂದು ತರೂರ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ನಗರವು ಮೂಲಭೂತವಾಗಿ ನವೆಂಬರ್‌ನಿಂದ ಜನವರಿವರೆಗೆ ವಾಸಯೋಗ್ಯವಲ್ಲ ಮತ್ತು ವರ್ಷದ ಉಳಿದ ಭಾಗಗಳಲ್ಲಿ ವಾಸಿಸಲು ಯೋಗ್ಯವಾಗಿಲ್ಲ, ಇದು ರಾಷ್ಟ್ರದ ರಾಜಧಾನಿಯಾಗಿ ಉಳಿಯಬೇಕೇ? ಎಂದು ತರೂರ್ ಪ್ರಶ್ನಿಸಿದ್ದಾರೆ. ಸುಮಾರು 7 ಕೋಟಿ ಜನರಿಗೆ ನೆಲೆಯಾಗಿರುವ ದೆಹಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳು ಚಳಿಗಾಲದಲ್ಲಿ ವಾಯು ಮಾಲಿನ್ಯದ ವಿಶ್ವಶ್ರೇಯಾಂಕದಲ್ಲಿ ಸತತವಾಗಿ ಅಗ್ರಸ್ಥಾನದಲ್ಲಿದೆ, ಏಕೆಂದರೆ ತಣ್ಣನೆಯ ಗಾಳಿಯು ಧೂಳು, ಹೊರಸೂಸುವಿಕೆ ಮತ್ತು ಹೊಗೆಯನ್ನು ನೆರೆಯ ರಾಜ್ಯಗಳಾದ ಪಂಜಾಬ್ ಮತ್ತು ಹರಿಯಾಣದಲ್ಲಿ ರೈತರು ತಮ ಹೊಲಗಳನ್ನು ತೆರವುಗೊಳಿಸಲು ಅಕ್ರಮವಾಗಿ ಸುಡುವುದರಿಂದ ಉಂಟಾಗುತ್ತಿದೆ ಎಂದು ಅಂದಾಜಿಸಲಾಗಿದೆ.

# ಅಮೆರಿಕ ಪೊಲೀಸರ ವಶದಲ್ಲಿ ಬಿಷ್ಣೋಯಿ ಸಹೋದರ ಅನ್ಮೋಲ್

**ವಾಷಿಂಗ್ಟನ್:** ಗ್ಯಾಂಗ್‌ಸ್ಟರ್ ಲಾರೆನ್ಸ್ ಬಿಷ್ಣೋಯಿ ಸಹೋದರ ಅನ್ಮೋಲ್ ಬಿಷ್ಣೋಯಿಯನ್ನು ಅಮೆರಿಕ ಪೊಲೀಸರು ಕ್ಯಾಲಿಫೋರ್ನಿಯಾದಲ್ಲಿ ವಶಕ್ಕೆ ಪಡೆದಿದ್ದಾರೆ ಎಂದು ಗುಪ್ತಚರ ಮೂಲಗಳು ಹೇಳಿವೆ. ಅನ್ಮೋಲ್‌ನನ್ನು ಅಮೆರಿಕದಿಂದ ಭಾರತಕ್ಕೆ ಹಸ್ತಾಂತರಿಸುವ ಪ್ರಕ್ರಿಯೆಗೆ ಮುಂಬಯಿ ಪೊಲೀಸರು ಸಿದ್ಧತೆಗಳನ್ನು ಆರಂಭಿಸಿದ ಕೆಲವೇ ದಿನಗಳಲ್ಲಿ ಈ ಬೆಳವಣಿಗೆ ನಡೆದಿದೆ. ಎರಡು ವಾರಗಳ ಹಿಂದಷ್ಟೇ ಮಹಾರಾಷ್ಟ್ರ ಸಂಘಟಿತ ಅಪರಾಧಗಳ ನಿಯಂತ್ರಣ ಕಾಯಿದೆಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ನಡೆಸುವ ವಿಶೇಷ ಕೋರ್ಟ್, ಅನ್ಮೋಲ್ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿ ಮಾಡಿತ್ತು.

ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಕೊಲೆ ಪ್ರಕರಣ, ನಟ ಸಲ್ಮಾನ್ ಖಾನ್ ಅವರ ಮುಂಬಯಿ ನಿವಾಸದ ಮುಂಭಾಗದ ಶೂಟೌಟ್, ಪಂಜಾಬಿ ಗಾಯಕ ಸಿಧು ಮೂಸೆವಾಲ ಹತ್ಯೆ ಪ್ರಕರಣ ಸೇರಿದಂತೆ ಹಲವು ಕೇಸ್‌ಗಳಲ್ಲಿ ಅನ್ಮೋಲ್ ಬಿಷ್ಣೋಯಿ ಭಾರತಕ್ಕೆ ಬೇಕಾಗಿರುವ ಕ್ರಿಮಿನಲ್. ಎನ್‌ಐಎ ಈತನ ವಿರುದ್ಧ ಎರಡು ಪ್ರಕರಣಗಳನ್ನು ದಾಖಲಿಸಿದೆ.

**10 ಲಕ್ಷ ಬಹುಮಾನ ಘೋಷಣೆ:** ಸಲ್ಮಾನ್ ಖಾನ್ ನಿವಾಸದ ಎದುರು ಗುಂಡು ಹಾರಿಸಿದ ಪ್ರಕರಣದಲ್ಲಿ ಅನ್ಮೋಲ್ ಪಾತ್ರವಿದೆ ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದರು.



### 7 ಮಂದಿ ಶೂಟರ್‌ಗಳ ಸೆರೆ

ಲಾರೆನ್ಸ್ ಬಿಷ್ಣೋಯಿ ಬಣದ 7 ಮಂದಿ ಶಂಕಿತ ಶೂಟರ್‌ಗಳನ್ನು ದಿಲ್ಲಿ ವಿಶೇಷ ಪೊಲೀಸ್ ಪಡೆಯನ್ನು ಕಳೆದು ತಿಂಗಳು ಬಂಧಿಸಿದ್ದರು. ಪಂಜಾಬ್ ಹಾಗೂ ಇತರ ರಾಜ್ಯಗಳಿಂದ 7 ಮಂದಿಯನ್ನು ಸೆರೆ ಹಿಡಿಯಲಾಗಿದೆ. ಬಂಧಿತರಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರ ವಶಪಡಿಸಿಕೊಳ್ಳಲಾಗಿತ್ತು.

ಕಳೆದ ಅಕ್ಟೋಬರ್‌ನಲ್ಲಿ ಅನ್ಮೋಲ್ ಬಿಷ್ಣೋಯಿಯನ್ನು ರಾಷ್ಟ್ರೀಯ ತನಿಖಾ ದಳ (ಎನ್‌ಐಎ) 'ಮೋಸ್ಟ್ ವಾಂಟೆಡ್' ಪಟ್ಟಿಗೆ ಸೇರಿಸಿದೆ. ಅನ್ಮೋಲ್‌ಗೆ ಕುರಿತು ನಿಖರ ಮಾಹಿತಿ ನೀಡಿದವರಿಗೆ 10 ಲಕ್ಷ ರೂ. ಬಹುಮಾನವನ್ನು ಕೂಡ ಘೋಷಿಸಲಾಗಿದೆ.

ಅಕ್ಟೋಬರ್ 12 ರಂದು ಮುಂಬಯಿನಲ್ಲಿ ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಅವರನ್ನು ಹತ್ಯೆ ಮಾಡಲಾಗಿತ್ತು. ಸಿದ್ದಿಕಿ ಹತ್ಯೆಯ ಹೊಣೆ ಹೊತ್ತು, ಬಿಷ್ಣೋಯಿ ಗ್ಯಾಂಗ್‌ನ ಸದಸ್ಯ ಎನ್ನಲಾದ ವ್ಯಕ್ತಿಯೊಬ್ಬ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದ. ಆರೋಪಿಗಳನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದ್ದು, ಸಿದ್ದಿಕಿ ಹತ್ಯೆಗೂ ಇವರಿಗೂ ನಂಟಿದೆಯೇ ಎಂಬ ಬಗ್ಗೆಯೂ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ.

**ಸಂದರ್ಶನ ನಡೆಸಲು ಅವಕಾಶ ಪೊಲೀಸರು ಅಮಾನತು:** ಪಾತಕಿ ಲಾರೆನ್ಸ್ ಬಿಷ್ಣೋಯಿ ಜೈಲಿನಲ್ಲಿರುವಾಗಲೇ ಸಂದರ್ಶನ ನಡೆಸಲು ಅವಕಾಶ ಮಾಡಿಕೊಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪಂಜಾಬ್ ಡಿಎಸ್‌ಪಿ ಗುರ್ಷರ್ ಸಂಧು ಮತ್ತು ಸಮ್ಮರ್ ವನೀತ್ ಸೇರಿದಂತೆ ಏಳು ಪೊಲೀಸ್ ಸಿಬ್ಬಂದಿಯನ್ನು ಇತ್ತೀಚೆಗೆ ಅಮಾನತುಗೊಳಿಸಲಾಗಿತ್ತು. 2022ರ ಸೆ.3 ಮತ್ತು 4ರಂದು ಲಾರೆನ್ಸ್ ಬಿಷ್ಣೋಯಿ ಜೈಲಿನಲ್ಲಿರುವಾಗಲೇ ಸುದ್ದಿ ವಾಹಿನಿಯೊಂದು ಮೊಬೈಲ್ ಮೂಲಕ ಆತನ ಸಂದರ್ಶನ ನಡೆಸಿತ್ತು. ಮೊದಲ ಸಂದರ್ಶನದ ವೇಳೆ ಸಂದರ್ಶಕ ಪಂಜಾಬ್‌ನ ಅಪರಾಧ ತನಿಖಾ ಸಂಸ್ಥೆ (ಸಿಐಎ) ಕಚೇರಿ ಆವರಣದಲ್ಲಿದ್ದರು. ಎರಡನೇ ಸಂದರ್ಶನವನ್ನು ರಾಜಸ್ಥಾನದಿಂದ ಮಾಡಿದ್ದರು.

# ಮುಂಬೈನಲ್ಲಿದ್ದಾರೆ 1 ಕೋಟಿಗೂ ಹೆಚ್ಚು ಮತದಾರರು

**ಮುಂಬೈ:** ಈ ವರ್ಷದ ಆರಂಭದಲ್ಲಿ ನಡೆದ ಲೋಕಸಭಾ ಚುನಾವಣೆಯ ನಂತರ ಮುಂಬೈನಲ್ಲಿ ಮತದಾರರ ಸಂಖ್ಯೆ 98.95 ಲಕ್ಷದಿಂದ ಒಂದು ಕೋಟಿ ಗಡಿ ದಾಟಿದೆ ಎಂದು ಚುನಾವಣಾ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬೃಹನ್ ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ ಮುಖ್ಯಸ್ಥ ಭೂಷಣ್ ಗಾಗ್ರಾನಿ, ವಿಧಾನಸಭಾ ಚುನಾವಣೆಗೆ ಮುಂಬೈನಲ್ಲಿ 1,02,29,708 ಮತದಾರರಿದ್ದು, ದ್ವೀಪ ನಗರದಲ್ಲಿ 25,43,610 ಮತ್ತು ಉಪನಗರ ಜಿಲ್ಲೆಯಲ್ಲಿ 76,86,098 ಇದ್ದಾರೆ.ಇದರಲ್ಲಿ 54,67,361 ಪುರುಷರು, 47,61,265 ಮಹಿಳೆಯರು ಮತ್ತು 1,082 ತೃತೀಯ ಲಿಂಗಿಗಳು ಎಂದು ತಿಳಿಸಿದರು ನಾಳೆ ನಡೆಯುವ ವಿಧಾನಸಭೆ ಚುನಾವಣೆಯಲ್ಲಿ ಇವರು ಮತದಾನದ ಹಕ್ಕು ಹೊಂದಿದ್ದಾರೆ.

ವಿಶೇಷವೆಂದರೆ ಇವರಲ್ಲಿ ಒಟ್ಟು 1,46,859 ಮತದಾರರು 85 ವರ್ಷಕ್ಕಿಂತ ಮೇಲ್ಪಟ್ಟವರು ಮತ್ತು 23,928 ವಿಕಲಚೇತನರು ಹಾಗು 2,288 ಸಾಗರೋತ್ತರ ಮತದಾರರು ಮತ್ತು 1,475 ಸೇವಾ ಮತದಾರರು ಇದ್ದಾರೆ ಎಂದು ಮುಂಬೈ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಗಗ್ರಾನಿ ಹೇಳಿದರು.

### ಇಂದು 'ಮಹಾ' ಚುನಾವಣೆ

ಚುನಾವಣಾ ಅಧಿಕಾರಿಗಳ ಪ್ರಕಾರ ಹೊಸದಾಗಿ ಒಟ್ಟು 2.91 ಲಕ್ಷ ಮತದಾರು ಸೇರ್ಪಡೆಯಾಗಿದ್ದಾರೆ. ಮುಂಬೈ ನಗರ ವ್ಯಾಪ್ತಿಯಲ್ಲಿ 36 ವಿಧಾನಸಭಾ ಕ್ಷೇತ್ರಗಳನ್ನು ಹೊಂದಿದೆ ಇದರಲ್ಲಿ 10 ದ್ವೀಪ ನಗರದಲ್ಲಿ ಮತ್ತು 26 ಉಪನಗರ ಜಿಲ್ಲೆಯಲಿದೆ. ಒಟ್ಟು 410 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ನಾಳಿನ ಚುನಾವಣೆಗೆ ಒಟ್ಟು 10,117 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಭದ್ರತೆಗಾಗಿ ಮುಂಬೈನಲ್ಲಿ 25,696 ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಒಟ್ಟು 10,117 ಮತಗಟ್ಟೆಗಳ ಪೈಕಿ 76 ಅತಿ ಸೂಕ್ಷ್ಮ ಮತಗಟ್ಟೆಗಳಿವೆ. ಚುನಾವಣಾ ಅಧಿಕಾರಿಗಳ ಪ್ರಕಾರ, ಈ ಬೂತ್‌ಗಳು ಹಿಂದಿನ ಚುನಾವಣೆಗಳಲ್ಲಿ ಸರಾಸರಿ ಮತದಾನದ ಶೇಕಡಾ 10 ಕ್ಕಿಂತ ಕಡಿಮೆ ಮತದಾನವನ್ನು ದಾಖಲಿಸಿವೆ.

ಮುಂಬೈನಲ್ಲಿ, 84 ಮಾದರಿ ಮತಗಟ್ಟೆಗಳಿದ್ದು, ಅದರಲ್ಲಿ ತಲಾ 38 ಮಹಿಳಾ ಮತ್ತು ಯುವ ಚುನಾವಣಾ ಸಿಬ್ಬಂದಿ ನಿರ್ವಹಿಸುತ್ತಾರೆ. ಎಂಟು ದಿವಿಯಾಂಗ ಸಿಬ್ಬಂದಿ ನಿರ್ವಹಿಸುತ್ತಾರೆ ಎಂದು ತಿಳಿಸಿದರು.

ಮುಂಬೈ ನಗರದಲ್ಲಿ ಸಿ-ವಿಜಿಲ್ ಆ್ಯಪ್ ಮೂಲಕ ಸಲ್ಲಿಸಲಾದ 615 ದೂರುಗಳಲ್ಲಿ 564 ದೂರುಗಳ ಮೇಲೆ ಇಸಿ ಕ್ರಮ ಕೈಗೊಂಡಿದೆ.

# ಬೈಡನ್ ಸೇರಿ ವಿಶ್ವನಾಯಕರ ಜತೆ ಮೋದಿ ಚರ್ಚೆ

**ರಿಯೋಬಿಜನೈರೊ:** ಜಿ-20 ಶೃಂಗಸಭೆಯ ವೇಳೆ ಪ್ರಧಾನ ಮಂತ್ರಿ ನರೇಂದ್ರಮೋದಿ ಅವರು ಅಮೆರಿಕದ ನಿರ್ಗಮಿತ ಅಧ್ಯಕ್ಷ ಜೋ ಬೈಡನ್, ಬ್ರೆಜಿಲ್, ಸಿಂಗಾಪುರ ಮತ್ತು ಸ್ಪೈನ್ ಸೇರಿದಂತೆ ವಿವಿಧ ವಿಶ್ವನಾಯಕರೊಂದಿಗೆ ಮಹತ್ವದ ಸಂವಾದ ನಡೆಸಿದರು.

ಮಾತುಕತೆ ನಡೆಸಿರುವ ಕುರಿತು ನರೇಂದ್ರಮೋದಿ ಅವರು ಟ್ವೀಟ್‌ನಲ್ಲಿ ಭಾವಚಿತ್ರಗಳನ್ನು ಹಂಚಿಕೊಂಡಿದ್ದಾರೆ. ಬೈಡನ್ ಸೇರಿದಂತೆ ವಿಶ್ವನಾಯಕರನ್ನು ಭೇಟಿ ಮಾಡಿರುವುದು ಸಂತಸ ತಂದಿದೆ ಎಂದು ಹೇಳಿದ್ದಾರೆ. ಮುಂದಿನ ವರ್ಷ ಜ. 20 ರಂದು ಶ್ವೇತಭವನದಿಂದ ನಿರ್ಗಮಿಸಲಿದ್ದಾರೆ. ಅದೇ ದಿನ ಅಮೆರಿಕ ಅಧ್ಯಕ್ಷರಾಗಿ ಡೊನಾಲ್ಡ್‌ಟ್ರಂಪ್ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

ಸೆ. 21ರಂದು ಅಮೆರಿಕ ಡೆಲವರೆಯಲ್ಲಿರುವ ವಿಲ್ಮಿಂಗ್‌ಟನ್ ನಿವಾಸದಲ್ಲಿ ಮೋದಿ ಕಳೆದ ಬಾರಿ ಬೈಡನ್ ಅವರನ್ನು ಭೇಟಿಯಾಗಿದ್ದರು. ಜಿ-20 ಶೃಂಗಸಭೆಗೆ ತಮ್ಮನ್ನು ಆತ್ಮೀಂವಾಗಿ ಸ್ವಾಗತಿಸಿದ ಬ್ರೆಜಿಲ್ ಅಧ್ಯಕ್ಷ ಲೂಯಿಸ್‌ಫಿನಾಸಿಯೊ ಲುಲಾ ಡಾ ಸಿಲ್ವಾ ಅವರಿಗೆ ಧನ್ಯವಾದ ಸಮರ್ಪಿಸಿದ್ದಾರೆ.



ನೈಜೀರಿಯಾ ಪ್ರವಾಸದ ಬಳಿಕ ನರೇಂದ್ರಮೋದಿ ಅವರು ಬ್ರೆಜಿಲ್‌ಗೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ವಿಶ್ವಸಂಸ್ಥೆಯ ಮಹಾಪ್ರಧಾನ ಕಾರ್ಯದರ್ಶಿ ಆಂಟನಿಯೊ ಗುಟರಸ್ ಅವರೊಂದಿಗೂ ಸಮಾಲೋಚನೆ ನಡೆಸಲಿದ್ದಾರೆ.

ಜಿ-20 ಶೃಂಗಸಭೆಯಲ್ಲಿ ಸಿಂಗಾಪುರ ಪ್ರಧಾನಮಂತ್ರಿ ಲಾರೆನ್ಸ್‌ವಾಂಗ್ ಸ್ಪೇನ್ ಅಧ್ಯಕ್ಷ ಬೆಡ್ರೊಸ್ಯಾಂಚಸ್ ಅವರನ್ನೂ ಭೇಟಿ ಮಾಡಿ ಚರ್ಚೆ ನಡೆಸಿದರು.


# ಶೀಘ್ರದಲ್ಲೇ ಭಾರತಕ್ಕೆ ವ್ಲಾಡಿಮಿರ್ ಪುಟಿನ್ ಭೇಟಿ

**ಮಾಸ್ಕೋ:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶೀಘ್ರದಲ್ಲೇ ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ತಿಳಿಸಿದ್ದಾರೆ.

ವ್ಲಾಡಿಮಿರ್ ಪುಟಿನ್ ಅವರ ಭಾರತ ಭೇಟಿಯ ನಿರ್ದಿಷ್ಟ ದಿನಾಂಕ ಪ್ರಕಟಿಸಲು ರಷ್ಯಾ ಸಕಲ ಸಿದ್ಧತೆಯನ್ನು ಪ್ರಾರಂಭಿಸಿದೆ.

ಶೀಘ್ರದಲ್ಲೇ ನಾವು ಅವರ ಭೇಟಿಯ ನಿಖರವಾದ ದಿನಾಂಕಗಳನ್ನು ತಿಳಿಸುತ್ತೇವೆ. ಪ್ರಧಾನಿ ಮೋದಿಯವರು ರಷ್ಯಾಕ್ಕೆ ಎರಡು ಬಾರಿ ಭೇಟಿ ನೀಡಿದ್ದರು.

ಈಗ ಉಭಯ ದೇಶಗಳ ಸಂಬಂಧ ವೃದ್ಧಿಗಾಗಿ ನಮ್ಮ ಅಧ್ಯಕ್ಷರು ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಉಕ್ರೇನ್‌ನಲ್ಲಿ ಮೇಲಿನ ಯುದ್ಧಾಪರಾಧಗಳಿಗಾಗಿ ಪುಟಿನ್‌ಗೆ ಅಂತಾರಾಷ್ಟ್ರೀಯ ಕ್ರಿಮಿನಲ್ ಕೋರ್ಟ್ (ಐಸಿಸಿ) ಬಂಧನ ವಾರಂಟ್ ಜಾರಿ ಮಾಡಿದೆ. ಇದಾದ ಬಳಿಕ ಐಸಿಸಿಯು ಪುಟಿನ್ ಮತ್ತು ಮಕ್ಕಳ ಹಕ್ಕುಗಳ ರಷ್ಯಾದ ಕಮಿಷನರ್ ಮಾರಿಯಾ ಲ್ವೋವಾ-ಬೆಲೋವಾ ಇಬ್ಬರ ವಿರುದ್ಧವೂ ಯುದ್ಧ ಅಪರಾಧಗಳಿಗಾಗಿ ಬಂಧನ ವಾರಂಟ್‌ಗಳನ್ನು ಹೊರಡಿಸಿತು.



ನ್ಯಾಯಾಲಯದ ಬೈಂಡಿಂಗ್ ಒಪ್ಪಂದದ ಅಡಿಯಲ್ಲಿ ಐಸಿಸಿ ವಾರಂಟ್ ಹೊರಡಿಸಲಾಗಿದೆ. ಈ ಇಬ್ಬರು ಐಸಿಸಿಯ ಸದಸ್ಯ ರಾಷ್ಟ್ರಗಳಿಗೆ ಭೇಟಿ ನೀಡಿದರೆ ಅವರನ್ನು ಬಂಧಿಸಬೇಕು ಎಂಬ ಕಾನೂನಿದೆ. ಆದಾಗ್ಯೂ, ಭಾರತವು ಈ ಒಪ್ಪಂದಕೆ ಸಹಿ ಮಾಡಿಲ್ಲ.

> ಕಳೆದ ತಿಂಗಳು, ಪ್ರಧಾನಿ ನರೇಂದ್ರ, ಮೋದಿ ಅವರು ಬ್ರಿಕ್ಸ್ (ಬ್ರೆಜಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕಾ) ರಾಷ್ಟ್ರಗಳ ಗುಂಪಿನ ನಾಯಕರ ವಾರ್ಷಿಕ ಶೃಂಗಸಭೆಗಾಗಿ ರಷ್ಯಾದ ಕಜಾನ್‌ಗೆ ಭೇಟಿ ನೀಡಿದ್ದರು. ಶೃಂಗಸಭೆಯ ಹಿನ್ನೆಲೆಯಲ್ಲಿ ಉಭಯ ನಾಯಕರು ದ್ವಿಪಕ್ಷೀಯ ಸಭೆ ನಡೆಸಿದ್ದರು.

# ಟಿಟಿಡಿಯಲ್ಲಿ ಹಿಂದೂಯೇತರ ಅಧಿಕಾರಿಗಳಿಗೆ ಕೋಕ್

## ತಿರುಪತಿ ತಿರುಮಲೇಶ್ವರ ದೇಗುಲ ಹಿಂದೂ ದೇವಸ್ಥಾನವಾಗಿದ್ದು, ಇಲ್ಲಿ ಹಿಂದೂಗಳಿಗೆ ಮಾತ್ರ ಅವಕಾಶವಿರಬೇಕು: ಟಿಟಿಡಿ

**ತಿರುಪತಿ:** ಹಿಂದೂಗಳ ಪವಿತ್ರಾ, ಧಾರ್ಮಿಕ ಕೇಂದ್ರವಾದ ವಿಶ್ವಪ್ರಸಿದ್ಧ ತಿರುಪತಿ ತಿರುಮಲ ದೇವಾಲಯದಲ್ಲಿರುವ ಹಿಂದೂಯೇತರ ಅಧಿಕಾರಿಗಳು ಸ್ವಯಂ ನಿವೃತ್ತಿ (ವಿಆರ್‌ಎಸ್ ) ತೆಗೆದುಕೊಳ್ಳಬೇಕು ಅಥವಾ ಆಂಧ್ರಪ್ರದೇಶದ ಇತರ ಸರ್ಕಾರಿ ಇಲಾಖೆಗಳಿಗೆ ವರ್ಗಾವಣೆಯನ್ನು ಆರಿಸಿಕೊಳ್ಳಬೇಕೆಂದು ನಿರ್ಣಯವನ್ನು ಅಂಗೀಕರಿಸಿದೆ.

ಹೊಸದಾಗಿ ರಚನೆಯಾಗಿರುವ ತಿರುಮಲ ತಿರುಪತಿ ದೇವಸ್ಥಾನಂ ಮಂಡಳಿ ಉದ್ಯೋಗದಲ್ಲಿರುವ ಹಿಂದೂಯೇತರರು ಒಂದೋ ಸ್ವಯಂ ನಿವೃತ್ತಿ ಪಡೆದುಕೊಳ್ಳಿ, ಇಲ್ಲವೇ ಕೂಡಲೇ ವರ್ಗಾವಣೆ ತೆಗೆದುಕೊಳ್ಳಿ ಎಂದು ತಿರುಮಲ ತಿರುಪತಿ ದೇವಸ್ಥಾನಂ ಆಡಳಿತ ಮಂಡಳಿ (ಟಿಟಿಡಿ) ನಿರ್ದೇಶಿಸಿದೆ.

ತಿರುಪತಿ ತಿರುಮಲೇಶ್ವರ ದೇಗುಲ ಹಿಂದೂ ದೇವಸ್ಥಾನವಾಗಿದ್ದು, ಇಲ್ಲಿ ಹಿಂದೂಗಳಿಗೆ ಮಾತ್ರ ಅವಕಾಶವಿರಬೇಕು. ದೇವಾಲಯವನ್ನು ನಿರ್ವಹಿಸಲು ಮತ್ತು ಕೆಲಸ ಮಾಡಲು ಹಿಂದೂ ಸಮುದಾಯದ ಸದಸ್ಯರನ್ನು ಮಾತ್ರ ನೇಮಿಸಿಕೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ತಿರುಮಲ ತಿರುಪತಿ ದೇವಸ್ಥಾನಮ್ ಮಂಡಳಿಯು ನಿರ್ಧರಿಸಿದೆ. ಈಗಾಗಲೇ ತಿರುಪತಿ ದೇಗುಲದಲ್ಲಿ ಕೆಲಸ ಮಾಡುತ್ತಿರುವ ಹಿಂದೂಯೇತರ ಉದ್ಯೋಗಿಗಳ ಬಗ್ಗೆ ಸೂಕ್ತ ಕ್ರಮವನ್ನು ಕೋರುವಂತೆ ಆಂಧ್ರ ಪ್ರದೇಶ ಸರ್ಕಾರಕ್ಕೆ ಪತ್ರ ಬರೆಯಲು ಟಿಟಿಡಿ ನಿರ್ಧರಿಸಿದೆ.

### ಹಿಂದೂಯೇತರ ಅಧಿಕಾರಿಗಳು ಜಾಗ ಖಾಲಿ ಮಾಡುವಂತೆ ಸೂಚನೆ

ತಿರುಪತಿ ತಿರುಮಲ ವೆಂಕಟೇಶ್ವರ ದೇವಸ್ಥಾನದ ಉಸ್ತುವಾರಿ ವಹಿಸಿರುವ ಹೊಸದಾಗಿ ರಚನೆಯಾಗಿವ ತಿರುಮಲ ತಿರುಪತಿ ದೇವಸ್ಥಾನಮ್ ಮಂಡಳಿಯು ಈ ಹಿಂದೆಯೇ ಹಿಂದೂಯೇತರರಿಗೆ ಇಲ್ಲಿ ಅವಕಾಶ ಇಲ್ಲ ಎಂದು ಹೇಳಿತ್ತು. ಇದೀಗ ಈ ಹಿಂದಿನ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಅಧಿಕಾರವಧಿಯಲ್ಲಿ ತಿರುಪತಿ ದೇಗುಲದಲ್ಲಿ ನೌಕರರಾಗಿ ಸೇರಿದ್ದ ಹಿಂದೂಯೇತರ ಅಧಿಕಾರಿಗಳಿಗೆ ಕೂಡಲೇ ಜಾಗ ಖಾಲಿ ಮಾಡುವಂತೆ ಟಿಟಿಡಿ ಸೂಚಿಸಿದೆ.



ಇದರ ಜೊತೆಗೆ ತಿರುಪತಿ ಲಡ್ಡು ತಯಾರಿಕೆಯಲ್ಲಿ ವರ್ಧಿತ ಗುಣಮಟ್ಟದ ತುಪ್ಪವನ್ನು ಬಳಸಲು ಟಿಟಿಡಿ ಟ್ರಸ್ಟ್ ಬೋರ್ಡ್ ನಿರ್ಧರಿಸಿದ್ದು, ಈ ನಿರ್ಣಯಗಳನ್ನು ಮೊದಲ ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ.

ತಿರುಪತಿ ದೇಗುಲದಲ್ಲಿ ಸುಮಾರು 700ರಷ್ಟು ನೌಕರರು ಇದ್ದು, ಆದರೆ ಹಿಂದೂಯೇತರ ನೌಕರರ ಸಂಖ್ಯೆ ಎಷ್ಟು ಇದೆ ಅನ್ನೋದನ್ನು ಬಹಿರಂಗಪಡಿಸಲು ತಿರುಮಲ ತಿರುಪತಿ ದೇವಸ್ಥಾನಮ್ ಮಂಡಳಿಯು ನಿರಾಕರಿಸಿದೆ. ಮೂಲಗಳ ಪ್ರಕಾರ 300ರಷ್ಟು ನೌಕರರು ಹಿಂದೂ ಧರ್ಮೀಯರಲ್ಲದವರು ಇದ್ದಾರೆ ಎಂದು ತಿಳಿದು ಬಂದಿದ್ದು, ಅವರೆಲ್ಲರ ಉದ್ಯೋಗಕ್ಕೆ ಈಗ ಪೆಟ್ಟು ಬೀಳುವ ಸಾಧ್ಯತೆ ಇದೆ. ಈ ನಿರ್ಧಾರವು ಆಂಧ್ರಪ್ರದೇಶದ ದತ್ತಿ ಕಾಯ್ದೆ ಮತ್ತು ಟಿಟಿಡಿ ಕಾಯ್ದೆಯೊಂದಿಗೆ ಹೊಂದಿಕೆಯಾಗುತ್ತದೆ ಎಂದು ಹೇಳಿರುವ ಟಿಟಿಡಿ ವಿವಿಧ ನೌಕರರ ಸಂಘಗಳಿಂದ ಬೆಂಬಲವನ್ನು ಪಡೆದುಕೊಂಡಿದೆ. ಅಕ್ಟೋಬರ್ 31 ರಂದು ಟಿಟಿಡಿ ಅಧ್ಯಕ್ಷರಾಗಿ ನೇಮಕಗೊಂಡ ನಂತರ ನಾಯ್ಡು ಅವರು ದೇವಸ್ಥಾನವನ್ನು ಹಿಂದೂಗಳು ಮಾತ್ರ ನಡೆಸಬೇಕು ಎಂದು ತಮ ನಿಲುವನ್ನು ವ್ಯಕ್ತಪಡಿಸಿದ್ದರು.

> ತಿರುಮಲದಲ್ಲಿ ಕೆಲಸ ಮಾಡುತ್ತಿರುವ ಹಿಂದೂಯೇತರರ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯುತ್ತೇವೆ. ಟಿಟಿಡಿ ಹಿಂದೂ ಧಾರ್ಮಿಕ ಸಂಸ್ಥೆಯಾಗಿದ್ದು, ದೇವಸ್ಥಾನದಲ್ಲಿ ಕೆಲಸ ಮಾಡಲು ಹಿಂದೂಯೇತರರನ್ನು ನೇಮಿಸಿಕೊಳ್ಳಬಾರದು ಎಂದು ಮಂಡಳಿ ಅಭಿಪ್ರಾಯಪಟ್ಟಿದೆ. ಅವರನ್ನು ಬೇರೆ ಬೇರೆ ಇಲಾಖೆಗಳಲ್ಲಿ ಸೇರಿಸಿಕೊಳ್ಳಲು ಅಥವಾ ಅವರಿಗೆ ಸ್ವಯಂ ನಿವೃತ್ತಿ ಯೋಜನೆ ನೀಡಲು ನಾವು ಸರ್ಕಾರಕ್ಕೆ ಪತ್ರ ಬರೆಯುತ್ತೇವೆ
> -ಬಿ.ಆರ್ ನಾಯ್ಡು, ಟಿಟಿಡಿ ಅಧ್ಯಕ್ಷ

### ಕೂಡಲೇ ವರ್ಗಾವಣೆ ತೆಗೆದುಕೊಳ್ಳಿ

ಇದೇ ವರ್ಷ ಆಂಧ್ರಪ್ರದೇಶದಲ್ಲಿ ನಡೆದ ವಿಧಾನಸಭಾ ಚುನಾವಣೆ ವೇಳೆ ತಿರುಪತಿ ದೇಗುಲದ ಲಡ್ಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಸಲಾಗುತ್ತದೆ ಎಂಬ ಆರೋಪ ವನ್ನು ಚಂದ್ರಬಾಬು ನಾಯ್ಡು ಆರೋಪಿಸಿದ್ದರು. ನಂತರ ಸುಪ್ರೀಂ ಕೋರ್ಟ್ ಈ ವಿಚಾರವಾಗಿ ಸಾಕ್ಷ್ಯಾಧಾರಗಳಿಲ್ಲದೇ ಆರೋಪ ಮಾಡುವುದನ್ನು ಖಂಡಿಸಿತ್ತು. ಈ ವಿವಾದ ರಾಷ್ಟ್ರ ಮಟ್ಟದಲ್ಲಿ ಭಾರೀ ವಿವಾದ ಎಬ್ಬಿಸಿತ್ತು. ಹಲವು ವರ್ಷಗಳಿಂದ, ದೇವಸ್ಥಾನ ಮಂಡಳಿ ಮತ್ತು ಅದರ ಅಂಗ ಸಂಸ್ಥೆಗಳಲ್ಲಿ ಹಿಂದೂಗಳಿಗೆ ಮಾತ್ರ ಉದ್ಯೋಗ ನೀಡಬೇಕು ಎಂದು ಟಿಟಿಡಿ ಕಾಯ್ದೆಯನ್ನು ಮೂರು ಬಾರಿ ತಿದ್ದುಪಡಿ ಮಾಡಲಾಗಿದೆ.

# ಮಿನಿ ನ್ಯೂಸ್

## ಜಿಸ್ಯಾಟ್-20 ಯಶಸ್ವಿ ಉಡಾವಣೆ

**ಫ್ಲಾರಿಡಾ:** ಅಮೆರಿಕಾದ ಫ್ಲಾರಿಡಾದಲ್ಲಿರುವ ಸ್ಪೇಸ್‌ಎಕ್ಸ್‌ನ ಫಾಲ್ಕನ್-9 ರಾಕೆಟ್ ಮೂಲಕ ಭಾರತದ ಜಿಸ್ಯಾಟ್ -20 ಅಥವಾ ಜಿಸ್ಯಾಟ್-ಎನ್2 ಮುಂಜಾನೆ ಉಡಾವಣೆಯಾಗಿ ಕಕ್ಷೆ ಸೇರಿದೆ.

ಪ್ರಾಥಮಿಕವಾಗಿ ಭಾರತದ ಬೆಳೆಯುತ್ತಿರುವ ಬ್ರಾಡ್‌ಬ್ಯಾಂಡ್ ಸಂಪರ್ಕ ಅಗತ್ಯಗಳನ್ನು ಪೂರೈಸುವ ಗುರಿ ಹೊಂದಿದೆ.ಪೂರ್ವ ನಿರ್ಧಾರದಂತೆ ಅಮೆರಿಕಾದ ಕಾಲಮಾನ 12.01 ಕ್ಕೆ ಉಪ್ರಗ್ರಹ ಉಡಾವಣೆ ಆಗಿದ್ದು ಉಪಗ್ರಹ ಸುಮಾರು 34 ನಿಮಿಷಗಳ ನಂತರ ಬೇರ್ಪಟ್ಟಿತು ಮತ್ತು ನಂತರ ಕಕ್ಷೆಯಲ್ಲಿ ಸೇರಿದೆ. 4,700 ಕೆಜಿ ತೂಕದ ಮತ್ತು 14 ವರ್ಷಗಳ ಕಾರ್ಯಾಚರಣೆಗಾಗಿ ವಿನ್ಯಾಸಗೊಳಿಸಲಾದ ಜಿಸ್ಯಾಟ್ -20 ಉಪಗ್ರಹ ಸಂವಹನ ತಂತ್ರಜ್ಞಾನದಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಹೇಳಿದೆ. ಅತ್ಯಾಧುನಿಕ ಕ-ಬ್ಯಾಂಡ್ ಹೈ-ಥ್ರೂಪುಟ್ ಉಪಗ್ರಹವನ್ನು ಬ್ರಾಡ್‌ಬ್ಯಾಂಡ್ ಮತ್ತು ವಿಮಾನದ ಸಂಪರ್ಕವನ್ನು ಪರಿವರ್ತಿಸಲು ವಿನ್ಯಾಸಗೊಳಿಸಲಾಗಿದೆ ಎಂದು ಮಾಹಿತಿ ಹಂಚಿಕೊಂಡಿದೆ. ಅಂಡಮಾನ್, ನಿಕೋಬಾರ್ ಮತ್ತು ಲಕ್ಷದ್ವೀಪ ದ್ವೀಪಗಳನ್ನು ಒಳಗೊಂಡಂತೆ ಭಾರತದಾದ್ಯಂತ 32 ಕಿರಣಗಳಾದ್ಯಂತ 48 ಜಿಬಿಪಿಎಸ್ ಸಾಮರ್ಥ್ಯವನ್ನು ಒದಗಿಸುವ ಉಪಗ್ರಹವನ್ನು ಎನ್ ಎಸ್ ಐಎಲ್ ಹೊಂದಿದೆ ಎಂದು ಸಂಸ್ಥೆಯ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ರಾಧಾಕೃಷ್ಣನ್ ಮಾಹಿತಿ ಹಂಚಿಕೊಂಡಿದ್ದಾರೆ.

## ದೇಶದ ಭವಿಷ್ಯಕ್ಕೆ ಜಾತಿ ಗಣತಿ ಅಗತ್ಯ



**ರಾಂಚಿ:** ರಾಷ್ಟ್ರದ ಭವಿಷ್ಯದ ಮಾದರಿ ಮತ್ತು ಪ್ರಗತಿ ನಿರ್ಧರಿಸಲು ದೇಶದಲ್ಲಿ ಹೊಸ ಜಾತಿ ಗಣತಿ ಅಗತ್ಯವಾಗಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ದೇಶದ ಸಂಪನ್ಮೂಲಗಳನ್ನು ಅರ್ಹರಲ್ಲಿ ಸಮಾನವಾಗಿ ವಿತರಿಸುವುದರ ಜೊತೆಗೆ ಯೋಜನೆಗಳು ಮತ್ತು ನೀತಿಗಳ ಸರಿಯಾದ ತಯಾರಿಗಾಗಿ ದೇಶದಲ್ಲಿ ಹೊಸದಾಗಿ ಜಾತಿ ಗಣತಿ ನಡೆಸುವುದು ಅತ್ಯಗತ್ಯ ಎಂದು ತಿಳಿಸಿದ್ದಾರೆ. ರಾಂಚಿಯಲ್ಲಿ ಮಾತನಾಡಿದ ಅವರು ಮತ-ಬ್ಯಾಂಕ್ ರಾಜಕೀಯಕ್ಕಾಗಿ ಜನರನ್ನು ಜಾತಿಯ ಆಧಾರದ ಮೇಲೆ ವಿಭಜಿಸುತ್ತಾರೆ ಎನ್ನುವ ಬಿಜೆಪಿ ಆರೋಪವನ್ನು ಬದಿಗೆ ಸರಿಸಿ ದೇಶಾದ್ಯಂತ ಜಾತಿ ಗಣತಿ ನಡೆಸುವ ಅಗತ್ಯ ಮತ್ತು ಅನಿವಾರ್ಯವಿದೆ ಎಂದಿದ್ದಾರೆ.

ಜಾತಿ ಗಣತಿ ನಡೆಸುವ ಮತ್ತು ಅದರ ಸಂಶೋಧನೆ ಅನುಷ್ಠಾನಗೊಳಿಸುವ ಮಾರ್ಗಗಳ ಬಗ್ಗೆ ನಮ್ಮ ಬಳಿ ನೀಲನಕ್ಷೆ ಸಿದ್ಧವಾಗಿದೆ, ಅದನ್ನು ಚಿನ್ನದ ಗಣಿ ಎಂದು ಕರೆಯಿರಿ. ಜಾತಿಯ ಮೂಲಕ ಜನಗಣತಿ, ನಮ್ಮ ಕಲ್ಪನೆಯು ದೇಶದಲ್ಲಿ ವಾಸಿಸುವ ಎಲ್ಲರನ್ನೂ ಎಲ್ಲರನ್ನು ಮುಖ್ಯವಾಹಿನಿಗೆ ತರುವ ಉದ್ದೇಶ ಹೊಂದಲಾಗಿದೆ ಎಂದಿದ್ದಾರೆ. ದೇಶದ ಸಂಪನ್ಮೂಲಗಳನ್ನು ಕೆಲವು ಬಂಡವಾಳಶಾಹಿಗಳಿಗೆ ಸೀಮಿತಗೊಳಿಸದೆ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು ಎಂಬ ಉದ್ದೇಶ ನಮ್ಮದು ಎಂದು ತಿಳಿಸಿದ್ದಾರೆ.

## ಸರಣಿ ಅಪಘಾತ: 12 ವಾಹನಗಳ ಡಿಕ್ಕಿ, ಇಬ್ಬರು ಬೈಕರ್‌ಗಳ ಸಾವು

**ಲಖನೌ:** ಉತ್ತರ ಭಾರತದಲ್ಲಿ ದಟ್ಟ ಮಂಜು ಮುಂದುವರೆದಿರುವಂತೆಯೇ ಉತ್ತರ ಪ್ರದೇಶದ ನೋಯ್ಡಾದಲ್ಲಿ ಎಕ್ಸ್ ಪ್ರೆಸ್ ವೇನಲ್ಲಿ ಭೀಕರ ಸರಣಿ ಅಪಘಾತ ಸಂಭವಿಸಿದ್ದು, 12 ವಾಹನಗಳು ಢಿಕ್ಕಿಯಾಗಿ 2 ಪ್ರತ್ಯೇಕ ಅವಘಡಗಳಲ್ಲಿ ಇಬ್ಬರು ಬೈಕ್ ಸವಾರರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ.

ನೋಯ್ಡಾದ ಈಸ್ಟರ್ನ್ ಪೆರಿಫೆರಲ್ ಎಕ್ಸ್‌ಪ್ರೆಸ್‌ವೇಯಲ್ಲಿ ಈ ಸರಣಿ ಅಪಘಾತ ನಡೆದಿದ್ದು, ಕಾರು ಮತ್ತು ಸರಕು ಸಾಗಾಣಿಕಾ ಟ್ರಕ್ ನಡುವೆ ಮೊದಲು ಅಪಘಾತವಾಗಿದ್ದು, ಬಳಿಕ ಇದರ ಹಿಂದೆಯೇ ಬೈಕ್ ಗಳು ಮತ್ತು ಕಾರುಗಳು, ಗೂಡ್ಸ್ ವಾಹನಗಳು ಸೇರಿದಂತೆ ಒಟ್ಟು 12 ವಾಹನಗಳು ಢಿಕ್ಕಿಯಾಗಿವೆ.

ಮೂಲಗಳ ಪ್ರಕಾರ ಪಾಣಿಪತ್‌ನಿಂದ ಮಥುರಾಗೆ ತೆರಳುತ್ತಿದ್ದ ಬಸ್‌ಗೆ ಟ್ರಕ್‌ಗಳನ್ನು ಗುರುತಿಸಲು ಸಾಧ್ಯವಾಗದೆ ಹಿಂಬದಿಯಿಂದ ಡಿಕ್ಕಿ ಹೊಡೆದಿದೆ. ಬಸ್ಸಿನಲ್ಲಿದ್ದ ಸುಮಾರು 12 ಮಂದಿ ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದೆ.

## ಕೌಲಾಲಂಪುರದಿಂದ ಚೆನ್ನೈಗೆ ಹಾರುತ್ತಿದ್ದ ವಿಮಾನದಲ್ಲಿ ಮಹಿಳೆ ಸಾವು


**ಚೆನ್ನೈ:** ಕೌಲಾಲಂಪುರದಿಂದ ಚೆನ್ನೈಗೆ ಪ್ರಯಾಣಿಸುತ್ತಿದ್ದ 37 ವರ್ಷದ ಮಹಿಳೆ ಮಂಗಳವಾರ ಚೆನ್ನೈ ವಿಮಾನ ನಿಲ್ದಾಣಕ್ಕೆ ಆಗಮಿಸುವ ವೇಳೆ ಶವವಾಗಿ ಪತ್ತೆಯಾಗಿದ್ದು, ಅವರು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ವಿಮಾನವು ಚೆನ್ನೈಗೆ ಆಗಮಿಸಿದ ನಂತರ ಖಾಸಗಿ ವಿಮಾನದ ಸಿಬ್ಬಂದಿಗೆ ಮಹಿಳೆ ಸ್ಪಂದಿಸದಿರುವುದನ್ನು ಕಂಡು, ವೈದ್ಯರ ತಂಡ ಅವರನ್ನು ಪರೀಕ್ಷಿಸಿತು. ನಂತರ ವೈದ್ಯರು ಮಹಿಳೆ ಮೃತಪಟ್ಟಿರುವುದಾಗಿ ಘೋಷಿಸಿದರು. ಬಳಿಕ ಶವವನ್ನು ಸಮೀಪದ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಮೃತ ಮಹಿಳೆ ತಮಿಳುನಾಡಿನ ಕಲ್ಲಕುರಿಚಿ ಜಿಲ್ಲೆಯವರು ಎಂದು ಪೊಲೀಸರು ತಿಳಿಸಿದ್ದಾರೆ.

## ನಿಂತಿದ್ದ ಟ್ರಕ್‌ಗೆ ವ್ಯಾನ್ ಡಿಕ್ಕಿ: ಮೂವರು ಮಕ್ಕಳು ಸೇರಿ ಆರು ಮಂದಿ ಸಾವು

**ಗುಜರಾತ್:** ಗುಜರಾತ್‌ನ ಭರೂಚ್ ಜಿಲ್ಲೆಯಲ್ಲಿ ಖಾಸಗಿ ವ್ಯಾನ್ ವೊಂದು ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಮೂವರು ಮಕ್ಕಳು ಸೇರಿದಂತೆ ಆರು ಮಂದಿ ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ವೇದಾಚ್ ಗ್ರಾಮದ 10 ಜನರು ಶುಕ್ಲತೀರ್ಥ ಕಡೆಗೆ ಹೋಗುತ್ತಿದ್ದಾಗ ಸೋಮವಾರ ರಾತ್ರಿ 11 ಗಂಟೆ ಸುಮಾರಿಗೆ ಮಗ್ನಾಡ್ ಗ್ರಾಮದ ಬಳಿಯ ಜಂಬೂಸರ್-ಅಮೋದ್ ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದೆ ಎಂದು ಜಂಬೂಸರ್ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಎವಿ ಪನಾಮಿಯಾ ತಿಳಿಸಿದ್ದಾರೆ. ಪ್ಯಾಸೆಂಜರ್ ವ್ಯಾನ್ ಮಗ್ನಾಡ್ ಗ್ರಾಮದ ಬಳಿ ರಸ್ತೆಯ ಎಡ ಲೇನ್‌ನಲ್ಲಿ ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಭೀಕರ ಅಪಘಾತದಲ್ಲಿ ಆರು ಪ್ರಯಾಣಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಮತ್ತು ನಾಲ್ವರು ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಜಂಬೂಸರ್‌ನ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪನಾಮಿಯಾ ಹೇಳಿದ್ದಾರೆ. ಮೃತರನ್ನು ಜಯದೇವ್ ಗೋಹಿಲ್(23), ಸರಸ್ವತಿ ಗೋಹಿಲ್(21), ಹಂಸಾ ಜಾದವ್ (35), ಸಂಧ್ಯಾ ಜಾದವ್ (11), ವಿವೇಕ್ ಗೋಹಿಲ್ (16) ಮತ್ತು ಕೀರ್ತಿ ಗೋಹಿಲ್(6) ಎಂದು ಗುರುತಿಸಲಾಗಿದೆ.



# ರಿಷಬ್ ಶೆಟ್ಟಿ ಲುಕ್‌ಗೆ ಫ್ಯಾನ್ಸ್ ಫಿದಾ


ರಾಷ್ಟ್ರ ಪ್ರಶಸ್ತಿ ವಿಜೇತ ನಟ ರಿಷಬ್ ಶೆಟ್ಟಿನಟನೆಯ 'ಕಾಂತಾರ ಚಾಪ್ಟರ್ 1'ರ ಟೈಟಲ್ ಟೀಸರ್ ರಿಲೀಸ್ ಆಗಿದೆ. ರಿಷಬ್ ಶೆಟ್ಟಿ ಕಣ್ಣೋಟಕ್ಕೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಈ ಸಿನಿಮಾದ ಮೊದಲ ಟೀಸರ್ ಎಲ್ಲಾರ ಗಮನ ಸೆಳೆದಿದೆ. ರಿಷಬ್ ಶೆಟ್ಟಿ ಪ್ರತಿಭಾನ್ವಿತ ನಟ-ನಿರ್ದೇಶಕ ಅದರಲ್ಲಿ ಎರಡು ಮಾತಿಲ್ಲ. ಯಾವುದೇ ಪಾತ್ರ ಕೊಟ್ಟರೂ ಆ ಪಾತ್ರವೇ ತಾವಾಗಿ ಜೀವ ತುಂಬಿ ನಟಿಸುತ್ತಾರೆ. ಅದಕ್ಕೆ ಕಾಂತಾರ ಸಿನಿಮಾ ಸಾಕ್ಷಿ. ಇದೀಗ ಕಾಂತಾರ ಚಾಪ್ಟರ್ 1ರ ಮೂಲಕ ರಿಷಬ್ ಗಮನ ಸೆಳೆಯುತ್ತಿದ್ದಾರೆ. ಚಿತ್ರದ ಟೀಸರ್‌ನಲ್ಲಿ ರಿಷಬ್ ಕಣ್ಣಲ್ಲಿ ಬೆಳಕಿದೆ ಜೊತೆ ರಕ್ತಸಿಕ್ತ ಗೆಟಪ್‌ನಲ್ಲಿ ಕಾಣಿಸಿಕೊಂಡಿರೋದು ಅಭಿಮಾನಿಗಳಲ್ಲಿ ಸಿನಿಮಾ ಮೇಲಿನ ನಿರೀಕ್ಷೆ ಹೆಚ್ಚಿಸಿದೆ. 2025ರ ಅಕ್ಟೋಬರ್ 2ರಂದು ಸಿನಿಮಾ ಬಿಡುಗಡೆ ಮಾಡುವುದಾಗಿ ಹೊಂಬಾಳೆ ಫಿಲ್ಮ್ಸ್ ಘೋಷಣೆ ಮಾಡಿದೆ. ಏಕಕಾಲಕ್ಕೆ ಕನ್ನಡ, ಹಿಂದಿ, ಇಂಗ್ಲಿಷ್ ಹಾಗೂ ತೆಲುಗು ಭಾಷೆಗಳಲ್ಲಿ ಸಿನಿಮಾ ತೆರೆಯ ಮೇಲೆ ಬರಲಿದೆ ಎಂದು ಈಗಾಗಲೇ ಹೊಂಬಾಳೆ ಸಂಸ್ಥೆ ಘೋಷಿಸಿದೆ.




# ಗುಲಾಬಿ ಹಿಡಿದು ಪೋಸ್ ಕೊಟ್ಟ ಸಪ್ತಮಿ

'ಕಾಂತಾರ' ಚಿತ್ರದ ನಟಿ ಸಪ್ತಮಿ ಗೌಡ ಅವರು ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸೋಶಿಯಲ್ ಮೀಡಿಯಾದಲ್ಲಿ ಮೋಡಿ ಮಾಡುತ್ತಲೇ ಇರುತ್ತಾರೆ. ಇತ್ತೀಚೆಗೆ ವಿಂಟೇಜ್ ಲುಕ್‌ನಲ್ಲಿ ನಟಿ ಗಮನ ಸೆಳೆದಿದ್ದರು. ಇದೀಗ ಕೈಯಲ್ಲಿ ಗುಲಾಬಿ ಹಿಡಿದು ಸ್ಟೈಲೀಶ್ ಆಗಿ 'ಸಿಂಗಾರ ಸಿರಿ' ಸಪ್ತಮಿ ಫೋಟೋಶೂಟ್ ಮಾಡಿದ್ದಾರೆ. ನೀಲಿ ಬಣ್ಣದ ಗನ್ ಧರಿಸಿ ಕೈಯಲ್ಲಿ ಗುಲಾಬಿ ಹಿಡಿದು ನಟಿ ಮುದ್ದಾಗಿ ಪೋಸ್ ನೀಡಿದ್ದಾರೆ. ಸಪ್ತಮಿ ಮುದ್ದಾಗಿ ಬೀರಿರುವ ನಗುವಿಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ನಟಿ ಫೋಟೋಗೆ ಏಂಜಲ್, ಸಿಂಗಾರ ಸಿರಿ ಹೀಗೆ ನಾನಾ ಕಾಮೆಂಟ್‌ಗಳು ನೆಟ್ಟಿಗರಿಂದ ಹರಿದು ಬರುತ್ತಿವೆ. ಇನ್ನೂ 2020ರಲ್ಲಿ ಡಾಲಿ ಧನಂಜಯ ನಟನೆಯ 'ಪಾಪ್ ಕಾರ್ನ್ ಮಂಕಿ ಟೈಗರ್' ಸಿನಿಮಾಗೆ ಸಪ್ತಮಿ ಹೀರೋಯಿನ್ ಆಗಿ ಸಿನಿಮಾರಂಗಕ್ಕೆ ಪಾದಾರ್ಪಣೆ ಮಾಡಿದರು. ಈ ಚಿತ್ರದ ಕುರಿತು ಅಭಿಮಾನಿಗಳಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ಆ ನಂತರ 2022ರಲ್ಲಿ ರಿಷಬ್ ಶೆಟ್ಟಿ ನಟನೆಯ 'ಕಾಂತಾರ' ಸಿನಿಮಾಗೆ ಸಪ್ತಮಿ ಗೌಡ ನಾಯಕಿಯಾಗಿ ಗಮನ ಸೆಳೆದರು. ಈ ಸಿನಿಮಾದ ಭರ್ಜರಿ ಸಕ್ಸಸ್ ನಂತರ ಪ್ಯಾನ್ ಇಂಡಿಯಾ ಹೀರೋಯಿನ್ ಆಗಿ ಸಪ್ತಮಿ ಗುರುತಿಸಿಕೊಂಡರು. ಬಳಿಕ ಬಾಲಿವುಡ್‌ನ 'ದಿ ವ್ಯಾಕ್ಸಿನ್ ವಾರ್' ಚಿತ್ರದಲ್ಲಿ ಸಪ್ತಮಿ ಪ್ರಮುಖ ಪಾತ್ರದಲ್ಲಿ ನಟಿಸಿದರು.



# ನಟ ತಾಂಡವ್ ರಾಮ್ ಬಂಧನ



ನಿರ್ದೇಶಕರೊಬ್ಬರ ಮೇಲೆ ಗುಂಡು ಹಾರಿಸಿ ಕೊಲೆಗೆ ಯತ್ನಿಸಿದ ಆರೋಪದ ಮೇಲೆ ಜೋಡಿಹಕ್ಕಿ ಧಾರಾವಾಹಿ ಮೂಲಕ ಕಿರುತೆರೆಯಲ್ಲಿ ಗುರುತಿಸಿಕೊಂಡಿದ್ದ ನಟ ತಾಂಡವ್ ರಾಮ್ ನನ್ನು ಪೊಲೀಸರು ಬಂಧಿಸಿದ್ದಾರೆ.

ರವಿಚಂದ್ರನ್ ಪುತ್ರ ಮನೋರಂಜನ್ ನಟನೆಯ ಮುಗಿಲ್ ಪೇಟೆ ಸಿನಿಮಾ ನಿರ್ದೇಶಕ ಭರತ್ ಅವರ ಮೇಲೆ ನಟ ಗುಂಡು ಹಾರಿಸಿ ಕೊಲೆಗೆ ಯತ್ನಿಸಿದ್ದಾರೆ ಎನ್ನಲಾಗಿದೆ. ಚಂದ್ರಾ ಲೇಔಟ್ ನಲ್ಲಿ ಈ ಘಟನೆ ಸಂಭವಿಸಿದೆ. ಲೈಸೆನ್ಸ್ ಗನ್ ತೋರಿಸಿ ಬೆದರಿಕೆ ಹಾಕಿದ ಕಾರಣ ತಾಂಡವ್ ರಾಮ್ ನನ್ನು ಚಂದ್ರಾ ಲೇಔಟ್ ಪೊಲೀಸರು ಬಂಧಿಸಿದ್ದಾರೆ. ಸಿನಿಮಾ ಅರ್ಧಕ್ಕೆ ನಿಲ್ಲಿಸಿದ ಕಾರಣಕ್ಕೆ ಗಲಾಟೆ ಮಾಡಿ ಕೊಲೆ ಯತ್ನ ಮಾಡಿದ್ದಾರೆ ಎನ್ನಲಾಗಿದೆ. ಸದ್ಯ ಚಂದ್ರಾ ಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸ್ ಕಮೀಷನರ್ ಬಿ. ದಯಾನಂದ್ ಈ ಪ್ರಕರಣ ಕುರಿತು ಮಾತನಾಡಿದ್ದಾರೆ. ಇದು ನಿನ್ನೆ ಆಗಿರುವ ಘಟನೆ. ಲೈಸೆನ್ಸ್ ಗನ್ ಸೀಜ್ ಮಾಡಲಾಗಿದೆ. ಪ್ರಾಥಮಿಕ ತನಿಖೆ ವೇಳೆ ಉದ್ದೇಶ ಪೂರ್ವಕವಾಗಿ ಮಾಡಿರುವುದು ಗೊತ್ತಾಗಿದೆ. ಆರೋಪಿಯನ್ನ ಅರೆಸ್ಟ್ ಮಾಡಲಾಗಿದೆ ಎಂದು ಹೇಳಿಕೆ ನೀಡಿದ್ದಾರೆ.

ನಿರ್ದೇಶಕ ಭರತ್, ಸಿನಿಮಾ ಒಂದನ್ನು ನಿರ್ದೇಶಿಸುತ್ತಿದ್ದು, ಸಿನಿಮಾದಲ್ಲಿ ತಾಂಡವ್ ರಾಮ್ ನಟಿಸುತ್ತಿದ್ದರು. ಆದರೆ ಆ ಸಿನಿಮಾವನ್ನು ಭರತ್ ನಿಲ್ಲಿಸಿದ್ದರು. ಇದರಿಂದ ಕೋಪಗೊಂಡಿದ್ದ ತಾಂಡವ್ ರಾಮ್, ನಿರ್ದೇಶಕ ಭರತ್‌ಗೆ ಬಂದೂಕು ತೋರಿಸಿ ಬೆದರಿಕೆ ಹಾಕಿದ್ದಾರೆ. ಜೊತೆಗೆ ಒಂದು ಸುತ್ತು ಗುಂಡು ಹಾರಿಸಿ ಕೊಲ್ಲುವ ಯತ್ನ ಮಾಡಿದ್ದಾರೆ. ಭರತ್ ಪೊಲೀಸರಿಗೆ ಈ ಬಗ್ಗೆ ದೂರು ನೀಡಿದ್ದರು.

# ಗೋವಾದಲ್ಲಿ ಕೀರ್ತಿ ಮದುವೆ



ರಾಷ್ಟ್ರ ಪ್ರಶಸ್ತಿ ವಿಜೇತ ನಟಿ ಕೀರ್ತಿ ಸುರೇಶ್ ಅವರ ಮದುವೆ ವಿಚಾರ ಸಖತ್ ಸುದ್ದು ಮಾಡುತ್ತಿದೆ. ಈ ಹಿಂದೆ, ಕೀರ್ತಿ ದುಬೈ ಮೂಲದ ಉದ್ಯಮಿ ಮತ್ತು ತಮಿಳು ಚಿತ್ರರಂಗದ ಸ್ಟಾರ್ ಸಂಗೀತ ಸಂಯೋಜಕರೊಂದಿಗೆ ನಟಿ ಮದುವೆಯಾಗುತ್ತಿದ್ದಾರೆ ಎಂಬ ಸುದ್ದಿ ವೈರಲ್ ಆಗಿತ್ತು. ಆದರೆ, ಕೀರ್ತಿ ಮತ್ತು ಆಕೆಯ ತಂದೆ ಈ ವದಂತಿಗಳನ್ನು ಅಲ್ಲಗಳೆದಿದ್ದರು. ಕಳೆದೆರಡು ದಿನಗಳಿಂದ ಕೀರ್ತಿ ಅವರ ವೈಯಕ್ತಿಕ ಜೀವನ ಮತ್ತೊಮ್ಮೆ ಗಮನ ಸೆಳೆದಿದೆ. ಈ ಬಾರಿ, ಡಿಸೆಂಬರ್ 11 ರಂದು ಗೋವಾದಲ್ಲಿ ಡೆಸ್ಟಿನೇಶನ್ ವೆಡ್ಡಿಂಗ್‌ನಲ್ಲಿ ಕೀರ್ತಿ ತನ್ನ ಬಹುಕಾಲದ ಗೆಳೆಯ ಆಂಥೋನಿ ಥಟ್ಟಿಲ್ ಅವರೊಂದಿಗೆ ವಿವಾಹವಾಗಲಿದ್ದಾರೆ ಎಂದು ಕಾಲಿವುಡ್ ವಲಯಗಳಲ್ಲಿ ಚರ್ಚೆ ಆಗುತ್ತಿದೆ. ಕೀರ್ತಿ ಮತ್ತು ಆಂಟನಿ ಕಳೆದ 16 ವರ್ಷಗಳಿಂದ ಪ್ರೀತಿಸುತ್ತಿದ್ದರು ಎನ್ನಲಾಗಿದೆ. 2015ರಲ್ಲಿ ಮಲಯಾಳಂ ಸಿನಿಮಾ ಮೂಲಕ ಬೆಳ್ಳಿತೆರೆಗೆ ಪದಾರ್ಪಣೆ ಮಾಡಿದ ನಟಿ ಕೀರ್ತಿ ಸುರೇಶ್, ಮಹಾನಟಿ ಚಿತ್ರದ ಮೂಲಕ ತೆಲುಗು ಪ್ರೇಕ್ಷಕರಿಗೆ ತುಂಬಾ ಹತ್ತಿರವಾಗಿದ್ದಾರೆ. ಆ ನಂತರ ಕೀರ್ತಿ ಸುರೇಶ್ ವಿಭಿನ್ನ ಕ್ಯಾರೆಕ್ಟರ್ ಮಾಡುವ ಮೂಲಕ ಸ್ಟಾರ್ ಹೀರೋಯಿನ್ ಇಮೇಜ್ ಗಿಟ್ಟಿಸಿಕೊಂಡಿದ್ದಾರೆ. ಈ ನಡುವೆ ಕೀರ್ತಿ ಸುರೇಶ್ ಗ್ಲಾಮರಸ್ ಪಾತ್ರಗಳಲ್ಲಿ ಮಿಂಚುವ ಮೂಲಕ ಅಭಿಮಾನಿಗಳಿಗೆ ಶಾಕ್ ನೀಡುತ್ತಿದ್ದಾರೆ.

# ಕುಡಿದು ತೂರಾಡಿದ ಮಲೈಕಾ

ಬಾಲಿವುಡ್‌ನ ಮಲೈಕಾ ಅರೋರಾ ಮೊನ್ನೆ ಒಂದು ಪೋಸ್ಟ್ ಹಂಚಿಕೊಂಡಿದ್ದರು. ಅದರಲ್ಲಿ ಮಲೈಕಾ ಒಂದಷ್ಟು ಪ್ಲಾನ್ ಬರೆದುಕೊಂಡಿದ್ದರು. ನವೆಂಬರ್ ತಿಂಗಳಲ್ಲಿ ಎಣ್ಣೆ ಹೊಡೆಯೋದಿಲ್ಲ ಅಂತಲೇ ಖಿಔ ಆಔ ಲಿಸ್ಟ್ ಅಲ್ಲಿ ಬರೆದುಕೊಂಡಿದ್ದರು. ಇದರ ಜೊತೆಗೆ ಇನ್ನು ಸಾಕಷ್ಟು ವಿಷಯ ಹೇಳಿಕೊಂಡಿದ್ದರು. ಆದರೆ, ಅದ್ಯಾಗಿ 15 ದಿನಗಳೂ ಆಗಿಲ್ಲ ಅನಿಸುತ್ತದೆ. ಅಷ್ಟರಲ್ಲಿಯೇ ಮಲೈಕಾ ಅರೋರಾ ಎಣ್ಣೆ ಹೊಡೆದು ತೂರಾಡಿದ್ದಾರೆ. ಈ ವಿಡಿಯೋದಲ್ಲಿ ಮಲೈಕಾ ತೂರಾಡುತ್ತಿರೋದು ಕಾಣಿಸುತ್ತಿದೆ. ಅದ್ಯಾರೋ ಸ್ನೇಹಿತರು ಜೊತೆಗೆ ಕೈಹಿಡಿದು ಕರೆದುಕೊಂಡು ಹೋಗ್ತಿರೋದು ಕಾಣಿಸುತ್ತಿದೆ. ಮೀಡಿಯಾ ಕ್ಯಾಮರಾಗಳಲ್ಲಿಯೂ ಇದು ಕ್ಯಾಪ್ಚರ್ ಆದಂತೆ ಇದೆ. ಹಾಗೇನೆ ಇದೀಗ ಈ ವಿಡಿಯೋ ಹೆಚ್ಚು ವೈರಲ್ ಆಗಿದೆ. ಇದರ ಸುತ್ತ ಇನ್ನಷ್ಟು ವಿವರ ಇಲ್ಲಿದೆ ಓದಿ.

ಮಲೈಕಾ ಅರೋರಾ ವಿಡಿಯೋ ವೈರಲ್ ಆಗಿದೆ. ಎಣ್ಣೆ ಹೊಡೆದು ತೂರಾಡಿದ ಈ ವಿಡಿಯೋ ಹೆಚ್ಚು ಗಮನ ಸೆಳೆಯುತ್ತಿವೆ. ಈ ಒಂದು ವಿಡಿಯೋದಲ್ಲಿ ಇನ್ನೂ ಒಂದು ಮ್ಯಾಟರ್ ಕೂಡ ಇದೆ. ಹೌದು, ಮಲೈಕಾ ಅರೋರಾ ತೊಟ್ಟಿರೋ ಡ್ರೆಸ್ ಕೂಡ ಇಲ್ಲಿ ಖುಲಂ ಖುಲ್ಲಾ ಆಗಿಯೇ ಇದೆ. ಹಾಗೇನೆ ಮಲೈಕಾ ಅರೋರಾ ತಮ್ಮ ನವೆಂಬರ್ ತಿಂಗಳಲ್ಲಿ ಏನೆಲ್ಲ ಪ್ಲಾನ್ ಮಾಡಿದ್ದರೋ ಅದರಲ್ಲಿ ಎಣ್ಣೆ ಹೊಡೆಯೋದಿಲ್ಲ ಅನ್ನೋ ವಿಷಯವನ್ನ ಬ್ರೇಕ್ ಮಾಡಿದ್ದಾರೆ ಅನಿಸುತ್ತದೆ. ಇಡೀ ತಿಂಗಳು ಮದ್ಯಪಾನ ಮಾಡೋದಿಲ್ಲ ಅಂತಲೇ ಹೇಳಿದರು. ಆದರೆ, ಅದನ್ನ ಈಗ ಸ್ವತಃ ಮಲೈಕಾ ಅರೋರಾ ಬ್ರೇಕ್ ಮಾಡಿದ್ದಾರೆ ಅನಿಸುತ್ತಿದೆ. ಮಲೈಕಾ ಅರೋರಾ ಎಣ್ಣೆ ಕುಡಿದು ತೂರಾಡೋದು ಏನು ಹೊಸದಲ್ಲ. ಆದರೆ, ನವೆಂಬರ್ ತಿಂಗಳಲ್ಲಿ ಎಣ್ಣೆ ಹೊಡೆಯೋದಿಲ್ಲ ಅಂತ ಸ್ವತಃ ಮಲೈಕಾ ಹೇಳಿದ್ದರು. ಹಾಗಾಗಿಯೇ ಈಗೀನ ಈ ವಿಡಿಯೋ ಹೆಚ್ಚು ಗಮನ ಸೆಳೆಯುತ್ತಿವೆ. ಆದರೆ, ಇದೀಗ ಈ ವಿಡಿಯೋ ಎಲ್ಲೆಡೆ ವೈರಲ್ ಕೂಡ ಆಗುತ್ತಿದೆ.

ಮಲೈಕಾ ಅರೋರಾ ತೂರಾಡುತ್ತಲೇ ಸಾಗುತ್ತಾರೆ. ಆದರೆ, ಅದ್ಯಾರೋ ಫೋಟೋಗ್ರಾಫರ್ ಕೂಗಿದಾಗಲೂ ಮಲೈಕಾ ರಿಯಾಕ್ಟ್ ಮಾಡೋದಿಲ್ಲ. ಬದಲಾಗಿ ತಲೆ ತಗ್ಗಿಸಿ ತೂರಾಡುತ್ತಲೇ ಸಾಗುತ್ತಾರೆ. ಆದರೂ, ಅದ್ಯಾರೋ ಮತ್ತೆ ಮಲೈಕಾ ಅವರೇ ಅಂತಲೇ ಕೂಗ್ತಾನೇ ಇರ್ತಾರೆ ನೋಡಿ. ಅದ್ಯಾರೋ ಬ್ಯಾಕ್ ಟು ಬ್ಯಾಕ್ ಅನ್ನುವ ಹಾಗೆ ಕೂಗ್ತಾನೇ ಇರ್ತಾರೆ. ಹಾಗಾಗಿಯೋ ಏನೋ ಮಲೈಕಾ ಒಮ್ಮೆ ತಿರುಗಿ ನೋಡ್ತಾರೆ. ಹಾಗೆ ನೋಡಿದಾಗಲೇ, ಇದು ಮಲೈಕಾ ಅರೋರಾ ಅನ್ನೋದು ತಿಳಿಯುತ್ತದೆ. ಅಲ್ಲಿವರೆಗೂ ತೂರಾಡುತ್ತಾ ಸಾಗ್ತಿರೋ ಈ ಸೆಲೆಬ್ರಿಟಿ ಯಾರು ಅನ್ನೋ ಪ್ರಶ್ನೆ ಇತ್ತು ಬಿಡಿ.

# ಭಾರತ ಮಹಿಳಾ ತಂಡ ಪ್ರಕಟ: ಶ್ರೇಯಾಂಕಾ ಪಾಟೀಲ್‌ಗೆ ಇಲ್ಲ ಸ್ಥಾನ



ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಗೆ ಭಾರತ ಮಹಿಳಾ ತಂಡವನ್ನು ಪ್ರಕಟಿಸಲಾಗಿದೆ. 16 ಸದಸ್ಯರ ಈ ತಂಡವನ್ನು ಹರ್ಮನ್‌ಪ್ರೀತ್ ಕೌರ್ ಮುನ್ನಡೆಸಲಿದ್ದು, ಉಪನಾಯಕಿಯಾಗಿ ಸ್ಮೃತಿ ಮಂಧಾನ ಕಾಣಿಸಿಕೊಳ್ಳಲಿದ್ದಾರೆ. ಇನ್ನು ಕಳೆದ ಒಂದು ವರ್ಷದಿಂದ ತಂಡದಿಂದ ಹೊರಗುಳಿದಿದ್ದ ಹರ್ಲೀನ್ ಡಿಯೋಲ್ ಈ ಸರಣಿಗಾಗಿ ಆಯ್ಕೆಯಾಗಿದ್ದಾರೆ.


ಹರ್ಲೀನ್ ಡಿಯೋಲ್ 2023 ರ ಡಿಸೆಂಬರ್‌ನಲ್ಲಿ ಕೊನೆಯ ಬಾರಿ ಟೀಮ್ ಇಂಡಿಯಾದಲ್ಲಿ ಕಾಣಿಸಿಕೊಂಡಿದ್ದರು. ಅಲ್ಲದೆ ಸೌತ್ ಆಫ್ರಿಕಾ ಮತ್ತು ನ್ಯೂಝಿಲೆಂಡ್ ವಿರುದ್ಧ ತವರಿನಲ್ಲಿ ನಡೆದ ಸರಣಿಗೆ ಅವರನ್ನು ಆಯ್ಕೆ ಮಾಡಿರಲಿಲ್ಲ. ಇದೀಗ ವರ್ಷದ ಬಳಿಕ ಮತ್ತೆ ಟೀಮ್ ಇಂಡಿಯಾದಲ್ಲಿ ಸ್ಥಾನ ಪಡೆಯುವಲ್ಲಿ ಹರ್ಲೀನ್ ಯಶಸ್ವಿಯಾಗಿದ್ದಾರೆ.

ಇನ್ನು ಟೀಮ್ ಇಂಡಿಯಾ ಟಿ20 ತಂಡದ ಖಾಯಂ ಸದಸ್ಯೆ, ಕನ್ನಡತಿ ಶ್ರೇಯಾಂಕಾ ಪಾಟೀಲ್‌ಗೆ ಈ ಬಾರಿ ಸ್ಥಾನ ನೀಡಲಾಗಿಲ್ಲ. ಸೌತ್ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಲ್ಲಿ ಶ್ರೇಯಾಂಕಾ ಕಾಣಿಸಿಕೊಂಡಿದ್ದರು. ಆದರೆ ಈ ಬಾರಿ ಅವರನ್ನು ಆಯ್ಕೆಗೆ ಪರಿಗಣಿಸಲಾಗಿಲ್ಲ ಎಂದು ತಿಳಿದು ಬಂದಿದೆ.

ಆಸ್ಟ್ರೇಲಿಯಾದಲ್ಲಿ ನಡೆಯಲಿರುವ ಈ ಸರಣಿಯ ಮೊದಲೆರಡು ಏಕದಿನ ಪಂದ್ಯಗಳು ಬ್ರಿಸ್ಬೇನ್‌ನ ಅಲನ್ ಬಾರ್ಡರ್ ಫೀಲ್ಡ್‌ನಲ್ಲಿ ಡಿಸೆಂಬರ್ 5 ಮತ್ತು ಡಿಸೆಂಬರ್ 8 ರಂದು ನಡೆಯಲಿದ್ದು, ಡಿಸೆಂಬರ್ 11 ರಂದು ಸರಣಿಯ ಅಂತಿಮ ಪಂದ್ಯಕ್ಕಾಗಿ ಪರ್ತ್‌ನ ಫಾಂಅಂ ಮೈದಾನ ಆತಿಥ್ಯವಹಿಸಲಿದೆ. ಈ ಸರಣಿಗಾಗಿ ಭಾರತ ತಂಡ ಹೀಗಿದೆ

**ಭಾರತ ಏಕದಿನ ತಂಡ:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಸ್ಮೃತಿ ಮಂಧಾನ (ಉಪನಾಯಕಿ), ಪ್ರಿಯಾ ಪುನಿಯಾ, ಜೆಮಿಮಾ ರೊಡ್ರಿಗಸ್, ಹರ್ಲೀನ್ ಡಿಯೋಲ್, ಯಾಸ್ತಿಕಾ ಭಾಟಿಯಾ (ವಿಕೆಟ್ ಕೀಪರ್), ರಿಚಾ ಘೋಷ್ (ವಿಕೆಟ್ ಕೀಪರ್), ತೇಜಲ್ ಹಸಬ್ನಿಸ್, ದೀಪ್ತಿ ಶರ್ಮಾ, ಮಿನ್ನು ಮಣಿ, ಪ್ರಿಯಾ ಮಿಶ್ರಾ, ರಾಧಾ ಯಾದವ್, ಟಿಟಾಸ್ ಸಾಧು , ಅರುಂಧತಿ ರೆಡ್ಡಿ, ರೇಣುಕಾ ಸಿಂಗ್ ಠಾಕೂರ್, ಸೈಮಾ ಠಾಕೂರ್.

| ಭಾರತ V/S ಆಸ್ಟ್ರೇಲಿಯಾ ಏಕದಿನ ಸರಣಿ ವೇಳಾಪಟ್ಟಿ | | | |
|---|---|---|---|
| ಡಿಸೆಂಬರ್ 5 | 1ನೇ ಏಕದಿನ | ಅಲನ್ ಬಾರ್ಡರ್ ಫೀಲ್ಡ್ | ಬ್ರಿಸ್ಬೇನ್ |
| ಡಿಸೆಂಬರ್ 8 | 2ನೇ ಏಕದಿನ | ಅಲನ್ ಬಾರ್ಡರ್ ಫೀಲ್ಡ್ | ಬ್ರಿಸ್ಬೇನ್ |
| ಡಿಸೆಂಬರ್ 11 | 3ನೇ ಏಕದಿನ | ಡಬ್ಲ್ಯುಎಸಿಎ ಮೈದಾನ | ಪರ್ತ್ |



# ಕುಕ್ಕೆ ಸುಬ್ರಹ್ಮಣ್ಯ ದೇಗುಲಕ್ಕೆ ಕ್ರಿಕೆಟಿಗ ಸೂರ್ಯಕುಮಾರ್ ಯಾದವ್ ಭೇಟಿ

ಭಾರತ ಕ್ರಿಕೆಟ್ ತಂಡದ ಖ್ಯಾತ ಬ್ಯಾಟರ್ ಸೂರ್ಯಕುಮಾರ್ ಯಾದವ್ ಸೋಮವಾರ ದಕ್ಷಿಣ ಕನ್ನಡ ಜಿಲ್ಲೆಯ ಪ್ರಸಿದ್ಧ ಕ್ಷೇತ್ರ ಕುಕ್ಕೆ ಸುಬ್ರಹ್ಮಣ್ಯಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಆಶ್ಲೇಷ ಬಲಿ ಪೂಜೆ, ಮಹಾಪೂಜೆ, ಅಭಿಷೇಕ ನೆರವೇರಿಸಿದರು. ಸೂರ್ಯಕುಮಾರ್ ಯಾದವ್ ಕುಕ್ಕೆ ಭೇಟಿಯ ವಿಡಿಯೋ ಇಲ್ಲಿದೆ.

ಕ್ರಿಕೆಟಿಗ ಸೂರ್ಯಕುಮಾರ್ ಯಾದವ್ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನಲ್ಲಿರುವ ಪ್ರಸಿದ್ಧ ಯಾತ್ರಾ ಸ್ಥಳ ಕುಕ್ಕೆ ಸುಬ್ರಹ್ಮಣ್ಯಕ್ಕೆ ಸೋಮವಾರ ಭೇಟಿ ನೀಡಿದರು. ಪತ್ನಿ ಸಮೇತ ದೇಗುಲಕ್ಕೆ ಆಗಮಿಸಿದ ಅವರು, ಆಶ್ಲೇಷ ಬಲಿ ಪೂಜೆ, ಮಹಾಪೂಜೆ ಹಾಗೂ ಅಭಿಷೇಕ ನೆರವೇರಿಸಿದರು. ಈ ವೇಳೆ, ಸೂರ್ಯಕುಮಾರ್ ಯಾದವ್ ದಂಪತಿಗೆ ದೇವಸ್ಥಾನದ ವತಿಯಿಂದ ಗೌರವಾರ್ಪಣೆ ಮಾಡಲಾಯಿತು.

ಈ ಹಿಂದೆ ಭಾರತ ಕ್ರಿಕೆಟ್ ತಂಡ ಟಿ20 ವಿಶ್ವಕಪ್ ಗೆದ್ದ ಬಳಿಕ ಸೂರ್ಯಕುಮಾರ್ ಯಾದವ್ ಉಡುಪಿಯ ಕಾಪು ಹೊಸ ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದಿದ್ದರು. ಟಿ20 ವಿಶ್ವಕಪ್‌ಗೂ ಮುನ್ನ ಸೂರ್ಯಕುಮಾರ್ ಯಾದವ್ ಭಾರತ ತಂಡ ಟ್ರೋಫಿ ಗೆಲ್ಲಲು ವಿಶೇಷ ಹರಕೆ ಹೊತ್ತಿದ್ದರು. ಅದರಂತೆ ಬಳಿಕ ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ ಹರಕೆ ಸಲ್ಲಿಸಿದ್ದರು. ಇದಾದ ಕೆಲವೇ ದಿನಗಳಲ್ಲಿ ಅವರು ಭಾರತ ಟಿ20 ಕ್ರಿಕೆಟ್ ತಂಡದ ನಾಯಕನಾಗಿ ಆಯ್ಕೆಯಾಗಿದ್ದರು.




# 13 ಸೋಲುಗಳೊಂದಿಗೆ ಪಾಕ್‌ಗೆ ಹೀನಾಯ ದಾಖಲೆ

ಪಾಕಿಸ್ತಾನ್ ವಿರುದ್ಧದ ಮೂರು ಪಂದ್ಯಗಳ ಟಿ20 ಸರಣಿಯನ್ನು ಆಸ್ಟ್ರೇಲಿಯಾ 3-0 ಅಂತರದಿಂದ ಗೆದ್ದುಕೊಂಡಿದೆ. ಈ ಹ್ಯಾಟ್ರಿಕ್ ಸೋಲಿನೊಂದಿಗೆ 2024 ರಲ್ಲಿ ಅತ್ಯಧಿಕ ಟಿ20 ಪಂದ್ಯಗಳನ್ನು ಸೋತ ತಂಡಗಳ ಪಟ್ಟಿಯಲ್ಲಿ ಪಾಕಿಸ್ತಾನ್ ಅಗ್ರಸ್ಥಾನಕ್ಕೇರಿದೆ.

ಈ ವರ್ಷ ಪಾಕಿಸ್ತಾನ್ ತಂಡವು ಒಟ್ಟು 22 ಟಿ20 ಪಂದ್ಯಗಳನ್ನಾಡಿದ್ದು, ಈ ವೇಳೆ ಗೆದ್ದಿರುವುದು ಕೇವಲ 7 ಮ್ಯಾಚ್‌ಗಳಲ್ಲಿ ಮಾತ್ರ. ಇನ್ನು 2 ಪಂದ್ಯಗಳು ಕಾರಣಾಂತರಗಳಿಂದ ರದ್ದಾಗಿವೆ. ಇನ್ನುಳಿದ 13 ಪಂದ್ಯಗಳಲ್ಲಿ ಮುಗ್ಗರಿಸುವ ಮೂಲಕ ಪಾಕ್ ಪಡೆ ಈ ವರ್ಷ ಅತ್ಯಧಿಕ ಟಿ20 ಪಂದ್ಯಗಳನ್ನು ಸೋತ ಪೂರ್ಣ ಸದಸ್ಯ ತಂಡ ಎನಿಸಿಕೊಂಡಿದೆ.

ಮತ್ತೊಂದೆಡೆ ಈ ವರ್ಷ ಆಡಿದ 26 ಪಂದ್ಯಗಳಲ್ಲಿ ಟೀಮ್ ಇಂಡಿಯಾ 24 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಇನ್ನು ಭಾರತ ತಂಡ ಸೋತಿರುವುದು ಝಿಂಬಾಬ್ವೆ ಮತ್ತು ಸೌತ್ ಆಫ್ರಿಕಾ ವಿರುದ್ಧ ಮಾತ್ರ. ಅದರಲ್ಲೂ ಟಿ20 ವಿಶ್ವಕಪ್‌ನಲ್ಲಿ ಸೋಲಿಲ್ಲದ ಸರದಾರನಾಗಿ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡು ಇತಿಹಾಸ ನಿರ್ಮಿಸಿದೆ.

ಆದರೆ ಅತ್ತ ನಾಯಕತ್ವದ ಬದಲಾವಣೆಯೊಂದಿಗೆ ಹಲವು ಸರಣಿಗಳನ್ನು ಆಡಿದ ಪಾಕಿಸ್ತಾನ್ ಅತ್ಯಂತ ಹೀನಾಯ ಪ್ರದರ್ಶನ ನೀಡುತ್ತಾ ಬಂದಿದೆ. ಇದೀಗ ಮೊಹಮ್ಮದ್ ರಿಝ್ವಾನ್ ಮುಂದಾಳತ್ವದಲ್ಲಿ ಕಣಕ್ಕಿಳಿದಿರುವ ಪಾಕ್ ಪಡೆ ಆಸ್ಟ್ರೇಲಿಯಾದಲ್ಲಿ ವೈಟ್ ವಾಶ್ ಮುಖಭಂಗ ಅನುಭವಿಸಿದೆ. ಇದರೊಂದಿಗೆ ಈ ವರ್ಷ ಅತ್ಯಧಿಕ ಟಿ20 ಪಂದ್ಯಗಳಲ್ಲಿ ಪರಾಜಯಗೊಂಡ ಪೂರ್ಣ ಸದಸ್ಯ (ಟೆಸ್ಟ್ ಆಡುವ) ತಂಡ ಎನಿಸಿಕೊಂಡಿದೆ.

ಇನ್ನು 2024 ರಲ್ಲಿ ಅತೀ ಹೆಚ್ಚು ಟಿ20 ಪಂದ್ಯಗಳನ್ನು ಸೋತ ತಂಡಗಳ ಪೈಕಿ ಇಂಡೋನೇಷ್ಯಾ ತಂಡ ಮೊದಲ ಸ್ಥಾನದಲ್ಲಿದೆ. ಒಟ್ಟು 26 ಪಂದ್ಯಗಳನ್ನಾಡಿರುವ ಇಂಡೋನೇಷ್ಯಾ 15 ಮ್ಯಾಚ್‌ಗಳಲ್ಲಿ ಸೋಲನುಭವಿಸಿದೆ. ಇದೀಗ ಝಿಂಬಾಬ್ವೆ ವಿರುದ್ಧದ ಟಿ20 ಸರಣಿಗೆ ಸಜ್ಜಾಗಿರುವ ಪಾಕಿಸ್ತಾನ್ 2 ಪಂದ್ಯಗಳಲ್ಲಿ ಸೋತರೆ, ಅತ್ಯಂತ ಹೀನಾಯ ದಾಖಲೆ ಪಾಕ್ ಪಾಲಾಗಲಿದೆ.

# ಮೊದಲ ಪಂದ್ಯಕ್ಕೆ ನಾನು ರೆಡಿ ಎಂದ ಕನ್ನಡಿಗ ಕೆಎಲ್ ರಾಹುಲ್



**ಪರ್ತ್‌ನಲ್ಲಿ ನಡೆಯಲಿರುವ ಈ ಸರಣಿಯ ಮೊದಲ ಪಂದ್ಯ**

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಐದು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಮ್ಯಾಚ್ ಶುಕ್ರವಾರದಿಂದ ಆರಂಭವಾಗಲಿದೆ. ಪರ್ತ್‌ನಲ್ಲಿ ನಡೆಯಲಿರುವ ಈ ಪಂದ್ಯದ ಮೂಲಕ ಟೀಮ್ ಇಂಡಿಯಾ ಪರ ಕೆಎಲ್ ರಾಹುಲ್ ಕಣಕ್ಕಿಳಿಯುವುದು ಕನ್ಫರ್ಮ್ ಆಗಿದೆ.

ನವೆಂಬರ್ 22 ರಿಂದ ಶುರುವಾಗಲಿರುವ ಆಸ್ಟ್ರೇಲಿಯಾ ವಿರುದ್ಧದ ಮೊದಲ ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ ಪರ ಕೆಎಲ್ ರಾಹುಲ್ ಕಣಕ್ಕಿಳಿಯುವುದು ಖಚಿತವಾಗಿದೆ. ಪರ್ತ್‌ನಲ್ಲಿ ನಡೆಯಲಿರುವ ಈ ಸರಣಿಯ ಮೊದಲ ಪಂದ್ಯಕ್ಕೆ ಸಂಪೂರ್ಣ ಫಿಟ್ ಆಗಿರುವುದಾಗಿ ರಾಹುಲ್ ತಿಳಿಸಿದ್ದಾರೆ. ಅಭ್ಯಾಸ ಪಂದ್ಯದ ವೇಳೆ ರಾಹುಲ್ ಅವರ ಮೊಣಕೈಗೆ ಗಾಯವಾಗಿತ್ತು. ಇದರಿಂದ ಅರ್ಧದಲ್ಲೇ ಮೈದಾನ ತೊರೆದಿದ್ದರು. ಇದೀಗ ಗಾಯದಿಂದ ಚೇತರಿಸಿಕೊಂಡಿರುವ ರಾಹುಲ್ ಮತ್ತೆ ಅಭ್ಯಾಸಕ್ಕೆ ಇಳಿದಿದ್ದಾರೆ. ಇದೀಗ ರಾಹುಲ್ ಅವರ ಗಾಯದ ಕುರಿತು ಮಾಹಿತಿ ನೀಡಿರುವ ಟೀಮ್ ಇಂಡಿಯಾ ಫಿಸಿಯೋ ಕಮಲೇಶ್ ಜೈನ್, ಅವರ ಮೂಳೆ ಮುರಿಕ್ಕೊಳಗಾಗಿಲ್ಲ. ಇದೀಗ 2 ದಿನಗಳ ಚಿಕಿತ್ಸೆಯ ಬಳಿಕ ಬ್ಯಾಟಿಂಗ್ ಮಾಡಲು ಸಂಪೂರ್ಣ ಸಿದ್ಧವಾಗಿದ್ದಾರೆ ಎಂದು ತಿಳಿಸಿದ್ದಾರೆ.

ಹೀಗಾಗಿ ಪರ್ತ್‌ನ ಒಪ್ಟಸ್ ಸ್ಟೇಡಿಯಂನಲ್ಲಿ ನಡೆಯಲಿರುವ ಆಸೀಸ್ ವಿರುದ್ಧದ ಮೊದಲ ಪಂದ್ಯದಲ್ಲಿ ಕೆಎಲ್ ರಾಹುಲ್ ಕಾಣಿಸಿಕೊಳ್ಳುವುದು ಖಚಿತವಾಗಿದೆ. ಆದರೆ ಅತ್ತ ಮೊದಲ ಪಂದ್ಯಕ್ಕೆ ರೋಹಿತ್ ಶರ್ಮಾ ಅಲಭ್ಯರಾಗಿದ್ದಾರೆ. ವೈಯುಕ್ತಿಕ ಕಾರಣಗಳಿಂದಾಗಿ ರೋಹಿತ್ ಶರ್ಮಾ ಪರ್ತ್ ಟೆಸ್ಟ್‌ಗೆ ಅಲಭ್ಯರಾಗಿದ್ದಾರೆ. ಹೀಗಾಗಿ ಟೀಮ್ ಇಂಡಿಯಾ ಪರ ಕೆಎಲ್ ರಾಹುಲ್ ಅಥವಾ ಅಭಿಮನ್ಯು ಈಶ್ವರನ್ ಇನಿಂಗ್ಸ್ ಆರಂಭಿಸುವ ಸಾಧ್ಯತೆಯಿದೆ.

ಅದರಂತೆ ಪರ್ತ್ ಟೆಸ್ಟ್‌ನಲ್ಲಿ ಯಶಸ್ವಿ ಜೈಸ್ವಾಲ್ ಹಾಗೂ ಕೆಎಲ್ ರಾಹುಲ್ ಅಥವಾ ಅಭಿಮನ್ಯು ಈಶ್ವರನ್ ಇನಿಂಗ್ಸ್ ಆರಂಭಿಸಬಹುದು. ಅತ್ತ ಶುಭ್‌ಮನ್ ಗಿಲ್ ಗಾಯಗೊಂಡಿರುವ ಕಾರಣ ಮೊದಲ ಪಂದ್ಯದಲ್ಲಿ ಯುವ ಆಲ್‌ರೌಂಡರ್ ನಿತೀಶ್ ಕುಮಾರ್ ರೆಡ್ಡಿಗೆ ಅವಕಾಶ ಸಿಗುವ ಸಾಧ್ಯತೆ ಹೆಚ್ಚಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966